ಸಂಪುಟ: 22, ಸಂಚಿಕೆ: 90, ಪುಟಗಳು: 8, ಗುರುವಾರ, 9 ಜನವರಿ 2025 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ವೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3

### ಸುಭಾಷಿತ

ಶತ್ರುವು ಯಾವಾಗಲೂ ನಮ್ಮ ರಕ್ತ ಸಂಬಂಧದಲ್ಲಿ ಹುಟ್ಟುತ್ತಾನೆ. ಏಕೆಂದರೆ ನಮ್ಮವರಿಗೆ ನಮ್ಮ ಖುಷಿ, ಸಂತೋಷ ಮತ್ತು ಅಭಿವೃದ್ಧಿಯನ್ನು ಸಹಿಸಿಕೊಳ್ಳಲು ಆಗುವುದಿಲ್ಲ.

### ಪಂಚಾಂಗ

(ಗುರುವಾರ 9, ಜನವರಿ-2025)

- ಶ್ರೀ ಕ್ರೋಧಿನಾಮ ಸಂವತ್ಸರ,
- ದಕ್ಷಿಣಾಯಣ, ಹಿಮಂತ ಋತು,
- ಪುಷ್ಯ ಮಾಸ, ಶುಕ್ಲ ಪಕ್ಷ,
- ತಿಥಿ: ದಶಮಿ / ಏಕಾದಶಿ
- ಗುರುವಾರ, ಭರಣಿ ನಕ್ಷತ್ರ
- ರಾಹುಕಾಲ - 01:56 ರಿಂದ 03:22
- ಗುಳಿಕಕಾಲ - 09:38 ರಿಂದ 11:04
- ಯಮಗಂಡಕಾಲ - 06:46 ರಿಂದ 08:12




# ಶರಣಾಗತಿ ಆಯ್ತು, ಆದರೆ ನಕ್ಸಲರ ಬಳಿ ಇದ್ದ ಶಸ್ತ್ರಾಸ್ತ್ರ ಎಲ್ಲಿ ಹೋಯ್ತು!?

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಸಮ್ಮುಖದಲ್ಲೇ ಮೋಸ್ಟ್ ವಾಂಟೆಡ್ ನಕ್ಸಲರು 6 ಮಂದಿ ಬುಧವಾರ ಶರಣಾಗಿದ್ದಾರೆ. ಇದರ ಬೆನ್ನಲ್ಲೇ, ಫಾಸ್ಟ್ ಟ್ರ್ಯಾಕ್ ಕೋರ್ಟ್‌ಗಳನ್ನು ನಿರ್ಮಿಸಿ ಅವರಿಗೆ ತ್ವರಿತ ನ್ಯಾಯ ಒದಗಿಸುವ ಯೋಚನೆ ಸರ್ಕಾರಕ್ಕಿದೆ ಎಂದು ಸಿಎಂ ಸಿದ್ದರಾಮಯ್ಯ ಕೂಡ ಹೇಳಿದ್ದಾರೆ. ಇದೆಲ್ಲ ನಿಜ, ಆದರೆ ಶರಣಾದ ನಕ್ಸಲರ ಬಳಿ ಇದ್ದ ಶಸ್ತ್ರಾಸ್ತ್ರಗಳು ಈಗೆಲ್ಲಿವೆ ಎಂಬ ಪ್ರಶ್ನೆ ಉದ್ಭವಿಸಿದೆ.

ಶರಣಾಗತಿ ವೇಳೆ ನಕ್ಸಲರು ಶಸ್ತ್ರಾಸ್ತ್ರಗಳನ್ನು ಸರೆಂಡರ್ ಮಾಡಿಲ್ಲ ಎನ್ನಲಾಗಿದೆ. ಹೀಗಾಗಿ ಸದ್ಯ ನಕ್ಸಲರ ಶಸ್ತ್ರಾಸ್ತ್ರಗಳ ಬಗ್ಗೆ ಪೊಲೀಸರು ಮಾಹಿತಿ ಕಲೆ ಹಾಕುತ್ತಿದ್ದಾರೆ.

ನಕ್ಸಲರು ಶಸ್ತ್ರಾಸ್ತ್ರ ಸಮೇತ ಚಿಕ್ಕಮಗಳೂರು ಕಾಡಿನಲ್ಲಿ ಓಡಾಡುತ್ತಿದ್ದುದಕ್ಕೆ, ಅವರ ಬಳಿ ಶಸ್ತ್ರಾಸ್ತ್ರ ಇರುವ ಬಗ್ಗೆ 4 ತಿಂಗಳ ಹಿಂದೆ ಗುಪ್ತಚರ ಇಲಾಖೆ



ಮಾಹಿತಿ ನೀಡಿತ್ತು. ಹೀಗಾಗಿ ಪೊಲೀಸರು ನಕ್ಸಲರ ಬಳಿ ಶಸ್ತ್ರಾಸ್ತ್ರಗಳ ಬಗ್ಗೆ ಮಾಹಿತಿ ಪಡೆಯಲಿದ್ದಾರೆ. ನಕ್ಸಲರ ತನಿಖೆಗೆ ಚಿಕ್ಕಮಗಳೂರು ಜಿಲ್ಲೆ ಕೊಪ್ಪ ಡಿವೈಎಸ್‌ಪಿ ಬಾಲಾಜಿ ಸಿಂಗ್ ನೇತೃತ್ವದ ತಂಡ ರಚನೆ ಮಾಡಲಾಗಿದೆ. ಸದ್ಯ ಚಿಕ್ಕಮಗಳೂರಿನಿಂದ ಬೆಂಗಳೂರಿಗೆ ತೆರಳಿರುವ ಬಾಲಾಜಿ ಸಿಂಗ್ ತಂಡ ಮಾಹಿತಿ ಕಲೆಹಾಕಲಿದೆ.

ಆರು ಮಂದಿ ನಕ್ಸಲರಾದ ಶೃಂಗೇರಿ ತಾಲೂಕಿನ ಮುಂಡುಗಾರು ಗ್ರಾಮದ ಲತಾ, ಕಳಸ ತಾಲೂಕಿನ ಬಾಳೆಹೊಳೆ ಗ್ರಾಮದ ವನಜಾಕ್ಷಿ, ದಕ್ಷಿಣ ಕನ್ನಡ ಜಿಲ್ಲೆ ಕುಂತಲೂರು ಮೂಲಕದ ಸುಂದರಿ, ರಾಯಚೂರು ಮೂಲದ ಮಾರಪ್ಪ ಅರೋಳಿ, ವಸಂತ, ಎನ್. ಜೀಶಾ ಹಲವು ವರ್ಷಗಳ ಸಶಸ್ತ್ರ ಹೋರಾಟಕ್ಕೆ ವಿದಾಯ ಹೇಳಿ ಮುಖ್ಯಮಂತ್ರಿಗಳ ಸಮ್ಮುಖದಲ್ಲಿ ಬುಧವಾರ ಶರಣಾಗಿದ್ದರು. ಶರಣಾದ ನಕ್ಸಲರ ಜೊತೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಭೆ ನಡೆಸಿದ್ದು, ಅವರ ಸಮಸ್ಯೆ, ಬೇಡಿಕೆಗಳನ್ನು ಆಲಿಸಿದ್ದಾರೆ. ಅಲ್ಲದೇ ಅವರ ಪ್ರೋತ್ಸಾಹ ಧನದ ಬಗ್ಗೆಯೂ ಚರ್ಚಿಸಿದ್ದಾರೆ.

ಬುಧವಾರ ಶರಣಾದ ನಕ್ಸಲರ ಪೈಕಿ ಮಹಿಳೆಯರನ್ನು ಡೈರಿ ಸರ್ಕಲ್ ಬಳಿಯ ಮಹಿಳಾ ಸಾಂತ್ವನ ಕೇಂದ್ರಕ್ಕೆ ಕಳುಹಿಸಲಾಗಿತ್ತು. ಸದ್ಯ ಅವರನ್ನು ಮಡಿವಾಳ ಎಫ್‌ಎಸ್‌ಎಲ್‌ಗೆ ಪೊಲೀಸರು ಕರೆದೊಯ್ದಿದ್ದಾರೆ. ಮತ್ತಿಬ್ಬರು ಪುರುಷರನ್ನು ಮಡಿವಾಳದ ಎಫ್‌ಎಸ್‌ಎಲ್ ಸ್ಪೇಷಲ್ ಸೆಲ್‌ನಲ್ಲಿಯೇ ಇರಿಸಲಾಗಿತ್ತು.

**ಬಿಜೆಪಿನ ಯುವ ಮೋರ್ಚಾ ಆಕ್ಷೇಪ:** ಏತನ್ಮಧ್ಯೆ, ಶರಣಾದ ನಕ್ಸಲರ ಮೇಲಿನ ಪ್ರಕರಣಗಳನ್ನು ಹಿಂಪಡೆಯುವ ಬಗ್ಗೆ ಚಿಕ್ಕಮಗಳೂರಿನ ಬಿಜೆಪಿ ಯುವ ಮೋರ್ಚಾದಿಂದ ವಿರೋಧ

ಪುಟ 2

## ಸಂಕ್ಷಿಪ್ತ ಸುದ್ದಿ

### ಬೆಂಗಳೂರಿನ ಆಟೋಗಳಲ್ಲಿ ಪ್ರಯಾಣಿಸುವ ಮುನ್ನ ಎಚ್ಚರ



**ಬೆಂಗಳೂರು:** ಬೆಂಗಳೂರು ನಗರದಲ್ಲಿ 2020ರ ಹಿಂದೆ ನೋಂದಣಿ ಆಗಿರುವ ಆಟೋ ಪರ್ಮಿಟ್‌ಗಳ ದಾಖಲೆಗಳೇ ಆರ್‌ಟಿಒ ಕಚೇರಿಯಲ್ಲಿ ಇಲ್ಲವಂತೆ! ಬೆಂಗಳೂರಿನ ಶಾಂತಿನಗರ ಮುಖ್ಯ ಕಚೇರಿಯಲ್ಲಿ ವಾಹನ್- 3 ಅಡಿ ರಿಜಿಸ್ಟ್ರೇಷನ್ ಆಗಿರುವ ಸಾವಿರಾರು ಆಟೋಗಳ ದಾಖಲೆ ಇಲ್ಲ ಎಂಬುದು ತಿಳಿದುಬಂದಿದೆ.

2020ರವರೆಗೆ ವಾಹನ್- 3 ಅಡಿಯಲ್ಲಿ ವಾಹನಗಳನ್ನು ರಿಜಿಸ್ಟ್ರೇಷನ್ ಮಾಡಲಾಗುತಿತ್ತು. 2020 ಮಾರ್ಚ್ ನಂತರ ವಾಹನ್-4 ಅಡಿಯಲ್ಲಿ ವಾಹನಗಳ ನೋಂದಣಿ ಮಾಡಲಾಗುತ್ತಿದೆ. ಆದರೆ ವಾಹನ್- 3ರ ಅಡಿಯಲ್ಲಿ ರಿಜಿಸ್ಟ್ರೇಷನ್ ಆಗಿರುವ ಸಾವಿರಾರು ಆಟೋ ಪರ್ಮಿಟ್‌ಗಳ ದಾಖಲೆಗಳೇ ಇಲ್ಲವಾಗಿದ್ದು, ಇದರಿಂದ ತುಂಬಾ ಸಮಸ್ಯೆ ಆಗುತ್ತಿದೆ

ಪುಟ 2

### ವರದಕ್ಷಿಣೆ ಕಿರುಕುಳ ತಾಳಲಾರದೇ ಗೃಹಿಣಿ ನೇಣಿಗೆ

**ಚಿತ್ರದುರ್ಗ:** ಪತಿ ಕುಟುಂಬಸ್ಥರ ವರದಕ್ಷಿಣೆ ಕಿರುಕುಳ ತಾಳಲಾರದೇ ಗೃಹಿಣಿಯೊಬ್ಬಳು ಆತ್ಮಹತ್ಯೆಗೆ ಶರಣಾಗಿದ್ದು, ಪತ್ನಿ ಸಾವಿನಿಂದ ನೊಂದ ಪತಿ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ ಘಟನೆ ಚಿತ್ರದುರ್ಗ ಜಿಲ್ಲೆ ಮೊಳಕಾಲ್ಮೂರು ತಾಲೂಕಿನ ಗಿರಿಜಯ್ಯನಹಟ್ಟಿ ಗ್ರಾಮದಲ್ಲಿ ನಡೆದಿದೆ.

» **ಪತಿ ಆತ್ಮಹತ್ಯೆಗೆ ಯತ್ನ**

ಆಂಧ್ರಪ್ರದೇಶ ಮೂಲದ ಪ್ರವಲ್ಲಿಕ (25) ನೇಣಿಗೆ ಶರಣಾದ ಪತ್ನಿ. ಸುದರ್ಶನ್ ರೆಡ್ಡಿ ಆತ್ಮಹತ್ಯೆಗೆ ಯತ್ನಿಸಿದ ಪತಿ. ಆತ್ಮಹತ್ಯೆಗೆ ಯತ್ನಿಸಿದ ಪರಿಣಾಮ ಸುದರ್ಶನ್ ಅಸ್ವಸ್ಥಗೊಂಡಿದ್ದು, ಬಳ್ಳಾರಿ ವಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಇನ್ನು ಪ್ರಕರಣ ಸಂಬಂಧ ಪತಿ ಸುದರ್ಶನ್ ರೆಡ್ಡಿ, ಮಾವ ಶಿವಾ ರೆಡ್ಡಿ, ಅತ್ತೆ ರಾಜೇಶ್ವರಿ ಹಾಗೂ ಮತ್ತಿತರೆ ಕುಟುಂಬಸ್ಥರ ವಿರುದ್ಧ ದೂರು ದಾಖಲಾಗಿದೆ. ಸುದರ್ಶನ್ ರೆಡ್ಡಿ ಹಾಗೂ ಪ್ರವಲ್ಲಿಕ 1 ವರ್ಷದ ಹಿಂದೆ ಮದುವೆ ಆಗಿದ್ದರು. ಸುದರ್ಶನ್ ಮೊಳಕಾಲ್ಮೂರಲ್ಲಿ ಖಾಸಗಿ ಕಂಪನಿ ಉದ್ಯೋಗಿಯಾಗಿದ್ದು, ಗಿರಿಜಯ್ಯನಹಟ್ಟಿಯ ಬಾಡಿಗೆ

ಪುಟ 2

## ಮಲೆ ಮಹದೇಶ್ವರ ಬೆಟ್ಟದಲ್ಲಿ ಸಿದ್ದರಾಮಯ್ಯ | ಸಚಿವ ಸಂಪುಟ ಸಭೆ

# ಮುಹೂರ್ತ ಫಿಕ್ಸ್

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆ ಎಂದರೆ ಮೂಗು ಮುರಿಯುವರೇ ಹೆಚ್ಚು. ಅಭಿವೃದ್ಧಿ ಕಾಣದ ಶಾಪಗ್ರಸ್ಥ ಜಿಲ್ಲೆ ಎಂಬ ಹಣೆ ಪಡೆದಿರುವ ಚಾಮರಾಜನಗರ ಜಿಲ್ಲೆಯ ಮಲೆ ಮಹದೇಶ್ವರ ಬೆಟ್ಟದಲ್ಲಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಈ ಬಾರಿ ಫೆಬ್ರವರಿ 15 ರಂದು ಸಚಿವ ಸಂಪುಟ ಸಭೆ ನಡೆಸಲಿದೆ. ಚಾಮರಾಜನಗರ, ಮಂಡ್ಯ, ಮೈಸೂರು, ಹಾಸನ ಹಾಗೂ ಕೊಡಗು ಜಿಲ್ಲೆಯ ಜ್ವಲಂತ ಸಮಸ್ಯೆಯ ಕುರಿತು ಸಂಪುಟ ಸಭೆಯಲ್ಲಿ ಚರ್ಚೆ ನಡೆಯಲಿದೆ. ಈ ವಿಚಾರವಾಗಿ ಪಶುಸಂಗೋಪನಾ ಸಚಿವ, ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವರೂ ಆಗಿರುವ ಕೆ ವೆಂಕಟೇಶ್ ಮಾಹಿತಿ ನೀಡಿದ್ದಾರೆ.

ಸಚಿವ ಸಂಪುಟ ಸಭೆ ಸಂಬಂಧ ಈಗಾಗಲೇ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದ್ದು, ಜಿಲ್ಲೆಗೆ ಅಗತ್ಯವಿರುವ ಮೂಲ ಸೌಕರ್ಯ ನಿವಾರಣೆ ಬಗ್ಗೆ ಪ್ರಸ್ತಾವನೆ ಸಲ್ಲಿಸಲು ತಿಳಿಸಲಾಗಿದೆ. ನಗರ ಮತ್ತು ಪಟ್ಟಣ ಪ್ರದೇಶಗಳಿಗೆ ಸಂಪೂರ್ಣ ಒಳಚರಂಡಿ ವ್ಯವಸ್ಥೆ, ಪರಿಸರ ಪ್ರವಾಸೋದ್ಯಮ ಉತ್ತೇಜಿಸಲು ಯೋಜನೆಗಳನ್ನು ಸರ್ಕಾರದ ಗಮನಕ್ಕೆ ತರಲಾಗುತ್ತದೆ. ಗ್ರಾಮಾಂತರ ಮತ್ತು ನಗರ, ಪಟ್ಟಣ ಪ್ರದೇಶಗಳಿಗೆ ಪರಿಪೂರ್ಣ ಮೂಲ ಸೌಕರ್ಯ, ಹಾಡಿ ಜನರಿಗೆ ಮೂಲ ಸೌಕರ್ಯದ ಕುರಿತು ಪರಿಹಾರ ಸಿಗುವ ನಿರೀಕ್ಷೆಯಿದೆ ಎಂದು ಸಚಿವರು ತಿಳಿಸಿದ್ದಾರೆ.

ಪುಟ 2



## ಇಂದು ಬೀದರ್ ಬಂದ್‌ಗೆ ಕರೆ
### ಶಾಲಾ- ಕಾಲೇಜುಗಳಿಗೆ ರಜೆ ಘೋಷಣೆ

**ಬೀದರ್:** ಅಂಬೇಡ್ಕರ್ ಬಗ್ಗೆ ವಿವಾದಾತ್ಮಕ ಹೇಳಿಕೆಯನ್ನು ನೀಡಿದ ಕೇಂದ್ರ ಗೃಹಸಚಿವ ಅಮಿತ್ ಶಾ ಅವರ ರಾಜೀನಾಮೆಗೆ ಒತ್ತಾಯಿಸಿ ಇಂದು ಬೀದರ್ ಬಂದ್‌ಗೆ ಕರೆ ನೀಡಲಾಗಿದೆ.

ವಿವಿಧ ದಲಿತಪರ ಸಂಘಟನೆ ಒಕ್ಕೂಟದಿಂದ ಬೀದರ್ ಬಂದ್‌ಗೆ ಕರೆ ಕೊಟ್ಟಿದ್ದು, ದಲಿತ ಪರ ಸಂಘಟನೆಗಳು ಸೇರಿದಂತೆ ಹಲವು ಸಂಘಟನೆಗಳು ಬಂದ್‌ಗೆ ಬೆಂಬಲ ಸೂಚಿಸಿವೆ. ಅಂಗಡಿ ಮುಗ್ಗಟ್ಟು ಬಂದ್ ಮಾಡಿ ಅಂಗಡಿ ಮಾಲೀಕರು ಬೆಂಬಲ ಸೂಚಿಸಿದ್ದಾರೆ. ಬಂದ್ ಹಿನ್ನಲೆ ಬಹುತೇಕ ಸಾರಿಗೆ ಸಂಚಾರ ಬಂದ್ ಆಗಿದೆ. ಬೆಳಗ್ಗೆ 8 ರಿಂದ ಸಂಜೆ 5 ರವರೆಗೆ ಬೀದರ್ ಬಂದ್‌ಗೆ ಕರೆ ನೀಡಲಾಗಿದೆ.



ಬೀದರ್ ನಗರದ ಅಂಬೇಡ್ಕರ್ ವೃತ್ತದಲ್ಲಿ ಬೃಹತ್ ಪ್ರತಿಭಟನೆ ನಡೆಯಲಿದ್ದು, ಬೃಹತ್ ಬಹಿರಂಗ ಸಮಾವೇಶ ಕೂಡ ನಡೆಯಲಿದೆ. ಬೃಹತ್ ಬಂದ್ ಪ್ರತಿಭಟನೆಯಲ್ಲಿ ಸಾವಿರಾರು ಜನರು ಭಾಗಿಯಾಗಲಿದ್ದಾರೆ.

ಪುಟ 2

## ಸರ್ಕಾರದ ಸಂಧಾನ ವಿಫಲ



**ಬೆಂಗಳೂರು:** ಆರೋಗ್ಯ ಸಚಿವರ ಸಂಧಾನ ವಿಫಲವಾಗಿದ್ದು ಕೊರೆಯುವ ಚಳಿಯಲ್ಲೂ ಪುಟ್ಟ ಮಕ್ಕಳನ್ನು ಹಿಡಿದುಕೊಂಡು ಆಶಾ ಕಾರ್ಯಕರ್ತೆಯರು ನಡೆಸುತ್ತಿರುವ ಪ್ರತಿಭಟನೆ ಮೂರನೇ ದಿನಕ್ಕೆ ಕಾಲಿಟ್ಟಿದೆ.

ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಸರ್ಕಾರದ ವಿರುದ್ಧ ಆಶಾ ಕಾರ್ಯಕರ್ತೆಯರು ಫ್ರೀಡಂಪಾರ್ಕ್‌ನಲ್ಲಿ ಅಹೋರಾತ್ರಿ ಪ್ರತಿಭಟನೆ ನಡೆಸುತ್ತಿದ್ದಾರೆ.

ಬುಧವಾರ ರಾತ್ರಿ ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿದ್ದ ಸಚಿವ ದಿನೇಶ್ ಗುಂಡೂರಾವ್ ಮಾಸಿಕ 8 ಸಾವಿರ ರೂ. ಬದಲಿಗೆ 9,500 ರೂಪಾಯಿ ನೀಡುವ ಭರವಸೆ ನೀಡಿದ್ದರು. ಆದರೆ ಸಚಿವರ ಭರವಸೆ ಒಪ್ಪದ ಕಾರ್ಯಕರ್ತರು ಕನಿಷ್ಠ 15 ಸಾವಿರ ರೂ. ಗೌರವಧನ ನೀಡುವಂತೆ ಪಟ್ಟು ಹಿಡಿದಿದ್ದಾರೆ.

### 20 ವರ್ಷಗಳಿಂದ ಪಾಳುಬಿದ್ದಿದ್ದ ಮನೆಯ ಫ್ರಿಡ್ಜ್‌ನಲ್ಲಿತ್ತು
## ಮಾನವನ ತಲೆಬುರುಡೆ, ಅಸ್ಥಿಪಂಜರ!

**ತಿರುವನಂತಪುರಂ:** ಕಳೆದ 20 ವರ್ಷಗಳಿಂದ ಪಾಳುಬಿದ್ದಿದ್ದ ಮನೆಯೊಂದರ ಫ್ರಿಡ್ಜ್ ನಲ್ಲಿ ಮಾನವ ತಲೆಬುರುಡೆ ಮತ್ತು ಅಸ್ಥಿಪಂಜರ ಪತ್ತೆಯಾಗಿರುವ ಘಟನೆ ಕೇರಳದಲ್ಲಿ ನಡೆದಿದೆ. ಸದ್ಯ ಚೊಟ್ಟನಿಕ್ಕಾರ ಪೊಲೀಸ ಕೊಲೆ ಶಂಕೆ ವ್ಯಕ್ತಪಡಿಸಿದ್ದು, ತನಿಖೆ ಆರಂಭಿಸಿದ್ದಾರೆ.

ಈ ಅಸ್ತಿಯನ್ನು ಮಾನವನ ಮೂಳೆಗಳು ಎಂದು ಗುರುತಿಸಲಾಗಿದೆ. ಫೋರೆನ್ಸಿಕ್ ವಿಶ್ಲೇಷಣೆಯ ಮೂಲಕ ನಿಖರವಾದ ವಯಸ್ಸನ್ನು ಪರಿಶೀಲಿಸಬೇಕಾಗಿದೆ ಎಂದಿರುವ ಪೊಲೀಸರು ಇದನ್ನು ಶೈಕ್ಷಣಿಕ ಉದ್ದೇಶಗಳಿಗಾಗಿಯೂ ಬಳಸಿರಬಹುದು ಎಂಬ ಶಂಕೆ ವ್ಯಕ್ತಪಡಿಸಿದ್ದಾರೆ.

ವಿಧಿವಿಜ್ಞಾನ ತಂಡವು ತಲೆಬುರುಡೆ ಮತ್ತು ಅಸ್ಥಿಪಂಜರದ ಭಾಗಗಳನ್ನು ಪರೀಕ್ಷಿಸಿ, ಮರಣೋತ್ತರ ಪರೀಕ್ಷೆಗೆ ಒಳಪಡಿಸಿದೆ.

ಪುಟ 2



## ಎರಡು ವರ್ಷಗಳಲ್ಲಿ 24 ಸರ್ಕಾರಿ ಶಾಲೆಗಳಿಗೆ ಬಿತ್ತು ಬೀಗ!

**ಚಾಮರಾಜನಗರ:** ವಿದ್ಯಾರ್ಥಿಗಳಿಲ್ಲದೇ ಪಾಳು ಬಿದ್ದಿರುವ ಕಟ್ಟಡ, ಮೂಲಭೂತ ಸೌಕರ್ಯದ ಕೊರತೆ. ಹೀಗೆ ಕೋಮಾ ಸ್ಥಿತಿಯಲ್ಲಿರುವ ಕಟ್ಟಡ ಮತ್ಯಾವುದೂ ಅಲ್ಲ, ಸರ್ಕಾರಿ ಶಾಲೆಯದ್ದು. ರಾಜ್ಯದ ಗಡಿ ಜಿಲ್ಲೆ ಚಾಮರಾಜನಗರದಲ್ಲಿ ಎರಡು ವರ್ಷಗಳ ಅವಧಿಯಲ್ಲಿ ಬರೋಬ್ಬರಿ 24 ಸರ್ಕಾರಿ ಶಾಲೆಗಳಿಗೆ ಬೀಗ ಬಿದ್ದಿದೆ. ಶೂನ್ಯ ದಾಖಲಾತಿ, ಮಕ್ಕಳ ಕೊರತೆ ಹಿನ್ನಲೆ 24 ಶಾಲೆಗಳನ್ನು ಬಂದ್ ಮಾಡಲಾಗಿದೆ. ಮೂಲಭೂತ ಸೌಕರ್ಯ ಕೊರತೆಯ ಕಾರಣ ವಿದ್ಯಾರ್ಥಿಗಳು ಸರ್ಕಾರಿ ಶಾಲೆಗಳ ಕಡೆ ಮುಖ ಮಾಡುತ್ತಿಲ್ಲ. ಇದುವೇ ಶಾಲೆ ಮುಚ್ಚಲು ಕಾರಣವಾಗಿದೆ.

ಬಂದ್ ಆಗಿರುವ 24 ಶಾಲೆಗಳಲ್ಲಿ 4 ಉರ್ದು ಶಾಲೆಗಳು ಕೂಡ ಸೇರಿವೆ.





ಅವುಗಳಿಗೆ ಕಾಯಕಲ್ಪ ಕೊಡಲು ತಯಾರಿ ಮಾಡುತ್ತಿದ್ದೇವೆ ಎಂದು ಅಧಿಕಾರಿಗಳು ಹೇಳುತ್ತಿದ್ದಾರೆ.

ಏತನ್ಮಧ್ಯೆ, ಚಾಮರಾಜನಗರ ತಾಲೂಕಿನ 8,

ಪುಟ 2

### ಜೆಡಿಎಸ್ ಬಿಜೆಪಿ ಮೈತ್ರಿಗೆ ಮಾಜಿ ಸಚಿವರಿಂದಲೇ ಅಪಸ್ವರ
## ಮಂಡ್ಯದಲ್ಲಿ ಜೆಡಿಎಸ್ ವಿರುದ್ಧ ಸಿಡಿದೆದ್ದ ಬಿಜೆಪಿ ನಾಯಕ!

**ಮಂಡ್ಯ:** ಜೆಡಿಎಸ್ ವರಿಷ್ಠ ಹೆಚ್‌ಡಿ ಕುಮಾರಸ್ವಾಮಿ ಅವರ ತವರು ನೆಲದಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿಯಲ್ಲಿ (ಬಿರುಕು ಮೂಡಿದೆಯೇ? ಎನ್ನುವ ಅನುಮಾನ ಹುಟ್ಟಿಕೊಂಡಿದೆ. ಅದಕ್ಕೆ ಪುಷ್ಟಿ ನೀಡುವಂತೆ ರಾಜ್ಯದಲ್ಲಿ ಜೆಡಿಎಸ್-ಬಿಜೆಪಿ ಮೈತ್ರಿಗೆ ಬಿಜೆಪಿಯ ಮಾಜಿ ಸಚಿವರೊಬ್ಬರು ಅಪಸ್ವರ ನುಡಿಸಿದ್ದಾರೆ.



**ಜೆಡಿಎಸ್ ಹಾಗೂ ಕಾಂಗ್ರೆಸ್ ನಡುವೆ ಒಳ ಒಪ್ಪಂದ ಆಗಿದೆ:** ಬಿಜೆಪಿಯ ಮಾಜಿ ಸಚಿವ ನಾರಾಯಣಗೌಡ ಅವರು ಪಟ್ಟಣದಲ್ಲಿ ನಡೆದ ಬಿಜೆಪಿ ಪಕ್ಷದ ಕಾರ್ಯಕರ್ತರ ಸಭೆಯಲ್ಲಿ ತಮ್ಮ ಬೇಸರ ಹೊರ ಹಾಕಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕೆ.ಆರ್.ಪೇಟೆ ಕ್ಷೇತ್ರದಲ್ಲಿ ಬಿಜೆಪಿ ಪಕ್ಷವನ್ನು ಜೆಡಿಎಸ್ ನವರು ನಿರ್ಲಕ್ಷ್ಯ ಮಾಡ್ತಿದ್ದಾರೆ ಎಂದು ಆರೋಪ ಮಾಡಿದ್ದು, ಈ ಬಗ್ಗೆ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಜೆಡಿಎಸ್ ಹಾಗೂ ಕಾಂಗ್ರೆಸ್ ನಡುವೆ ಒಳ ಒಪ್ಪಂದ ಆಗಿದೆ ಎಂದು ಅವರು ಅಸಮಧಾನ ಹೊರಹಾಕಿದರು.

ಕ್ಷೇತ್ರದ ಶಾಸಕರು ಮತ್ತು ಪಕ್ಷದ ಮುಖಂಡರು ಬಿಜೆಪಿ ಕಾರ್ಯಕರ್ತರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದೆ ಏಕಪಕ್ಷದ ನಿರ್ಧಾರ ತೆಗೆದುಕೊಳ್ಳುತ್ತಾರೆ. ಯಾವುದೇ ಕಾರ್ಯಕ್ರಮಕ್ಕೂ ನಮ್ಮನ್ನು ಸೌಜನ್ಯಕ್ಕೂ ಕರೆಯುತ್ತಿಲ್ಲ. ಕುಮಾರಸ್ವಾಮಿಯವರನ್ನ ಲೋಕಸಭಾ ಚುನಾವಣೆಯಲ್ಲಿ ನಮ್ಮ ತನುಮನ ಅರ್ಪಿಸಿ ಚುನಾವಣೆ ಮಾಡಿ ಗೆಲ್ಲಿಸಿದ್ದೀವಿ ಎಂದರು.

**ಹೈ ಕಮಾಂಡ್‌ಗೆ ದೂರು ನೀಡುವುದು ಅನಿವಾರ್ಯ:** ನನ್ನ ಕ್ಷೇತ್ರದ ಅಭಿವೃದ್ಧಿಗೆ ನಮ್ಮ ಯಡಿಯೂರಪ್ಪರು ಕೋಟಿ ಕೋಟಿ ಅನುದಾನ ಕೊಟ್ಟಿದ್ದಾರೆ,

### ಅಪ್ರಾಪ್ತ ವಿದ್ಯಾರ್ಥಿನಿ ಜತೆ ಪರಾರಿಯಾಗಿದ್ದ ಟ್ಯೂಷನ್ ಶಿಕ್ಷಕ ಮಂಡ್ಯದಲ್ಲಿ
## ಬಂಧನ

**ಮಂಡ್ಯ:** ಎರಡು ತಿಂಗಳ ಹಿಂದೆ ಅಪ್ರಾಪ್ತ ವಿದ್ಯಾರ್ಥಿನಿಯೊಂದಿಗೆ ಪರಾರಿಯಾಗಿದ್ದ ಟ್ಯೂಷನ್ ಶಿಕ್ಷಕನನ್ನು ಮಂಡ್ಯದಲ್ಲಿ ಬಂಧಿಸಲಾಗಿದೆ ಎಂದು ಪೊಲೀಸರು ಬುಧವಾರ ತಿಳಿಸಿದ್ದಾರೆ. ವಿದ್ಯಾರ್ಥಿನಿಯ ಪೋಷಕರು ನೀಡಿದ ದೂರಿನ ಆಧಾರದ ಮೇಲೆ ಮಂಡ್ಯದಲ್ಲಿ ಟ್ಯೂಷನ್ ಶಿಕ್ಷಕ ಅಭಿಷೇಕ್ ಗೌಡ ವಿರುದ್ಧ ಅಪಹರಣ ಪ್ರಕರಣ ದಾಖಲಾಗಿತ್ತು.



ಆರೋಪಿಯು ವಿವಾಹಿತನಾಗಿದ್ದು, ಎರಡು ವರ್ಷದ ಮಗುವಿದೆ ಎಂದು ಪೊಲೀಸ್ ಮೂಲಗಳು ಬಹಿರಂಗಪಡಿಸಿವೆ. ನವೆಂಬರ್ 23 ರಂದು ಅಪ್ರಾಪ್ತ ಬಾಲಕಿಯನ್ನು ಅಪಹರಿಸಲಾಗಿತ್ತು. ಜೆಪಿ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು ಎಂದು ಉಪ ಪೊಲೀಸ್ ಆಯುಕ್ತ (ಬೆಂಗಳೂರು ದಕ್ಷಿಣ ವಿಭಾಗ)

ಪುಟ 2

# ಜೀವಾವಧಿ ಶಿಕ್ಷೆಗೆ ಗುರಿಯಾಗಿದ್ದ ಮೂವರು ಕೈದಿಗಳು ಸಾವು

**ಮೈಸೂರು:** ಇಲ್ಲಿನ ಕಾರಾಗೃಹದಲ್ಲಿ ಜೀವಾವಧಿ ಶಿಕ್ಷೆಗೆ ಒಳಗಾಗಿದ್ದ ಮೂವರು ಕೈದಿಗಳು ಮೃತಪಟ್ಟಿದ್ದಾರೆ. ಕೇಕ್ ತಯಾರಿಕೆಗೆ ಬಳಸುವ ಎಸ್ಸೆನ್ಸ್ ದ್ರವ ಕುಡಿದ ಪರಿಣಾಮ ಮೂವರು ಮೃತಪಟ್ಟಿದ್ದಾರೆ. ವಿವಿಧ ಅಪರಾಧ ಪ್ರಕರಣಗಳಲ್ಲಿ ಜೀವಾವಧಿ ಶಿಕ್ಷೆಗೆ ಗುರಿಯಾಗಿ ಮೈಸೂರು ಕಾರಾಗೃಹದಲ್ಲಿ ಶಿಕ್ಷೆ ಅನುಭವಿಸುತ್ತಿದ್ದ ಮೂವರು ಕೈದಿಗಳು



ಮೃತಪಟ್ಟಿದ್ದಾರೆ. ಡಿಸೆಂಬರ್ 26 ರಂದು ಮೈಸೂರು ಕಾರಾಗೃಹದಲ್ಲಿ ಬೇಕರಿ ಪದಾರ್ಥಗಳನ್ನು ತಯಾರಿಸುವಾಗ ಕೈದಿಗಳಾದ ಮಾದೇಶ್, ನಾಗರಾಜ್ ಮತ್ತು ರಮೇಶ್ ಪದಾರ್ಥಗಳಿಗೆ ಬಳಸುವ ಎಸ್ಸೆನ್ಷಿಯಲ್ ದ್ರವವನ್ನು ಕುಡಿದಿದ್ದರು. ಪರಿಣಾಮ ಮೂವರು ತೀವ್ರವಾಗಿ ಅಸ್ವಸ್ಥಗೊಂಡಿದ್ದರು. ಮೂವರನ್ನು ಮೈಸೂರಿನ ಕೆ.ಆರ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಎರಡು ದಿನಗಳ ಹಿಂದೆ ಗುಂಡ್ಲುಪೇಟೆಯ ಮಾದೇಶ್ ಮೃತಪಟ್ಟಿದ್ದ. ನಿನ್ನೆ ಚಾಮರಾಜನಗರ ಮೂಲದ ನಾಗರಾಜ್ ಮೃತಪಟ್ಟಿದ್ದ. ಇವತ್ತು ಮಂಡ್ಯ ಮೂಲದ ರಮೇಶ್ ಮೃತಪಟ್ಟಿದ್ದಾನೆ. ಮೃತ ದೇಹಗಳ ಮರಣೋತ್ತರ ಪರೀಕ್ಷೆ ನ್ಯಾಯಾಧೀಶರ ಸಮ್ಮುಖದಲ್ಲಿ ನಡೆಸಿ ನಂತರ ಮೃತ ದೇಹಗಳನ್ನು ಅವರ ಕುಟುಂಬಸ್ಥರಿಗೆ ಹಸ್ತಾಂತರಿಸಲಾಯಿತು. ಈ ಪ್ರಕರಣ ಬಗ್ಗೆ ಕಾರಾಗೃಹ ಇಲಾಖೆಯ ಹಿರಿಯ ಅಧಿಕಾರಿಗಳು ಇಲಾಖಾ ಮಟ್ಟದ ತನಿಖೆ ಕೂಡ ಶುರು ಮಾಡಿದ್ದಾರೆ.

# ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿಗೆ ಕುಂಭಮೇಳದ ಆಹ್ವಾನ

**ನವದೆಹಲಿ:** ತ್ರಿವೇಣಿ ಸಂಗಮ ಸ್ಥಳ ಪ್ರಯಾಗ್‌ರಾಜ್‌ನಲ್ಲಿ ನಡೆಯಲಿರುವ ಕುಂಭಮೇಳದಲ್ಲಿ ಭಾಗಿಯಾಗುವಂತೆ ಉತ್ತರ ಪ್ರದೇಶದ ಹಣಕಾಸು ಸಚಿವ ಸುರೇಶ್ ಖನ್ನಾ ಅವರು ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರಿಗೆ ಆಹ್ವಾನ ನೀಡಿದರು.

ನವದೆಹಲಿಯ ಸಚಿವಾಲಯದ ಕಚೇರಿಯಲ್ಲಿ ಬುಧವಾರ ಬೆಳಗ್ಗೆ ಕೇಂದ್ರ ಸಚಿವರನ್ನು ಭೇಟಿಯಾದ ಖನ್ನಾ ಅವರು, ಗಂಗಾ ಜಲದ ಜತೆಯಲ್ಲಿ ಆಹ್ವಾನ ಪತ್ರಿಕೆಯನ್ನು ನೀಡಿದರು. ಭಾರತದ ಅತಿದೊಡ್ಡ ಧಾರ್ಮಿಕ ಕಾರ್ಯಕ್ರಮ ಆಗಿರುವ ಕುಂಭಮೇಳದಲ್ಲಿ ತಪ್ಪದೇ ಪಾಲ್ಗೊಳ್ಳುವುದಾಗಿ ಕುಮಾರಸ್ವಾಮಿ ಅವರು ಸಚಿವ ಖನ್ನಾ ಅವರಿಗೆ ತಿಳಿಸಿದರು.

ಕುಂಭಮೇಳದಲ್ಲಿ ಪಾಲ್ಗೊಳ್ಳುವುದು ನಿಜಕ್ಕೂ ಸಂತೋಷದ ಸಂಗತಿ. ಅದರಲ್ಲಿಯೂ ಮೂರು ಪುಣ್ಯನದಿಗಳು ಸಂಗಮವಾಗುವ ಪುಣ್ಯಸ್ಥಳದಲ್ಲಿ ತಾಯಿ ಗಂಗೆಯ ಅನುಗ್ರಹಕ್ಕೆ ಪಾತ್ರವಾಗಲು ತಾವು ಕಾತುರದಿಂದ ಕಾಯುತ್ತಿರುವುದಾಗಿ ಕೇಂದ್ರ ಸಚಿವರು ಹೇಳಿದರು.

ಕುಂಭಮೇಳ ದೊಡ್ಡ ಪ್ರಮಾಣದಲ್ಲಿ ಯಶಸ್ವಿ ಆಗಲಿ. ಭಾರತೀಯ ಸನಾತನ ಪರಂಪರೆಯ ಅನನ್ಯ ಪ್ರತೀಕವಾಗಿರುವ ಕುಂಭಮೇಳ ಯಶಸ್ವಿ ಆಗಲಿ ಎಂದು ಕುಮಾರಸ್ವಾಮಿ ಅವರು ಶುಭ ಹಾರೈಸಿದರು.

# ಗಡ್ಕರಿ ಭೇಟಿಯಾದ ಹೆಚ್‌ಡಿಕೆ

## ಮಂಡ್ಯ ಹೊರವರ್ತುಲ ರಸ್ತೆ ಯೋಜನೆ, ಬೈಪಾಸ್ ಅಭಿವೃದ್ಧಿಗೆ ಮನವಿ

**ನವದೆಹಲಿ:** ರಾಜ್ಯದ ವಿವಿಧ ಹೆದ್ದಾರಿ ಯೋಜನೆಗಳ ಬಗ್ಗೆ ಕೇಂದ್ರ ಹೆದ್ದಾರಿ ಮತ್ತು ಭೂಸಾರಿಗೆ ಖಾತೆ ಸಚಿವ ನಿತಿನ್ ಗಡ್ಕರಿ ಅವರನ್ನು ಭೇಟಿಯಾಗಿ ಚರ್ಚೆ ನಡೆಸಿದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಹೆಚ್.ಡಿ.ಕುಮಾರಸ್ವಾಮಿ ಹಲವಾರು ಮನವಿಗಳನ್ನು ಸಲ್ಲಿಸಿ, ಆದಷ್ಟು ಬೇಗ ಕ್ರಮ ವಹಿಸುವಂತೆ ಕೋರಿದರು.



ನವದೆಹಲಿಯಲ್ಲಿ ಬುಧವಾರ ಬೆಳಗ್ಗೆ ನಿತಿನ್ ಗಡ್ಕರಿಯವರ ನಿವಾಸದಲ್ಲಿ ಭೇಟಿಯಾದ ಕುಮಾರಸ್ವಾಮಿ ಗಡ್ಕರಿಯೊಂದಿಗೆ ಮಾತುಕತೆ ನಡೆಸಿದರು. ರಾಜ್ಯದಲ್ಲಿ ಹಲವಾರು ಹೆದ್ದಾರಿ ಯೋಜನೆಗಳ ಅಭಿವೃದ್ಧಿ ಆಗಬೇಕಿದ್ದು, ಆ ಬಗ್ಗೆ ಕ್ರಮ ವಹಿಸಬೇಕು ಎಂದು ಹತ್ತಕ್ಕೂ ಹೆಚ್ಚು ಯೋಜನೆಗಳ ಮನವಿ ಪತ್ರಗಳನ್ನು ಸಲ್ಲಿಸಿದರು. ಈ ಪೈಕಿ ಕೆಲ ಯೋಜನೆಗಳ ಬಗ್ಗೆ ತಕ್ಷಣವೇ ಖುದ್ದಾಗಿ ಗಮನ ಹರಿಸುವುದಾಗಿ ಗಡ್ಕರಿ ಭರವಸೆ ನೀಡಿದರು.

ಮಂಡ್ಯ, ಕೋಲಾರ, ಚಿಕ್ಕಬಳ್ಳಾಪುರ, ಚಾಮರಾಜನಗರ, ಮೈಸೂರು ಮುಂತಾದ ಜಿಲ್ಲೆಗಳ ಹೆದ್ದಾರಿಗಳ ಅಭಿವೃದ್ಧಿ ಬಗ್ಗೆ ಸಾರಿಗೆ ಸಚಿವರ ಜೊತೆ ಕುಮಾರಸ್ವಾಮಿ ಸಮಾಲೋಚನೆ ನಡೆಸಿದರು. ನಮ್ಮ ಮನವಿಗೆ ಅತ್ಯಂತ ಸಕಾರಾತ್ಮಕವಾಗಿ ಸ್ಪಂದಿಸಿದ ಸಾರಿಗೆ ಸಚಿವರು, ಎಲ್ಲಾ ಯೋಜನೆಗಳ ಬಗ್ಗೆ ಖುದ್ದು ಗಮನ ಹರಿಸುವುದಾಗಿ ಭರವಸೆ ನೀಡಿದರು ಎಂದು ಕುಮಾರಸ್ವಾಮಿ ತಿಳಿಸಿದ್ದಾರೆ.

ಮಂಡ್ಯ ಹೆದ್ದಾರಿಯ ಬೈಪಾಸ್ ರಸ್ತೆ ಅಗಲೀಕರಣ ಮಾಡುವುದು, ಅದರ ವೈಟ್ ಟ್ಯಾಪಿಂಗ್ ಹಾಗೂ ಎನ್‌ಎಚ್–275ರಲ್ಲಿರುವ ಮಂಡ್ಯ ನಗರದ ಎಲ್ಲಾ ಜಂಕ್ಷನ್‌ಗಳು, ಪಾದಚಾರಿ ಮಾರ್ಗಗಳನ್ನೂ ಅಭಿವೃದ್ಧಿ ಮಾಡಬೇಕು ಎಂದು ಕುಮಾರಸ್ವಾಮಿ ಕೋರಿದರು.

ಮಂಡ್ಯ ಹೆದ್ದಾರಿಯ ಬೈಪಾಸ್ ರಸ್ತೆ ಸಂಪೂರ್ಣವಾಗಿ ಹಾಳಾಗಿದ್ದು, ಹಳ್ಳದಿಣ್ಣೆ ಬಿದ್ದು ವಾಹನ ಸವಾರರಿಗೆ ಬಹಳಷ್ಟು ತೊಂದರೆ ಆಗಿದೆ. ರಾತ್ರಿ ಸಮಯದಲ್ಲಿ ಈ ರಸ್ತೆಯಲ್ಲಿ ಸಂಚಾರ ಮಾಡುವುದು ಅಪಾಯಕಾರಿ ಆಗಿದೆ ಎಂದು ಗಡ್ಕರಿಗೆ ಕುಮಾರಸ್ವಾಮಿ ಮನವರಿಕೆ ಮಾಡಿಕೊಟ್ಟರು.

ಜೇವರ್ಗಿ– ಚಾಮರಾಜನಗರ ರಾಷ್ಟ್ರೀಯ ಹೆದ್ದಾರಿಯಲ್ಲಿನ ಪಾಂಡವಪುರ ಪಟ್ಟಣ, ಕಿರಂಗೂರು ಬಳಿಯ ಹೆದ್ದಾರಿ ಅಭಿವೃದ್ಧಿ ಮಾಡುವ ಬಗ್ಗೆಯೂ ಸಚಿವರು ಗಡ್ಕರಿಯವರೊಂದಿಗೆ ಚರ್ಚೆ ನಡೆಸಿದರು.

ಆಂಧ್ರ ಪ್ರದೇಶದ ಕುಪ್ಪಂ– ಬಂಗಾರಪೇಟೆ– ಕೋಲಾರ –ಚಿಂತಾಮಣಿ; ಚಿಂತಾಮಣಿಯ ಗಜಾನನ ಸರ್ಕಲ್– ಚೇಳೂರು; ರಾಷ್ಟ್ರೀಯ ಹೆದ್ದಾರಿ ಎನ್‌ಎಚ್–75ರಿಂದ ಹೊಸಕೋಟೆ –ಹೆಚ್.ಕ್ರಾಸ್– ಚಿಂತಾಮಣಿ ನಡುವೆ ಸಂಪರ್ಕ ಕಲ್ಪಿಸುವ ಎನ್‌ಎಚ್–69, ಎನ್‌ಎಚ್–42ರಿಂದ ಹೊಸಕೋಟೆ –ಗೌನಿಪಲ್ಲಿ – ಶ್ರೀನಿವಾಸಪುರ ಮೂಲಕ ಎನ್‌ಎಚ್–75ಕ್ಕೆ ಸಂಪರ್ಕ ಕಲ್ಪಿಸುವ ಹೆದ್ದಾರಿ ಯೋಜನೆಗಳ ಬಗ್ಗೆಯೂ ಹೆಚ್‌ಡಿಕೆ ಸಾರಿಗೆ ಸಚಿವರ ಗಮನ ಸೆಳೆದರು.

# ಡಿಕೆಶಿ ಸಹನೆಯ ಕಟ್ಟೆ ಒಡೆಯುವ ಕಾಲ ಸನ್ನಿಹಿತವಾಗಿದೆ: ಬೊಮ್ಮಾಯಿ

**ಬೆಂಗಳೂರು:** ಡಿಕೆ ಶಿವಕುಮಾರ್ ಸಹನೆಯ ಕಟ್ಟೆ ಒಡೆಯುವ ಕಾಲ ಸನ್ನಿಹಿತವಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.



ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗಿನಿಂದ ಅಭದ್ರತೆ. ಒಳಬೇಗುದಿ ಆರಂಭದಿಂದಲೂ ಇದೆ. ಡಿಸಿಎಂ ಡಿ.ಕೆ. ಶಿವಕುಮಾರ್ ಅವರ ಸಹನೆಯ ಕಟ್ಟೆ ಯಾವಾಗ ಒಡೆಯುತ್ತದೆ ಎನ್ನುವ ಪ್ರಶ್ನೆ ನಿರ್ಮಾಣವಾಗಿದ್ದು, ಕಾಲ ಸನ್ನಿಹಿತವಾಗಿದೆ. ಇದು ನಿರೀಕ್ಷಿತ ಬೆಳವಣಿಗೆ, ಇದರಲ್ಲಿ ಬಹಳ ಮುಖ್ಯ ವಿಚಾರ ಡಿಕೆಶಿ ಅವರ ಸಹನೆ, ಅವರು ತಮ್ಮ ವ್ಯಕ್ತಿತ್ವಕ್ಕೆ ವಿರುದ್ಧವಾಗಿ ಬಹಳ ಸಹನೆ ಪ್ರದರ್ಶನ ಮಾಡುತ್ತಿದ್ದಾರೆ. ಅದು ಅವರ ಮುತ್ಸದ್ದಿತನವೋ? ಹೈಕಮಾಂಡ್ ಸೂಚನೆಯೋ ನೋಡಬೇಕು. ಅವರ ಸಹನೆಯ ಕಟ್ಟೆ ಯಾವಾಗ ಒಡೆಯುತ್ತದೆ ಅನ್ನುವುದು ಮುಖ್ಯವಾಗುತ್ತದೆ. ಪ್ರಕ್ರಿಯೆ ಆರಂಭವಾಗಿದ್ದು, ಕಾಲ ಯಾವಾಗ ಬರುತ್ತದೆ ಎಂದು ನೋಡಬೇಕು ಎಂದು ವಾಗ್ದಾಳಿ ನಡೆಸಿದರು.

ಕಾಂಗ್ರೆಸ್ ಮೇಲಿನ ಕಮಿಷನ್ ಆರೋಪದ ಬಗ್ಗೆ ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಈ ಸರ್ಕಾರ ಎಲ್ಲದರಲ್ಲಿ ಕಮಿಷನ್, ಭ್ರಷ್ಟಾಚಾರ ನಡೆಸುತ್ತಿದೆ. ಇದರಿಂದ ಜನ ಹೈರಾಣಾಗಿದ್ದಾರೆ. ಅಬಕಾರಿ ಗುತ್ತಿಗೆದಾರರು, ಪಿಡಬ್ಲ್ಯೂಡಿ, ನೀರಾವರಿ ಇಲಾಖೆಯ ಗುತ್ತಿಗೆದಾರರು ಕಷ್ಟ ಅನುಭವಿಸುತ್ತಿದ್ದಾರೆ. ಜನಸಾಮಾನ್ಯರು ರೋಸಿ ಹೋಗಿದ್ದಾರೆ. ಮಧ್ಯಮ ವರ್ಗದವರು ಹೈರಾಣಾಗಿದ್ದಾರೆ. ಗ್ರಾಮೀಣ ಹಾಗೂ ನಗರ ಪ್ರದೇಶದಲ್ಲಿ ಒಂದು ಸೈಟ್ ತೆಗೆದುಕೊಳ್ಳಲಾಗದ ವಾತಾವರಣವನ್ನು ಸರ್ಕಾರ ನಿರ್ಮಾಣ ಮಾಡಿದೆ. ಎಸ್‌ಸಿ, ಎಸ್ಟಿ ಬೋರ್‌ವೆಲ್‌ಗಳಿಗೂ ಕಮಿಷನ್ ಪಡೆಯುತ್ತಿದ್ದಾರೆ. ಭ್ರಷ್ಟಾಚಾರ ಪದೇ ಪದೇ ಮುನ್ನೆಲೆಗೆ ಬರುತ್ತಿದೆ. ಇದನ್ನು ಸಿಎಂ ನಿರಾಕರಿಸಿರಬಹುದು, ಅವರಿಗೆ ಹಿಡಿತ ಕೈತಪ್ಪಿರಬಹುದು, ಅವರೇ ಭಾಗಿಯಾಗಿರಬಹುದು ಅಥವಾ ಅದರ ಬಗ್ಗೆ ಮಾತನಾಡಿದರೆ ಅಧಿಕಾರಕ್ಕೆ ಧಕ್ಕೆ ಬರುತ್ತದೆ ಎನ್ನುವ ಭಾವನೆ ಮೂಡಿದೆ. ಸರ್ಕಾರದಲ್ಲಿ ಒಂದೊಂದು ಇಲಾಖೆಯಲ್ಲಿ ಒಂದೊಂದು ರೀತಿಯ ಪರ್ಸೆಂಟ್ ಕಮಿಷನ್ ಇದೆ. ಇಷ್ಟೇ ಇದೆ ಅಂತ ಹೇಳಲು ಆಗುವುದಿಲ್ಲ. ಆದರೆ, ಕುಮಾರಸ್ವಾಮಿಯವರು ಹೇಳಿರುವುದು ಭ್ರಷ್ಟಾಚಾರ ಮಿತಿಮೀರಿದೆ ಎಂದು ಕಿಡಿಕಾಡಿದರು.

ಕಾಂಗ್ರೆಸ್‌ನಲ್ಲಿ ಡಿನ್ನರ್ ಮೀಟಿಂಗ್‌ಗಳು ಅವರ ಆಂತರಿಕ ವಿಚಾರ, ಈ ಬಗ್ಗೆ ಹೆಚ್ಚು ವಿಶ್ಲೇಷಣೆ ಮಾಡುವುದಿಲ್ಲ. ಆದರೆ, ಆಡಳಿತ ಯಂತ್ರ ಕುಸಿದಿದೆ. ಇದರಿಂದ ಸಾಮಾನ್ಯ ಜನರು ತೊಂದರೆ ಅನುಭವಿಸುವಂತಾಗಿದೆ. ತಾಯಂದಿರು ಸಾಯುತ್ತಿದ್ದಾರೆ. ಶಾಲಾ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ಸರಿಯಾಗಿ ದೊರೆಯುತ್ತಿಲ್ಲ. ಅಂಗನವಾಡಿ ಕಾರ್ಯಕರ್ತರು ಸರಿಯಾಗಿ ಗೌರವಧನ ಪಡೆಯುತ್ತಿಲ್ಲ. ನಾವು ಪ್ರತಿಪಕ್ಷವಾಗಿ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಕೆಲಸ ಮಾಡುತ್ತೇವೆ ಎಂದು ಹೇಳಿದರು.

ಕಾಂಗ್ರೆಸ್ ದೆಹಲಿಯಲ್ಲಿ ಮಹಿಳೆಯರಿಗೆ ಪ್ಯಾರಿದೀದಿ ಯೋಜನೆ ಘೋಷಣೆ ಮಾಡಿರುವುದರಿಂದ ಅಲ್ಲಿನ ಜನರು ನಂಬುವುದಿಲ್ಲ. ಈಗಾಗಲೇ ಗ್ಯಾರಂಟಿ ಹೆಸರಿನಲ್ಲಿ ಹಿಮಾಚಲ ಪ್ರದೇಶ, ತೆಲಂಗಾಣ, ಕರ್ನಾಟಕವನ್ನು ದಿವಾಳಿ ಮಾಡಿದ್ದಾರೆ. ಅವರು ಅಧಿಕಾರಕ್ಕೆ ಬಂದರೆ ದೆಹಲಿಯನ್ನೂ ದಿವಾಳಿ ಮಾಡುತ್ತಾರೆ. ಹೀಗಾಗಿ ಜನರು ಕಾಂಗ್ರೆಸನ್ನು ನಂಬುವುದಿಲ್ಲ ಎಂದರು.

ಬಿಜೆಪಿಯಲ್ಲೂ ಭೋಜನ ಕೂಟ ನಡೆಯುತ್ತಿದಿಯಾ ಎನ್ನುವ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ನಾವು ಆಗಾಗ ಒಟ್ಟಿಗೆ ಊಟ ಮಾಡುತ್ತೇವೆ. ಅದರಲ್ಲಿ ಮಹತ್ವ ಏನು ಇಲ್ಲ. ರಾಜ್ಯ ಬಿಜೆಪಿಯಲ್ಲಿನ ಗೊಂದಲಗಳ ಬಗ್ಗೆ ಪಕ್ಷದ ಹೈಕಮಾಂಡ್ ಗಮನ ಹರಿಸಿದೆ. ಈ ತಿಂಗಳಲ್ಲಿ ಸರಿ ಹೋಗಲಿದೆ. ಒಳ್ಳೆಯ ರೀತಿಯಲ್ಲಿ ಎಲ್ಲವೂ ಬಗೆಹರಿಯುವ ವಾತಾವರಣವನ್ನು ಹೈಕಮಾಂಡ್ ತೀರ್ಮಾನಿಸಲಿದೆ ಎಂದು ತಿಳಿಸಿದರು.

# ಬಡವರಿಗೆ ನೆರವು ನೀಡದೇ ನಕ್ಸಲರಿಗೆ ಲಕ್ಷಗಟ್ಟಲೇ ಹಣ ನೀಡ್ತಿದ್ದಾರೆ

**ಬೆಂಗಳೂರು:** ಇದು ನಕ್ಸಲರ ಶರಣಾಗತಿ ಅಲ್ಲ, ಕಾಡು ನಕ್ಸಲರನ್ನು ನಾಡು ನಕ್ಸಲರನ್ನಾಗಿ ಮಾಡುವ ಪ್ಯಾಕೇಜ್ ಇದು ಎಂದು ಮಾಜಿ ಸಚಿವ ಸುನಿಲ್ ಕುಮಾರ್ ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.



ವಿಧಾನಸೌಧದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ರಾಮೇಶ್ವರ ಕಫೆಗೆ ಬಾಂಬ್ ಇಟ್ಟವರನ್ನು ಹಾಗೂ ಪೊಲೀಸ್ ಸ್ಟೇಷನ್ ಗೆ ಬೆಂಕಿ ಇಟ್ಟವರನ್ನ ಶರಣಾಗತಿ ಆದರೆ ಬಿಡ್ತಾರಾ? ಶರಣಾಗತಿಗೂ ಮೊದಲೇ ಎ, ಬಿ,ಸಿ ಎಂದು ಪ್ಯಾಕೇಜ್ ಘೋಷಣೆ ಮಾಡುವುದು ಸರಿಯಲ್ಲ. ಸಿದ್ದರಾಮಯ್ಯನವರ ಮನೆಯಲ್ಲೇ ಶರಣಾಗತಿ ಆಗುತ್ತದೆ ಅಂದ್ರೆ ಅದಕ್ಕಿಂತ ದೊಡ್ಡ ದುರಂತ ಯಾವುದು ಇಲ್ಲ ಎಂದು ಹೇಳಿದರು.

ನಕ್ಸಲ್ ಶರಣಾಗತಿ ಮಾಡುವಂತಹ ಘಟನೆ ಅತ್ಯಂತ ಆತಂಕಕಾರಿ. ನಕ್ಸಲ್ ಅವರನ್ನು ಶರಣಾಗತಿ ಮಾಡಿಸುವ ಸಿದ್ದರಾಮಯ್ಯ ಅವರನ್ನು ಪ್ರಶ್ನೆ ಮಾಡಬೇಕು. ಮುಂದಿನ ದಿನಗಳಲ್ಲಿ ನಾಗರಿಕ ಸಮಾಜ ಅತ್ಯಂತ ಅಪಾಯಕಾರಿಗೆ ತಲುಪಲಿದೆ ಎಂದು ಅಭಿಪ್ರಾಯಪಟ್ಟರು.

ನಕ್ಸಲ್ ಚಿಂತನೆಗೆ ಬೆಂಬಲ ಸಿಗದೇ ಇದ್ದಾಗ ಸಿದ್ದರಾಮಯ್ಯ ಸರ್ಕಾರ ಪ್ಯಾಕೇಜ್ ಆಸೆಯ ಚಿಗುರು ಹೊರಡಿಸಿದೆ. ಹಣವನ್ನು ನೀಡಿ ಶರಣಾಗತಿ ಮಾಡಿಸುವುದನ್ನು ನಾವು ವಿರೋಧಿಸುತ್ತೇವೆ. ಬಡವರಿಗೆ ನೆರವು ಕೊಡದೇ ಬಂದೂಕುಗಳು ಹಿಡಿದವರಿಗೆ ನೆರವು ಕೊಡುವುದು ಎಷ್ಟು ಸರಿ ಎಂದು ಪ್ರಶ್ನಿಸಿದರು.

ಹಲವು ವರ್ಷಗಳಿಂದ ನಕ್ಸಲ್ ವಿರುದ್ಧ ಹೋರಾಡಿದ ನಕ್ಸಲ್ ನಿಗ್ರಹ ಪಡೆಯ ನೈತಿಕ ಸ್ಥೈರ್ಯ ಕಳೆದುಕೊಳ್ಳುವ ಸಂದರ್ಭ ಇದು. ವಿಕ್ರಮ್ ಗೌಡ ಎನ್‌ಕೌಂಟರ್ ಆಗುತ್ತಿದ್ದಂತೆ ತನಿಖೆ ಆಗಬೇಕು ಅಂತಾರೆ. ಶರಣಾಗತಿ ಆಗುವುದಾದರೆ ನ್ಯಾಯಾಲಯದಲ್ಲಿ ಶರಣಾಗಲಿ. ಐದು ವರ್ಷಗಳಲ್ಲಿ ಬಿಡುಗಡೆ ಆಗಿರುವ ನಕ್ಸಲರ ಚಟುವಟಿಕೆಗಳನ್ನು ಬಿಡುಗಡೆ ಮಾಡಿ ಎಂದು ಸುನಿಲ್ ಕುಮಾರ್ ಗೃಹ ಸಚಿವರಿಗೆ ಮನವಿ ಮಾಡಿದರು.

ಇವರು ನಗರಕ್ಕೆ ಬಂದ ನಂತರ ಕಾಡಿಗೆ ಕಳುಹಿಸಿ ಕೊಡುವ ಕೆಲಸ ಆಗಲಿದೆ. ಶಾಂತಿಗಾಗಿ ನಾಗರೀಕ ವೇದಿಕೆ ಮುಂದೆ ಶರಣಾಗತಿ ಆಗುವುದು ಬೇಡ. ನ್ಯಾಯಾಲಯದ ಮುಂದೆ ಶರಣಾಗಲಿ ಎಂದರು.

# ಬೈಕ್‌ಗೆ ಟಿಪ್ಪರ್ ಡಿಕ್ಕಿ : ಸವಾರ ಸಾವು

**ಚಿತ್ರದುರ್ಗ:** ಬೈಕ್‌ಗೆ ಟಿಪ್ಪರ್ ಡಿಕ್ಕಿಯಾದ ಪರಿಣಾಮ ಬೈಕ್ ಸವಾರ ಸಾವನ್ನಪ್ಪಿದ ಘಟನೆ ಚಿತ್ರದುರ್ಗ ಜಿಲ್ಲೆ ಮೊಳಕಾಲ್ಮೂರು ತಾಲೂಕಿನ ರಾಂಪುರ ಗ್ರಾಮದಲ್ಲಿ ನಡೆದಿದೆ.

ಬಾಂಡ್ರಾವಿ ಗ್ರಾಮದ ಶಾಲೆಯ ಅತಿಥಿ ಶಿಕ್ಷಕ ರಂಗಪ್ಪ (43) ಮೃತ ದುರ್ದೈವಿ.

ಘಟನಾ ಸ್ಥಳಕ್ಕೆ ರಾಂಪುರ ಠಾಣೆ ಪಿಎಸ್ಐ ಮಹೇಶ್ ಹೊಸಪೇಟೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಘಟನೆ ಸಂಬಂಧ ರಾಂಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಶಸ್ತ್ರಾಸ್ತ್ರ ಎಲ್ಲಿ ಹೋಯ್ತು!?

ವ್ಯಕ್ತವಾಗಿದೆ. ನಮ್ಮ ಮೇಲೂ ಕೇಸ್‌ಗಳಿವೆ, ವಾಪಸ್ ಪಡೆದು ಪ್ಯಾಕೇಜ್ ನೀಡಿ. ಸಂಪೂರ್ಣ ಕೇಸ್ ಕ್ಲಿಯರ್ ಮಾಡಿ ಭೂಮಿ ನೀಡಿ ಎಂದು ಯುವ ಮೋರ್ಚಾ ಆಕ್ರೋಶ ವ್ಯಕ್ತಪಡಿಸಿದೆ.

ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಫೇಸ್‌ಬುಕ್ ಅಭಿಯಾನವನ್ನೂ ಆರಂಭಿಸಿದೆ. ನಕ್ಸಲರ ಶರಣಾಗತಿ ಸಂಬಂಧ ಉನ್ನತ ಮಟ್ಟದ ತನಿಖೆಗೆ ಆಗ್ರಹಿಸಿದೆ. ಕೇಂದ್ರ ಗೃಹ ಇಲಾಖೆಗೂ ಬಿಜೆಪಿ ಕಾರ್ಯಕರ್ತರು ಮನವಿ ಮಾಡಲಿದ್ದಾರೆ.

## ಮುಹೂರ್ತ ಫಿಕ್ಸ್

ಎಸ್ ಎಂ ಕೃಷ್ಣ ಸಿಎಂ ಆಗಿದ್ದಾಗ ನಡೆದಿತ್ತು ಮಿನಿ ಸಂಪುಟ ಸಭೆ!

ಈ ಹಿಂದೆ ಎಸ್‌ಎಂ ಕೃಷ್ಣ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಚಾಮರಾಜನಗರ ಜಿಲ್ಲೆಯಲ್ಲಿ ಮಿನಿ ಸಂಪುಟ ಸಭೆ ನಡೆದಿತ್ತು. ಜಿಲ್ಲೆಯ ಯಳಂದೂರು ತಾಲೂಕಿನ ಬಿಳಿಗಿರಿರಂಗನ ಬೆಟ್ಟದಲ್ಲಿ ಎಸ್‌ಎಂ ಕೃಷ್ಣ ಮಿನಿ ಸಂಪುಟ ಸಭೆ ನಡೆಸಿದ್ದರು. ಅರಣ್ಯ, ಲೋಕೋಪಯೋಗಿ, ಸಮಾಜ ಕಲ್ಯಾಣ ಇಲಾಖೆ ಸಚಿವರ ಸಭೆ ನಡೆಸಿ ಮೂಲಸೌಕರ್ಯ ಕಲ್ಪಿಸಲು ಕ್ರಮ ಕೈಗೊಂಡಿದ್ದರು.

ಚಾಮರಾಜನಗರಕ್ಕೆ ಭೇಟಿ ನೀಡಿದರೆ ಅಧಿಕಾರ ಕಳೆದುಕೊಳ್ಳುತ್ತಾರೆ ಎಂಬ ಮೌಢ್ಯ ತೊಡೆದು ಹಾಕಿದ್ದ ಸಿಎಂ ಸಿದ್ದರಾಮಯ್ಯ ಈಗ ಸಂಪುಟ ಸಭೆ ನಡೆಸಲು ಮುಂದಾಗಿದ್ದಾರೆ. ಸಂಪುಟ ಸಭೆಯಲ್ಲಿ ಸಿಎಂ ವಿಶೇಷ ಪ್ಯಾಕೇಜ್, ವಿಶೇಷ ಯೋಜನೆ ಮೂಲಕ ಹಿಂದುಳಿದ ಜಿಲ್ಲೆ ಎಂಬ ಹಣೆಪಟ್ಟಿ ಕಳಚಲಿ ಎಂಬುದೇ ಜಿಲ್ಲೆಯ ಜನರ ಆಶಯವಾಗಿದೆ.

## ರಜೆ ಘೋಷಣೆ

ಬಂದ್ ಹಿನ್ನೆಲೆ ಇಂದು ಬೀದರ್‌ನಲ್ಲಿ ಶಾಲಾ – ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ. ಬೀದರ್ ನಗರದ ಶಾಲಾ, ಕಾಲೇಜುಗಳಿಗೆ ರಜೆ ಘೋಷಿಸಿ ಪದವಿ ಪೂರ್ವ ಉಪ ನಿರ್ದೇಶಕರು ಆದೇಶ ಹೊರಡಿಸಿದ್ದಾರೆ.

## ಅಸ್ಥಿಪಂಜರ!

ಅವುಗಳನ್ನು ಶೈಕ್ಷಣಿಕ ಉದ್ದೇಶಗಳಿಗಾಗಿ ಬಳಸಿರುವ ಸಾಧ್ಯತೆ ಇದೆ. ಅಸ್ಥಿಪಂಜರ, ತಲೆಬುರುಡೆ ಮಹಿಳೆಯರದ್ದು, ಆದರೆ ಅವುಗಳು ಒಬ್ಬರದ್ದಲ್ಲ. ಅವುಗಳ ವಯಸ್ಸು ಮತ್ತು ಮೂಲವನ್ನು ಪತ್ತೆ ಹಚ್ಚುವುದು ಕಠಿಣವಾದರೂ ಈ ಬಗ್ಗೆ ಕೂಡ ಪರಿಶೀಲಿಸಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ.

ಎರುವೇಲಿ ಪೂರ್ವದ ಚೊಟ್ಟಣಿಕ್ಕರ ಅರಮನೆ ಚೌಕದಲ್ಲಿರುವ 12 ಎಕರೆ ಜಾಗದಲ್ಲಿ ಪಾಳು ಬಿದ್ದ ಮನೆಯಿದೆ. ಈ ಆಸ್ತಿ ವೈದ್ಯ ಮಂಗಳಶ್ಶೇರಿ ಫಿಲಿಪ್ ಜಾನ್ ಅವರಿಗೆ ಸೇರಿದ್ದಾಗಿದೆ. ಕಳೆದ 20 ವರ್ಷಗಳಿಂದ ಮನೆಯಲ್ಲಿ ಯಾರೂ ವಾಸವಿರಲಿಲ್ಲ. ಆದರೂ ಮನೆಗೆ ಮೂಳೆಗಳು ಹೇಗೆ ಬಂದಿವೆ? ಎಂಬ ಬಗ್ಗೆಯೂ ತನಿಖೆ ನಡೆಯುತ್ತಿದೆ. ಮನೆಯ ಮಾಲೀಕರು, ವೈದ್ಯರು ಮತ್ತು ನೆರೆಹೊರೆಯವರ ಹೇಳಿಕೆಗಳನ್ನು ದಾಖಲಿಸಿಕೊಳ್ಳಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಪಾಳು ಬಿದ್ದ ಮನೆಯಲ್ಲಿ ಅಕ್ರಮ ಚಟುವಟಿಕೆಗಳು ನಡೆಯುತ್ತಿರುವ ಬಗ್ಗೆ ಶಂಕೆ ವ್ಯಕ್ತಪಡಿಸಿ ಸ್ಥಳೀಯ ಪಾಲಿಕೆ ಸದಸ್ಯೆ ಇಂದಿರಾ ಧರ್ಮರಾಜನ್ ನೀಡಿದ ದೂರಿನ ಆಧಾರದ ಮೇಲೆ ಪೊಲೀಸರು ಮನೆಯನ್ನು ಪರಿಶೀಲನೆ ನಡೆಸಿದ್ದಾರೆ. ಮೂಳೆಗಳು ಪತ್ತೆಯಾದ ನಂತರ ಚೊಟ್ಟನಿಕ್ಕರ ಪೊಲೀಸರು ಬಿಎನ್‌ಎಸ್ ಕಾಯ್ದೆಯಡಿಯಲ್ಲಿ ಅಸ್ವಾಭಾವಿಕ ಸಾವಿನ ಪ್ರಕರಣವನ್ನು ದಾಖಲಿಸಿದ್ದಾರೆ.

## ಬಂಧನ

ಲೋಕೇಶ್ ಬಿಜೆ ತಿಳಿಸಿದ್ದಾರೆ.

ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲೂಕಿನಿಂದ ಜನವರಿ 5 ರಂದು ಬಾಲಕಿಯನ್ನು ರಕ್ಷಿಸಲಾಗಿತ್ತು. ಆಕೆಯನ್ನು ಆಕೆ ಪ್ರತಿ ದಿನ ಟ್ಯೂಷನ್‌ಗೆ ತೆರಳುತ್ತಿದ್ದ ಟ್ಯೂಷನ್ ಶಿಕ್ಷಕನೇ ಅಪಹರಿಸಿದ್ದ ಎಂದು ಪೊಲೀಸರು ತಿಳಿಸಿದ್ದಾರೆ.

ಆರೋಪಿಯು 25 ವರ್ಷ ವಯಸ್ಸಿನವನಾಗಿದ್ದು, ಆತನನ್ನು ಬಂಧಿಸಲಾಗಿದೆ. ಆತನ ವಿರುದ್ಧ ಅಪಹರಣ ಮತ್ತು ಅತ್ಯಾಚಾರದ ಆರೋಪ ಹೊರಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಭತ್ತ ಖರೀದಿ ಕೇಂದ್ರ ತೆರೆಯದ ಮಂಡ್ಯ ಜಿಲ್ಲಾಡಳಿ: ರೈತರ ಪ್ರತಿಭಟನೆ

ಮಂಡ್ಯದಲ್ಲಿ ಭತ್ತ ಖರೀದಿ ಕೇಂದ್ರ ತೆರೆಯದಿದ್ದಕ್ಕೆ ರೈತರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಮಂಡ್ಯ ಜಿಲ್ಲಾಡಳಿತ ಆವರಣದಲ್ಲಿನ ಕೃಷಿ ಸಚಿವರ ಕಚೇರಿ ಮುಂದೆ ಭತ್ತ ಸುರಿದು ರೈತರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸುಗ್ಗಿ ಸಂಭ್ರಮದಲ್ಲಿದ್ದ ರೈತರಿಗೆ ಸರ್ಕಾರದಿಂದಲೇ ಅನ್ಯಾಯವಾಗುತ್ತಿದೆ. ಅವಧಿ ಮುಗಿಯುತ್ತಾ ಬಂದರೂ ಸರ್ಕಾರ ಭತ್ತ ಖರೀದಿ ಕೇಂದ್ರ ತೆರೆದಿಲ್ಲ. ಸರ್ಕಾರ, ಜಿಲ್ಲಾಡಳಿತ ನಿರ್ಲಕ್ಷ್ಯದಿಂದ ನಷ್ಟ ಆಗುತ್ತಿದೆ ಎಂದು ರೈತರು ಆರೋಪಿಸಿದ್ದಾರೆ.

ನವೆಂಬರ್ ತಿಂಗಳಲ್ಲೇ ಭತ್ತ ಖರೀದಿ ಕೇಂದ್ರ ತೆರೆಯಬೇಕಿತ್ತು. ಜನವರಿ ಮೊದಲ ವಾರ ಕಳೆಯುತ್ತಿದ್ದರೂ ಖರೀದಿ ಕೇಂದ್ರ ಆರಂಭವಾಗಿಲ್ಲ. ಸೂಕ್ತ ಸಮಯದಲ್ಲಿ ಭತ್ತ ಖರೀದಿ ಕೇಂದ್ರ ತೆರೆಯದ್ದರಿಂದ ಅನ್ಯಾಯವಾಗುತ್ತಿದೆ. ಭತ್ತ ದಲ್ಲಾಳಿಗಳ ಪಾಲಾಗುತ್ತಿದೆ ಎಂದು ರೈತರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ಮೊದಲನೇ ಪುಟದಿಂದ...

ಪ್ರತಿ ಕ್ವಿಂಟಾಲ್ ಭತ್ತಕ್ಕೆ 2300 ರೂ. ಬೆಂಬಲ ಬೆಲೆ ನಿಗದಿ ಮಾಡಲಾಗಿದೆ. ಆದರೆ, ದಲ್ಲಾಳಿಗಳು ಕ್ವಿಂಟಾಲ್‌ಗೆ ಕೇವಲ 1,800 ರೂ.ಗೆ ಖರೀದಿ ಮಾಡುತ್ತಿದ್ದಾರೆ. ದಲ್ಲಾಳಿಗಳು ಮಾರುಕಟ್ಟೆ ದರಕ್ಕಿಂತ ಕಡಿಮೆ ದರಕ್ಕೆ ಭತ್ತ ಖರೀದಿ ಮಾಡುತ್ತಿದ್ದಾರೆ. ಸರ್ಕಾರ, ಜಿಲ್ಲಾಡಳಿತ ನಿರ್ಲಕ್ಷ್ಯವೇ ಇದಕ್ಕೆ ಕಾರಣ ಎಂದು ರೈತರು ಆರೋಪಿಸಿದ್ದಾರೆ.

## ಬಿಜೆಪಿ ನಾಯಕ!

ಆದರೆ ಈಗ ಅವರನ್ನೇ ಕರೀಯದೆ ಅವಮಾನ ಮಾಡಿದ್ದಾರೆ. ಇದೇ ರೀತಿ ಮುಂದುವರೆದರೆ ನಾವು ಹೈ ಕಮಾಂಡ್‌ಗೆ ಈ ಬಗ್ಗೆ ದೂರು ನೀಡುವುದು ಅನಿವಾರ್ಯ ಎಂದು ಆಕ್ರೋಶ ಹೊರಹಾಕಿದ್ದಾರೆ.

**ಜೆಡಿಎಸ್‌ನವರು ಮೈತ್ರಿ ಧರ್ಮ ಪಾಲಿಸುತ್ತಿಲ್ಲ:** ಒಗ್ಗಟ್ಟಾಗಿ ಕೆಲಸ ಮಾಡಿ ಎನ್‌ಡಿಎ ಪಕ್ಷಕ್ಕೆ ಶಕ್ತಿ ತುಂಬಲು ನಾವು ಪ್ರಯತ್ನಿಸಬೇಕು. ಇಲ್ದಿದ್ರೆ ನಾವು ಹೈ ಕಮಾಂಡ್ ಬಳಿ ದೂರು ನೀಡುವುದು ಅನಿವಾರ್ಯವಾಗುತ್ತದೆ. ಜೆಡಿಎಸ್‌ನವರು ಮೈತ್ರಿ ಧರ್ಮ ಪಾಲಿಸುತ್ತಿಲ್ಲ ಎಂದು ಮಾಜಿ ಸಚಿವ ನಾರಾಯಣಗೌಡ ಬೇಸರ ವ್ಯಕ್ತಪಡಿಸಿದ್ದಾರೆ.

## ಬಿತ್ತು ಬೀಗ!

ಗುಂಡ್ಲುಪೇಟೆ ತಾಲೂಕಿನ 8, ಹನೂರು ತಾಲೂಕಿನ 2, ಯಳಂದೂರು ತಾಲೂಕಿನ 1 ಹಾಗೂ 4 ಉರ್ದು ಶಾಲೆಗಳಿಗೆ ಬೀಗ ಬಿದ್ದಿದೆ. ಸದ್ಯ 24 ರ ಪೈಕಿ 4 ಶಾಲೆಗಳನ್ನು ಪುನರ್ ಆರಂಭಿಸಲಾಗಿದೆ.

ಶೂನ್ಯ ದಾಖಲಾತಿ ಹಾಗೂ ದಾಖಲಾತಿ ಕೊರತೆಯಿಂದ ನಾವು ಶಾಲೆಗಳನ್ನ ಬಂದ್ ಮಾಡುತ್ತಿದ್ದೇವೆ ಎಂದು ಚಾಮರಾಜನಗರ ಜಿಲ್ಲಾ ಡಿಡಿಪಿಐ ರಾಮಚಂದ್ರ ರಾಜೇ ಅರಸ್ ಮಾಹಿತಿ ನೀಡಿದ್ದಾರೆ. ಆದರೆ ಅಸಲಿಗೆ ಶೂನ್ಯ ದಾಖಲಾತಿಯಾಗಲು ಮುಖ್ಯ ಕಾರಣ ಶಾಲೆಯ ಅವ್ಯವಸ್ಥೆ. ಸರಿಯಾದ ಮೂಲಭೂತ ಸೌಕರ್ಯ ಇಲ್ಲದ ಕಾರಣ ಮಕ್ಕಳನ್ನು ಸರ್ಕಾರಿ ಶಾಲೆಗೆ ಕಳುಹಿಸಲು ಪೋಷಕರು ಹೆದರುತ್ತಿದ್ದಾರೆ. ಸಾಲ ಮಾಡಿದರೂ ಪರವಾಗಿಲ್ಲ, ಮಕ್ಕಳ ಭವಿಷ್ಯ ಮುಖ್ಯ ಎಂದು ಪೋಷಕರು ಮಕ್ಕಳನ್ನು ಖಾಸಗಿ ಶಾಲೆಗಳಿಗೆ ಕಳುಹಿಸುತ್ತಿದ್ದಾರೆ.

ಆಂಗ್ಲ ಮಾಧ್ಯಮ ಸರ್ಕಾರಿ ಶಾಲೆಗಳು ಇಲ್ಲದೆ ಇರುವುದೂ ಶೂನ್ಯ ದಾಖಲಾತಿಗೆ ಕಾರಣ ಎಂಬ ಮಾತುಗಳು ಕೇಳಿ ಬಂದಿವೆ. ಅಲ್ಲದೇ ಈ ಕೂಡಲೇ ಶಿಕ್ಷಣ ಸಚಿವರು ಗಡಿ ಜಿಲ್ಲೆಯ ಶಾಲೆಗಳತ್ತ ಗಮನಹರಿಸಿ ಮೂಲಭೂತ ಸೌಕರ್ಯ ಸೇರಿ ಶಿಕ್ಷಣಕ್ಕೆ ಅಗತ್ಯ ಸೌಲಭ್ಯ ಒದಗಿಸಬೇಕಿದೆ ಎಂಬ ಆಗ್ರಹ ವ್ಯಕ್ತವಾಗಿದೆ.

ನೆಪ ಮಾತ್ರಕ್ಕೆ ಸರ್ಕಾರಿ ಶಾಲೆ ಉಳಿಸಿ ಎಂದು ಬೊಬ್ಬೆ ಹೊಡೆಯುವ ರಾಜ್ಯ ಸರ್ಕಾರ ಈಗ ಸರ್ಕಾರಿ ಶಾಲೆಗಳನ್ನು ಬಂದ್ ಮಾಡುತ್ತಿದೆ. ಈಗಲಾದರೂ ಎಚ್ಚೆತ್ತುಕೊಂಡು ಸೂಕ್ತ ಕ್ರಮ ತೆಗೆದುಕೊಳ್ಳದೆ ಹೋದರೆ ಮುಂಬರುವ ದಿನಗಳಲ್ಲಿ ಸರ್ಕಾರಿ ಶಾಲೆಗಳೇ ಇಲ್ಲದಂತಾಗುವುದು ಪಕ್ಕಾ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಅದರಲ್ಲೂ ಗಡಿ ಜಿಲ್ಲೆಯ ಶಾಲೆಗಳಿಗೆ ವಿಶೇಷ ಪ್ಯಾಕೇಜ್ ಕೊಟ್ಟು ಅಭಿವೃದ್ಧಿ ಪಡಿಸಬೇಕಿದೆ ಎಂಬ ಆಗ್ರಹ ಕೂಡ ವ್ಯಕ್ತವಾಗಿದೆ.

## ಎಚ್ಚರ

ಎಂದು ಆಟೋ ಚಾಲಕರು ಅಳಲು ತೋಡಿಕೊಂಡಿದ್ದಾರೆ.

ದಾಖಲೆಗಳು ಇಲ್ಲದ ಕಾರಣ ಆಟೋ ಪರ್ಮಿಟ್‌ಗಳ ರಿನಿವಲ್ ಆಗುತ್ತಿಲ್ಲ. ಪರ್ಮಿಟ್ ರಿನಿವಲ್ ಆಗದಿರುವ ಆಟೋಗಳಿಗೆ ಆರ್‌ಟಿಓ ಅಧಿಕಾರಿಗಳು ಬರೋಬ್ಬರಿ ಐದು ಸಾವಿರ ರುಪಾಯಿ ದಂಡ ವಿಧಿಸುತ್ತಿದ್ದಾರೆ. ಪರ್ಮಿಟ್ ರಿನಿವಲ್ ಮಾಡುತ್ತಲೂ ಇಲ್ಲ, ದಂಡ ವಿಧಿಸುವುದನ್ನು ನಿಲ್ಲಿಸುತ್ತಲೂ ಇಲ್ಲ ಎಂದು ಆಟೋ ಚಾಲಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಅಪಘಾತವಾದರೆ ಇನ್ಶುರೆನ್ಸ್ ಕ್ಲೈಮ್ ಆಗಲ್ಲ

ಪರ್ಮಿಟ್ ರಿನಿವಲ್ ಆಗದ ಆಟೋಗಳಲ್ಲಿ ಪ್ರಯಾಣಿಕರು ಪ್ರಯಾಣ ಮಾಡುವ ವೇಳೆ ಆಟೋ ಅಪಘಾತಕ್ಕೀಡಾದರೆ ಇನ್ಶುರೆನ್ಸ್ ಕ್ಲೈಮ್ ಆಗುವುದಿಲ್ಲ. ಈ ಬಗ್ಗೆ ಪ್ರಯಾಣಿಕರು ಕೂಡ ಆರ್‌ಟಿಓ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಒಟ್ಟಿನಲ್ಲಿ ಆಟೋ ಪರ್ಮಿಟ್ ರಿನಿವಲ್ ಮಾಡಿ ಅಂದರೆ ನಮ್ಮ ಬಳಿ ನಿಮ್ಮ ದಾಖಲೆಗಳಿಲ್ಲ ಎನ್ನುತ್ತಾರೆ ಆರ್‌ಟಿಓ ಅಧಿಕಾರಿಗಳು. ರಸ್ತೆಯಲ್ಲಿ ಆಟೋಗಳನ್ನು ತಪಾಸಣೆ ಮಾಡುವ ವೇಳೆ ಪರ್ಮಿಟ್ ರಿನಿವಲ್ ಆಗಿಲ್ಲ ಎಂದು ದಂಡವನ್ನೂ ವಿಧಿಸುತ್ತಿದ್ದಾರೆ. ಇದು ಯಾವ ನ್ಯಾಯ ಎಂದು ಆಟೋ ಚಾಲಕರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಈ ಬಗ್ಗೆ ಸಾರಿಗೆ ಇಲಾಖೆ ಕೂಡಲೇ ಕ್ರಮ ಕೈಗೊಳ್ಳಬೇಕಿದೆ.

## ನೇಣಿಗೆ

ಮನೆಯಲ್ಲಿ ವಾಸವಾಗಿದ್ದರು. ಘಟನಾ ಸ್ಥಳಕ್ಕೆ ಡಿವೈಎಸ್ಪಿ ರಾಜಣ್ಣ, ಸಿಪಿಐ ವಸಂತ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಘಟನೆ ಸಂಬಂಧ ಮೊಳಕಾಲ್ಮೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ವಿದ್ಯಾರ್ಥಿಗಳಿಗೆ ಉಚಿತ ಯೋಗ ತರಬೇತಿ

**ಬೆಂಗಳೂರು:** ಯೋಗ ಈ ದೇಶದ ಪಾರಂಪರಿಕ ಕೊಡುಗೆ. ಯೋಗದಿಂದ ರೋಗ ಮುಕ್ತಿಯ ಜೊತೆಗೆ ಮನೋ ವಿಕಾಸವೂ ಸಾಧ್ಯ. ಹೀಗಾಗಿ ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಯೋಗಾಭ್ಯಾಸವನ್ನು ರೂಢಿಸಿಕೊಳ್ಳಬೇಕು ಎಂದು ಸಚಿವ ರಾಮಲಿಂಗಾ ರೆಡ್ಡಿಯವರು ವಿದ್ಯಾರ್ಥಿಗಳಿಗೆ ಕರೆ ನೀಡಿದರು.



ಎಂಎಆರ್ ಪಿ ಲೈನ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಲಾಗಿದ್ದ ವಿದ್ಯಾರ್ಥಿಗಳಿಗೆ ಯೋಗ ತರಬೇತಿ ಪ್ರಾರಂಭೋತ್ಸವವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪತಂಜಲಿ ಮಹರ್ಷಿಗಳು ಯೋಗವನ್ನು ಪರಿಚಯಿಸಿದರು. ಇಂದು ಯೋಗ ದೇಶ–ವಿದೇಶಗಳಲ್ಲೂ ಖ್ಯಾತಿ ಪಡೆದಿದೆ. ಯೋಗ ದಿನವನ್ನು ಅಂತಾರಾಷ್ಟ್ರೀಯ ಮಟ್ಟದಲ್ಲಿ ಆಚರಿಸಲಾಗುತ್ತದೆ. ಇದೇ ನೆಲದವರಾದ ನಾವು ಯೋಗವನ್ನು ಕಡೆಗಣಿಸಿದೆ ಬದುಕಿನ ಭಾಗವಾಗಿಸಿಕೊಳ್ಳಬೇಕೆಂದರು.

ಬಿಬಿಎಂಪಿ ಮಾಜಿ ಸದಸ್ಯರಾದ ಆಡುಗೋಡಿ ಬಿ.ಮೋಹನ್ ಅವರು ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಆಯೋಜಿಸಿದ್ದರು. ಎಲ್ಲಾ ಮಕ್ಕಳು ಯೋಗಾಭ್ಯಾಸದ ಮೂಲಕ ಉತ್ತಮ ಆರೋಗ್ಯ ಹಾಗೂ ಮಾನಸಿಕ ಸ್ವಾಸ್ಥ್ಯವನ್ನು ಕಾಪಾಡಿಕೊಳ್ಳುವಂತೆ ಕಿವಿಮಾತು ಹೇಳಿದರು.

ಮೊದಲ ಬಾರಿಗೆ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಯೋಗ ಶಿಕ್ಷಣವನ್ನು ನೀಡಲಾಗುತ್ತಿದ್ದು; ಇತರೆ ಎಲ್ಲಾ ಶಾಲೆಗಳಿಗೂ ಮಾದರಿಯಾಗಿದೆ. ಮುಂದಿನ ದಿನಗಳಲ್ಲಿ ಎಲ್ಲಾ ಶಾಲೆಗಳಲ್ಲೂ ಯೋಗ ತರಬೇತಿ ಹಮ್ಮಿಕೊಂಡರೆ ಉತ್ತಮ ಬೆಳವಣಿಗೆಯಾಗಲಿದೆ.

ಕಾರ್ಯಕ್ರಮದಲ್ಲಿ ಮಾಜಿ ಪಾಲಿಕೆ ಸದಸ್ಯರಾದ ಮಂಜುನಾಥ್, ಡಿಸಿಪಿ, ಸಿಎಆರ್ (ದ) ಚನ್ನವೀರಪ್ಪ ಹಡಪದ್, ಬಿಇಓ(ದ) ಡಾ.ಶಶಿಕಲಾ, ಎಸಿಪಿಗಳಾದ ಶ್ರೀನಿವಾಸ್, ಸುರೇಶ್, ಇಇ ಅಶೋಕ್, ಎಇಇ ವಿಜಯೇಂದ್ರ, ಎಇ ನವೀನ್, ದೈಹಿಕ ಶಿಕ್ಷಣ ಪರಿವೀಕ್ಷಕರಾದ ನೇತ್ರಾವತಿ, ಬಿಆರ್‌ಎಸ್ (ದ) ಚಂದ್ರಪ್ಪ, ಯೋಗ ಶಿಕ್ಷಕರಾದ ಮಂಜುಳಾ, ಸುಮ ಸೇರಿದಂತೆ ಅನೇಕರು ಹಾಜರಿದ್ದರು.

### ಸಿಟಿ ರವಿ ಬಂಧನ ಪ್ರಕರಣ

# ರಾಜ್ಯಪಾಲರ ಪತ್ರಕ್ಕೆ ಪ್ರತಿಕ್ರಿಯೆಯನ್ನೇ ನೀಡದ ಸಿಎಂ ಕಚೇರಿ!

**ಬೆಂಗಳೂರು:** ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಗೆ ಅವಾಚ್ಯ ಶಬ್ದಗಳಿಂದ ನಿಂದಿಸಿದ ಆರೋಪದಲ್ಲಿ ವಿಧಾನಪರಿಷತ್ ಬಿಜೆಪಿ ಸದಸ್ಯ ಸಿಟಿ ರವಿ ಅವರನ್ನು ಬೆಳಗಾವಿ ಪೊಲೀಸರು ಬಂಧಿಸಿದ ವಿಚಾರ ರಾಜ್ಯ ರಾಜಕಾರಣದಲ್ಲಿ ದೊಡ್ಡ ಸದ್ದು ಮಾಡಿತ್ತು. ಪ್ರಕರಣ ಸಂಬಂಧ, ಮಧ್ಯಪ್ರವೇಶ ಮಾಡಿ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿಗಳ ಕಚೇರಿಗೆ ಡಿಸೆಂಬರ್ 31ರಂದೇ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಪತ್ರ ಬರೆದಿದ್ದರು ಎಂಬುದು ಈಗ ತಿಳಿದುಬಂದಿದೆ. ಆದರೆ, ಮುಖ್ಯಮಂತ್ರಿಗಳ ಕಚೇರಿಯು ರಾಜ್ಯಪಾಲರ ಪತ್ರಕ್ಕೆ ಪ್ರತಿಕ್ರಿಯೆಯನ್ನೇ ನೀಡಿಲ್ಲ ಎಂದು ಮೂಲಗಳು ತಿಳಿಸಿವೆ.



ರಾಜ್ಯಪಾಲರ ಪತ್ರದಲ್ಲೇನಿತ್ತು?

ಕರ್ನಾಟಕ ವಿಧಾನ ಪರಿಷತ್ತಿನ ಗೌರವಾನ್ವಿತ ಸದಸ್ಯರಾದ ಸಿಟಿ ರವಿ ತಮ್ಮ ಸಹೋದ್ಯೋಗಿಗಳೊಂದಿಗೆ ನನ್ನನ್ನು ಭೇಟಿಯಾಗಿ ಬೆಳಗಾವಿಯಲ್ಲಿ ಅಧಿವೇಶನ ಮುಗಿದ ನಂತರ ಇತ್ತೀಚೆಗೆ ನಡೆದ ಘಟನೆಯ ಬಗ್ಗೆ ವಿವರವಾದ ಮಾಹಿತಿಯನ್ನು ನೀಡಿದ್ದಾರೆ. ಬೆಳಗಾವಿ ಪೊಲೀಸ್ ಕಮಿಷನರ್ ಮತ್ತು ಬೆಳಗಾವಿ ಪೊಲೀಸ್ ವರಿಷ್ಠಾಧಿಕಾರಿಗಳು ಅಧೀನ ಅಧಿಕಾರಿಗಳೊಂದಿಗೆ ಅವರನ್ನು ಬಂಧಿಸಿ ಕಬ್ಬಿನ ಗದ್ದೆ, ಬಯಲುಸೀಮೆ, ಖಾನಾಪುರ, ಕಿತ್ತೂರು, ಲೋಕಾಪುರ, ಸಂಕೇಶ್ವರ ಮತ್ತು ವಿವಿಧೆಡೆ ಅಪಾಯಕಾರಿ ದೂರದ ಸ್ಥಳಗಳಿಗೆ ಕರೆದೊಯ್ದಿರುವ ಬಗ್ಗೆ ಸಿಟಿ ರವಿ ತಿಳಿಸಿದ್ದಾರೆ. ಪೊಲೀಸ್ ಕಸ್ಟಡಿಯಲ್ಲಿದ್ದಾಗ ರಕ್ತಸ್ರಾವವಾಗಿ ಗಾಯಗೊಂಡಿದ್ದರೂ ರಾತ್ರಿಯಿಡೀ 400 ಕಿಮೀ ದೂರ ಸುತ್ತಾಡಿಸಿದ್ದಾರೆ ಎಂದು ಅವರು ತಿಳಿಸಿರುತ್ತಾರೆ. ಅಲ್ಲದೆ, ಭಯಾನಕ ಚಿತ್ರಹಿಂಸೆ ಮತ್ತು ಮಾನಸಿಕವಾಗಿ ಮತ್ತು ದೈಹಿಕವಾಗಿ ಕಿರುಕುಳ ನೀಡಿರುವ ಬಗ್ಗೆ ದೂರಿದ್ದಾರೆ. ಇದು ಕ್ಷಮಿಸಲಾಗದ ಪೊಲೀಸ್ ದೌರ್ಜನ್ಯವಾಗಿದೆ ಎಂದು ರಾಜ್ಯಪಾಲರು ಮುಖ್ಯಮಂತ್ರಿಗಳ ಕಚೇರಿಗೆ ಬರೆದ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಮುಂದುವರಿದು, ಖಾನಾಪುರ ಪೊಲೀಸ್ ಠಾಣೆಯಲ್ಲಿ ಹಲ್ಲೆ ಮತ್ತು ದೌರ್ಜನ್ಯದ ವಿರುದ್ಧ ತಾವು ಸಲ್ಲಿಸಿದ ದೂರು ಮತ್ತು ಈ ಬಗ್ಗೆ ಬೆಳಗಾವಿ ಎಸ್ಪಿ ಮನವಿ ಮಾಡಿದ್ದರೂ ಪೊಲೀಸರು ತಮ್ಮ ದೂರನ್ನು ಪರಿಗಣಿಸಿಲ್ಲ ಎಂದು ರವಿ ತಿಳಿಸಿದ್ದಾರೆ. ಆದ್ದರಿಂದ ಇಡೀ ಪ್ರಕರಣದಲ್ಲಿ, ತಪ್ಪಿತಸ್ಥ ಪೊಲೀಸ್ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದ್ದು, ಅವರ ಜೀವಕ್ಕೆ ಹೆಚ್ಚಿನ ಭದ್ರತೆ ನೀಡುವಂತೆ ಮನವಿ ಮಾಡಿದ್ದಾರೆ. ಪ್ರಕರಣದ ಗಂಭೀರತೆ ಮತ್ತು ದಾಖಲೆಗಳನ್ನು ಪರಿಶೀಲಿಸಿದಾಗ, ಎರಡೂ ಸಮಸ್ಯೆಗಳು ತುಂಬಾ ಗಂಭೀರವಾಗಿವೆ ಮತ್ತು ನಿಮ್ಮ (ಮುಖ್ಯಮಂತ್ರಿಗಳ) ವೈಯಕ್ತಿಕ ಹಸ್ತಕ್ಷೇಪದ ಅಗತ್ಯವಿದೆ. ವಿಷಯವು ಚುನಾಯಿತ ಪ್ರತಿನಿಧಿಗೆ ಸಂಬಂಧಿಸಿರುವುದರಿಂದ, ಈ ವಿಷಯವನ್ನು ವೈಯಕ್ತಿಕವಾಗಿ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ನಿಮಗೆ ಸಲಹೆ ನೀಡುತ್ತೇನೆ ಎಂದು ಮುಖ್ಯಮಂತ್ರಿ ಕಚೇರಿಗೆ ಬರೆದ ಪತ್ರದಲ್ಲಿ ರಾಜ್ಯಪಾಲರು ಸೂಚನೆ ನೀಡಿದ್ದಾರೆ.

### ಕಂದಾಯ ಸಚಿವ ಕೃಷ್ಣ ಬೈರೇಗೌಡರಿಂದ ಭೂಸುರಕ್ಷಾ ಯೋಜಗೆ ಗುಡಿಬಂಡೆ ನಗರದಿಂದ ಚಾಲನೆ

# 209 ತಾಲ್ಲೂಕುಗಳಲ್ಲಿ ಭೂಸುರಕ್ಷಾ ಯೋಜನೆ



**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ತಾಲ್ಲೂಕು ಕಚೇರಿ, ಭೂಮಾಪನ ಇಲಾಖೆ ಹಾಗೂ ಸಬ್ ರಿಜಿಸ್ಟ್ರಾರ್ ಕಚೇರಿಯ ಎ ಮತ್ತು ಬಿ ವರ್ಗದ ಕಡತಗಳ ಎಲ್ಲಾ ದಾಖಲೆಗಳನ್ನು ಕಂಪ್ಯೂಟರ್ ನಲ್ಲಿ ಸ್ಕ್ಯಾನ್ ಮಾಡಿ ಆ ಎಲ್ಲಾ ದಾಖಲೆಗಳು ಆನ್ ಲೈನ್ ಮೂಲಕ ಎಲ್ಲಾ ಸಾರ್ವಜನಿಕರಿಗೆ ಮುಕ್ತವಾಗಿ ಲಭ್ಯವಾಗಿಸುವ ರಾಜ್ಯ ಸರ್ಕಾರದ ಭೂಸುರಕ್ಷಾ ಯೋಜನೆಗೆ ಇಂದು ಗುಡಿಬಂಡೆ ತಾಲ್ಲೂಕಿನ ಮೂಲಕ ಚಾಲನೆ ನೀಡಲಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರು ತಿಳಿಸಿದರು.

ಚಿಕ್ಕಬಳ್ಳಾಪುರ ಜಿಲ್ಲೆ ಗುಡಿಬಂಡೆ ನಗರದಲ್ಲಿ ಜಿಲ್ಲಾಡಳಿತ ಹಾಗೂ ಕಂದಾಯ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಭೂ ಸುರಕ್ಷಾ ಯೋಜನೆಗೆ ಚಾಲನೆ ನೀಡಿ ಮಾತನಾಡಿದರು.

ಕಳೆದ ಮಾರ್ಚ್ 2024 ರಲ್ಲಿ ರಾಜ್ಯ ಕಂದಾಯ ಇಲಾಖೆ ತಾಲ್ಲೂಕು ಕಚೇರಿ, ಸಬ್ ರಿಜಿಸ್ಟ್ರಾರ್ ಕಚೇರಿ ಹಾಗೂ ಭೂಮಾಪನ ಇಲಾಖೆಯ ಸುಮಾರು 150 ವರ್ಷಗಳ ಎಲ್ಲಾ ದಾಖಲೆಗಳನ್ನು ಕಂಪ್ಯೂಟರ್ ನಲ್ಲಿ ಸ್ಕ್ಯಾನ್ ಮಾಡಿ ಶಾಶ್ವತವಾಗಿ ಭದ್ರ ಮಾಡುವ ಹಾಗೂ ಆ ಎಲ್ಲಾ ದಾಖಲೆಗಳು ಆನ್ ಲೈನ್ ನಲ್ಲಿ ಸಾರ್ವಜನಿಕರಿಗೆ ಮುಕ್ತವಾಗಿ ಲಭ್ಯವಾಗುವಂತೆ ಮಾಡುವ ನಿಟ್ಟಿನಲ್ಲಿ ಭೂ ಸುರಕ್ಷಾ ಯೋಜನೆಯನ್ನು ಜಾರಿ ಮಾಡಲಾಗಿತ್ತು. ಆರಂಭದಲ್ಲಿ ಪೈಲಟ್ ಯೋಜನೆಯ ಭಾಗವಾಗಿ ಪ್ರತಿ ಜಿಲ್ಲೆಯಿಂದ ಒಂದು ತಾಲ್ಲೂಕನ್ನು ಆಯ್ಕೆ ಮಾಡಿಕೊಂಡು ಒಟ್ಟು 31 ತಾಲ್ಲೂಕುಗಳಲ್ಲಿ ಯೋಜನೆಯನ್ನು ಜಾರಿ ಮಾಡಲಾಗಿತ್ತು. ಈಗ ಉಳಿದ 209 ತಾಲ್ಲೂಕುಗಳಲ್ಲಿ ಭೂಸುರಕ್ಷಾ ಯೋಜನೆಗೆ ಚಾಲನೆ ನೀಡಲಾಗಿದೆ ಎಂದು ತಿಳಿಸಿದರು.

ಈ ಯೋಜನೆಯಿಂದ ರೈತರು ಸಾರ್ವಜನಿಕರಿಗೆ ಸುಮಾರು 150 ವರ್ಷದ ಹಳೆಯ ದಾಖಲೆಗಳು ಸ್ಕ್ಯಾನ್ ಆಗಿ ಕಂಪ್ಯೂಟರೀಕರಣಗೊಂಡು ಆನ್ ಲೈನ್ ನಲ್ಲಿ ಲಭ್ಯವಾಗಲಿವೆ. ಈ ದಾಖಲೆಗಳನ್ನು ಸಂಬಂಧಿಸಿದ ಕಚೇರಿಗಳಿಗೆ ಹೋಗದೆ ಇಂದು ಆರ್.ಟಿ.ಸಿ ಪಹಣಿಯನ್ನು ಆನ್ಲೈನ್ ನಲ್ಲಿ ಪಡೆಯುವ ವ್ಯವಸ್ಥೆಯಂತೆ ಮನೆಯಲ್ಲೇ ಕುಳಿತು ನೋಡಲು, ಮುದ್ರಿಸಿಕೊಳ್ಳಲು ಹಾಗೂ ದೃಢೀಕೃತ ಪ್ರತಿಗಳನ್ನು ಪಡೆಯಲು ಅವಕಾಶವಾಗಲಿದೆ. ಇದರಿಂದ ಶಿಥಿಲಾವಸ್ಥೆಯಲ್ಲಿರುವ ಅತ್ಯಂತ ಹಳೆಯ ದಾಖಲೆಗಳೂ ಸೇರಿದಂತೆ ವಿವಿಧ ದಾಖಲೆಗಳು ಆನ್ ಲೈನ್ ನಲ್ಲಿ ಸಾರ್ವಜನಿಕರಿಗೆ ಮುಕ್ತವಾಗಿ ಲಭ್ಯವಾಗಲಿದ್ದು, ದಾಖಲೆಗಳು ಶಾಶ್ವತವಾಗಿ ಬಂದೋ ಬಸ್ತ್ ಆಗಲಿವೆ ಎಂದರು.

ಭೂ ಸುರಕ್ಷಾ ಯೋಜನೆಯ ಮೂಲಕ ರೈತರಿಗೆ ಜಮೀನಿನ ಮಾಲೀಕತ್ವದ ಗ್ಯಾರಂಟಿಯನ್ನು ನೀಡಲು ಸರ್ಕಾರ ಮಹತ್ವದ ಹೆಜ್ಜೆಯನ್ನಿಟ್ಟಿದೆ. ಈಗಾಗಲೇ 31 ತಾಲ್ಲೂಕುಗಳಲ್ಲಿ 08 ತಿಂಗಳ ಹಿಂದೆ ಆರಂಭವಾದ ಪೈಲಟ್ ಕಾರ್ಯಕ್ರಮದಡಿ 14,87000 ಕಡತಗಳನ್ನು ಸ್ಕ್ಯಾನ್ ಮಾಡಿ ಒಟ್ಟು 7 ಕೋಟಿ 95ಲಕ್ಷ ಪುಟಗಳನ್ನು ಸ್ಕ್ಯಾನ್ ಮಾಡಲಾಗಿದೆ. ಉಳಿದ 209 ತಾಲ್ಲೂಕುಗಳ ಒಟ್ಟು 150 ಕೋಟಿ ಪುಟಗಳ ದಾಖಲೆಗಳನ್ನು ಸ್ಕ್ಯಾನ್ ಮಾಡುವ ಗುರಿ ಹೊಂದಲಾಗಿದೆ. ಈ ಮಹತ್ವದ ಯೋಜನೆಯಿಂದ ತಾಲ್ಲೂಕು ಕಚೇರಿಯ ದಾಖಲೆಗಳ ಕೊಠಡಿಯ ಸಿಬ್ಬಂದಿ ಮೇಲಿನ ಕೆಲಸದ ಒತ್ತಡ ಕಡಿಮೆಯಾಗಲಿದೆ. ರೈತರಿಗೆ ಜಮೀನಿನ ಮಾಲೀಕತ್ವದ ದಾಖಲೆಗಳು ಸುರಕ್ಷಿತವಾಗಿ ಮತ್ತು ಸುಲಭವಾಗಿ ಲಭ್ಯವಾಗುತ್ತವೆ. ಜೊತೆಗೆ ಹಳೆಯ ದಾಖಲೆಗಳು ಶಾಶ್ವತವಾಗಿ ಮತ್ತು ಬಂದೋಬಸ್ತ್ ಆಗಿ ಉಳಿಯುತ್ತವೆ, ಅಲ್ಲದೇ ದಾಖಲೆಗಳ ಕೊಠಡಿಯ ದಾಖಲೆಗಳು ನಕಲಿ ಆಗುವುದು, ಕಳೆದು ಹೋಗುವುದು ತಪ್ಪುತ್ತದೆ ಎಂದು ತಿಳಿಸಿದರು.

ನಮ್ಮ ಸರ್ಕಾರ ಅಧಿಕಾರಕ್ಕೆ ಬಂದಾಗ ತಹಸಿಲ್ದಾರ್ ನ್ಯಾಯಾಲಯದಲ್ಲಿ 3 ತಿಂಗಳಿಗೂ ವಾಯಿದೆ ಮೀರಿದ 10,774 ಪ್ರಕರಣಗಳು ರಾಜ್ಯದಲ್ಲಿ ಬಾಕಿ ಇದ್ದವು, ಪ್ರಸ್ತುತ ಅವುಗಳನ್ನು ವಿಲೆ ಮಾಡಿ 409 ಪ್ರಕರಣಗಳಿಗೆ ಇಳಿಕೆ ಮಾಡಲಾಗಿದೆ, ಅದೇ ರೀತಿ ಉಪವಿಭಾಧಿಕಾರಿಗಳ ಮಟ್ಟದಲ್ಲಿ 6 ತಿಂಗಳಿಗೂ ಅವಧಿ ಮೀರಿದ 59,339 ಪ್ರಕರಣಗಳು ಬಾಕಿ ಇದ್ದವು ವಿಶೇಷ ಉಪವಿಭಾಗಾಧಿಕಾರಿಳನ್ನು ನೇಮಕ ಮಾಡಿ ಆ ಪ್ರಕರಣಗಳನ್ನು 22,400ಕ್ಕೆ ಇಳಿಸಲಾಗಿದೆ. ಮುಂದಿನ ದಿನಗಳಲ್ಲಿ ಆ ಎಲ್ಲಾ ಪ್ರಕರಣಗಳನ್ನು ಇತ್ಯರ್ಥ ಮಾಡಿ ಶೂನ್ಯಕ್ಕೆ ತರಲಾಗುವುದು ಎಂದರು.

### ಅಮೃತ್ 2 ಯೋಜನೆಯಡಿ 18 ಕೋಟಿ

ಅಮಾನಿ ಭೈರ ಸಾಗರ ಕೆರೆಯಿಂದ ಗುಡಿಬಂಡೆ ನಗರಕ್ಕೆ ಶುದ್ಧ ಕುಡಿಯುವ ನೀರು ಪೂರೈಸುವ ಉದ್ದೇಶಕ್ಕಾಗಿ ಅಮೃತ್ 2 ಯೋಜನೆಯಡಿ 18 ಕೋಟಿ ನಿಗದಿಪಡಿಸಲಾಗಿದೆ. ಸದ್ಯದಲ್ಲೆ ಈ ಕಾಮಗಾರಿಗೆ ಚಾಲನೆ ನೀಡಲು ಯೋಜಿಸಲಾಗಿದೆ. ಅಲ್ಲದೆ ಬಾಗೇಪಲ್ಲಿ ಭಾಗದಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಿ, ಈ ಭಾಗದ ವಿದ್ಯಾವಂತರಿಗೆ ಉದ್ಯೋಗ ಕೊಡುವ ಉದ್ದೇಶದಿಂದ ಈಗಾಗಲೆ ಬಾಗೇಪಲ್ಲಿ ತಾಲ್ಲೂಕಿನಲ್ಲಿ 600 ಎಕರೆ ಜಮೀನಿಗೆ ಅಧಿಸೂಚನೆ ಹೊರಡಿಸಲಾಗಿದೆ. ಚಿಕ್ಕಬಳ್ಳಾಪುರ ನಗರದಲ್ಲಿ ಅಂತರಾಷ್ಟ್ರೀಯ ಮಟ್ಟದ ಹೂವಿನ ಮಾರುಕಟ್ಟೆಯನ್ನು 140 ಕೋಟಿ ವೆಚ್ಚದಲ್ಲಿ 20 ಎಕರೆ ಜಾಗದಲ್ಲಿ ನಿರ್ಮಿಸಲು ಗುರಿಹೊಂದಲಾಗಿದ್ದು, ಮುಂದಿನ ಆಯವ್ಯಯದಲ್ಲಿ ಈ ಉದ್ದೇಶಕ್ಕೆ ಅನುದಾನದವನ್ನು ಮೀಸಲಿಡಲು ಯೋಜಿಸಲಾಗಿದೆ. ಒಟ್ಟಾರೆ ಚಿಕ್ಕಬಳ್ಳಾಪುರ ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗೆ ಅಗತ್ಯವಾದ ಎಲ್ಲ ಕ್ರಮಗಳನ್ನು ವಸ್ತುನಿಷ್ಠವಾಗಿ ಮತ್ತು ಪ್ರಾದೇಶಿಕ ಭೇದ ರಹಿತವಾಗಿ ಮಾಡಲಾಗುವುದು ಎಂದು ತಿಳಿಸಿದರು. ಶಾಸಕ ಎಸ್. ಎನ್ ಸುಬ್ಬಾರೆಡ್ಡಿಯವರು ಮಾತನಾಡಿ,ತಾಲ್ಲೂಕು ಕಚೇರಿ ಮತ್ತು ನೋಂದಣಾಧಿಕಾರಿಗಳ ಕಚೇರಿಗಳ ಅಭಿಲೇಖಾಲಯದಲ್ಲಿದ್ದ ಕಡತಗಳಿಗೆ ನಕಲಿ ದಾಖಲೆಗಳನ್ನು ಸೃಷ್ಟಿಸಿ ಸೇರ್ಪಡೆಯಾಗುವಂತಹ ಕಿಡಿಗೇಡಿ ಪ್ರಕರಣಗಳಿಗೆ ಇಂದು ಜಾರಿಗೆ ತಂದಿರುವ ''ಭೂ ಸುರಕ್ಷ ಯೋಜನೆ ಶಾಶ್ವತ ಮುಕ್ತಿ ನೀಡಲಿದೆ. ಅಂತಹ ನಕಲಿ ಸೃಷ್ಠಕರ್ತರಿಗೆ ಈಗಿನ ಕಂದಾಯ ಸಚಿವರು ಸಿಂಹ ಸ್ವಪ್ನರಾಗಿದ್ದಾರೆ. ಸರ್ಕಾರಿ ಜಮೀನುಗಳು, ಸ್ಥಳಗಳನ್ನು ಸಂರಕ್ಷಣೆ ಮಾಡಿಕೊಳ್ಳಲು ನಮ್ಮ ಸರ್ಕಾರ ವಿನೂತನ ಪ್ರಯೋಗ ಮಾಡಿ ''ಲ್ಯಾಂಡ್ ಸೀಲಿಂಗ್'' ವ್ಯವಸ್ಥೆಯನ್ನು ಜಾರಿಗೆ ತಂದಿದೆ. ಪೋಡಿ ಮುಕ್ತ, ಪೈಕಿ ಮುಕ್ತ ಅನುಷ್ಠಾನ ಮಾಡುವಲ್ಲಿ ಗುಡಿಬಂಡೆ ತಾಲ್ಲೂಕು ರಾಜ್ಯದಲ್ಲೆ ಪ್ರಥಮ ಸ್ಥಾನದಲ್ಲಿದೆ. ಅದೇ ರೀತಿ ಪಿ-ನಂಬರ್ ನ ಜಮೀನುಗಳನ್ನು ದುರಸ್ತಿ ಮಾಡುವ ಯೋಜನೆಯಲ್ಲಿ ಗುಡಿಬಂಡೆ ಅಗ್ರ ಸ್ಥಾನ ಉಳಿಸಿಕೊಳ್ಳಲಿದೆ ಎಂದರು. ಫಲಾನುಭವಿಗಳಾದ ಮೌಲ, ಗಂಗಾದೇವಿ, ಕೋಮಲ, ನಾರಯಣಮ್ಮ ಶಶಿಕಲ, ಸುಶಿಲಮ್ಮ ರವರಿಗೆ ಪಿಂಚಣಿ ಮಂಜೂರು ಪತ್ರಗಳನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ಕಂದಾಯ ಆಯುಕ್ತರಾದ ಸುನಿಲ್ ಕುಮಾರ್, ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ ನಿಟ್ಟಾಲಿ, ಜಿಲ್ಲಾ ಪೂಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ, ಅಪರ ಜಿಲ್ಲಾಧಿಕಾರಿ ಡಾ. ಎನ್. ಭಾಸ್ಕರ್, ಉಪವಿಭಾಗಾಧಿಕಾರಿ ಡಿ.ಹೆಚ್. ಅಶ್ವಿನ್ ಇದ್ದರು.

### 2025ಕ್ಕೇ ಚೇಳೂರು ತಾಲ್ಲೂಕು ಕಚೇರಿ ಕಟ್ಟಡ ಮಂಜೂರು

ಜಿಲ್ಲೆಯಲ್ಲಿ ನೂತನವಾಗಿ ರಚನೆಯಾಗಿರುವ ಚೇಳೂರು ತಾಲ್ಲೂಕಿಗೆ ತಾಲ್ಲೂಕು ಕಚೇರಿ ನಿರ್ಮಾಣಕ್ಕೆ ಹಣವನ್ನು ಈ ವರ್ಷ ಮಂಜೂರು ಮಾಡಲಾಗುವುದು. ಮುಂದಿನ ವರ್ಷ ಮಂಚೇನಹಳ್ಳಿ ತಾಲ್ಲೂಕಿನ ಕಚೇರಿಗೆ ಮಂಜೂರು ಮಾಡಲಾಗುವುದು. ಮುಖ್ಯವಾಗಿ ಚಿಕ್ಕಬಳ್ಳಾಪುರ, ಕೋಲಾರ, ಬೆಂಗಳೂರು ಗ್ರಾಮಾಂತರ ಜಿಲ್ಲೆಗಳ ಭಾಗಕ್ಕೆ ಅತ್ಯಗತ್ಯವಾಗಿ ಬೇಕಾಗಿರುವ ಶಾಶ್ವತ ಕುಡಿಯುವ ನೀರಿನ ಯೋಜನೆಯಾದ ಎತ್ತಿನ ಹೊಳೆ ಯೋಜನೆಯ ನೀರನ್ನು ತರುವ ಪ್ರಯತ್ನವನ್ನು ನಾವು ಮಾಡುತ್ತೇವೆ ಎಂದು ಕಂದಾಯ ಸಚಿವರು ತಿಳಿಸಿದರು. ಜಿಲ್ಲಾ ಉಸ್ತುವಾರಿ ಸಚಿವ ಡಾ ಎಂ.ಸಿ ಸುಧಾಕರ್ ಅವರು ಮಾತನಾಡಿ, ಬಹುದಶಕಗಳಿಂದ ಸವಾಲಾಗಿದ್ದ ಜೋಡಿ ಗ್ರಾಮಗಳ ಭೂ ದಾಖಲೆಗಳನ್ನು ಸರಿಪಡಿಸಲು ದಿಟ್ಟ ಕ್ರಮವಹಿಸುವಲ್ಲಿ ಈಗಿನ ಕಂದಾಯ ಸಚಿವರು ಮತ್ತು ನಮ್ಮ ಸರ್ಕಾರದ ಇಚ್ಛಾಶಕ್ತಿಯೇ ಪ್ರಮುಖ ಕಾರಣ, ಅದೇ ರೀತಿ ರೈತರಿಗೆ ಅತ್ಯಗತ್ಯವಾಗಿ ಬೇಕಾಗಿರುವ ಭೂ ದಾಖಲೆಗಳ ಸಮಸ್ಯೆಗಳನ್ನು ಶಾಶ್ವತವಾಗಿ ದೂರವಾಗಿಸಲು ನಮ್ಮ ಸರ್ಕಾರ ರೂಪಿಸಿರುವ ''ಭೂ ಸುರಕ್ಷಾ ಯೋಜನೆ'' ತುಂಬಾ ಸಹಾಯಕಾರಿಯಾಗಿದೆ. ಬೆಂಗಳೂರಿನ ತ್ಯಾಜ್ಯ ನೀರನ್ನು ಈ ಭಾಗದ ಕೆರೆಗಳಿಗೆ ತುಂಬಿಸುವ ಹೆಚ್.ಎನ್ ಮತ್ತು ಕೆ.ಸಿ ವ್ಯಾಲಿ ಯೋಜನೆಗೆ ಕೃಷ್ಣಬೈರೇಗೌಡರ ದೂರದೃಷ್ಟಿಯೇ ಮುಖ್ಯ ಕಾರಣ ಎಂದು ಬಣ್ಣಿಸಿದರು.

## ಲಕ್ಷ್ಮೀನರಸಿಂಹಸ್ವಾಮಿ ದೇವಸ್ಥಾನದಲ್ಲಿ ವೈಕುಂಠ ಏಕಾದಶಿ ನಾಳೆ

**ಮೈಸೂರು:** ನಗರದ ಕಾಳಿದಾಸ ರಸ್ತೆಯಲ್ಲಿರುವ ಇತಿಹಾಸ ಪ್ರಸಿದ್ಧ ಶ್ರೀ ಯದುಗಿರಿ ಯತಿರಾಜ ಮಠ ಇದರ ಶಾಖಾ ಮಠ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ದೇವಸ್ಥಾನದಲ್ಲಿ ಜ.10ರಂದು ಶುಕ್ರವಾರ ವೈಕುಂಠ ಏಕಾದಶಿಯನ್ನು ಆಯೋಜಿಸಲಾಗಿದ್ದು, ಬೆಳಿಗ್ಗೆ 7 ಗಂಟೆಗೆ ವೈಕುಂಠ ಧ್ವಾರ ತೆರೆಯಲಾಗುತ್ತದೆ. ರಾತ್ರಿ 10 ಗಂಟೆವರೆಗೂ ಭಗವಂತನ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ. ಇದರ ಜೊತೆಗೆ ವಿಷ್ಣು ಸಹಸ್ರನಾಮ, ಸಾಮೂಹಿಕ ಪಾರಾಯಣ, ಮಹಾಮಂಗಳಾರತಿ, ತೀರ್ಥ ಪ್ರಸಾದ ನಡೆಯಲಿದೆ ಎಂದು ದೇವಸ್ಥಾನದ ಮುಖ್ಯಸ್ಥ ಕೆ.ಆರ್.ಯೋಗಾನರಸಿಂಹನ್ (ಮುರುಳಿ ಅಯ್ಯಂಗಾರ್) ತಿಳಿಸಿದ್ದಾರೆ. ಮಾಹಿತಿಗೆ ಮೊಬೈಲ್ 9342188323 ಅಥವಾ 7598832271 ಸಂಪರ್ಕಿಸಬಹುದು.





## 12 ರಂದು ರಾಷ್ಟ್ರೀಯಯುವ ದಿನಾಚರಣೆ

**ಮಂಡ್ಯ:** ಮಂಡ್ಯಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣಮತ್ತುಕ್ರೀಡಾ ಇಲಾಖೆ, ಮೈ ಭಾರತ್ -ನೆಹರುಯುವಕೇಂದ್ರ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ರಾಮಕೃಷ್ಣ ವಿವೇಕಾನಂದಆಶ್ರಮಇವರ ಸಂಯುಕ್ತಆಶ್ರಯದಲ್ಲಿಜನವರಿ 12 ರಂದು ಬೆಳಿಗ್ಗೆ 10 ಗಂಟೆಗೆ ನಗರದರಾಮಕೃಷ್ಣ ವಿವೇಕಾನಂದಆಶ್ರಮದಲ್ಲಿ 'ರಾಷ್ಟ್ರೀಯಯುವ ದಿನಾಚರಣೆ'ಯನ್ನು ಹಮ್ಮಿಕೊಳ್ಳಲಾಗಿದೆ, ಕಾರ್ಯಕ್ರಮದಲ್ಲಿಕೇಂದ್ರ ಸರ್ಕಾರದ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವರು ಹಾಗೂ ಲೋಕಸಭಾಕ್ಷೇತ್ರದ ಸಂಸದರು ಹೆಚ್ ಡಿ ಕುಮಾರಸ್ವಾಮಿಅವರುಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.ಕೃಷಿ ಹಾಗೂ ಜಿಲ್ಲಾಉಸ್ತುವಾರಿ ಸಚಿವರಾದಎನ್‌ಚಲುವರಾಯಸ್ವಾಮಿಅವರುಕಾರ್ಯ ಕ್ರಮವನ್ನುಉದ್ಘಾಟಿಸಲಿದ್ದಾರೆ. ಶ್ರೀ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತಅಧ್ಯಕ್ಷರು ಹಾಗೂ ಶ್ರೀರಂಗಪಟ್ಟಣ ವಿಧಾನಸಭಾ ಶಾಸಕ ಎ ಬಿ ರಮೇಶ ಬಂಡಿಸಿದ್ದೇಗೌಡ ಅವರುಕಾರ್ಯಕ್ರಮದಗೌರವ ಉಪಸ್ಥಿತಿ ವಹಿಸಲಿದ್ದು, ಮಂಡ್ಯ ವಿಧಾನಸಭಾ ಶಾಸಕರಾದ ಪಿ ರವಿಕುಮಾರ್ಅವರುಕಾರ್ಯಕ್ರಮದಅಧ್ಯಕ್ಷತೆಯನ್ನು ವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ವಿಧಾನ ಪರಿ?ತ್ ಶಾಸಕರುಗಳಾದ ಮಧು ಜಿ. ಮಾದೇಗೌಡ, ದಿನೇಶ್ ಗೂಳಿಗೌಡ, ಕೆ. ವಿವೇಕಾನಂದ, ವಿಧಾನ ಸಭಾಕ್ಷೇತ್ರದ ಶಾಸಕರುಗಳಾದ ಪಿ.ಎಂ. ನರೇಂದ್ರಸ್ವಾಮಿ, ದರ್ಶನ್ ಪುಟ್ಟಣ್ಣಯ್ಯ, ಹೆಚ್.ಟಿ ಮಂಜು, ಕೆ.ಎಂ ಉದಯ, ಮೈಸೂರು ಸಕ್ಕರೆ ಕಂಪನಿ ನಿಯಮಿತಅಧ್ಯಕ್ಷರಾದ ಸಿ.ಡಿ ಗಂಗಾಧರ, ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರಅಧ್ಯಕ್ಷರಾದ ನಯೀಮ್, ಮಂಡ್ಯ ನಗರಸಭೆಅಧ್ಯಕ್ಷ ಎಂ ವಿ ಪ್ರಕಾಶ್ (ನಾಗೇಶ್), ಜಿಲ್ಲಾಉಸ್ತುವಾರಿ ಕಾರ್ಯದರ್ಶಿಗಳಾದ ವಿ ಅನ್ಬುಕುಮಾರ್, ಕರ್ನಾಟಕರಾಜ್ಯ ಮಕ್ಕಳ ಹಕ್ಕುಗಳ ಆಯೋಗದಅಧ್ಯಕ್ಷ ಕೆ.ನಾಗಣ್ಣಗೌಡ, ರಾಮಕೃಷ್ಣ ವಿವೇಕಾನಂದಆಶ್ರಮದ ಮುಖ್ಯಸ್ಥರಾದ ಸ್ವಾಮಿ ನಿರ್ಮಲಾನಂದ ಮಹಾರಾಜ್ ಅವರುಗಳು ಭಾಗವಹಿಸಲಿದ್ದಾರೆ.

## ವಿದ್ಯುತ್ ವ್ಯತ್ಯಯ

**ಕೋಲಾರ:** 220ಕೆವಿ ವಿದ್ಯುತ್ ಸ್ವೀಕರಣಾ ಕೇಂದ್ರ, ಕೋಲಾರದಿಂದ ಹೊರ ಹೋಗುವ ಎಫ್-2 ಕೋಲಾರ ಟೌನ್ ಫೀಡರ್‌ನ 220ಕೆವಿ ಮಾರ್ಗದಲ್ಲಿ ವಿದ್ಯುತ್ ಕಂಬ ಅಳವಡಿಸುವ ಕಾಮಗಾರಿಯು ಪ್ರಗತಿಯಲ್ಲಿದ್ದು, ಈ ಕಾಮಗಾರಿ ಮಾಡುವ ಸಂದರ್ಭದಲ್ಲಿ 220ಕೆವಿ ವಿದ್ಯುತ್ ಉಪಕೇಂದ್ರದಿಂದ ಹೊರ ಹೋಗುವ ಎಫ್-2 ಕೋಲಾರ ಟೌನ್ ಫೀಡರ್‌ನ 220ಕೆವಿ ಮಾರ್ಗಗಳಲ್ಲಿ ಜನವರಿ 09 ಭಾನುವಾರದಂದು ಧರ್ಮರಾಯನಗರ, ಆರ್.ಟಿ.ಒ ಆಫೀಸ್, ಅಂಬೇಡ್ಕರ್ ನಗರ, ಮಾಸ್ತಿ ಬಡಾವಣೆ, ಬೈರೇಗೌಡ ನಗರ, ಸುತ್ತಮುತ್ತಲ ಪ್ರದೇಶಗಳ ಗ್ರಾಹಕರಿಗೆ ಬೆಳಿಗ್ಗೆ 9.00 ರಿಂದ ಸಂಜೆ 5.30 ಗಂಟೆಯೊಳಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಿಲಿದೆ. ಆದ್ದರಿಂದ ಗ್ರಾಹಕರು ಬೆವಿಕಂ ಜೊತೆ ಸಹಕರಿಸಬೇಕೆಂದು ನಗರ ಉಪ-ವಿಭಾಗದ ವಾಣಿಜ್ಯ, ಕಾರ್ಯ ಮತ್ತು ಪಾಲನಾ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯಿಂದ ಆಹಾರ ಮಾದರಿಗಳ ಪರಿಶೀಲನೆ

**ಬೆಂಗಳೂರು:** ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯು ಸಾರ್ವಜನಿಕರು ಸೇವಿಸುವ ಆಹಾರದ ಗುಣಮಟ್ಟ ಮತ್ತು ಸುರಕ್ಷತಾ ಅಂಶಗಳನ್ನು ಖಾತರಿಪಡಿಸುವ ಮತ್ತು ಆ ಮೂಲಕ ಸಾರ್ವಜನಿಕರ ಆರೋಗ್ಯವನ್ನು ಕಾಪಾಡುವ ನಿಟ್ಟಿನಲ್ಲಿ ಶ್ರಮಿಸುತ್ತಿದೆ.

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯು ನವೆಂಬರ್ ಮತ್ತು ಡಿಸೆಂಬರ್-2024ರ ಮಾಹೆಗಳಲ್ಲಿ ಆಹಾರ ಮಾದರಿಗಳನ್ನು ಸಂಗ್ರಹಿಸಿ ಅಗತ್ಯ ಕ್ರಮಗಳನ್ನು ಜರುಗಿಸಿದೆ.

ಹಿಂದುಳಿದ ವರ್ಗಗಳ ಹಾಸ್ಟೆಲ್‌ಗಳಿಗೆ ಭೇಟಿ : 2024ನೇ ಅಕ್ಟೋಬರ್ ಮಾಹೆಯ ಕೊನೆಯ ವಾರ ಹಾಗೂ ನವೆಂಬರ್ ಮಾಹೆಯಲ್ಲಿ ಹಿಂದುಳಿದ ವರ್ಗಗಳ 629 ಹಾಸ್ಟೆಲ್‌ಗಳಿಗೆ ಪರಿಶೀಲನಾ ಭೇಟಿ ನೀಡಿ 1378 ಆಹಾರ ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆಗೊಳಪಡಿಸಲಾಗಿದ್ದು, ಅವುಗಳಲ್ಲಿ 1280 ಮಾದರಿಗಳು ಸುರಕ್ಷಿತ ಎಂದು, 42 ಮಾದರಿಗಳು ಅಸುರಕ್ಷಿತ ಎಂದು, 56 ಮಾದರಿಗಳು ನಿಗದಿತ ಗುಣಮಟ್ಟ ಹೊಂದಿಲ್ಲದಿರುವುದಾಗಿ ವರದಿಯಾಗಿರುತ್ತವೆ.

ಇಂದಿರಾ ಕ್ಯಾಂಟಿನ್‌ಗಳಿಗೆ ಭೇಟಿ : 2024ನೇ ನವೆಂಬರ್ ಮಾಹೆಯಲ್ಲಿ ನೈರ್ಮಲ್ಯತೆ ಮತ್ತು ಶುಚಿತ್ವವನ್ನು ಕಾಪಾಡಿಕೊಳ್ಳುತ್ತಿರುವ ಕುರಿತಂತೆ 188 ಇಂದಿರಾ ಕ್ಯಾಂಟೀನ್‌ಗಳಿಗೆ ಪರಿಶೀಲನಾ ಭೇಟಿ ನೀಡಿ 212 ಆಹಾರ ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆಗೊಳಪಡಿಸಲಾಗಿದ್ದು ಅವುಗಳಲ್ಲಿ 191 ಮಾದರಿಗಳು ಸುರಕ್ಷಿತ ಎಂದು 04 ಮಾದರಿಗಳು ಅಸುರಕ್ಷಿತ ಎಂದು, 13 ಮಾದರಿಗಳು ನಿಗದಿತ ಗುಣಮಟ್ಟ ಹೊಂದಿಲ್ಲದಿರುವುದಾಗಿ ವರದಿಯಾಗಿರುತ್ತವೆ. 2024ನೇ ನವೆಂಬರ್ ಮಾಹೆಯಲ್ಲಿ ಕಉ (ಕಚಿಥಿಟಿರ ಉಣಜಣ) ಗಳಲ್ಲಿ ನೀಡಲಾಗುತ್ತಿರುವ ಆಹಾರದ ಗುಣಮಟ್ಟ ಕಳಪೆಯಾಗಿರುವ ಹಾಗೂ ನೈರ್ಮಲ್ಯದ ಕೊರತೆಯ ಕುರಿತು ವ್ಯಾಪಕವಾಗಿ ದೂರುಗಳು ಸ್ವೀಕೃತವಾಗುತ್ತಿರುವ ಹಿನ್ನೆಲೆಯಲ್ಲಿ 341 ಪಿ.ಜಿ ಗಳಿಗೆ ಪರಿಶೀಲನಾ ಭೇಟಿ ನೀಡಿ, 65 ಆಹಾರ ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆಗೊಳಪಡಿಸಲಾಗಿದ್ದು, ಅವುಗಳಲ್ಲಿ 54 ಮಾದರಿಗಳು ಸುರಕ್ಷಿತ ಎಂದು 01 ಮಾದರಿಯು ಅಸುರಕ್ಷಿತ ಎಂದು, 02 ಮಾದರಿಗಳು ನಿಗದಿತ ಗುಣಮಟ್ಟ ಹೊಂದಿಲ್ಲದಿರುವುದಾಗಿ ವರದಿಯಾಗಿರುತ್ತವೆ.

ಸಮಾಜ ಕಲ್ಯಾಣ ಇಲಾಖೆಯ ಹಾಸ್ಟೆಲ್‌ಗಳಿಗೆ ಭೇಟಿ : 2024ನೇ ನವೆಂಬರ್ ಮಾಹೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ 331 ಹಾಸ್ಟೆಲ್‌ಗಳಿಗೆ ಪರಿಶೀಲನಾ ಭೇಟಿ ನೀಡಿ 244 ಆಹಾರ ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆಗೊಳಪಡಿಸಲಾಗಿದ್ದು ಅವುಗಳಲ್ಲಿ 234 ಮಾದರಿಗಳು ಸುರಕ್ಷಿತ ಎಂದು, 05 ಮಾದರಿಗಳು ಅಸುರಕ್ಷಿತ ಮತ್ತು 05 ಮಾದರಿಗಳು ನಿಗದಿತ ಗುಣಮಟ್ಟ ಹೊಂದಿಲ್ಲದಿರುವುದಾಗಿ ವರದಿಯಾಗಿರುತ್ತವೆ.

2024ನೇ ಡಿಸೆಂಬರ್ ಮಾಹೆಯಲ್ಲಿ ಕ್ರಿಸ್‌ಮಸ್ ಮತ್ತು ಹೊಸ ವರ್ಷದ ಸಂದರ್ಭದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಕೇಕ್‌ಗಳು ಮಾರಾಟವಾಗುವ ಹಿನ್ನೆಲೆಯಲ್ಲಿ ಅವುಗಳ ಗುಣಮಟ್ಟ ಪರಿಶೀಲಿಸುವ ಸಂಬಂಧ 438 ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆಗೊಳಪಡಿಸಲಾಗಿದ್ದು, ಅವುಗಳಲ್ಲಿ 156 ಮಾದರಿಗಳ ವಿಶ್ಲೇಷಣಾ ಕಾರ್ಯವು ಮುಕ್ತಾಯಗೊಂಡಿದ್ದು, 155 ಮಾದರಿಗಳು ಸುರಕ್ಷಿತ, 02 ಮಾದರಿಗಳು ಅಸುರಕ್ಷಿತ ಎಂದು ವರದಿಯಾಗಿರುತ್ತವೆ. ಉಳಿಕ ಮಾದರಿಗಳ ವಿಶ್ಲೇಷಣಾ ಪ್ರಕ್ರಿಯೆಯು ಚಾಲ್ತಿಯಲ್ಲಿರುತ್ತದೆ.

## ಕೃಷಿಕ ಸಮಾಜದಕ್ಕೆ ಅವಿರೋಧ ಆಯ್ಕೆ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ತಾಲ್ಲೂಕು ಕೃಷಿಕ ಸಮಾಜ ಇದರ 2025-26 ರಿಂದ 2029-30ನೇ ಸಾಲಿನ ಐದು ವರ್ಷಗಳ ಅವಧಿಗೆ ತಾಲ್ಲೂಕು ಕೃಷಿಕ ಸಮಾಜ ಕಾರ್ಯಕಾರಿ ಸಮಿತಿಗೆ ಅಧ್ಯಕ್ಷರು, ಉಪಾಧ್ಯಕ್ಷರು, ಪ್ರಧಾನ ಕಾರ್ಯದರ್ಶಿ, ಖಜಾಂಚಿ, ಜಿಲ್ಲಾ ಪ್ರತಿನಿಧಿ ಸ್ಥಾನಗಳಿಗೆ ಚುನಾವಣೆಯನ್ನು ಜನವರಿ 7 ರಂದು ನಿಗಧಿಪಡಿಸಲಾಗಿತ್ತು. ಚುನಾವಣಾ ವೇಳಾಪಟ್ಟಿ ನಿಗಧಿಯಂತೆ ಎಲ್ಲಾ ಪದಾಧಿಕಾರಿಗಳ ಆಯ್ಕೆಗೆ ಎಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರಿಗೆ ತಿಳುವಳಿಕೆ ಪತ್ರವನ್ನು ಮುದ್ದಾಂ ಮತ್ತು ನೋಂದಣಿ ಅಂಚೆ ಮೂಲಕ ಕಳುಹಿಸಲಾಗಿತ್ತು. ಅದರಂತೆ ಚುನಾವಣಾ ಪ್ರಕ್ರಿಯೆಯಲ್ಲಿ ಹಾಜರಿದ್ದರು.

ನಿಗಧಿತ ಸ್ಥಾನಗಳಿಗೆ ಆಯ್ಕೆ ಬಯಸಿ ಉಮೇದುವಾರಿಕೆ ಅರ್ಜಿ ವಿತರಿಸಿದ್ದು ನಿಗದಿತ ಸಮಯದೊಳಗೆ ಪದಾಧಿಕಾರಿಗಳ ಸ್ಥಾನಕ್ಕೆ ಆಯ್ಕೆ ಬಯಸಿ ಐದು ಸದಸ್ಯರು ತಮ್ಮ ಉಮೇದುವಾರಿಕೆ ಅರ್ಜಿಯನ್ನು ನಿಗಧಿತ ದಾಖಲೆಗಳೊಂದಿಗೆ ಸಲ್ಲಿಸಿರುತ್ತಾರೆ. ಉಮೇದುವಾರಿಕೆ ಅರ್ಜಿಗಳು ಪರಿಶೀಲಿಸಲಾಗಿ ಯಾವುದೇ ಅರ್ಜಿಗಳು ತಿರಸ್ಕೃತಗೊಂಡಿರುವುದಿಲ್ಲ. ಕಾರ್ಯಕಾರಿ ಸಮಿತಿಯ ಪ್ರತಿ ಪದಾಧಿಕಾರಿ ಸ್ಥಾನಕ್ಕೆ ತಲಾ ಒಂದು ಅರ್ಜಿ ಸ್ವೀಕೃತವಾಗಿರುವುದರಿಂದ ಸದರಿ ಸದಸ್ಯರನ್ನು ಆಯಾ ಸ್ಥಾನಕ್ಕೆ ಅವಿರೋಧವಾಗಿ ಆಯ್ಕೆ ಮಾಡಿ ಫಲಿತಾಂಶವನ್ನು ಪ್ರಕಟಿಸಲಾಗಿದೆ ಎಂದು ಚಿಕ್ಕಬಳ್ಳಾಪುರ ಚುನಾವಣಾಧಿಕಾರಿ ಹಾಗೂ ಸಹಾಯಕ ಕೃಷಿ ನಿರ್ದೇಶಕರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಮಿತಿಗೆ ಆಯ್ಕೆಯಾದ ಪದಾಧಿಕಾರಿಗಳ ವಿವರ: ಅಧ್ಯಕ್ಷರಾಗಿ ಸೊಣ್ಣೇಗೌಡ .ಎನ್ ಬಿನ್ ಡಿ.ಎಂ.ನಾರಾಯಣಪ್ಪ, ಯಲುವಳ್ಳಿ ಗ್ರಾಮ, ದೊಡ್ಡಮರಳಿ ಅಂಚೆ, ನಂದಿ ಹೋಬಳಿ, ಚಿಕ್ಕಬಳ್ಳಾಪುರ ತಾಲ್ಲೂಕು. ಉಪಾಧ್ಯಕ್ಷರಾಗಿ ಜಿ.ವೆಂಕಟೇಶ ಬಿನ್ ಗೋವಿಂದಪ್ಪ, ಈತಮಾಕಲಹಳ್ಳಿ ಗ್ರಾಮ, ಮಂಚನಬಲೆ ಅಂಚೆ, ಕಸಬಾ ಹೋಬಳಿ, ಚಿಕ್ಕಬಳ್ಳಾಪುರ ತಾಲ್ಲೂಕು.

ಪ್ರಧಾನ ಕಾರ್ಯದರ್ಶಿಯಾಗಿ ಎಂ.ಎನ್. ಶ್ರೀನಿವಾಸ್ ಗೌಡ ಬಿನ್ ಎಂ.ಬಿ. ನಾರಾಯಣಗೌಡ, ಮೈಲಪ್ಪನಹಳ್ಳಿ ಗ್ರಾಮ, ಕಳವಾರ ಅಂಚೆ, ನಂದಿ ಹೋಬಳಿ, ಚಿಕ್ಕಬಳ್ಳಾಪುರ ತಾಲ್ಲೂಕು.

ಖಜಾಂಚಿಯಾಗಿ ಬಿ.ವಿ.ಆದಿನಾರಾಯಣಪ್ಪ ಬಿನ್ ವೆಂಕಟರಾಯಪ್ಪ, ಬೋಡಿನಾರೇನಹಳ್ಳಿ ಗ್ರಾಮ ಹಿರೇನಾಗವಲ್ಲಿ ಅಂಚೆ, ಮಂಡಿಕಲ್ಲು ಹೋಬಳಿ, ಚಿಕ್ಕಬಳ್ಳಾಪುರ ತಾಲ್ಲೂಕು.

ಜಿಲ್ಲಾ ಪ್ರತಿನಿಧಿಯಾಗಿ ಕೆ.ವಿ.ಚಂದ್ರಪ್ಪ ಬಿನ್ ವೆಂಕಟರಾಯಪ್ಪ, ಕೊಂಡೇನಹಳ್ಳಿ ಗ್ರಾಮ ಮತ್ತು ಅಂಚೆ, ನಂದಿ ಹೋಬಳಿ, ಚಿಕ್ಕಬಳ್ಳಾಪುರ ತಾಲ್ಲೂಕು ಇವರು ಆಯ್ಕೆಯಾಗಿರುತ್ತಾರೆ.

## ಬ್ಯಾಟರಿ ಚಾಲಿತ ವೀಲ್ ಚೇರ್‌ಗೆ ಅರ್ಜಿ

**ಚಿಕ್ಕಬಳ್ಳಾಪುರ:** 2024-25ನೇ ಸಾಲಿಗೆ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ಫಲಾನುಭವಿ ಆಧಾರಿತ ಯೋಜನೆಯಾದ ಬ್ಯಾಟರಿ ಚಾಲಿತ ವೀಲ್ ಚೇರ್ ಯೋಜನೆಗೆ ಚಿಕ್ಕಬಳ್ಳಾಪುರ ಜಿಲ್ಲೆಯ ಅರ್ಹ ವಿಕಲಚೇತನ ಫಲಾನುಭವಿಗಳಿಂದ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಶೇಕಡ 75% ರಷ್ಟು ಮತ್ತು ಅದಕ್ಕಿಂತ ಹೆಚ್ಚಿನ ವಿಕಲತೆಯುಳ್ಳ ಅರ್ಹ ವಿಕಲಚೇತನ ಫಲಾನುಭವಿಗಳು ಜವವರಿ 21 ರೊಳಗೆ ಅರ್ಜಿಗಳನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ 08156-200122/277114 ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳ ಕಚೇರಿ, ಚಿಕ್ಕಬಳ್ಳಾಪುರ ರವರಿಗೆ ಸಂಪರ್ಕಿಸಬಹುದೆಂದು ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವೈಕುಂಠ ಏಕಾದಶಿ



**ನಾಗಮಂಗಲ:** ಸಾಲಾದ್ರಿ ಶ್ರೀ ಕ್ಷೇತ್ರ ಕೋಟೆ ಬೆಟ್ಟದ ಇತಿಹಾಸ ಪ್ರಸಿದ್ಧ ಶ್ರೀ ವೆಂಕಟರಮಣ ಸ್ವಾಮಿ ದೇವಾಲಯದಲ್ಲಿ 18ನೇ ವರ್ಷದ ವೈಕುಂಠ ಏಕಾದಶಿ ಅದ್ದೂರಿ ಕಾರ್ಯಕ್ರಮ ಜರುಗಲಿದೆ. ನಾಗಮಂಗಲ ತಾಲೂಕು ದೇವಲಾಪುರ ಹೋಬಳಿಯ ಶ್ರೀ ಸಾಲಾದ್ರಿ, ಶ್ರೀ ಕ್ಷೇತ್ರ ಕೋಟೆ ಬೆಟ್ಟ ಗ್ರಾಮದ ಶ್ರೀ ವೆಂಕಟರಮಣ ಸ್ವಾಮಿ 18ನೇ ವರ್ಷದ ವೈಕುಂಠ ಏಕಾದಶಿಯ ವಿಶೇಷ ಪೂಜಾ ಕಾರ್ಯಕ್ರಮ ನೆರವೇರಲಿದ್ದು ಜನವರಿ 9 ಮತ್ತು 10 ಜರುಗಲಿದ್ದು ಭಕ್ತಾದಿಗಳು ಸ್ವಾಮಿಯ ಕೃಪೆಗೆ ಪಾತ್ರರಾಗುವಂತೆ ತಿಳಿಸಿದ್ದಾರೆ.

## ಜಲ ಮಂಡಳಿಯಿಂದ ನೀರಿನ ಅದಾಲತ್

ಬೆಂಗಳೂರು: ಬೆಂಗಳೂರು ಜಲ ಮಂಡಳಿಯ ವಿವಿಧ ಉಪ ವಿಭಾಗಗಳಾದ ಉತ್ತರ-2-1, ದಕ್ಷಿಣ-1-1, ದಕ್ಷಿಣ-2-1, ನೈರುತ್ಯ -1, ನೈರುತ್ಯ - 4, ಪೂರ್ವ -1-2, ಪೂರ್ವ -2-2, ಆಗ್ನೇಯ - 2, ಆಗ್ನೇಯ ? 5, ಪಶ್ಚಿಮ-1-2 ಮತ್ತು ಪಶ್ಚಿಮ-2-2, ಉಪವಿಭಾಗಗಳಲ್ಲಿ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದು ಕೊರತೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ಜನವರಿ 09 ರಂದು ಬೆಳಿಗ್ಗೆ 9.30 ಗಂಟೆಯಿಂದ 11 ಗಂಟೆಯವರೆಗೆ ನೀರಿನ ಅದಾಲತ್ ನ್ನು ಹಮ್ಮಿಕೊಳ್ಳಲಾಗಿದೆ.

ಯಲಹಂಕ ಓಲ್ಡ್ ಟೌನ್, ಯಲಹಂಕ ನ್ಯೂಟೌನ್, ಅಟ್ಟೂರು, ಜೆ.ಪಿ.ನಗರ-2, ಕೊತ್ತನೂರು ದಿಣ್ಣೆ, ವಿಜಯಬ್ಯಾಂಕ್ ಕಾಲೋನಿ, ಅರಕೆರೆ ಮೈಕೋ ಲೇಔಟ್, ಜೆ.ಪಿ.ನಗರ ? 13, ಜಯನಗರ 4ನೇ ಟಿ ಬ್ಲಾಕ್, ಜಯನಗರ 4ನೇ ಬ್ಲಾಕ್, ಹೊಂಬೇಗೌಡನಗರ, ಬೈರಸಂದ್ರ, ಎಲ್.ಎಲ್.ಆರ್, ಚಿಕ್ಕಲಾಲ್‌ಬಾಗ್, ಬನ್ನಪ್ಪ ಪಾರ್ಕ್, ಸುಧಾಮನಗರ -1, ಕತ್ರಿಗುಪ್ಪೆ, ಹೊಸಕೆರೆಹಳ್ಳಿ, ದೇವಗಿರಿ-1, ಇಟ್ಟಮಡು, ಬನಗಿರಿನಗರ, ಎ.ನಾರಾಯಣಪುರ, ದೊಡ್ಡನಕುಂದಿ, ವಿಜ್ಞಾನನಗರ, ಬಾಣಸವಾಡಿ, ಓ.ಎಂ.ಬಿ.ಆರ್., ಲಿಂಗರಾಜಪುರಂ, ಕಸ್ತೂರಿನಗರ, ಹಲಸೂರು, ದೊಮ್ಮಲೂರು, ಮಾರತ್‌ಹಳ್ಳಿ, ಕೋರಮಂಗಲ- 12, ವಿಜಯನಗರ ಓ.ಎಚ್.ಟಿ, ಮೂಡಲಪಾಳ್ಯ, ನಾಗರಬಾವಿ, ಅನ್ನಪೂರ್ಣೇಶ್ವರಿನಗರ, ಸರ್.ಎಂ.ವಿ ಲೇಔಟ್‌ದಲ್ಲಿ ಅದಾಲತ್ ನಡೆಯಲಿದೆ.

## 13ರಂದು ಹಿರಿಯ ನಾಗರಿಕರಿಗೆ ಮೌಲ್ಯಮಾಪನ ಶಿಬಿರ

**ಚಿಕ್ಕಬಳ್ಳಾಪುರ:** ವಿಕಲಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರ, ಚಿಕ್ಕಬಳ್ಳಾಪುರ (ಅನುಷ್ಠಾನ: ಶ್ರೀ ಸಾಯಿ ಇಂಟರ್ ನ್ಯಾಷನಲ್ ಚಾರಿಟಬಲ್ ಟ್ರಸ್ಟ್, ಬೆಂಗಳೂರು), ಇವರ ಜಂಟಿ ಸಹಯೋಗದೊಂದಿಗೆ ಗುಡಿಬಂಡೆ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ವಿಕಲಚೇತನ ಹಾಗೂ ಹಿರಿಯ ನಾಗರಿಕರಿಗೆ ಅಗತ್ಯ ಮೌಲ್ಯಮಾಪನ ಶಿಬಿರವನ್ನು ಆಯೋಜಿಸಿದ್ದು, ಅಗತ್ಯವಿರುವ ಸಾಧನ ಸಲಕರಣೆಗಳನ್ನು ಒದಗಿಸಲು ಮೌಲ್ಯಮಾಪನ ಮಾಡುವ ಕುರಿತು ಜನವರಿ 13 ರಂದು ಬೆಳಿಗ್ಗೆ 11 ಗಂಟೆಗೆ ಗುಡಿಬಂಡೆ ತಾಲ್ಲೂಕು ಪಂಚಾಯ್ತಿ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಮೂರ್ತಿ.ಕೆ.ಎನ್ -9900093399 ಸಂಪರ್ಕಿಸಬಹುದು.


## ನಗರಸಭಾ ಕಾರ್ಯಾಲಯ, ರಾಮನಗರ

ರಾಮನಗರ ಜಿಲ್ಲೆ-562159
web:www.ramanagaracity.mrc.gov.in ph:no:080-27271286
Email ID: itstaff_ulb_ramanagaram@yahoo.com Helpline No:080-27276070

ಸಂಖ್ಯೆ :ನಸರಾ/ಆ.ಶಾ/ಸ.ಕಾ.ಅ(ಪ.ಅ)MRF/SBM/MF/29/2023-2024 **ದಿನಾಂಕ:08.01.2025**

### ತಿದ್ದುಪಡಿ ಟೆಂಡರ್ ಪ್ರಕಟಣೆ

2023- 24ನೇ ಸಾಲಿನ ಎಸ್.ಬಿ.ಎಮ್ 2.0 ಅನುದಾನದಡಿ ಇ-ಪ್ರಕ್ಯೂರ್‌ಮೆಂಟ್ ಮುಖಾಂತರ ದಿನಾಂಕ: 30.12.2024 ರಂದು ಟೆಂಡರ್ ಪ್ರಕಟಣೆ ಸಂಖ್ಯೆ: ನಸರಾ/ಆ.ಶಾ/ಸ.ಕಾ.ಅ(ಪ.ಅ)MRF/SBM/MF/29/2023-2024ರಲ್ಲಿ ಈ ಕೆಳಕಂಡ ಟೆಂಡರ್‌ಗಳನ್ನು ಕರೆಯಲಾಗಿದ್ದು, ಇ-ಪ್ರಕ್ಯೂರ್‌ಮೆಂಟ್ ಮುಖಾಂತರ ಭಾಗವಹಿಸಲು ಕೊನೆಯ ದಿನಾಂಕ: 15.01.2025 ಸಂಜೆ 4.30 ಆಗಿರುತ್ತದೆ. ಆದರೆ ತಾಂತ್ರಿಕ ಕಾರಣಗಳಿಂದ ಟೆಂಡರ್ ಪ್ರಕಟಿಸಲು ವಿಳಂಬವಾಗಿದ್ದು ಹಾಗಾಗಿ ಇ-ಪ್ರಕ್ಯೂರ್‌ಮೆಂಟ್ ಮುಖಾಂತರ ಭಾಗವಹಿಸಲು ಕೊನೆಯ ದಿನಾಂಕ: 22.01.2025 ಸಂಜೆ 5.30 ಆಗಿರುತ್ತದೆ ಎಂದು ಈ ಮೂಲಕ ತಿಳಿಯಪಡಿಸಿದೆ.

| ಕ್ರ.ಸಂ | ವಿವರ | ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) | ಇ.ಎಂ.ಡಿ ಮೊತ್ತ(ರೂ. ಗಳಲ್ಲಿ) | ಅನುದಾನ ವಿವರ |
|---|---|---|---|---|
| 02 | ಎಂ.ಆರ್.ಎಫ್(MRF) ಘಟಕದಲ್ಲಿ ಅಗತ್ಯವಿರುವ Dedusting Equipment ಯಂತ್ರ ಖರೀದಿ (DMA/2024-25/IND4135) | 7.58 | 19,000/- | ಎಸ್.ಬಿ.ಎಂ-2.0 |
| 03 | ಎಂ.ಆರ್.ಎಫ್ (MRF) ಘಟಕದಲ್ಲಿ ಅಗತ್ಯವಿರುವ Bag Opener ಯಂತ್ರ ಖರೀದಿ (DMA/2024-25/IND4133 | 11.62 | 29,058/- | ಎಸ್.ಬಿ.ಎಂ-2.0 |
| 04 | ಎಂ.ಆರ್.ಎಫ್(MRF) ಘಟಕದಲ್ಲಿ ಅಗತ್ಯವಿರುವ PVC Flat belt conveyor with wheels 7620mm (25ft) for secondary sorting ಯಂತ್ರ ಖರಿದಿ (DMA/2024-25/IND 4136 | 9.44 | 23,600/- | ಎಸ್.ಬಿ.ಎಂ-2.0 |

**ಅಧ್ಯಕ್ಷರು**
**ನಗರಸಭೆ, ರಾಮನಗರ**

**ಪೌರಾಯುಕ್ತರು**
**ನಗರಸಭೆ, ರಾಮನಗರ**

## ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, 1ನೇ ಮಹಡಿ, ವಿ.ಜೆ. ಕಾಂಪ್ಲೆಕ್ಸ್, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562 110.

ಸಂ: ಬಿಐಎಎಪಿಎ/ಟಿಪಿ/ಭೂಉಬ/104/2024-25/2367 ದಿನಾಂಕ : 08.01.2025

### ಪ್ರಕಟಣೆ

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14 (ಎ) ರ ಅಡಿಯಲ್ಲಿ ಈ ಕೆಳಕಂಡ ಅರ್ಜಿದಾರರು ವ್ಯವಸಾಯ ಭೂಉಪಯೋಗ ವಲಯದಿಂದ ವಸತಿ ವಲಯಕ್ಕೆ ಭೂಉಪಯೋಗ ಬದಲಾವಣೆ ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಭೂಉಪಯೋಗ ಬದಲಾವಣೆಯ ಪ್ರಸ್ತಾವನೆಯ ವಿವರಗಳು ಈ ಕೆಳಕಂಡಂತೆ ಇರುತ್ತದೆ. ಸದರಿ ಭೂಉಪಯೋಗ ಬದಲಾವಣೆ ಪ್ರಸ್ತಾವನೆ ಬಗ್ಗೆ ಯಾವುದೇ ಆಕ್ಷೇಪಣೆಗಳಿದ್ದರೆ, ಈ ಪ್ರಕಟಣೆ ಪ್ರಕಟವಾದ ದಿನಾಂಕದಿಂದ 15 ದಿವಸಗಳೊಳಗಾಗಿ ಆಕ್ಷೇಪಣೆಗಳನ್ನು ಲಿಖಿತವಾಗಿ ಸದಸ್ಯ ಕಾರ್ಯದರ್ಶಿಗಳು, ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ ಕಛೇರಿಗೆ ಸಲ್ಲಿಸಲು ತಿಳಿಸಲಾಗಿದೆ. ನಿಗಧಿತ ಅವಧಿಯ ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ.

| ಕ್ರ. ಸಂ. | ಅರ್ಜಿದಾರರ ಹೆಸರು | ತಾಲ್ಲೂಕು | ಹೋಬಳಿ | ಗ್ರಾಮದ ವಿವರ | ಸರ್ವೆ ನಂ. | ವಿಸ್ತೀರ್ಣ ಎ-ಗು | ಮಹಾ ಯೋಜನೆಯ ಪ್ರಕಾರ ಭೂ ಉಪಯೋಗ | ಬದಲಾವಣೆ ಕೋರಿರುವ ಭೂ ಉಪಯೋಗ |
|---|---|---|---|---|---|---|---|---|
| 1. | ಶ್ರೀ ಮಂಜುನಾಥ್ ಪಿ.ರೆಡ್ಡಿ ಉರುಫ್ ಪಿ.ಮಂಜುನಾಥರೆಡ್ಡಿ ಬಿನ್ ಎ.ವೆಂಕಟರೆಡ್ಡಿ ಪರವಾಗಿ ಜಿಪಿಎ ಹೋಲ್ಡರ್ ಪಿ.ವಿ. ಲಕ್ಷ್ಮೀ ಉರ ಕೋಂ ಮಂಜುನಾಥ್ ರೆಡ್ಡಿ ವೈ.ಎನ್ | ದೇವನಹಳ್ಳಿ | ಕುಂದಾಣ | ಅರದೇಶನಹಳ್ಳಿ | 38/2 | 0-16 | ವ್ಯವಸಾಯ | ವಸತಿ |
| 2. | ಶ್ರೀಮತಿ ಇ.ಉಮಮಹೇಶ್ವರಿ ಕೋಂ ಎನ್ ಮಹೇಶ್ | ದೇವನಹಳ್ಳಿ | ಕುಂದಾಣ | ಅರದೇಶನಹಳ್ಳಿ | 38/4 | 0-20 | ವ್ಯವಸಾಯ | ವಸತಿ |
| 3. | ಶ್ರೀ ನಾಗೇಂದ್ರ ರೆಡ್ಡಿ ಆರ್ ಬಿನ್ ಲೇ॥ ರಾಮಕೃಷ್ಣರೆಡ್ಡಿ.ಬಿ | ದೇವನಹಳ್ಳಿ | ಕುಂದಾಣ | ಅರದೇಶನಹಳ್ಳಿ | 33/1 | 1-11 | ವ್ಯವಸಾಯ | ವಸತಿ |
| 4. | ಶ್ರೀ ನಾಗೇಂದ್ರ ರೆಡ್ಡಿ ಆರ್ ಬಿನ್ ಲೇ॥ ರಾಮಕೃಷ್ಣ ರೆಡ್ಡಿ.ಬಿ | ದೇವನಹಳ್ಳಿ | ಕುಂದಾಣ | ಅರದೇಶನಹಳ್ಳಿ | 33/3 | 1-11 | ವ್ಯವಸಾಯ | ವಸತಿ |
| 5. | ಶ್ರೀ ಎನ್.ರಾಮಚಂದ್ರ ಬಿನ್ ಲೇ॥ ನರಸಿಂಹಯ್ಯ | ದೇವನಹಳ್ಳಿ | ಕುಂದಾಣ | ಅರದೇಶನಹಳ್ಳಿ | 32/4 | 0-09 | ವ್ಯವಸಾಯ | ವಸತಿ |
| 6. | ಶ್ರೀಮತಿ ಉಮಾಮಹೇಶ್ವರಿ ಕೋಂ ಎನ್.ಮಹೇಶ್ | ದೇವನಹಳ್ಳಿ | ಕುಂದಾಣ | ಅರದೇಶನಹಳ್ಳಿ | 27/4 | 0-19 | ವ್ಯವಸಾಯ | ವಸತಿ |
| 7. | ಶ್ರೀಮತಿ ಇ.ಉಮಮಹೇಶ್ವರಿ ಕೋಂ ಎನ್ ಮಹೇಶ್ | ದೇವನಹಳ್ಳಿ | ಕುಂದಾಣ | ಅರದೇಶನಹಳ್ಳಿ | 27/5 | 0-38 | ವ್ಯವಸಾಯ | ವಸತಿ |

**ಷರಾ :-** ಪ್ರಸ್ತಾವನೆಯಲ್ಲಿನ ಅರ್ಜಿದಾರರುಗಳು ಪ್ರಶ್ನಿತ ಜಮೀನುಗಳನ್ನು ವ್ಯವಸಾಯ ಉಪಯೋಗಕ್ಕೆ ಬಳಸಿಕೊಳ್ಳಲು ಸಾಧ್ಯವಾಗುತ್ತಿಲ್ಲವೆಂದೂ, ಹಾಗೂ ಪರಿಸರದಲ್ಲಿ ವಾಸದ ಬೆಳವಣಿಗೆಗೆ ಅತಿ ಹೆಚ್ಚು ಬೇಡಿಕೆ ಇದ್ದು, ಸದರಿ ಜಮೀನುಗಳನ್ನು ವ್ಯವಸಾಯ ವಲಯದಿಂದ ವಸತಿ ವಲಯಕ್ಕೆ ಭೂಉಪಯೋಗ ಬದಲಾವಣೆಗೊಂಡ ನಂತರ ವಸತಿ ಉದ್ದೇಶಕ್ಕೆ ಭೂಪರಿವರ್ತಿಸಿ, ಪ್ರಾಧಿಕಾರದಿಂದ ಅನುಮೋದನೆ ಪಡೆದು, ಯೋಜನಾ ಬದ್ಧ ಅಭಿವೃದ್ಧಿ ಕಾರ್ಯಗಳಿಂದ ಸ್ಥಳೀಯರಿಗೆ ಉದ್ಯೋಗಾವಕಾಶ ಸೃಷ್ಟಿ ಹಾಗೂ ಮೂಲ ಸೌಕರ್ಯ ಅಭಿವೃದ್ಧಿಯಾಗುವುದರಿಂದ ಸಾರ್ವಜನಿಕ ಹಿತಾಸಕ್ತಿ ಅಂಶ ಅಡಗಿದೆ ಎಂದು ತಿಳಿಸುತ್ತಾ ಸದರಿ ಪ್ರದೇಶವನ್ನು 'ವ್ಯವಸಾಯ ಭೂಉಪಯೋಗ ವಲಯ' ದಿಂದ 'ವಸತಿ ವಲಯ' ಕ್ಕೆ ಭೂಉಪಯೋಗ ಬದಲಾವಣೆ ಮಾಡಿಕೊಳ್ಳಲು ಇಚ್ಛಿಸಿರುವುದಾಗಿ ತಿಳಿಸಿರುತ್ತಾರೆ.

ಸಹಿ/-
**ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು**
**ಹಾಗೂ ಸದಸ್ಯ ಕಾರ್ಯದರ್ಶಿಗಳು, ಬಿ.ಐ.ಎ.ಎ.ಪಿ.ಎ, ದೇವನಹಳ್ಳಿ**

ವಾಸಾಸಂಇ/ವಾಪ್ರ/4220/ಆಕಾರ್/2024-25

## ಹೆಚ್ಚುವರಿಯಾಗಿ ಪಡೆದಿರುವ ಹಣವನ್ನು ದೂರುದಾರರಿಗೆ ನೀಡಲು ಗ್ರಾಹಕ ನ್ಯಾಯಾಲಯ ಆದೇಶ

**ಚಿಕ್ಕಬಳ್ಳಾಪುರ:** ಗಂಗಾಧರ್ ಕೆ.ಎನ್. ಕಂದಾವಾರ, ಚಿಕ್ಕಬಳ್ಳಾಪುರ ಇವರು ಬಾಜಾಜ್ ಫೈನಾನ್ಸ್ ಲಿಮಿಟೆಡ್ ಕಂಪನಿಯಲ್ಲಿ 2,11,300 ರೂ. ಗಳ ಸಾಲ ತೆಗೆದುಕೊಂಡಿದ್ದು, ಸಾಲ ಮತ್ತು ಬಡ್ಡಿಯನ್ನು 2024ರ ಜುಲೈ 5 ರಂದು ಪಾವತಿಸಿದ್ದು, ಬಾಜಾಜ್ ಫೈನಾನ್ಸ್ ಲಿಮಿಟೆಡ್ ಕಂಪನಿಯು ಗಂಗಾಧರ್ ಅವರಿಂದ ಹೆಚ್ಚುವರಿಯಾಗಿ ರೂ. 13,152 ಗಳನ್ನು ಪಡೆದಿದ್ದು, ಕೆ.ಎನ್. ಗಂಗಾಧರ್ ರವರು ತಮಗಾದ ಅನ್ಯಾಯಕ್ಕೆ ಚಿಕ್ಕಬಳ್ಳಾಪುರ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ, ಗ್ರಾಹಕರ ದೂರು ನೀಡಿದ್ದು, ಸದರಿ ದೂರನ್ನು ವಿಚಾರಣೆ ಕೈಗೊಂಡು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಎನ್. ಕುಮಾರ್ ಮತ್ತು ಹೆಚ್ ಜನಾರ್ಧನ್ ಸದಸ್ಯರು, ವಾದ ವಿವಾದಗಳನ್ನು ಆಲಿಸಿ, ಬಾಜಾಜ್ ಫೈನಾನ್ಸ್ ಲಿಮಿಟೆಡ್ ಕಂಪನಿಯವರು ಹೆಚ್ಚುವರಿಯಾಗಿ ಪಡೆದಿದ್ದ ಹಣವನ್ನು ಮತ್ತು ಪರಿಹಾರವಾಗಿ 10,000 ರೂಗಳನ್ನು ಹಾಘೂ ದಾವೆ ವೆಚ್ಚ 8,000 ರೂಗಳನ್ನು ಪಾವತಿಸಲು ಬಾಜಾಜ್ ಫೈನಾನ್ಸ್ ಲಿಮಿಟೆಡ್ ಕಂಪನಿಯವರಿಗೆ ಆದೇಶ ನೀಡಲಾಗಿದೆ. ವಕೀಲರಾದ ಎನ್. ರಮೇಶ್ ರವರು ದೂರುದಾರರ ಪರವಾಗಿ ವಾದ ಮಂಡಿಸಿದರು ಎಂದು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೂರುದಾರರಿಗೆ ಪಾವತಿಸುವಂತೆ ಗ್ರಾಹಕ ನ್ಯಾಯಾಲಯ ಆದೇಶ

**ಚಿಕ್ಕಬಳ್ಳಾಪುರ:** ಎಂ.ಎ. ವೆಂಕಟಸ್ವಾಮಿ ಟ್ಯಾಂಕ್ ಬಂಡೆ ರಸ್ತೆ, ವಾರ್ಡ್ ನಂ:4, ಹಳೆ ಶಿಲ್ಪಾ ಸ್ಕೂಲ್ ರಸ್ತೆ, ಚಿಂತಾಮಣಿ ಇವರು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಬ್ಯಾಂಕ್ ನಲ್ಲಿ ಖಾತೆ ಹೊಂದಿದ್ದು ಪ್ರತಿ ತಿಂಗಳು ಅವರ ಖಾತೆಗೆ ಪೆನ್ಷನ್ ಹಣ ಜಮೆಯಾಗುತ್ತಿದ್ದು, ಹಠಾತ್ತಾಗಿ ತಮ್ಮ ಖಾತೆಯಿಂದ ಹಣ ಕಡಿತಗೊಂಡಿದ್ದು, ಎಂ.ಎ. ವೆಂಕಟಸ್ವಾಮಿ ಅವರ ಗಮನಕ್ಕೆ ಬಂದಿದೆ. ಅವರು ತಮಗಾದ ಅನ್ಯಾಯವನ್ನು ಸರಿಪಡಿಸಲು ಚಿಕ್ಕಬಳ್ಳಾಪುರ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ, ಗ್ರಾಹಕರ ದೂರು ನೀಡಿದ್ದು, ಸದರಿ ದೂರನ್ನು ವಿಚಾರಣೆ ಕೈಗೊಂಡು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಎನ್. ಕುಮಾರ್ ಮತ್ತು ಹೆಚ್ ಜನಾರ್ಧನ್ ಸದಸ್ಯರು, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಸೇವಾ ನ್ಯೂನ್ಯತೆಯನ್ನು ಪರಿಗಣಿಸಿ, ಕೂಡಲೆ ನಿಗದಿತ ಸಮಯದಲ್ಲಿ ಎಂ.ಎ. ವೆಂಕಟಸ್ವಾಮಿ ಅವರಿಗೆ ರೂ. 50,900/- ಶೇ. 6ರ ಹಾಗೂ ಬಡ್ಡಿ ನೀಡುವಂತೆ ಮತ್ತು ದಾವೆ ವೆಚ್ಚ 5,000/- ಮತ್ತು ದುಃಖ ಮತ್ತು ಸಂಕಟಕ್ಕಾಗಿ 3,000 ರೂಗಳನ್ನು ಪಾವತಿಸಲು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಇವರಿಗೆ ಗ್ರಾಹಕ ನ್ಯಾಯಾಲಯ ಆದೇಶ ನೀಡಲಾಗಿದೆ ಎಂದು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರಾಮುವಿ ಕಲಿಕಾರ್ಥಿ ಸಹಾಯ ಕೇಂದ್ರಗಳನ್ನು ತೆರೆಯಲು ಅರ್ಜಿ ಆಹ್ವಾನ.

**ಬೆಂಗಳೂರು:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಉನ್ನತ ಶಿಕ್ಷಣ ಎಲ್ಲರಿಗೂ ಎಲ್ಲೆಡೆ ಎಂಬ ಘೋಷವಾಕ್ಯದೊಂದಿಗೆ ವಿದ್ಯಾರ್ಥಿಗಳ ಮನೆ ಬಾಗಿಲಿಗೆ ಉನ್ನತ ಶಿಕ್ಷಣ ನೀಡಲು ಪ್ರಯತ್ನಿಸುತ್ತಿದ್ದು, ಪ್ರಸ್ತುತ ತುಮಕೂರು ಜಿಲ್ಲೆಯ ನಗರ ಹಾಗೂ ಪ್ರತಿ ತಾಲ್ಲೂಕು ಮತ್ತು ಹೋಬಳಿ ಕೇಂದ್ರಗಳಲ್ಲೂ ಕರಾಮುವಿ ಕಲಿಕಾರ್ಥ ಸಹಾಯ ಕೇಂದ್ರಗಳನ್ನು (ಅಧ್ಯಯನ ಕೇಂದ್ರಗಳನ್ನು) ಪ್ರಥಮ ದರ್ಜೆ ಕಾಲೇಜುಗಳಲ್ಲಿ ತೆರೆಯಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಪ್ರಥಮ ದರ್ಜೆ ಕಾಲೇಜುಗಳು ಕರಾಮುವಿಯ ಅಧಿಕೃತ ವೆಬ್ ಸೈಟ್ www.ksoumysuru.ac.in ಅಥವಾ https://ksouportal.com/reg_sc/StudyCentreRegistration.aspx ನಲ್ಲಿ ಆನ್ಲೈನ್ ನಲ್ಲಿ ಅರ್ಜಿ ಭರ್ತಿ ಮಾಡಿ ನಂತರ ಭರ್ತಿ ಮಾಡಿದ ಅರ್ಜಿಯನ್ನು ★ಡೀನ್ (ಅಧ್ಯಯನ ಕೇಂದ್ರ), ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮುಕ್ತ ಗಂಗೋತ್ರಿ, ಮೈಸೂರು-06 ಇಲ್ಲಿಗೆ ಸಲ್ಲಿಸುವುದು. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 2025ರ ಜನವರಿ 18. ಮುಂದುವರಿದು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಕರಾಮುವಿ ಕಲಿಕಾರ್ಥಿ ಸಹಾಯ ಕೇಂದ್ರಗಳನ್ನು ಸ್ಥಾಪಿಸಲು ಯಾವುದೇ ಶುಲ್ಕ ಪಾವತಿ ಮಾಡುವಂತಿಲ್ಲ. ಮುಕ್ತ ವಿವಿಗೆ ಪ್ರವೇಶಾತಿ ಪಡೆಯುವ ವಿದ್ಯಾರ್ಥಿಗಳು ಪ್ರವೇಶಾತಿಯನ್ನು ಕಲಿಕಾರ್ಥಿ ಸಹಾಯ ಕೇಂದ್ರಗಳಲ್ಲೂ ಆನ್ ಲೈನ್ ಮುಖಾಂತರ ಪಡೆಯಬಹುದು. ಹೆಚ್ಚಿನ ವಿವರಗಳಿಗಾಗಿ: ಕರಾಮುವಿ ತುಮಕೂರು ಪ್ರಾದೇಶಿಕ ಕೇಂದ್ರ, ಟೂಡಾ ಲೇಔಟ್, ರಾಜೀವ್ಗಾಂಧಿ ನಗರ, ಗಂಗಸಂದ್ರ ಮುಖ್ಯರಸ್ತೆ, ಮೆಳೆಕೋಟೆ, ತುಮಕೂರು-572105 ದೂರವಾಣಿ ಸಂಖ್ಯೆ- 0816-2955580, 9844506629, ಅನ್ನು ಸಂಪರ್ಕಿಸಬಹುದು ಎಂದು ಪ್ರಾದೇಶಿಕ ನಿರ್ದೇಶಕರಾದ ಡಾ. ಲೋಕೇಶ . ಆರ್ ರವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಉಚಿತ ಆರೋಗ್ಯ ತಪಾಸಣಾ ಶಿಬಿರ

**ಮೈಸೂರು:** ತಿ.ನರಸೀಪುರ ರಸ್ತೆಯಡಾಕ್ಟರ್ಸ್ ಲೇಔಟ್ ನಲ್ಲಿರುವಯುರೋಕಿಡ್ಸ್ ಶಾಲೆಯಆವರಣದಲ್ಲಿ ಲಯನ್ಸ್‌ಕ್ಲಬ್ ಆಫ್ ಮೈಸೂರುಕ್ಯಾಪಿಟಲ್, ನಾರಾಯಣ ಹೃದಯಾಲಯ ಹಾಗೂ ಡಾ.ನಂದೀಶ್‌ಕಿಡ್ಸ್‌ಕ್ಲಿನಿಕ್‌ಇವರ ಸಂಯುಕ್ತಾಶ್ರಯದಲ್ಲಿ ಶನಿವಾರ 11.01.2025 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಮಕ್ಕಳಿಗೆ ಮತ್ತು ಹಿರಿಯರಿಗಾಗಿಉಚಿತಆರೋಗ್ಯತಪಾಸಣಾಶಿಬಿರವನ್ನು ಏರ್ಪಡಿಸಲಾಗಿದೆ. ಈ ಶಿಬಿರದಲ್ಲಿ ಇಸಿಜಿ, ಬಿಪಿ, ಸಕ್ಕರೆ ಖಾಯಿಲೆ, ಕಣ್ಣುಪರೀಕ್ಷೆ, ದಂತಪರೀಕ್ಷೆ, ತಜ್ಞ ವೈದ್ಯರಿಂದ ಸಲಹೆಯನ್ನು ನಡೆಸಿಕೊಡಲಾಗುವುದು. ಹೆಚ್ಚಿನ ಮಾಹಿತಿಗಾಗಿ 9611249955, 8317493566 ಹಾಗೂ 8123010489 ರನ್ನು ಸಂಪರ್ಕಿಸಬಹುದು.

## ಅಮರಶಿಲ್ಪಿ ಜಾಕಣಾಚಾರಿ ಶಿಲ್ಪಕಲೆಗಳಲ್ಲಿ ಇನ್ನೂ ಜೀವಂತ



**ಕೋಲಾರ:** ಅಮರಶಿಲ್ಪಿ ಜಕಣಾಚಾರಿ ಅವರು ಶಿಲ್ಪ ಕಲೆಗೆ ಅಪಾರ ಕೊಡುಗೆ ನೀಡಿದ್ದು, ಸೂರ್ಯಚಂದ್ರ ಇರುವರೆಗೂ ಇವರ ಹೆಸರು ಅಮರವಾಗಿ ಇರುತ್ತದೆ ಎಂದು ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ಹೇಳಿದರು.

ನಗರದ ಟಿ.ಚನ್ನಯ್ಯ ರಂಗಮಂದಿರದಲ್ಲಿ ಇಂದು ಹಮ್ಮಿಕೊಂಡಿದ್ದ, ಅಮರ ಶಿಲ್ಪಿ ಜಕಣಾಚಾರಿ ಅವರು ಸಂಸ್ಮರಣಾ ದಿನಾರಣೆಯಲ್ಲಿ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು. ಕನ್ನಡ ನಾಡಿನ ಇತಿಹಾಸದಲ್ಲಿ ಹೊಯ್ಸಳರು ತಮ್ಮದೇ ಆದ ಕೊಡುಗೆಯನ್ನು ಶಿಲ್ಪ ಕಲೆಗೆ ನೀಡಿದ್ದಾರೆ. ಇವರಲ್ಲಿ ವಿ?ಣ್ಣುವರ್ಧನ ಅರಸನಕಾಲದಲ್ಲಿ ಕಲೆಯು ಉತ್ತುಂಗ ಶಿಖರದಲ್ಲಿತ್ತು. ವಿ?ಣ್ಣುವರ್ಧನನ ಹೆಂಡತಿ ಶಾಂತಲೆ ನಾಟ್ಯ ರಾಣಿ ಎಂದು ಪ್ರಸಿದ್ಧಿಯಾಗಿದ್ದಳು. ಈ ಕಾಲದಲ್ಲಿದ್ದ ಅಮರಶಿಲ್ಪಿ ಜಕಣಾಚಾರಿ ಬೇಲೂರು ಹಳೆಬೀಡಿನ ಚನ್ನಕೇಶವ ದೇವಾಲಯದಲ್ಲಿ ಶಿಲ್ಪಗಳನ್ನು ಕೆತ್ತನೆ ಮಾಡಿ ಹೆಸರಾಗಿದ್ದಾರೆ ಎಂದರು.

ವಿಶ್ವಕರ್ಮ ಸಮುದಾಯದ ಮುಖಂಡರಾದ ಕಲಾವಿದ ವಿಷ್ಣು ಮಾತನಾಡಿ, ಒಳ್ಳೆಯ ಕೆಲಸ ಹಾಗೂ ಒಳ್ಳೆಯ ಸೇವೆಮಾಡಿದರೆ ಸಮಾಜದಲ್ಲಿ ಶಾಶ್ವತವಾಗಿ ಉಳಿಯುತ್ತೇವೆ. ಎಲ್ಲರೊಂದಿಗೆ ಸೌಹಾರ್ದತೆಯಿಂದ ಇರಬೇಕು. ವಿಶ್ವ ಕರ್ಮಸಮುದಾಯವು ಪಂಚ ಕಸುಬುಗಳನ್ನು ಅವಲಂಬಿಸಿದ್ದು, ಇವುಗಳನ್ನು ಜೀವಂತವಾಗಿ ಉಳಿಸಿಕೊಂಡುಹೋಗಬೇಕು ಎಂದರು. ಇದೆ ಸಂದರ್ಭದಲ್ಲಿ ವಿಶಿಷ್ಟ ಸಾಧನೆಮಾಡಿರುವ ಸಾಧಕರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ವಿಜಯಲಕ್ಷ್ಮಿ, ಜಗದೀಶಚಾರಿ, ಹನುಮಂತಚಾರಿ, ಹರಿ, ಸರ್ವಜ್ಞ ಮೂರ್ತಿ ಸೇರಿದಂತೆ ಸಮಾಜದ ಮುಖಂಡರು, ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಕೋಲಾರ:** 2024-25ನೇ ಶೈಕ್ಷಣಿಕ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಬಿ.ಎಡ್ ವ್ಯಾಸಂಗ ಮಾಡುತ್ತಿರುವ ಕರ್ನಾಟಕ ರಾಜ್ಯದ ಅಲ್ಪಸಂಖ್ಯಾತರ ಸಮುದಾಯ ವರ್ಗದವರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಭೌದ್ಧ, ಸಿಖ್, ಮತ್ತು ಪಾರ್ಸಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನವನ್ನು ನೀಡಲು ಸೇವಾಸಿಂಧು ಪೋರ್ಟಲ್‌ನಲ್ಲಿ ಅರ್ಜಿಯನ್ನು ಸಲ್ಲಿಸಲು ದಿನಾಂಕವನ್ನು ವಿಸ್ತರಿಸಲಾಗಿದೆ. ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು National Council for Teacher Education ನಿಂದ ಮಾನ್ಯತೆ ಪಡೆದಿರುವ ಸರ್ಕಾರಿ/ಅರೆ ಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಕಾಲೇಜುಗಳಲ್ಲಿ ದಾಖಲಾತಿ ಹೊಂದಿ ಬಿ.ಎಡ್ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ರೂ,25,000/ಗಳ ಪ್ರೋತ್ಸಾಹಧನ ನೀಡಲಾಗುವುದು. ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು, ಕೋರ್ಸು ಅವಧಿ-ಪೂರ್ಣಾವಧಿ, ವಿದ್ಯಾರ್ಥಿಯ ಕುಟುಂಬದ ಒಟ್ಟು ವಾರ್ಷಿಕ ಆದಾಯ ರೂ.6.00ಲಕ್ಷ ಮೀರಿರಬಾರದು, ವಿದ್ಯಾರ್ಥಿಗಳನ್ನು ಅನುದಾನದ ಲಭ್ಯತೆಯನುಸಾರ ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು, ಪ್ರತಿ ಶೈಕ್ಷಣಿಕ ವ?ರ್ದಲ್ಲಿ ಹೊಸ (ಈಡಿಜು) ಅರ್ಜಿಗಳನ್ನು ಸಲ್ಲಿಸತಕ್ಕದ್ದು. ರಾಜ್ಯ ಅಲ್ಪಸಂಖ್ಯಾತರಸಮುದಾಯದವಿದ್ಯಾರ್ಥಿಗಳುಸೇವಾಸಿಂಧು ಪೋರ್ಟಲ್ https://sevasindhuservices.karnataka.gov.in/ ನಲ್ಲಿ ಸೂಕ್ತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಲು ಸೂಚಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:20.01.2025 ರವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ವೆಬ್ಸೈಟ್ https://dom.karnataka.gov.in/ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಕಛೇರಿಯ ದೂರವಾಣಿ ಸಂಖ್ಯೆ:08152-295257, ಅಲ್ಪಸಂಖ್ಯಾತರ ಜಿಲ್ಲಾ ಮಾಹಿತಿ ಕೇಂದ್ರ, ಕೋಲಾರ-7760391781, ತಾಲ್ಲೂಕು ಮಾಹಿತಿ ಕೇಂದ್ರ ಬಂಗಾರಪೇಟೆ-9964944123, ತಾಲ್ಲೂಕು ಮಾಹಿತಿ ಕೇಂದ್ರ ಮಾಲೂರು-9844445205, ತಾಲ್ಲೂಕು ಮಾಹಿತಿ ಕೇಂದ್ರ ಶ್ರೀನಿವಾಸಪುರ-9535466160 ಮತ್ತು ತಾಲ್ಲೂಕು ಮಾಹಿತಿ ಕೇಂದ್ರ ಮುಳಬಾಗಿಲು-7899266051 ಸಂಪರ್ಕಿಸಬಹುದು.

### ಮುಂಜಾಗ್ರತೆ ಇರಲಿ – ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ

# HMPV ವೈರಸ್ ಭಯ ಬೇಡ

**ಕೋಲಾರ:** ರಾಜ್ಯದಲ್ಲಿ HMPV (ಹ್ಯೂಮನ್ ಮೆಟಾನ್ಯೂಮೊ ವೈರಸ್) ಸೋಂಕು ವರದಿಯಾಗಿರುವ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕಾ ಕ್ರಮವಾಗಿ ಊಒಕಗಿ ರೋಗ ಲಕ್ಷಣಗಳು ಕಂಡು ಬಂದ ಕೂಡಲೇ ವೈದ್ಯರನ್ನು ಸಂಪರ್ಕಿಸುವಂತೆ ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.



ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ಆರೋಗ್ಯ ಇಲಾಖೆ ಹೊರಡಿಸಿರುವ ಮಾರ್ಗಸೂಚಿಯನ್ವಯ ಕೆಮ್ಮುವಾಗ, ಸೀನುವಾಗ ಬಾಯಿ ಮತ್ತು ಮೂಗನ್ನು ಕರವಸ್ತ ಅಥವಾ ಟಿಶ್ಯೂ ಪೇಪರ್‌ನಿಂದ ಮುಚ್ಚಿಕೊಳ್ಳಬೇಕು. ಕೈಗಳನ್ನು ಆಗಾಗ ಸಾಬೂನು ಅಥವಾ ಸ್ಯಾನಿಟೈಸರ್‌ನಿಂದ ತೊಳೆದು ಕೊಳ್ಳಬೇಕು. ಜ್ವರ, ನೆಗಡಿ, ಕೆಮ್ಮು ಇದ್ದಲ್ಲಿ ಸಾರ್ವಜನಿಕ ಸ್ಥಳಗಳಿಂದ ದೂರವಿರಬೇಕು. ಬಳಸಿದ ಟಿಶ್ಯೂ ಕರ ವಸ್ತವನ್ನು ಪುನಃ ಬಳಕೆ ಮಾಡಬಾರದು ಅನಾರೋಗ್ಯದ ಲಕ್ಷಣಗಳಿದ್ದವರು ಸಭೆ-ಸಮಾರಂಭದಲ್ಲಿ ಭಾಗವಹಿಸದಂತೆ ಸೂಚಿಸಲಾಗಿದೆ.

ಶಾಲಾ ಮಕ್ಕಳಲ್ಲಿ ಹಾಗೂ ಅಂಗನವಾಡಿ ಮಕ್ಕಳಲ್ಲಿ HMPV ಸೋಂಕು ಹೆಚ್ಚಾಗಿ ಕಂಡು ಬರುವ ಸಾಧ್ಯತೆಯಿರುವುದರಿಂದ ಶೀತ, ನೆಗಡಿ, ಕೆಮ್ಮು, ಜ್ವರದಿಂದ ಬಳಲುತ್ತಿರುವ ಮಕ್ಕಳನ್ನು ವೈದ್ಯರ ಬಳಿ ಕರೆದೊಯ್ದು ಸಕಾಲದಲ್ಲಿ ಚಿಕಿತ್ಸೆ ಕೊಡಿಸಬೇಕು. ರೋಗ ಲಕ್ಷಣಗಳಿರುವ ಮಕ್ಕಳನ್ನು ಶಾಲೆಗೆ ಕಳುಹಿಸದೆ ಮನೆಯಲ್ಲೇ ಆರೈಕೆ ಮಾಡುವ ಬಗ್ಗೆ ಪೊಷಕರಲ್ಲಿ ಜಾಗೃತಿ ಮೂಡಿಸಬೇಕೆಂದು ಜಿಲ್ಲಾ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಧಿಕಾರಿ ಹಾಗೂ ಶಾಲಾಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು

ಮುಂಜಾಗ್ರತಾ ಕ್ರಮವಾಗಿ ಜಿಲ್ಲೆಯ ಎಲ್ಲಾ ತಾಲ್ಲೂಕು ಆಸ್ಪತ್ರೆ ಹಾಗೂ ಜಿಲ್ಲಾಸ್ಪತ್ರೆಯಲ್ಲಿ ಹಾಗೂ ಶಾಲಾ ಆವರಣಗಳಲ್ಲಿ ಸ್ವಚ್ಛತೆ ಕಾಪಾಡಿಕೊಂಡು ಪ್ರಮುಖ ಆಸ್ಪತ್ರೆಗಳಲ್ಲಿ ಪ್ರತ್ಯೇಕ ವಾರ್ಡನ್ನು ಮೀಸಲಿಡಬೇಕು. ಅಗತ್ಯ ಪರೀಕ್ಷಾ ಪರಿಕರಗಳನ್ನು ಖರೀದಿಸಿ ದಾಸ್ತಾನು ಮಾಡಬೇಕು ಎಂದು ಸೂಚನೆ ನೀಡಿದರು.




ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ।ಶ್ರೀನಿವಾಸ್ ಸಭೆಗೆ ಮಾಹಿತಿ ನೀಡುತ್ತಾ ಆರೋಗ್ಯ ಇಲಾಖೆಯ ವರದಿಯನುಸಾರ HMPV ರೋಗವು ಸಾಮಾನ್ಯವಾದ ಕೆಮ್ಮು ತೀತ ಜ್ವರ, ಮೂಗು ಕಾಲುವುದು ತಲೆ ನೋವಿನಂತಹ ಲಕ್ಷಣಗಳನ್ನು ಹೊಂದಿರುತ್ತದೆ. ವಿಶೇಷವಾಗಿ ಕಿರಿಯ ಮತ್ತು ಹಿರಿಯ ವಯಸ್ಸಿನವರಲ್ಲಿ ಈ ರೋಗ ಲಕ್ಷಣಗಳು ಕಂಡು ಬರುತ್ತದೆ. ರಾಜ್ಯದ ಬೆಂಗಳೂರಿನ ಖಾಸಗಿ ಆರೋಗ್ಯ ಕೇಂದ್ರದಲ್ಲಿ 2 ಊಒಕಗಿ ಸೋಂಕಿತ ಪ್ರಕರಣಗಳು ದೃಢಪಟ್ಟಿದ್ದು, ಪ್ರಕರಣದಲ್ಲಿ ಈಗಾಗಲೇ ಚಿಕಿತ್ಸೆ ನೀಡಿ ಬಿಡುಗಡೆ ಮಾಡಲಾಗಿದೆ ಉಳಿದೊಂದು ಪ್ರಕರಣವನ್ನು ಶೀಘ್ರದಲ್ಲೇ ಬಿಡುಗಡೆ ಮಾಡುವ ಬಗ್ಗೆ ತಿಳಿದು ಬಂದಿದೆ

ಊಒಕಗಿ ವೈರಸ್‌ನಿಂದ ಕೆಮ್ಮು ಜ್ವರ ಉಸಿರಾಟದ ತೊಂದರೆ ಸೇರಿದಂತೆ ಜ್ವರ ತರಹದ ರೋಗಲಕ್ಷಣಗಳು ಉಂಟಾಗುತ್ತವೆ. ತೀವ್ರಕರವಾದ ಪ್ರಕರಣಗಳಲ್ಲಿ ಬ್ರಾಂಕೈಟೀಸ್ ಅಥವಾ ನ್ಯೂಮೋನಿಯಾಕ್ಕೆ ಕಾರಣವಾಗ ಬಹುದು. ವಿಶೇಷವಾಗಿ ಚಿಕ್ಕಮಕ್ಕಳು, ವೃದ್ಧರು ಸೇರಿದಂತೆ ಕಡಿಮೆ ರೋಗನಿರೋಧಕ ಶಕ್ತಿ ಹೊಂದಿರುವ ವ್ಯಕ್ತಿಗಳಲ್ಲಿ ಈ ರೋಗ ಹೆಚ್ಚಾಗಿ ಕಂಡು ಬರುತ್ತದೆ. ಊಒಕಗಿ ಸೋಂಕಿನ ಬಗ್ಗೆ ಸಾರ್ವಜನಿಕರು ಯಾವುದೇ ಭಯ-ಆತಂಕ ಪಡುವ ಅಗತ್ಯವಿಲ್ಲವೆಂದು ಸ್ಪಷ್ಟಪಡಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಪ್ರವೀಣ್ ಬಾಗೇವಾಡಿ, ಜಿಲ್ಲಾ ಸರ್ವೇಕ್ಷಣಾ ಅಧಿಕಾರಿ ಡಾ.ಜಗದೀಶ್, ಜಿಲ್ಲಾ ಮುಖ್ಯ ಶಸ್ತ್ರಚಿಕಿತ್ಸಕಿ ಡಾ.ಮಮತ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕ ನಾರಾಯಣ ಸ್ವಾಮಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೃಷ್ಣಮೂರ್ತಿ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಬಾಲಕೃಷ್ಣ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ವೈರಸ್ ಪಾಲಿಸಬೇಕಾದ ಮುಂಜಾಗ್ರತಾ ಕ್ರಮಗಳು

ಚೀನಾದಲ್ಲಿ ಹೂಮನ್ ಮೆಟಾನಿಮೋವೈರಸ್ HMPV ಕಾಯಿಲೆಯ ಹರಡುವಿಕೆಯ ಬಗ್ಗೆ ಮಾಧ್ಯಮಗಳಲ್ಲಿ ಇತ್ತೀಚಿನ , MoH&FW, Gol 04/01/2025 doch HMPV data a ವೈರಸ್‌ನಂತೆ, ವಿಶೇಷವಾಗಿ ಮಕ್ಕಳು ಮತ್ತು ವಯಸ್ಸಾದವರಲ್ಲಿ, ಚಳಿಗಾಲದಲ್ಲಿ ಶೀತ ಮತ್ತು ಜ್ವರ ತರಹದ ರೋಗಲಕ್ಷಣಗಳನ್ನು ಉಂಟುಮಾಡುತ್ತದೆ ಎಂದು ಹೇಳಿಕೆಯನ್ನು ನೀಡಿತು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ, ರಾಜ್ಯದಲ್ಲಿ ಸಾಮಾನ್ಯ, ಶೀತ, HMPV ಮತ್ತು HMPV ನಂತಹ ಚಾಲ್ತಿಯಲ್ಲಿರುವ ಉಸಿರಾಟದ ಸೋಂಕುಗಳ ಡೇಟಾವನ್ನು ವಿಶ್ಲೇಷಿಸಿದೆ ಮತ್ತು ಹಿಂದಿನ ವರ್ಷಕ್ಕೆ ಹೋಲಿಸಿದರೆ ಡಿಸೆಂಬರ್ 2024 ರಲ್ಲಿ ವರದಿಯಾದ ಪ್ರಕರಣಗಳ ಸಂಖ್ಯೆಯಲ್ಲಿ ಯಾವುದೇ ಗಮನಾರ್ಹ ಏರಿಕೆ ಕಂಡುಬಂದಿಲ್ಲ. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಇಲಾಖೆಯು ನಾಗರಿಕರು ತಮ್ಮನ್ನು ತಾವು ರಕ್ಷಿಸಿಕೊಳ್ಳಲು ಮತ್ತು ಸೋಂಕು ಹರಡುವುದನ್ನು ತಡೆಯಲು ಕೆಲವು ಮಾಡಬೇಕಾದ ಮತ್ತು ಮಾಡಬಾರದ ಕೆಲಸಗಳನ್ನು ಅನುಸರಿಸುವಂತೆ ಮನವಿ ಮಾಡಿದೆ.

### ಮಾಡಬೇಕಾದವು

**ಕೆಮ್ಮುವಾಗ ಅಥವಾ ಸೀನುವಾಗ ನಿಮ್ಮ ಬಾಯಿ ಮತ್ತು ಮೂಗನ್ನು ಕರವಸ್ತ ಅಥವಾ ಟಿಶ್ಯೂ ಪೇಪರ್‌ನಿಂದ ಮುಚ್ಚಿಕೊಳ್ಳಿ. ಕೈಗಳನ್ನು ಸಾಬೂನು ಮತ್ತು ನೀರು ಅಥವಾ ಅಲ್ಕೋಹಾಲ್ ಆಧಾರಿತ ಸ್ಯಾನಿಟೈಜರ್‌ನಿಂದ ಹೆಚ್ಚಾಗಿ ತೊಳೆಯಿರಿ. ಜನಸಂದಣಿ ಇರುವ ಸ್ಥಳಗಳನ್ನು ತಪ್ಪಿಸಿ. ಜ್ವರ, ಕೆಮ್ಮು ಮತ್ತು ಸೀನುವಿಕೆ ಇದ್ದಲ್ಲಿ ಸಾರ್ವಜನಿಕ ಸ್ಥಳಗಳಿಂದ ದೂರವಿರಿ.ಪ್ರಸರಣವನ್ನು ಕಡಿಮೆ ಮಾಡಲು ಹೊರಾಂಗಣ ಗಾಳಿಯೊಂದಿಗಿನ ವಾತಾವರಣವನ್ನು ಬಳಸಲು ಶಿಫಾರಸು ಮಾಡಲಾಗಿದೆ. ಮನೆಯಲ್ಲಿಯೇ ಇರಿ ಮತ್ತು ನೀವು ಅನಾರೋಗ್ಯದಿಂದ ಬಳಲುತ್ತಿದ್ದರೆ ಇತರರೊಂದಿಗೆ ಸಂಪರ್ಕವನ್ನು ಮಿತಿಗೊಳಿಸಿ. ಸಾಕಷ್ಟು ನೀರು ಕುಡಿಯಿರಿ ಮತ್ತು ಪೌಷ್ಟಿಕ ಆಹಾರವನ್ನು ಸೇವಿಸಬೇಕು.**

### ಮಾಡಬಾರದು

**ಟಿಶ್ಯೂ ಪೇಪರ್ ಮತ್ತು ಕರವಸ್ತ ಮರುಬಳಕೆ,ಅನಾರೋಗ್ಯದ ಜನರೊಂದಿಗೆ ನಿಕಟ ಸಂಪರ್ಕ, ಟವೆಲ್, ಹಾಸಿಗೆ ಇತ್ಯಾದಿಗಳನ್ನು ಹಂಚಿಕೊಳ್ಳುವುದು. ಕಣ್ಣು, ಮೂಗು ಮತ್ತು ಬಾಯಿಯನ್ನು ಆಗಾಗ್ಗೆ ಸ್ಪರ್ಶಿಸುವುದು ಸಾರ್ವಜನಿಕ ಸ್ಥಳಗಳಲ್ಲಿ ಉಗುಳುವುದು, ವೈದ್ಯರನ್ನು ಸಂಪರ್ಕಿಸದೆ ಸ್ವ-ಔಷಧಿ ತೆಗೆದುಕೊಳ್ಳುವುದು. ಪ್ರಸ್ತುತ HMPV ಹರಡುವ ಬಗ್ಗೆ ಭಯಪಡುವ ಅಗತ್ಯವಿಲ್ಲ. ಕರ್ನಾಟಕ ಸರ್ಕಾರ ಆರೋಗ್ಯ ಇಲಾಖೆಯ ನಿರ್ದೇಶಕರು, NCDC, MOH&FW, GOI ನವದೆಹಲಿಯ ಸಮನ್ವಯದೊಂದಿಗೆ ಹಾಗೂ ಜಿಲ್ಲಾ ಸರ್ವೇಕ್ಷಣ ಘಟಕ ಪರಿಸ್ಥಿತಿಯನ್ನು ನಿಕಟವಾಗಿ ಮೇಲ್ವಿಚಾರಣೆ ಮಾಡುತ್ತಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಶ್ರೀನಿವಾಸ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

## ಬ್ಯಾಟರಿ ಚಾಲಿತ ವ್ಹೀಲ್ ಚೇರ್ ಯೋಜನೆಗೆ ಅರ್ಜಿ

**ಕೋಲಾರ:** ಪ್ರಸಕ್ತ ಸಾಲಿನಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯ ಫಲಾನುಭವಿ ಆಧಾರಿತ ಯೋಜನೆಯನ್ನು ಸೇವಾಸಿಂಧು ತಂತ್ರಾಂಶದ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ 75% ದೈಹಿಕ ವಿಕಲತೆಯನ್ನು ಹೊಂದಿರುವ ವಿಕಲಚೇತನರಿಗೆ ಬ್ಯಾಟರಿ ಚಾಲಿತ ವ್ಹೀಲ್ ಚೇರ್ ಯೋಜನೆಗೆ ಅರ್ಜಿ ಆನ್‌ಲೈನ್ ಸೇವಾ ಸಿಂಧು ಪೋರ್ಟಲ್ https://suvidha.government.gov.in ನಲ್ಲಿ ಜನವರಿ 21ರ ವರೆಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ.08152-200010, ಕೋಲಾರ ತಾಲ್ಲೂಕಿನ ವಿವಿದ್ದೋದ್ದೇಶ ಪುರ್ನವಸತಿ ಕಾರ್ಯಕರ್ತರುಗಳ ರಾಜೇಶ್ ಮೊ.ಸಂ.9986579688, ಬಂಗಾರಪೇಟೆ ಮತ್ತು ಕೆ.ಜಿ.ಎಫ್ ತಾಲ್ಲೂಕಿನ ಸುನಿಲ್ ಕುಮಾರ್-8711924638, ಮಾಲೂರು ತಾಲ್ಲೂಕಿನ ಚೌಡಪ್ಪ-8904317589, ಮುಳಬಾಗಿಲು ತಾಲ್ಲೂಕಿನ ಬಾಬು ಎಂ.ಎನ್-9739424583, ಶ್ರೀನಿವಾಸಪುರ ತಾಲ್ಲೂಕಿನ ಶ್ರೀನಿವಾಸಗೌಡ-7829126938 ರವರನ್ನು ಸಂಪರ್ಕಿಸಬಹುದು ಎಂದು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಲೆ ಮಹದೇಶ್ವರ ಬೆಟ್ಟಕ್ಕೆ ಜಿಲ್ಲಾ ಉಸ್ತುವಾರಿ ಸಚಿವರ ಭೇಟಿ

**ಚಾಮರಾಜನಗರ:** ಪಶು ಸಂಗೋಪನೆ,ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ವೆಂಕಟೇಶ್ ಅವರು ಮಲೆ ಮಹದೇಶ್ವರ ಬೆಟ್ಟಕ್ಕೆ ಇಂದು ಭೇಟಿ ನೀಡಿ ಸಚಿವ ಸಂಪುಟ ಸಭೆ ಸಂಬಂಧ ಸ್ಥಳ ಹಾಗೂ ಪೂರ್ವ ಸಿದ್ದತೆಗಳನ್ನು ಪರಿಶೀಲಿಸಿದರು.

ಮಲೆ ಮಹದೇಶ್ವರ ಬೆಟ್ಟದ ದೀಪದ ಗಿರಿ ಒಡ್ಡುವಿನಲ್ಲಿರು ಮಲೆಮಹದೇಶ್ವರರ ಬೃಹತ್ ಪ್ರತಿಮೆ ಇರುವ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.ಅಧಿಕಾರಿಗಳೊಂದಿಗೆ ಚರ್ಚಿಸಿ ವಿವರ ಪಡೆದರು.

ಬಳಿಕ ಮಲೈಮಹದೇಶ್ವರ ದೇವಾಲಯಕ್ಕೆ ಭೇಟಿ ನೀಡಿ ದೇವರ ದರ್ಶನ ಪಡೆದರು.

ಶಾಸಕರಾದ ಎಂ.ಆರ್.ಮಂಜುನಾಥ್,ಪ್ರಾದೇಶಿಕ ಆಯುಕ್ತರಾದ ಡಿ.ಎಸ್.ರಮೇಶ್,ಜಿಲ್ಲಾಧಿಕಾರಿ ಶಿಲ್ಪಾ ನಾಗ್ ,ಡಿಐಜಿಪಿ ಡಾ.ಬೋರಲಿಂಗಯ್ಯ ,ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಕಧಿಕಾರಿ ಮೋನಾ ರೋತ್,ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ.ಕವಿತ,ಉಪವಿಭಾಗಧಿಕಾರಿ ಬಿ.ಆರ್. ಮಹೇಶ್,ಮಲೈಮಹದೇಶ್ವರ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಗಳಾ ಎ.ಇ.ರಘು ಇನ್ನಿತರರು ಇದ್ದರು.



# ರಾಜ್ಯದ 224 ವಿಧಾನಸಭಾ ಕ್ಷೇತ್ರಗಳ ಅಂತಿಮ ಪಟ್ಟಿ

**ಬೆಂಗಳೂರು:** ಅರ್ಹತಾ ದಿನಾಂಕ 2025 ಜನವರಿ 1 ರ ಮತದಾರರ ಪಟ್ಟಿ ವಿಶೇಷಸಂಕ್ಷಿಪ್ತ ಪರಿ?ಕರಣೆ ಅಡಿಯಲ್ಲಿ ಪರಿಷ್ಕರಣೆ ಚಟುವಟಿಕೆಗಳ ವೇಳಾಪಟ್ಟಿಯ ಪ್ರಕಾರ ಮತ್ತು ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಹಕ್ಕುಗಳು ಮತ್ತು ಆಕ್ಷೇಪಣೆಗಳನ್ನು ಪ್ರಕ್ರಿಯೆಗೊಳಿಸಿದ ನಂತರ, ರಾಜ್ಯದ 224 ವಿಧಾನಸಭಾ ಕ್ಷೇತ್ರಗಳ ಅಂತಿಮ ಮತದಾರರ ಪಟ್ಟಿಯನ್ನು ಇಂದು ಸಂಬಂಧಿಸಿದ ಎಲ್ಲಾ ಕಚೇರಿಗಳಲ್ಲಿ ಪ್ರಕಟಿಸಲಾಗಿದೆ. ಎಲ್ಲಾ ಜಿಲ್ಲೆಗಳ ಉಪ ಆಯುಕ್ತರು, ಚುನಾವಣಾ ನೋಂದಣಿ ಅಧಿಕಾರಿಗಳು, ಸಹಾಯಕ ಮತದಾರರ ಪಟ್ಟಿ ನೋಂದಣಿ ಅಧಿಕಾರಿಗಳು ಮತ್ತು ಎಲ್ಲಾ ಮತಗಟ್ಟೆಗಳಲ್ಲೂ ಸಹ ಪ್ರಕಟಿಸಲಾಗಿದೆ.

ಸಮಗ್ರ ಕರಡು ಮತದಾರರ ಪಟ್ಟಿ ಪ್ರಕಟಣೆ 2024 ಅಕ್ಟೋಬರ್ 29, ಹಕ್ಕುಗಳು ಮತ್ತು ಆಕ್ಷೇಪಣೆಗಳ ಅವಧಿ 2024 ನೇ ಅಕ್ಟೋಬರ್ 29 ರಿಂದ 2024ನೇ ನವೆಂಬರ್ 28 ರವರೆಗೆ, ವಿಶೇಷಅಭಿಯಾನದ ದಿನಾಂಕಗಳು 2024ನೇ ನವೆಂಬರ್ 09, 10, 23 ಮತ್ತು 24, ಹಕ್ಕುಗಳು ಮತ್ತು ಆಕ್ಷೇಪಣೆಗಳ ವಿಲೇವಾರಿ ಡಿಸೆಂಬರ್ 24, 2025ನೇ ಜನವರಿ 06 ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗಿದೆ.

ಸಾಮಾನ್ಯ ಮತದಾರರು: ಕರಡು ಮತದಾರರ ಪಟ್ಟಿ-2025 ರ ಪ್ರಕಾರ, ಒಟ್ಟು ಸಾಮಾನ್ಯ ಮತದಾರರ ಸಂಖ್ಯೆ 5,51,04,782, ಇದರಲ್ಲಿ 2,75,31,635 ಪುರುಷಮತದಾರರು, 2,75,68,082 ಮಹಿಳಾ ಮತದಾರರು ಮತ್ತು 5065 ಇತರ ಮತದಾರರು ಸೇರಿದ್ದಾರೆ. ಅಂತಿಮ ಮತದಾರರ ಪಟ್ಟಿ-2025 ರಲ್ಲಿ, ಒಟ್ಟು ಸಾಮಾನ್ಯ ಮತದಾರರು 5,52,08,565 ಕ್ಕೆ ಏರಿಕೆಯಾಗಿದ್ದು, ಇದರಲ್ಲಿ 2,75,62,634 ಪುರುಷಮತದಾರರು, 2,76,40,836 ಮಹಿಳಾ ಮತದಾರರು ಮತ್ತು 5095 ಇತರ ಮತದಾರರು ಸೇರಿದ್ದಾರೆ. ಕರಡು ಪಟ್ಟಿಗೆ ಹೋಲಿಸಿದರೆ ಒಟ್ಟು ಮತದಾರರಲ್ಲಿ ನಿವ್ವಳ ಹೆಚ್ಚಳ 1,03,783 ಆಗಿದ್ದು, ಮಹಿಳಾ ಮತದಾರರು 72,754, ಪುರುಷಮತದಾರರು 30,999 ಮತ್ತು ಇತರ ಮತದಾರರು 30 ರ?ು ಏರಿಕೆ ಕಂಡಿದ್ದಾರೆ.

224 ವಿಧಾನಸಭಾ ಕ್ಷೇತ್ರಗಳಲ್ಲಿ, ಬೆಂಗಳೂರು ನಗರ ಜಿಲ್ಲೆಯ ವಿಧಾನಸಭಾ ಕ್ಷೇತ್ರ 176 ? ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರವು ಅತಿ ಹೆಚ್ಚು ಮತದಾರರನ್ನು ಒಟ್ಟು 7,67,416 ಹೊಂದಿದೆ, ಇದಕ್ಕೆ ವಿರುದ್ಧವಾಗಿ, ಚಿಕ್ಕಮಗಳೂರು ಜಿಲ್ಲೆಯ ವಿಧಾನಸಭಾ ಕ್ಷೇತ್ರ 123- ಶೃಂಗೇರಿ ವಿಧಾನಸಭಾ ಕ್ಷೇತ್ರವು ಕಡಿಮೆ ಸಂಖ್ಯೆಯ 1,68,882 ಮತದಾರರನ್ನು ಹೊಂದಿದೆ. ಹಿಂದಿನ ವರ್ಷ 2024 ರ ಮತ್ತು ಪ್ರಸ್ತುತ ವರ್ಷ 2025 ರ ಕರಡು ಪಟ್ಟಿಯ ಸಾಮಾನ್ಯ ಮತದಾರರ ಹೋಲಿಕೆ ಮಾಡಲಾಗಿದೆ:

2024ರ ಕ್ಯಾಲೆಂಡರ್ ವರ್ಷದಲ್ಲಿ (ಕರಡು ಪಟ್ಟಿ) ಪುರುಷ2,68,02,838, ಮಹಿಳೆ 2,65,69,428, ಇತರೆ 4,896, ಒಟ್ಟು 5,33,77,162, 2024ರ (ಅಂತಿಮ ಪಟ್ಟಿ) ಪುರುಷ2,69,32,660, ಮಹಿಳೆ 2,68,45,955, ಇತರೆ 4,919, ಒಟ್ಟು 5,37,83,534, 2024ರ (ಚುನಾವಣಾ ಪಟ್ಟಿ) ಪುರುಷ2,73,66,508, ಮಹಿಳೆ 2,73,54,155, ಇತರೆ 5,012, ಒಟ್ಟು 5,47,25,675, 2025ರ (ಕರಡು ಪಟ್ಟಿ) ಪುರುಷ2,75,31,635, ಮಹಿಳೆ 2,75,68,082, ಇತರೆ 5,065, ಒಟ್ಟು 5,51,04,782, 2025ರ (ಅಂತಿಮ ಪಟ್ಟಿ) ಪುರುಷ2,75,62,634, ಮಹಿಳೆ 2,76,40,836, ಇತರೆ 5,095, ಒಟ್ಟು 5,52,08,565 ಆಗಿದ್ದು, ಒಟ್ಟು ನಿವ್ವಳ ಹೆಚ್ಚಳ (ಕರಡು ಪಟ್ಟಿಯಿಂದ ಅಂತಿಮ ಪಟ್ಟಿವರೆಗೆ ) ಪುರುಷ30,999, ಮಹಿಳೆ 72,754, ಇತರೆ 30, ಒಟ್ಟು 1,03,783 ಹೆಚ್ಚಳವಾಗಿದೆ. ಅಂತಿಮ ಮತದಾರರ ಪಟ್ಟಿ 2025 ಗಾಗಿ ಜಿಲ್ಲಾವಾರು ಸಾಮಾನ್ಯ ಮತದಾರರು ಮತ್ತು ಅಂತಿಮ ಮತದಾರರ ಪಟ್ಟಿ 2025 ಗಾಗಿ ವಿಧಾನಸಭಾ ಕ್ಷೇತ್ರವಾರು ಸಾಮಾನ್ಯ ಮತದಾರರನ್ನು ಅನುಕ್ರಮವಾಗಿ ಅನುಬಂಧ-1 ಮತ್ತು 2 ರಲ್ಲಿ ನೀಡಲಾಗಿದೆ.

ಶೇಕಡಾ ನೂರರಷ್ಟು ಫೋಟೋ ಒಳಗೊಂಡ ಮತದಾರರ ಗುರುತಿನ ಚೀಟಿಯನ್ನು ವಿತರಿಸಲಾಗಿದೆ. ಮತದಾರರ ಗುರುತಿನ ಚೀಟಿಗಳನ್ನು ಮತದಾರರ ವಿಳಾಸಗಳಿಗೆ ಸ್ಪೀಡ್ ಪೋಸ್ಟ್ ಮೂಲಕ ರವಾನಿಸಲಾಗುತ್ತಿದೆ. 2025 ರ ನವೆಂಬರ್ ಅಂತ್ಯದ ವೇಳೆಗೆ, 14,99,447 ಮತದಾರರ ಗುರುತಿನ ಚೀಟಿಗಳನ್ನು ಯಶಸ್ವಿಯಾಗಿ ವಿತರಿಸಲಾಗಿದೆ. ಹೆಚ್ಚುವರಿಯಾಗಿ, ಇನ್ನೂ 6,02,863 ಮತದಾರರ ಗುರುತಿನ ಚೀಟಿಗಳನ್ನು ಪ್ರಸ್ತುತ ಮತದಾರರಿಗೆ ಕಳುಹಿಸಿ ಕೊಡಲು ಕ್ರಮ ಕೈಗೊಳ್ಳಲಾಗಿದೆ.

ಮತಗಟ್ಟೆಗಳು: ರಾಜ್ಯದಲ್ಲಿ ಅಂತಿಮ ಮತದಾರರ ಪಟ್ಟಿ-2025 ರ ಪ್ರಕಾರ ಮತಗಟ್ಟೆಗಳ ಸಂಖ್ಯೆ 58,932 ಮತ್ತು 110 ಮತಗಟ್ಟೆಗಳನ್ನು ಸೇರಿಸಲಾಗಿದೆ, ಇವುಗಳಲ್ಲಿ 12 ಮತಗಟ್ಟೆಗಳ ತರ್ಕಬದ್ಧಗೊಳಿಸುವಿಕೆಯ ಸಮಯದಲ್ಲಿ ವಿಲೀನಗೊಳಿಸಲಾಗಿದೆ ಮತ್ತು 98 ಮತಗಟ್ಟೆಗಳ ನಿವ್ವಳ ಹೆಚ್ಚಳವಾಗಿದೆ. ಹಿಂದಿನ ವರ್ಷಗಳ ಮತದಾನ ಕೇಂದ್ರಗಳ ಹೋಲಿಕೆ ನೀಡಲಾಗಿದೆ: 2024ರ (ಕರಡು ಪಟ್ಟಿ) 58,834, 2024ರ (ಅಂತಿಮ ಪಟ್ಟಿ) 58,834, 2024ರ (ಚುನಾವಣಾ ಸಮಯದ ಪಟ್ಟಿ) (ಟಿಭಿಟಣಜಟಿರ ಂಣಥಟಚಿಡಿಥಿ ಕಖ) 58,871, 2025ರ (ಕರಡು ಪಟ್ಟಿ) 58,932, (ಅಂತಿಮ ಪಟ್ಟಿ) 58,932 ಇದೆ.

ಅಂತಿಮ ಮತದಾರರ ಪಟ್ಟಿಯ ಪ್ರಕಾರ ಪ್ರತಿ ಮತದಾನ ಕೇಂದ್ರಕ್ಕೆ ಸರಾಸರಿ 937ಮತದಾರರನ್ನು ಒಳಗೊಂಡಿದೆ.

2024 ರ ಅಂತಿಮ ಪಟ್ಟಿಗಳು ಮತ್ತು 2025 ರ ಅಂತಿಮ ಪಟ್ಟಿಗಳ ನಡುವೆ, ಒಟ್ಟು 20,84,125 ಸೇರ್ಪಡೆಗಳು, 7,04,339 ಅಳಿಸುವಿಕೆಗಳು ಮತ್ತು 12,92,271 ಮಾರ್ಪಾಡುಗಳನ್ನು ಕೈಗೊಳ್ಳಲಾಗಿದೆ.

ಅಂತಿಮ ಮತದಾರರ ಪಟ್ಟಿ 2024 ರಿಂದ ಚುನಾವಣಾ ಮತದಾರರ ಪಟ್ಟಿ 2024 ಸೇರ್ಪಡೆಗಳು 9,96,700, ಅಳಿಸುವಿಕೆಗಳು 98,819, ಮಾರ್ಪಾಡುಗಳು 4,11,567, ಚುನಾವಣಾ ಮತದಾರರ ಪಟ್ಟಿ 2024 ರಿಂದ ಕರಡು ಮತದಾರರ ಪಟ್ಟಿ 2025ರಲ್ಲಿ ಸೇರ್ಪಡೆಗಳು 7,42,268, ಅಳಿಸುವಿಕೆಗಳು 3,64,146, ಮಾರ್ಪಾಡುಗಳು 6,49,969. ಕರಡು ಮತದಾರರ ಪಟ್ಟಿ 2025 ರಿಂದ ಅಂತಿಮ ಮತದಾರರ ಪಟ್ಟಿ 2025ವರೆಗೆ ಸೇರ್ಪಡೆಗಳು 3,45,157, ಅಳಿಸುವಿಕೆಗಳು 2,41,374, ಮಾರ್ಪಾಡುಗಳು 2,30,735.ಟ್ಟು ವ್ಯತ್ಯಾಸ (ಅಂತಿಮ ಮತದಾರರ ಪಟ್ಟಿ 2024 ರಿಂದ ಅಂತಿಮ ಮತದಾರರ ಪಟ್ಟಿ 2025) ಸೇರ್ಪಡೆಗಳು 20,84,125, ಅಳಿಸುವಿಕೆಗಳು 7,04,339, ಮಾರ್ಪಾಡುಗಳು 12,92,271. ಅಂತಿಮ ಮತದಾರರ ಪಟ್ಟಿ 2025 (ಕರಡು ಮತದಾರರ ಪಟ್ಟಿ 2025 ರಿಂದ ಅಂತಿಮ ಮತದಾರರ ಪಟ್ಟಿ 2025) ಗಾಗಿ ಜಿಲ್ಲಾವಾರು ಸೇರ್ಪಡೆಗಳು, ಅಳಿಸುವಿಕೆಗಳು ಮತ್ತು ಮಾರ್ಪಾಡುಗಳು ಮತ್ತು ಅಂತಿಮ ಮತದಾರರ ಪಟ್ಟಿ 2025ಗಾಗಿ ವಿಧಾನಸಭಾ ಕ್ಷೇತ್ರವಾರು ಸೇರ್ಪಡೆಗಳು, ಅಳಿಸುವಿಕೆಗಳು ಮತ್ತು ಮಾರ್ಪಾಡುಗಳು (ಕರಡು ಮತದಾರರ ಪಟ್ಟಿ 2025 ರಿಂದ ಅಂತಿಮ ಮತದಾರರ ಪಟ್ಟಿ 2025 2 ರಲ್ಲಿ ನೀಡಲಾಗಿದೆ) ಈ ಕುರಿತು ವಿವರವಾದ ಮಾಹಿತಿಯು ನೀಡಲಾಗಿದೆ.

## ಮದ್ದೇರಿ ಸೊಸೈಟಿ ಅಧ್ಯಕ್ಷರಾಗಿ ಚೆಂಜಿಮಲೆ ರಮೇಶ್ ಆಯ್ಕೆ

**ಕೋಲಾರ:** ತಾಲೂಕಿನ ಮದ್ದೇರಿ ಸಹಕಾರ ಸಂಘದ ಅಧ್ಯಕ್ಷರಾಗಿ ಚಿಂಚಿಮಲೆ ಬಿ ರಮೇಶ್ ಅವಿರೋಧ ಆಯ್ಕೆಯಾದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸಹಕಾರ ಸಂಘದ ರೈತರಿಗಾಗಿ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದಿಂದ ಅನೇಕ ಯೋಜನೆಗಳನ್ನು ತಂದು ಅಭಿವೃದ್ಧಿ ಮಾಡುವುದಾಗಿ ತಿಳಿಸಿದರು. ಸರ್ಕಾರದ ಸವಲತ್ತುಗಳನ್ನು ಉಪಯೋಗಿಸಿಕೊಂಡು ಆರ್ಥಿಕವಾಗಿ ಮುಂದೆ ಬರುವ ರೈತರಿಗೆ ವಿಚಾರಗಳನ್ನು ಮುಟ್ಟಿಸಲಾಗುತ್ತದೆ. ಸರ್ಕಾರದಿಂದ ನೀಡುವ ಸಾಲ ಸೌಲಭ್ಯ, ಬೆಳೆ ವಿಮೆ, ರೇಷ್ಮೆ ಮನೆ ನಿರ್ಮಾಣಕ್ಕೆ ಆರ್ಥಿಕ ನೆರವು ಕೊಡಿಸಲಾಗುತ್ತದೆ. ಸ್ತ್ರೀ ಶಕ್ತಿ ಸಂಘಗಳಿಗೆ ಸಾಲ ಸೌಲಭ್ಯ, ರೈತರಿಗೆ ಬಡ್ಡಿ ರಹಿತ ಸಾಲಕ್ಕಾಗಿ ಹೆಚ್ಚಿನ ಫಲಾನುಭವಿಗಳನ್ನು ಗುರುತಿಸಿ ಸೌಲಭ್ಯ ಒದಗಿಸಲಾಗುತ್ತದೆ. ಸರ್ಕಾರದಿಂದ ಬರುವ ಯೋಜನೆ ಮತ್ತು ಸಾಲ ಸೌಲಭ್ಯವನ್ನು ಪಡೆಯಲು ನೂತನ ನಿರ್ದೇಶಕರು ರೈತರಿಗೆ ಜಾಗೃತಿ ಮೂಡಿಸಬೇಕು ಎಂದು ನೂತನ ಅಧ್ಯಕ್ಷ ರಮೇಶ್ ತಿಳಿಸಿದರು. ಶಾಸಕ ಕೊತ್ತೂರು ಮಂಜುನಾಥ್, ಎಂಎಲ್ಸಿ ಅನಿಲ್ ಕುಮಾರ್, ಉಪಾಧ್ಯಕ್ಷ ಡಿ.ವಿ.ಶ್ರೀನಿವಾಸ್, ನಿರ್ದೇಶಕರಾದ ಎಂ,ಆರ್, ಸುರೇಶ್, ಚಂದ್ರಶೇಖರ್, ಬೈರಾರೆಡ್ಡಿ, ಮಂಜುನಾಥ, ನಾಗರತ್ನಮ್ಮ, ಭಾಗ್ಯಮ್ಮ, ನಾರಾಯಣಸ್ವಾಮಿ, ನಾಗರಾಜ, ಚಲಪತಿ, ಮಾಜಿ ಅಧ್ಯಕ್ಷ ಎಂ.ಆರ್. ಶ್ರೀನಿವಾಸಗೌಡ, ವೆಂಕಟಸ್ವಾಮಿ, ಕವಿತಾ ಮುನಿರಾಜು, ದೇವರಹಳ್ಳಿ ಬಾಬು, ಪಂಚಾಯಿತಿ ಸದಸ್ಯ ಚಂದ್ರೇಗೌಡ, ಶ್ರೀರಾಮಯ್ಯ, ದೇವರಾಜ್, ಮುನಿರಾಜು,ಮುರಳಿ, ಸೊಸೈಟಿ ಸಿಇಒ ಆರ್. ಭಾಸ್ಕರಪ್ಪ, ಸಿಬ್ಬಂದಿನಾಗಭೂಷಣ್ ,ನಾಗೇಶ್,ನರಸಿಂಹಮೂರ್ತಿ,ಮುನಿರಾಜ್,ಮಹೇಶ್,ಆಶಾ,ಅನಿತಾ ದೇವಿ ಇದ್ದರು.



ಸಂಜೆ ಮುಗಿಲು
ಗುರುವಾರ
9.1.2025



# ಕಾರ್ಮಿಕರು ಈ ದೇಶದ ಆಸ್ತಿ : ಶಾಸಕ ಸಿ.ಪುಟ್ಟರಂಗಶೆಟ್ಟಿ

**ಚಾಮರಾಜನಗರ:** ಕಾರ್ಮಿಕರು ಈ ದೇಶದ ಆಸ್ತಿಯಾಗಿದ್ದಾರೆ ಎಂದು ಎಂ.ಎಸ್.ಐ.ಎಲ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ತಿಳಿಸಿದರು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಸೋಮವಾರ (ಜ.06) ದಂದು ಕಾರ್ಮಿಕ ಇಲಾಖೆ, ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ಹಾಗೂ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮದಲ್ಲಿ ಎಲೆಕ್ಟ್ರಿಷಿಯನ್ ವೆಲ್ಡಿಂಗ್ ಮತ್ತು ಮೇಷನ್ ಕಾರ್ಮಿಕರಿಗೆ ಟೂಲ್ ಕಿಟ್ ಹಾಗೂ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಿಸಿ ಅವರು ಮಾತನಾಡಿದರು.

ಕಾರ್ಮಿಕರಲ್ಲಿ ಎರಡು ವರ್ಗಗಳಿವೆ. ಒಂದು ಸಂಘಟಿತ ಕಾರ್ಮಿಕರು ಮತ್ತೊಂದು ಅಸಂಘಟಿತ ಕಾರ್ಮಿಕರು. ಸಂಘಟಿತ ಕಾರ್ಮಿಕರಿಗೆ ಸರ್ಕಾರ ಎಲ್ಲ ರೀತಿಯ ಸಾಮಾಜಿಕ ಭದ್ರತೆಗಳನ್ನು ನೀಡುತ್ತಿದೆ. ಅಸಂಘಟಿತ ಕಾರ್ಮಿಕರಿಗೆ ಇಂತಹ ಯಾವುದೇ ಸೌಲಭ್ಯ ದೊರೆಯುತ್ತಿಲ್ಲ. ಅವರಿಗೆ ಪ್ರತಿದಿನ ಕೂಲಿಯು ಸಿಗದಂತಹ ಪರಿಸ್ಥಿತಿ ಇದೆ ಹಾಗೂ ಯಾವುದೇ ಸಾಮಾಜಿಕ ಭದ್ರತೆಯೂ ಇಲ್ಲ ಎಂದರು.



ಕಾರ್ಮಿಕ ಇಲಾಖೆಯು ಕಟ್ಟಡ ಮತ್ತು ಇತರೆ ನಿರ್ಮಾಣ ಅಸಂಘಟಿತ ಕಾರ್ಮಿಕರಿಗೆ ನೋಂದಣಿ ಮಾಡಿಸುವ ಜೊತೆಗೆ ಇಲಾಖೆ ವತಿಯಿಂದ ಹಲವಾರು ಸೌಲಭ್ಯಗಳನ್ನು ನೀಡುತ್ತಿದೆ. ಕಾರ್ಮಿಕರು ಇದರ ಉಪಯೋಗ ಪಡೆದುಕೊಂಡು ಅಭಿವೃದ್ಧಿ ಹೊಂದಬೇಕು. ಇತ್ತೀಚಿನ ದಿನಗಳಲ್ಲಿ ಸರ್ಕಾರವು ವಿವಿಧ ವಲಯಗಳನ್ನು ಅಸಂಘಟಿತ ಕಾರ್ಮಿಕರೆಂದು ಗುರುತಿಸಿದ್ದು ನೋಂದಣಿ ಮಾಡಿಸುವ ಕಾರ್ಯ ಆರಂಭವಾಗಿದೆ. ಜಿಲ್ಲೆಯ ಎಲ್ಲಾ ಅಸಂಘಟಿತ ಕಾರ್ಮಿಕರು ಕಾರ್ಮಿಕ ಇಲಾಖೆಯಲ್ಲಿ ನೊಂದಣಿ ಮಾಡಿಸಿಕೊಳ್ಳುವಂತೆ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ತಿಳಿಸಿದರು. ಜಿಲ್ಲಾ ಕಾರ್ಮಿಕ ಅಧಿಕಾರಿ ಡಾ. ಎಂ. ಸವಿತಾ ಅವರು ಮಾತನಾಡಿ ಕಾರ್ಮಿಕ ಇಲಾಖೆಯು ಕಾರ್ಮಿಕರ ಅಭಿವೃದ್ಧಿಗಾಗಿ ಹಲವಾರು ಸೌಲಭ್ಯ ನೀಡುತ್ತಿದೆ. ಕಾರ್ಮಿಕರು ಇಲಾಖೆಯನ್ನು ನೇರವಾಗಿ ಸಂಪರ್ಕಿಸಿ ನೊಂದಣಿ ಮಾಡಿಸಿಕೊಂಡು ಇಲಾಖೆಯಿಂದ ದೊರೆಯುವ ಸೌಲಭ್ಯಗಳನ್ನು ಬಳಸಿಕೊಳ್ಳಬೇಕು. ಯಾವುದೇ ಕಾರಣಕ್ಕೂ ಮಧ್ಯವರ್ತಿಗಳ ಮೊರೆ ಹೋಗಬಾರದು. ಎಲ್ಲ ತಾಲ್ಲೂಕುಗಳಲ್ಲೂ ಕಾರ್ಮಿಕ ನಿರೀಕ್ಷಕರ ಕಚೇರಿ ಇದ್ದು ಕಾರ್ಮಿಕರು ನೇರವಾಗಿ ಇಲಾಖೆಯನ್ನು ಸಂಪರ್ಕಿಸಿ ಸೌಲಭ್ಯ ಪಡೆಯಬಹುದು ಎಂದರು.

ಕಾರ್ಯಕ್ರಮದಲ್ಲಿ ಮೇಷನ್ ಎಲೆಕ್ಟ್ರೀಷಿಯನ್ ವೆಲ್ಡಿಂಗ್ ಕಾರ್ಮಿಕರಿಗೆ ಟೂಲ್ ಕಿಟ್ ಹಾಗೂ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ವತಿಯಿಂದ ಸಿನಿ ಕಾರ್ಮಿಕರು, ಕ್ಷೌರಿಕರು, ಮೋಟಾರ್ ಸಾರಿಗೆ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಿಸಲಾಯಿತು.

ಹಿರಿಯ ಕಾರ್ಮಿಕ ನಿರೀಕ್ಷಕರಾದ ವಿ.ಎಲ್. ಪ್ರಸಾದ್, ಯೋಜನಾ ನಿರ್ದೇಶಕರಾದ ಮಹೇಶ್, ಕಟ್ಟಡ ಮತು ಇತರೆ ನಿರ್ಮಾಣ ಕಾರ್ಮಿಕ ಮಂಡಳಿಯ ರಾಜೇಶ್, ಅಸಂಘಟಿತ ಕಾರ್ಮಿಕ ಮಂಡಳಿಯ ಶ್ರೀಧರ್, ನಾಗರತ್ನ, ಪ್ರದೀಪ್ ಕುಮಾರ್, ಇನ್ನಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ನಗರಸಭೆ ಪೌರಾಯುಕ್ತರನ್ನು ವರ್ಗಾವಣೆ ಮಾಡದಿದ್ದರೆ ಹೋರಾಟ

**ಚಾಮರಾಜನಗರ:** ಇಲ್ಲಿನ ನಗರಸಭೆ ಪೌರಾಯುಕ್ತ ಎಸ್.ವಿ.ರಾಮದಾಸ್ ರವರನ್ನು ಕೂಡಲೇ ವರ್ಗಾವಣೆ ಮಾಡಬೇಕು, ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಮಾಡುವುದಾಗಿ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆಯ ಜಿಲ್ಲಾಧ್ಯಕ್ಷ ನವೀನ್ ಕುಮಾರ್ ಚಾಮರಾಜನಗರದಲ್ಲಿ ಎಚ್ಚರಿಸಿದರು.

ಕೆಲ ತಿಂಗಳ ಹಿಂದೆ ಚಾಮರಾಜನಗರ ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ರವರು ನಗರಸಭೆ ಪೌರಾಯುಕ್ತ ಎಸ್.ವಿ. ರಾಮದಾಸ್ ರವರ ಕಾರ್ಯವೈಖರಿ ಬಗ್ಗೆ ಬೇಸರ ವ್ಯಕ್ತಪಡಿಸಿ, ವರ್ಗಾವಣೆಗೆ ಮೌಖಿಕವಾಗಿ ಆದೇಶಿಸಿದ್ದರು. ಆದರೆ, ಇಲ್ಲಿಯ ತನಕ ವರ್ಗಾವಣೆಯಾಗಿಲ್ಲ. ಈ ಸಂಬಂಧ ಜಿಲ್ಲಾಧಿಕಾರಿಗಳಿಗೆ ಹಾಗೂ ಸ್ಥಳೀಯ ಶಾಸಕ ಸಿ.ಪುಟ್ಟರಂಗಶೆಟ್ಟಿ ರವರಿಗೂ ಪತ್ರ ಬರೆಯಲಾಗಿದೆ ಎಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು. ಪೌರಾಯುಕ್ತ ರಾಮದಾಸ್ ಬಂದ ಬಳಿಕ ನಗರದಲ್ಲಿ ಅಭಿವೃದ್ಧಿಯಾಗಿಲ್ಲ. ಪೌರಾಯುಕ್ತರ ವರ್ಗಾವಣೆ ಮಾಡುವಲ್ಲಿ ಸ್ಥಳೀಯ ಶಾಸಕರು ಜಾಣ ಕುರುಡುತನ ತೋರಿಸುತ್ತಿದ್ದಾರೆ. ಜಿಲ್ಲಾಧಿಕಾರಿಗೆ ಹಲವು ಬಾರಿ ದೂರು ನೀಡಿದ್ದರೂ ಯಾವುದೇ ಕ್ರಮವಹಿಸದೇ ನಿರ್ಲಕ್ಷ್ಯ ಮಾಡಿದ್ದಾರೆ ಎಂದರು.

ಸೇನೆಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಂಜುನಾಯಕ್ ಮಾತನಾಡಿ, ರಾಮದಾಸ್ ರವರು ಮಾಡಿರುವ ಭ್ರಷ್ಟಚಾರದ ಬಗ್ಗೆ ಸೂಕ್ತ ತನಿಖೆ ನಡೆಸಿ ಕ್ರಮ ಜರುಗಿಸಬೇಕು. ರಾಮದಾಸ್ ಅವರನ್ನು ವರ್ಗಾವಣೆ ಮಾಡದಿದ್ದರೆ ಸಚಿವರು, ಶಾಸಕರ ಮೇಲೆ ಜನರಿಗೆ ನಂಬಿಕೆ ಉಳಿಯುವುದಿಲ್ಲ ಎಂದು ಹೇಳಿದರು. ಸುದ್ದಿಗೋಷ್ಠಿಯಲ್ಲಿ ಸೇನೆಯ ಯುವ ಘಟಕದ ತಾಲೂಕು ಅಧ್ಯಕ್ಷ ಶಿವಕುಮಾರ್, ತಾಲೂಕು ಪ್ರಧಾನ ಕಾರ್ಯದರ್ಶಿ ದೀಪಕ್, ಉಪಾಧ್ಯಕ್ಷರಾದ ದರ್ಶನ್, ಪವನ್ ಇದ್ದರು.



## ವಿಧಾನಪರಿಷ ಸದಸ್ಯ ಡಾಕ್ಟರ್ ಯತೀಂದ್ರ ಸಿದ್ದರಾಮಯ್ಯ ಹೇಳಿಕೆ

# ಆರೋಗ್ಯಕ್ಕೆ ಕ್ರೀಡೆ ಸಹಕಾರಿ

**ತಾಂಡವಪುರ:** ಕ್ರಿಕೆಟ್ ಆಟವು ಮನುಷ್ಯನ ಆರೋಗ್ಯಕ್ಕೆ ಉತ್ತಮ ಬೆಳವಣಿಗೆ ಹಾಗೂ ಸ್ನೇಹ ಬಾಂಧವಕ್ಕೆ ಸಹಕಾರಿಯಾಗಲಿದೆ ಎಂದು ವರುಣ ವಿಧಾನಸಭಾ ಕ್ಷೇತ್ರದ ಆಶ್ರಯ ಸಮಿತಿ ಅಧ್ಯಕ್ಷರು ಹಾಗೂ ವಿಧಾನಪರಿಷ ಸದಸ್ಯರಾದ ಡಾಕ್ಟರ್ ಯತೀಂದ್ರ ಸಿದ್ದರಾಮಯ್ಯನವರು ಹೇಳಿದರು

ಅವರು ಮೈಸೂರು ಜಿಲ್ಲೆ ನಂಜನಗೂಡು ತಾಲೂಕು ಚಿಕ್ಕಯ್ಯನ ಛತ್ರ ಹೋಬಳಿ ವರುಣ ವಿಧಾನಸಭಾ ಕ್ಷೇತ್ರಕ್ಕೆ ಸೇರುವ ಮರಳೂರು ಗೊದ್ದನಪುರ ಗ್ರಾಮದಲ್ಲಿ ದಿವಂಗತ ಡಾಕ್ಟರ್ ವಿಷ್ಣುವರ್ಧನ್ ಕರ್ನಾಟಕ ರತ್ನ ಪುನೀತ್ ರಾಜಕುಮಾರ್ ಹಾಗೂ ದಿವಂಗತ ರಾಕೇಶ್ ಸಿದ್ದರಾಮಯ್ಯನವರ ನೆನಪಿನ ಅಂಗವಾಗಿ ಜೈ ಭುವನೇಶ್ವರಿ ಕನ್ನಡ ಬಳಗದವರು ಏರ್ಪಡಿಸಿದ ಕ್ರಿಕೆಟ್ ಟೂರ್ನಮೆಂಟ್ ಅನ್ನು ಉದ್ಘಾಟಿಸಿ ಆಟದಲ್ಲಿ ವಿಜೇತರಾದವರಿಗೆ ಬಹುಮಾನ ಮತ್ತು ನೆನಪಿನ ಕಾಣಿಕೆಯನ್ನು ಡಾಕ್ಟರ್ ಯತೀಂದ್ರ ಸಿದ್ದರಾಮನ ರವರು ವಿತರಿಸಿ ಮಾತನಾಡುತ್ತಾ

ಕ್ರೀಡೆ ಆಟೋ ಮನುಷ್ಯನ ಆರೋಗ್ಯಕ್ಕೆ ಮತ್ತು ದೇಹಕ್ಕೆ ಉತ್ತಮ ಆಟಗಳನ್ನು ಇಂದಿನ ಗ್ರಾಮೀಣ ಭಾಗದ ಯುವಕರು ಹೆಚ್ಚು ಹೆಚ್ಚು ಆಯೋಜನೆ ಮಾಡುವ ಮೂಲಕ ಕ್ರೀಡಾ ಮನೋಭಾವ ಬೆಳೆಯುವ ಜೊತೆಗೆ ಅವರ ಆರೋಗ್ಯವು ಉತ್ತಮವಾಗಿರುತ್ತದೆ ಮತ್ತು ಸ್ನೇಹ ಬಾಂಧವ್ಯವನ್ನು ಬೆರೆಯುವ ಹಟವಾಗಿದ್ದು ಗ್ರಾಮೀಣ ಭಾಗದಲ್ಲಿ ಇನ್ನು ಹೆಚ್ಚು ಹೆಚ್ಚು ನಡೆಯುವಂತಾಗಲಿ ಇದಕ್ಕೆ ನಮ್ಮ ಕೈಲಾದ ಸಹಾಯವನ್ನು ಮಾಡುತ್ತೇವೆ ಎಂದು ವಿಧಾನಪರಿಷ ಸದಸ್ಯ ಡಾಕ್ಟರ್ ಯತೀಂದ್ರ ಸಿದ್ರಾಮಯ್ಯ ಅವ್ರು ಬರವಸೆ ನೀಡಿದರು

ಇದೆ ವೇಳೆ ಮಾತನಾಡಿದ ಗ್ರಾಮ ಪಂಚಾಯತ್ ಸದಸ್ಯ ಜಿಎಂ ಸೂರಿ ರವರು



ಕ್ರೀಡೆಯಲ್ಲಿ ಸೋಲು ಗೆಲುವು ಸಹಜ ಈ ಕ್ರಿಕೆಟ್ ಪಂದ್ಯಾವಳಿಯಲ್ಲಿ ಆಟವಾಡುತ್ತಿರುವ ಆಟಗಾರರು ಇಂದಿನ ಸೋಲೆ ಮುಂದಿನ ಗೆಲುವು ಎಂದು ತಿಳಿದು ಆಟ ಆಡುವ ಮೂಲಕ ಗ್ರಾಮೀಣ ಭಾಗದಲ್ಲಿ ಸ್ನೇಹ ಬಾಂಧವ್ಯವನ್ನು ಬೆಳೆಯಲು ಸಹಕಾರಿಗಳಾಗಬೇಕು ಎಂದು ಕಿವಿ ಮಾತು ಹೇಳಿದರು

ಕಾರ್ಯಕ್ರಮದಲ್ಲಿ ತಗಡೂರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಂಗಸ್ವಾಮಿ ತಾಲೂಕು ಕುರುಬರ ಸಂಘದ ತಾಲೂಕು ಪಂಚಾಯತಿ, ಮಾಜಿ ಸದಸ್ಯರಾದ ರಾಜಶೇಖರ್ ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷರಾದ ಗುರು ಮಹಾದೇವ ಶಿವಕುಮಾರ್ ಕಾಂಗ್ರೆಸ್ ಮುಖಂಡ ಹರೀಶ್ ಮೂಗಣ್ಣ ಗ್ರಾಮ ಪಂಚಾಯತ್ ಸದಸ್ಯರಾದ ಜಿಎಂ ಸೂರಿ ಕೃಷ್ಣ ಮಾಲೆಗೌಡ ಎಂ ಶಿವಣ್ಣ ಕೆ ಎಸ್ ಹುಂಡಿ ಪಂಚಾಯತಿ ಅಧ್ಯಕ್ಷರಾದ ಕೆಎಸ್ ರವಿ ಭೂ ನಿರ್ಮಾಣ ಸಹಕಾರ ಸಂಘದ ಅಧ್ಯಕ್ಷ ತಮ್ಮಯ್ಯ ಕಾರ್ಯಕ್ರಮದ ಆಯೋಜಿಕರಾದ ಚಂದ್ರು, ಬೀರಪ್ಪ ರಮೇಶ ದೊರೆ ದೇವರಾಜು ಮಲ್ಲೇಶ ಚಂದ್ರೇಗೌಡ ಗೌಡಿಕೆ ಚಂದ್ರು, ಕನಕ ಯುವಕ ಸಂಘದ ಅಧ್ಯಕ್ಷ ಶಿವಕುಮಾರ್ ಸೇರಿದಂತೆ ಸುತ್ತಮುತ್ತಲ ಗ್ರಾಮಗಳ ಕ್ರೀಡಾ ಅಭಿಮಾನಿಗಳು ಮುಖಂಡರು ಭಾಗಿಯಾಗಿದ್ದರು ಈ ಕ್ರಿಕೆಟ್ ಪಂದ್ಯಾವಳಿಯಲ್ಲಿ ಕಡಕೋಳ ತಂಡ ಮೊದಲನೇ ಬಹುಮಾನ ಪಡೆದುಕೊಂಡರೆ ಎರಡನೇ ಬಹುಮಾನವನ್ನು ಮರಳೂರು ಗೊದ್ದನಪುರ ತಂಡವು ಬಹುಮಾನ ಪಡೆದುಕೊಂಡು ಬಹುಮಾನ ವಿಸ್ತರಿಸಿದ ಆಯೋಜಕರು ಮುಖಂಡರುಗಳು ಕ್ರೀಡಾ ಪಂದ್ಯಾವಳಿಯಲ್ಲಿ ಭಾಗವಹಿಸಿದ್ದ ಆಟಗಾರರಿಗೆ ಪ್ರೋತ್ಸಾಹ ನೀಡಿ ಉತ್ಸಾಹ ತುಂಬಿ ಗೌರವಿಸಿ ಸನ್ಮಾನಿಸಿದರು.

# ಸೌಲಭ್ಯ ಸದ್ಬಳಕೆ ಮಾಡಿಕೊಳ್ಳಲು ಮನವಿ

**ಪಿರಿಯಾಪಟ್ಟಣ:** ತಂಬಾಕು ಮಂಡಳಿಯು 2025–26 ನೇ ಸಾಲಿನ ನೋಂದಾಯಿತ ತಂಬಾಕು ಬೆಳೆಗಾರರಿಗೆ ರಸಗೊಬ್ಬರ ನೀಡಲು ಬೆಳೆಗಾರರಿಂದ ಮುಂಗಡ ಹಣವನ್ನು ಕಡಿತ ಗೊಳಿಸಲು ಪ್ರಾರಂಭಿಸಲಾಗಿದೆ, ಆಸಕ್ತಿವುಳ್ಳ ನೋಂದಾಯಿತ ತಂಬಾಕು ಬೆಳೆಗಾರರು ಅರ್ಜಿ ಸಲ್ಲಿಸಿ ಕಡಿತಗೊಳಿಸಬೇಕು ಎಂದು ತಂಬಾಕು ಮಂಡಳಿ ಕಾಫ್ ಕಮಿಟಿ ನಿರ್ದೇಶಕ ಹೆಚ್.ಸಿ.ವೀರಭದ್ರ ತಿಳಿಸಿದರು. ಈ ಬಗ್ಗೆ ಮಾಹಿತಿ ನೀಡಿರುವ ಅವರು 2025–26 ನೇ ಸಾಲಿನಲ್ಲಿ ತಂಬಾಕು ಮಂಡಳಿ ವತಿಯಿಂದ ರಸಗೊಬ್ಬರ ನೀಡಲು ರೈತರಿಂದ ಮುಂಗಡವಾಗಿ ಹಣವನ್ನು ಕಡಿತಗೊಳಿಸಲು ನಿರ್ಧರಿಸಲಾಗಿದೆ 13x13 ಅಳತೆಯ ಬ್ಯಾರನ್ ಗೆ 5 ಸಾವಿರ ಹಾಗೂ 16x16 ಅಳತೆಯ ಬ್ಯಾರನ್ ಹೊಂದಿರುವವರಿಗೆ 10 ಸಾವಿರ ರೂಗಳನ್ನು ನಿಗದಿಮಾಡಲಾಗಿದೆ. ತಂಬಾಕು ಬೆಳೆಗಾರರು ತಂಬಾಕು ಮಂಡಳಿಗೆ ಬಂದು ಅರ್ಜಿ ಸಲ್ಲಿಸಿ ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದು ತಿಳಿಸಿದ್ದಾರೆ.

# ಜಯಚಾಮರಾಜೇಂದ್ರ ಒಡೆಯರ್ ಸಭಾಂಗಣದಲ್ಲಿ ಸಾರ್ವಜನಿಕ ಸಮಾಲೋಚನಾ ಸಭೆ

**ಮೈಸೂರು:** ಮೈಸೂರು ಮಹಾನಗರ ಪಾಲಿಕೆಯ ವತಿಯಿಂದ 2024–25 ನೇ ಸಾಲಿನ ಆಯವ್ಯಯನ್ನು ತಯಾರಿಸಲು ಮೈಸೂರು ನಗರದ ದೃಷ್ಠಿಯಿಂದ ಸದರಿ ಆಯವ್ಯದ ಬಗ್ಗೆ ತಮ್ಮ ಅಭಿಪ್ರಾಯ ಮತ್ತು ಸಲಹೆಗಳನ್ನು ಪಡೆಯಲು ಮೈಸೂರು ಮಹಾನಗರ ಪಾಲಿಕೆಯ ಪ್ರಾದೇಶಿಕ ಆಯುಕ್ತರು ಹಾಗೂ ಆಡಳಿತಾಧಿಕಾರಿಗಳಾದ ಜಿ. ಲಕ್ಷ್ಮಿ ಕಾಂತ ರೆಡ್ಡಿ ಅವರ ಅಧ್ಯಕ್ಷತೆಯಲ್ಲಿ ಜನವರಿ 9 ರಂದು ಬೆಳಗ್ಗೆ 11 ಗಂಟೆಗೆ ಶ್ರೀ ಜಯಚಾಮರಾಜೇಂದ್ರ, ಒಡೆಯರ್ ಸಭಾಂಗಣದಲ್ಲಿ ಸಮಾಲೋಚನಾ ಸಭೆಯನ್ನು ನಡೆಸಲು ತೀರ್ಮಾನಿಸಲಾಗಿದೆ. ಮೈಸೂರು ನಗರದ ನಾಗರೀಕರು ಮತ್ತು ಸಂಘಸಂಸ್ಥೆಗಳ ಪ್ರತಿನಿಧಿಗಳು ಸಭೆಯಲ್ಲಿ ಭಾಗವಹಿಸಿ ತಮ್ಮ ಅಮೂಲ್ಯವಾದ ಸಲಹೆ ಹಾಗೂ ಸೂಚನೆಗಳನ್ನು ನೀಡಬಹುದಾಗಿದೆ ಎಂದು ಮೈಸೂರು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯರಗನಹಳ್ಳಿಯಲ್ಲಿ ಜಾಗೃತಿ ಕಾರ್ಯಕ್ರಮ



**ಚಾಮರಾಜನಗರ:** ಚಾಮರಾಜನಗರ ವಿಶ್ವವಿದ್ಯಾನಿಲಯದ ವತಿಯಿಂದ ತಾಲೂಕಿನ ಯರಗನಹಳ್ಳಿ ಗ್ರಾಮದಲ್ಲಿ ಏರ್ಪಡಿಸಲಾಗಿರುವ ಎನ್.ಎಸ್.ಎಸ್ ವಾರ್ಷಿಕ ವಿಶೇಷ ಶಿಬಿರದಲ್ಲಿ ಸೋಮವಾರ (ಜ.06) ಜಿಲ್ಲಾ ಅಗ್ನಿಶಾಮಕ ಠಾಣೆಯ ಸಹಾಯಕ ಠಾಣಾಧಿಕಾರಿ ಶಿವಾಜಿರಾವ್ ಪಾಟೀಲ್ ಹಾಗೂ ತಂಡದಿಂದ ಅಗ್ನಿ ಅವಘಡಗಳು, ಮುನ್ನೆಚ್ಚರಿಕೆ ಕ್ರಮಗಳ ಕುರಿತು ಪ್ರಾತ್ಯಕ್ಷಿಕೆ ಹಾಗೂ ಉಪನ್ಯಾಸ ನೀಡಲಾಯಿತು.

ಗ್ರಾಮೀಣ ಪ್ರದೇಶಗಳಲ್ಲಿ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದರಿಂದ ಜನ ಜಾಗೃತಿ ಹೆಚ್ಚಾಗಲಿದೆ. ಪ್ರಾತ್ಯಕ್ಷಿಕೆ ಮತ್ತು ಉಪನ್ಯಾಸದ ಮೂಲಕ ಹೆಚ್ಚಿನ ಮಾಹಿತಿ ನೀಡುವುದರಿಂದ ಗ್ರಾಮಸ್ಥರಿಗೆ, ಶಿಬಿರಾರ್ಥಿಗಳಿಗೆ ಹಾಗೂ ವಿದ್ಯಾರ್ಥಿಗಳಿಗೆ ಮುನ್ನೆಚ್ಚರಿಕೆ ಕ್ರಮದ ಬಗ್ಗೆ ಅರಿವು ಮೂಡಿಸಲಾಯಿತು. ಇದೇ ವೇಳೆ ಚಾಮರಾಜನಗರ ವಿಶ್ವವಿದ್ಯಾನಿಲಯದ ಎನ್.ಎಸ್.ಎಸ್ ಸಂಯೋಜನಾಧಿಕಾರಿ ಡಾ. ಆರ್. ಮಹೇಶ್ ಅವರು ಮಾತನಾಡಿ ಪ್ರಸ್ತುತ ದಿನಗಳಲ್ಲಿ ಅಗ್ನಿ ಅವಘಡಗಳಿಂದ ಅನಾಹುತಗಳು ಅಧಿಕವಾಗುತ್ತಿದ್ದು, ಈ ಬಗ್ಗೆ ಜನರಿಗೆ ಅರಿವಿನ ಕೊರತೆಯಿದೆ. ಇಂತಹ ಪ್ರಾತ್ಯಕ್ಷಿಕೆಗಳು ಮತ್ತು ವಿಶೇ? ಉಪನ್ಯಾಸಗಳು ಪ್ರತಿಯೊಬ್ಬರಿಗೂ ಅನಿವಾರ್ಯ ಹಾಗೂ ಅರ್ಥಪೂರ್ಣವಾಗಿದೆ ಎಂದು ಹೇಳಿದರು. ಕನ್ನಡ ಉಪನ್ಯಾಸಕರಾದ ಯರಗನಹಳ್ಳಿ ಗುರುರಾಜು, ಶಿಕ್ಷಕರಾದ ನಾಗೇಶ್, ಶಿಬಿರಾರ್ಥಿಗಳು, ವಿದ್ಯಾರ್ಥಿಗಳು, ಕಾರ್ಯಕ್ರಮದಲ್ಲಿ ಇದ್ದರು.

# ಪ್ರಾಥಮಿಕ ಶಾಲೆಗೆ ಡಿಡಿಪಿಐ ದಿಢೀರ್ ಭೇಟಿ

**ಹನೂರು:** ತಾಲ್ಲೂಕಿನ ಬಸಪ್ಪನದೊಡ್ಡಿ ಹಿರಿಯ ಪ್ರಾಥಮಿಕ ಶಾಲೆಗೆ ಡಿಡಿಪಿಐ ರಾಮಚಂದ್ರರಾಜೇಅರಸ್ ದಿಢೀರ್ ಭೇಟಿ ನೀಡಿ ಪರಿಶೀಲಿಸಿದರು.

ನಂತರ ಅವರು ಶಾಲೆಯ ಮಕ್ಕಳೊಂದಿಗೆ ಮಾತನಾಡಿ, ಶಾಲೆಯ ಬಗ್ಗೆ ಅಭಿಪ್ರಾಯಗಳನ್ನು ಕೇಳಿದರು. ಜೊತೆಗೆ ವಿವಿಧ ಪ್ರಶ್ನೆಗಳನ್ನು ಕೇಳುವ ಮೂಲಕ ಮಕ್ಕಳ ಕಲಿಕೆಯ ಬಗ್ಗೆ ತಿಳಿದುಕೊಂಡರು.

ಶಾಲೆಯ ನಲಿ–ಕಲಿ ಕೊಠಡಿ ಪರಿಶೀಲಿಸಿದರಲ್ಲದೆ, ಶಾಲೆಯ ಪರಿಸರ ವನ್ನು ಮೆಚ್ಚಿದರು. ಆ ನಂತರ, ಶಾಲೆಯ ಅಕ್ಷರದಾಸೋಹದ ಅಡುಗೆ ಕೊಠಡಿಗೆ ಭೇಟಿ ನೀಡಿ ಪರಿಶೀಲಿಸಿದರು. ಈ ವೇಳೆ, ಊಟದ ಮೆನು ಹಾಗೂ ಅಡುಗೆ ಕೊಠಡಿಯ ಸ್ವಚ್ಛತೆ ಬಗ್ಗೆ ಗಮನಹರಿಸಿ, ಮಕ್ಕಳಿಗೆ ಆರೋಗ್ಯಕರ ಊಟ ನೀಡು ವಂತೆ ಅಡುಗೆ ಸಿಬ್ಬಂದಿಗೆ ಸೂಚಿಸಿದರು.

ಗ್ರಾಮದಲ್ಲಿ ಆಂಗ್ಲ ಮಾಧ್ಯಮ ಶಾಲೆಯನ್ನು ಪ್ರಾರಂಭಿಸುವ ಜೊತೆಗೆ ಪ್ರತ್ಯೇಕ ಡೈನಿಂಗ್ ಹಾಲ್ ನಿರ್ಮಿಸಿ ಮಕ್ಕಳಿಗೆ ಅನುಕೂಲ ಕಲ್ಪಿಸುವಂತೆ ಎಸ್ಡಿಎಂಸಿ ಸದಸ್ಯರು ಮನವಿ ಮಾಡಿದರು.ಬಳಿಕ ಮನವಿ ಆಲಿಸಿದ ಡಿಡಿಪಿಐ ಮಾತನಾಡಿ, ಮುಂದಿನ ದಿನಗಳಲ್ಲಿಮನವಿಗೆ ಸ್ಪಂದಿಸಲಾಗುವುದು ಎಂದು ಭರವಸೆ ನೀಡಿದರು.

ಕುರುಬರದೊಡ್ಡಿ ಶಾಲೆಗೂ ಭೇಟಿ:



ಕುರುಬರ ದೊಡ್ಡಿ ಗ್ರಾಮದ ಸರ್ಕಾರಿ ಉರ್ದು ಶಾಲೆಯಲ್ಲಿ ಶಿಕ್ಷಕನೋರ್ವ ಮಹಿಳೆ ಜೊತೆ ಅನುಚಿತ ವರ್ತನೆ ತೋರಿದ ಪ್ರಕರಣ ನಡೆದ ಹಲವು ದಿನಗಳ ಬಳಿಕ ಶಿಕ್ಷಣ ಇಲಾಖೆ ಉಪ ನಿರ್ದೇಶಕರು ಶಾಲೆಗೆ ಭೇಟಿ ನೀಡಿ ಘಟನೆಯ ಬಗ್ಗೆ ಅಲ್ಲಿನ ಶಿಕ್ಷಕರಿಂದ ಮಾಹಿತಿ ಸಂಗ್ರಹಿಸಿದರು.ಎಸ್ಡಿಎಂಸಿ ಅಧ್ಯಕ್ಷರಾದ ಮಲ್ಲೇಶ್, ಮುಖ್ಯ ಶಿಕ್ಷಕರಾದ ವೀರಪ್ಪ, ಶಿಕ್ಷಕರಾದ ದೊರೆಸ್ವಾಮಿ, ಆನಂದ್, ಪುಟ್ಟರಾಮು, ಇತರರು ಹಾಜರಿದ್ದರು.

# ಅರ್ಥಪೂರ್ಣವಾಗಿ ಶಿವಯೋಗಿ ಸಿದ್ದರಾಮೇಶ್ವರ ಜಯಂತಿ ಆಚರಣೆ

**ಮೈಸೂರು:** ಫೆಬ್ರವರಿ 3 ರಂದು ಬೆಳಗ್ಗೆ 11.30 ಗಂಟೆಗೆ ಕರ್ನಾಟಕದ ಕಿರು ರಂಗಮಂದಿರದಲ್ಲಿ ''ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ'' ಆಚರಣೆಯನ್ನು ಅರ್ಥಪೂರ್ಣವಾಗಿ ಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿಗಳಾದ ಡಾ.ಪಿ ಶಿವರಾಜು ಅವರು ತಿಳಿಸಿದರು. ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ''ಶಿವಯೋಗಿ ಸಿದ್ಧರಾಮೇಶ್ವರ'' ಜಯಂತಿಯ ಸಂಬಂಧ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಶಿವಯೋಗಿ ಸಿದ್ಧರಾಮೇಶ್ವರ ಅವರ ಎಲ್ಲಾ ಆದರ್ಶಗಳ ನಿಟ್ಟಿನಲ್ಲಿ ಹಾಗೂ ಮೈಸೂರು ಜಿಲ್ಲೆಯಲ್ಲಿ ಅವರದೇ ಆದ ಸಾಂಸ್ಕೃತಿಕ ಹಿನ್ನೆಲೆಯನ್ನು ಹೊಂದಿರುವುದರಿಂದ ಅಂತಹ ಮಹಾಶಯರ ಜಯಂತಿಯನ್ನು ಆಚರಣೆ ಮಾಡುವುದು ನಮ್ಮ ಕರ್ತವ್ಯವಾಗಿದೆ ಎಂದರು. ಸರ್ಕಾರದ ಶಿ?ಾಚಾರದಂತೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು. ಈ ಸಂಬಂಧ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಮಾಡಲು ಅಗತ್ಯ ಕ್ರಮ ವಹಿಸಿ, ಜಯಂತಿ ನಡೆಯುವ ಸ್ಥಳದ ಸ್ವಚ್ಛತೆ, ಕುಡಿಯುವ ನೀರಿನ ವ್ಯವಸ್ಥೆ, ಶಾಮಿಯಾನ ವ್ಯವಸ್ಥೆ ಮಾಡಲು ಮಹಾನಗರ ಪಾಲಿಕೆಯ ಅಧಿಕಾರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ಸೂಚಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ.ಎಂ.ಡಿ ಸುದರ್ಶನ್ ಅವರು ಮಾತನಾಡಿ, ಕಾರ್ಯಕ್ರಮದಲ್ಲಿ ಕಲಾತಂಡಗಳಿಂದ ಗೀತ ಗಾಯನವನ್ನು ಏರ್ಪಡಿಸಲಾಗುವುದು. ಆಹ್ವಾನ ಪತ್ರಿಕೆಯ ಮುದ್ರಣ ಮಾಡಿ ಸರ್ಕಾರದ ಶಿಷ್ಟಚಾರದಂತೆ ಜನ ಪ್ರತಿನಿಧಿಗಳನ್ನು ಆಹ್ವಾನಿಸಲಾಗುವುದು. ಈ ಸಂಬಂಧ ಸಮಿತಿಯವರು ಸಹಕರಿಸಬೇಕು ಎಂದು ತಿಳಿಸಿದರು. ಸಭೆಯಲ್ಲಿ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಕರ್ನಾಟಕ ಕಾವಲು ಪಡೆಯ ಅಧ್ಯಕ್ಷರಾದ ಮೋಹನ್ ಕುಮಾರ್ ಗೌಡ, ಮೈಸೂರಿನ ಚಳುವಳಿದಾರರದ ಅರವಿಂದ್ ಶರ್ಮ ಸೇರಿದಂತೆ ಶಿವಯೋಗಿ ಸಿದ್ಧರಾಮೇಶ್ವರ ಸಮಿತಿಯ ಮುಖಂಡರುಗಳು ಉಪಸ್ಥಿತರಿದ್ದರು.

# ಮಹಾಯೋಗಿ ವೇಮನ ಜಯಂತಿ

**ಮೈಸೂರು:** ಜನವರಿ 19 ರಂದು ಬೆಳಗ್ಗೆ 11.30 ಗಂಟೆಗೆ ಕರ್ನಾಟಕದ ಕಿರುರಂಗ ಮಂದಿರದಲ್ಲಿ ''ಮಹಾಯೋಗಿ ವೇಮನ ಜಯಂತಿ'' ಆಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿಗಳಾದ ಡಾ.ಪಿ ಶಿವರಾಜು ಅವರು ತಿಳಿಸಿದರು. ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ''ಮಹಾಯೋಗಿ ವೇಮನ ಜಯಂತಿಯ ಸಂಬಂಧ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸರ್ಕಾರದ ಶಿಷ್ಟಾಚಾರದಂತೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು. ಈ ಸಂಬಂಧ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಮಾಡಲು ಅಗತ್ಯ ಕ್ರಮ ವಹಿಸಿ, ಜಯಂತಿ ನಡೆಯುವ ಸ್ಥಳದ ಸ್ವಚ್ಛತೆ, ಕುಡಿಯುವ ನೀರಿನ ವ್ಯವಸ್ಥೆ, ಶಾಮಿಯಾನ ವ್ಯವಸ್ಥೆ ಮಾಡಲು ಮಹಾನಗರ ಪಾಲಿಕೆಯ ಅಧಿಕಾರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ಸೂಚಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ.ಎಂ.ಡಿ ಸುದರ್ಶನ್ ಅವರು ಮಾತನಾಡಿ, ಕಾರ್ಯಕ್ರಮದಲ್ಲಿ ಕಲಾತಂಡಗಳಿಂದ ಗೀತ ಗಾಯನವನ್ನು ಏರ್ಪಡಿಸಲಾಗುವುದು. ಆಹ್ವಾನ ಪತ್ರಿಕೆಯ ಮುದ್ರಣ ಮಾಡಿ ಸರ್ಕಾರದ ಶಿಷ್ಟಚಾರದಂತೆ ಜನ ಪ್ರತಿನಿಧಿಗಳನ್ನು ಆಹ್ವಾನಿಸಲಾಗುವುದು. ಈ ಸಂಬಂಧ ಸಮಿತಿಯವರು ಸಹಕರಿಸಬೇಕು ಎಂದು ತಿಳಿಸಿದರು. ಸಭೆಯಲ್ಲಿ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಕರ್ನಾಟಕ ಕಾವಲು ಪಡೆಯ ಅಧ್ಯಕ್ಷರಾದ ಮೋಹನ್ ಕುಮಾರ್, ಮೈಸೂರಿನ ಚಳುವಳಿದಾರದ ಅರವಿಂದ್ ಶರ್ಮ ಸೇರಿದಂತೆ ಮಹಾಯೋಗಿ ವೇಮನ ಸಮಿತಿಯ ಮುಖಂಡರುಗಳು ಉಪಸ್ಥಿತರಿದ್ದರು.

# ಪರೀಕ್ಷಾ ಕೇಂದ್ರಗಳ ಸುತ್ತಲೂ ನಿಷೇಧಾಜ್ಞೆ ಜಾರಿ

**ಮೈಸೂರು:** ಜನವರಿ 06, 07, 08, 09 ಮತ್ತು 10 ರಂದು National Testing Agency ಅವರು ನಡೆಸುವ ನಗರದ 02 ಪರೀಕ್ಷಾ ಕೇಂದ್ರಗಳಲ್ಲಿ UGC - NET ಪರೀಕ್ಷೆ ನಡೆಯಲಿದ್ದು, ಸದರಿ ಪರೀಕ್ಷೆಯನ್ನು ಸುಸೂತ್ರವಾಗಿ ನಡೆಸುವ ಉದ್ದೇಶದಿಂದ ಪರೀಕ್ಷಾ ಕೇಂದ್ರದ ವ್ಯಾಪ್ತಿಯಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ತಡೆಯಲು ಭಾರತೀಯ ಸುರಕ್ಷಾ ಸಂಹಿತೆ 2023 ಸೆಕ್ಷನ್ 163 ರೀತ್ಯ ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ವ್ಯಾಪ್ತಿಯ ನಿ?ೇಧಾಜ್ಞೆಯನ್ನು ಜಾರಿಮಾಡಲಾಗಿದೆ. ಪರೀಕ್ಷಾ ಕೇಂದ್ರಗಳು: ION Digital Zone, IDZ hebbal jyothirgamaya Mansion ಜನವರಿ 06 ರಿಂದ 10 ರವರೆಗೆ ಹೆಬ್ಬಾಳ ಲ್ಲಿ ಪರೀಕ್ಷೆ ನಡೆಯಲ್ಲಿದ್ದು, Chandana resources center, mahadevapura main road ಜನವರಿ 07 ರಂದು ಉದಯಗಿರಿ ಯಲ್ಲಿ ಪರೀಕ್ಷೆ ನಡೆಯುವುದು ಎಂದು ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ತಿಳಿಸಿದ್ದಾರೆ.

# ಡಿ. ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನಕ್ಕಾಗಿ ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ಮೈಸೂರು:** 2024–25 ನೇ ಸಾಲಿನಲ್ಲಿ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಸ್ನಾತಕೋತ್ತರ ಪದವಿ ಹಾಗೂ ಪಿಹೆಚ್‌ಡಿ ಅಧ್ಯಾಯನ ಮಾಡುವ ಹಿಂದುಳಿದ ವರ್ಗಗಳ ಪ್ರವರ್ಗ–1, 2(ಎ) , 3(ಎ), ಹಾಗೂ 3(ಬಿ) ಗಳಿಗೆ ಸೇರಿದ ಅರ್ಹ ವಿದ್ಯಾರ್ಥಿಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ನೀಡುವ ಡಿ ದೇವರಾಜ ಅರಸು ವಿದೇಶಿ ವ್ಯಾಸಾಂಗ ವೇತನಕ್ಕೆ ಆನ್ ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸುವ ದಿನಾಂಕವನ್ನು ಜನವರಿ 15 ರ ವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ವೆಬ್ ಸೈಟ್ https://bcwd.Karnataka.gov.in ನ್ನೂ ನೋಡಬಹುದು ಹಾಗೂ ದೂ.ಸಂ 8050770004 ನ್ನು ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮಾಜ ಸೇವಕರನ್ನು ಗುರುತಿಸುವ ಕೆಲಸಕ್ಕೆ ಕೈಜೋಡಿಸಿ

**ಯಳಂದೂರು:** ತಾಲೂಕಿನ ಎಲ್ಲಾ ಜನಾಂಗಗಳಲ್ಲೂ ಸಾರ್ವಜನಿಕರಿಗೆ ಒಳ್ಳೆದಾಗಲಿ ಎಂದು ಅನೇಕ ಸಮಾಜ ಸೇವಕರಿದ್ದಾರೆ. ಇಂತಹ ಎಲ್ಲಾ ಜಾತಿ, ಧರ್ಮದ ವ್ಯಕ್ತಿಗಳನ್ನು ಗುರುತಿಸುವ ಕೆಲಸವನ್ನು ಸಮಾನ ಮನಸ್ಕರ ವೇದಿಕೆ ಮಾಡುತ್ತಿದ್ದು ಇದಕ್ಕೆ ಎಲ್ಲರೂ ಕೈ ಜೋಡಿಸಬೇಕು ಎಂದು ಕರ್ನಾಟ ರಾಜ್ಯ ವಿದ್ಯಾವಂತ ನಿರುದ್ಯೋಗಿಗಳ ಸಂಘದ ರಾಜ್ಯಾಧ್ಯಕ್ಷ ಕೂಡ್ಲೂರು ಶ್ರೀಧರ ಮೂರ್ತಿ ಕರೆ ನೀಡಿದರು.

ಅವರು ಬುಧವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕರೆದಿದ್ದ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ಶಾಲಾ, ಕಾಲೇಜು, ಆಸ್ಪತ್ರೆ, ವಿದ್ಯಾರ್ಥಿನಿಲಯ, ಆಟದ ಮೈದಾನ, ಸ್ಮಶಾನಗಳಿಗೆ ಸ್ಥಳವನ್ನು ದಾನ ನೀಡಿದ್ದಾರೆ. ಅನೇಕರು ಇದನ್ನು ಕಟ್ಟಿಸಲು ಸಹಾಯ ಮಾಡಿದ್ದಾರೆ. ನಾವು ತಾಲೂಕಿನಲ್ಲಿ ರಾಜ್ಯ ಮಟ್ಟದ ಕಬಡ್ಡಿ ಅಥವಾ ವಾಲಿಬಾಲ್ ಪಂದ್ಯಾವಳಿಯನ್ನು ಆಯೋಜಿಸಲು ಯೋಜನೆಯನ್ನು ರೂಪಿಸುತ್ತಿದ್ದೇವೆ. ಈ ಸಂದರ್ಭದಲ್ಲಿ ತಾಲೂಕಿನಲ್ಲಿ ವಿವಿಧ ಸಮಾಜ ಸೇವಕರನ್ನು ಗುರುತಿಸುವ ಕೆಲಸವನ್ನು ಮಾಡಲಾಗುತ್ತಿದೆ. ಪ್ರತಿ ಗ್ರಾಮಗಳಿಗೂ ತೆರಳಿ ಈ ಬಗ್ಗೆ



ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ. ಅನೇಕರಿಗೆ ತಮ್ಮ ಪೂರ್ವಜರು ನೀಡಿರುವ ದಾನ,ಧರ್ಮಗಳ ಅರಿವೆಯೇ ಇಲ್ಲ ಅಂತಹ ಕುಟುಂಬಗಳ ಬಗ್ಗೆಯೂ ನಮಗೆ ಮಾಹಿತಿ ಲಭ್ಯವಾಗಿದೆ. ಅವರನ್ನು ಈ ಕ್ರೀಡಾಕೂಟದಲ್ಲಿ ಸನ್ಮಾನಿಸುವ ಯೋಜನೆಯನ್ನು ರೂಪಿಸಲಾಗುತ್ತಿದೆ.

ಈ ಬಗ್ಗೆ ಚರ್ಚಿಸಲು ಜ. 10 ರಂದು ಗಂಟೆಗೆ ಪಟ್ಟಣದ ಷಡಕ್ಷರ ದೇವರ ಗದ್ದುಗೆಯ ಬಳಿ ತಾಲೂಕಿನ ಸರ್ವಜನಾಂಗದ ಸಭೆಯನ್ನು ಕರೆಯಲು ಉದ್ದೇಶಿಸಲಾಗಿದೆ. ಈಗಾಗಲೇ ಅನೇಕ ಗ್ರಾಮಗಳಿಗೆ ತೆರಳಿ ಖುದ್ದು ಮುಖಂಡರನ್ನು ಭೇಟಿಯಾಗಿ ಇದಕ್ಕೆ ಆಹ್ವಾನಿಸಲಾಗಿದೆ. ದೊಡ್ಡ ಮಟ್ಟದಲ್ಲಿ ಈ ಕ್ರೀಡಾಕೂಟಕ್ಕೆ ಯೋಜನೆ ರೂಪಿಸಲಾಗುತ್ತಿದ್ದು. ಇದರೊಂದಿಗೆ ಸೇವಾ ಕಾರ್ಯವನ್ನು ಮಾಡುವುದು ನಮ್ಮ ಉದ್ದೇಶವಾಗಿದೆ. ಹಾಗಾಗಿ ಸಮಾನ ಮನಸ್ಕರ ವೇದಿಕೆಯೊಂದಿಗೆ ಕರ್ನಾಟಕ ರಾಜ್ಯ ವಿದ್ಯಾವಂತ ನಿರುದ್ಯೋಗಿಗಳ ಸಂಘದ ವತಿಯಿಂದ ಫೆಬ್ರವರಿ ತಿಂಗಳಲ್ಲಿ ಇದನ್ನು ಆಯೋಜಿಸಲು ತೀರ್ಮಾನಿಸಲಾಗಿದೆ. ಹಾಗಾಗಿ ತಾಲೂಕಿನ ಎಲ್ಲಾ ಗ್ರಾಮದ ಪ್ರಮುಖರು ಈ ಸಭೆಯಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು.

ಸೋಮಶೇಖರ್, ಸುಬ್ಬು, ಪುಟ್ಟಮಾದಯ್ಯ, ಬಸವರಾಜು, ಚಂದ್ರಶೇಖರ್, ಡಾ. ದೊಡ್ಡರಾಜು, ಮಹದೇವಯ್ಯ, ರಾಜಶೇಖರ್, ಲಿಂಗರಾಜು, ನಂಜುಂಡಸ್ವಾಮಿ, ಬಸವಣ್ಣ ಸೇರಿದಂತೆ ಅನೇಕರು ಇದ್ದರು.

# ವ್ಯವಸ್ಥಾಪನಾ ಸಮಿತಿ ಅಧ್ಯಕ್ಷರಾಗಿ ಶ್ರೀನಿವಾಸ್ ಆಯ್ಕೆ

**ಯಳಂದೂರು:** ತಾಲೂಕಿನ ಪ್ರಸಿದ್ಧ ಪೌರಾಣಿಕ ಕ್ಷೇತ್ರವಾಗಿರುವ ಬಿಳಿಗಿರಿರಂಗನಬೆಟ್ಟದಲ್ಲಿರುವ ಶ್ರೀ ಬಿಳಿಗಿರಿರಂಗನಾಥಸ್ವಾಮಿ ದೇಗುಲದ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷರಾಗಿ ಜೆ. ಶ್ರೀನಿವಾಸ್‌ರನ್ನು ಒಮ್ಮತದಿಂದ ಆಯ್ಕೆ ಮಾಡಲಾಯಿತು.

ಈ ಸಂಬಂಧ ಬುಧವಾರ ಪಟ್ಟಣದ ಬಿಳಿಗಿರಿರಂಗನಾಥಸ್ವಾಮಿ ದೇಗುಲದ ಕಚೇರಿಯಲ್ಲಿ ಕಾರ್ಯನಿರ್ವಾಹಕ ಅಧಿಕಾರಿ ಮೋಹನ್‌ಕುಮಾರ್ ನೇತೃತ್ವದಲ್ಲಿ ನಡೆದ ಸಮಿತಿಯ ಮೊದಲ ಸಭೆಯಲ್ಲಿ ಜೆ. ಶ್ರೀನಿವಾಸ್‌ರನ್ನು ಎಲ್ಲರೂ ಒಮ್ಮತದಿಂದ ಅಧ್ಯಕ್ಷಗಾದಿಗೆ ಆಯ್ಕೆ ಮಾಡಿದರು. ಒಟ್ಟು ಈ ಸಮಿತಿಯಲ್ಲಿ 9 ಮಂದಿ ಸದಸ್ಯರು ಇದ್ದಾರೆ.

ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಜೆ. ಶ್ರೀನಿವಾಸ್ ಮಾತನಾಡಿ, ಬಿಳಿಗಿರಿರಂಗನಬೆಟ್ಟದ ದೇವಸ್ಥಾನಕ್ಕೆ ಪೌರಾಣಿಕ ಹಿನ್ನೆಲೆ ಇದೆ. ಈ ದೇಗುಲ ಅತ್ಯಂತ ಪುರಾತನ ದೇಗುಲವಾಗಿದ್ದು ಪ್ರತಿ ವರ್ಷ ಲಕ್ಷಾಂತರ ಭಕ್ತರು ಇಲ್ಲಿಗೆ ಭೇಟಿ ನೀಡುತ್ತಾರೆ. ಅಲ್ಲದೆ ವರ್ಷದಲ್ಲಿ ಎರಡು ಬಾರಿ ಇಲ್ಲಿ ರಥೋತ್ಸವ ನಡೆಯುತ್ತದೆ. ಅಲ್ಲದೆ ಗಂಗಾಧರೇಶ್ವರನ ದೇಗುಲದಲ್ಲೂ ತೇರು ನಡೆಯುತ್ತದೆ. ದೇಶವಿದೇಶಗಳಿಂದಲೂ ಇಲ್ಲಿಗೆ ಭಕ್ತರು ಬರುತ್ತಾರೆ. ಇಲ್ಲಿಗೆ ಈಚೆಗೆ ಬರುವ ಭಕ್ತರ ಸಂಖ್ಯೆಯಲ್ಲಿ ಏರಿಕೆ ಕಂಡು



ಬರುತ್ತಿದೆ. ಇಲ್ಲಿಗೆ ಬರುವ ಭಕ್ತರಿಗೆ ಮೂಲ ಸವಲತ್ತುಗಳನ್ನು ನೀಡಲು ಇನ್ನಷ್ಟು ನೂತನ ಸವಲತ್ತುಗಳನ್ನು ನೀಡಲು ನಾನು ಪ್ರಮಾಣಿಕವಾಗಿ ಪ್ರಯತ್ನ ಮಾಡುತ್ತೇನೆ. ದೇಗುಲದ ಅಭಿವೃದ್ಧಿಗೆ ತೆಗೆದುಕೊಳ್ಳುವ ಎಲ್ಲಾ ನಿರ್ಧಾರಗಳಿಗೂ ನಾನು ಬದ್ಧನಾಗಿ ಕರ್ತವ್ಯ ನಿರ್ವಹಿಸುತ್ತೇನೆ. ಈ ಸಮಿತಿಯಲ್ಲಿ 9 ಜನ ಸದಸ್ಯರಿದ್ದು ಎಲ್ಲಾ ಸದಸ್ಯರ, ಸ್ಥಳೀಯ ಶಾಸಕರ ಹಾಗೂ ಚುನಾಯಿತಿ ಜನಪ್ರತಿನಿಧಿಗಳು ಎಲ್ಲಕ್ಕಿಂತ ಹೆಚ್ಚಾಗಿ ಭಕ್ತರು ಸೇರಿದಂತೆ ಎಲ್ಲರ ಸಲಹೆ ಸೂಚನೆಗಳನ್ನು ಪಡೆದುಕೊಂಡು ದೇಗುಲವನ್ನು ಇನ್ನಷ್ಟು ಅಭಿವೃದ್ಧಿ ಪಡಿಸಿ, ಬರುವ ಭಕ್ತರಿಗೆ ಸಕಲ ಸೌಲಭ್ಯಗಳನ್ನು ನೀಡಲು ಪ್ರಮಾಣಿಕವಾಗಿ ಶ್ರಮಿಸುತ್ತೇನೆ. ನನ್ನನ್ನು ಈ ಸ್ಥಾನಕ್ಕೆ ಒಮ್ಮತದಿಂದ ಆಯ್ಕೆ ಮಾಡಿದ ಎಲ್ಲರಿಗೂ ಕೃತಜ್ಞತೆಯನ್ನು ಸಲ್ಲಿಸುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆಯ ಅನುಷ್ಠಾನದ ಜಿಲ್ಲಾಧ್ಯಕ್ಷ ಎಚ್.ವಿ. ಚಂದ್ರು, ವ್ಯವಸ್ಥಾಪನಾ ಸಮಿತಿ ಸದಸ್ಯರಾದ ಗುಂಬಳ್ಳಿ ರಾಜಣ್ಣ, ಕೇತಮ್ಮ, ಸ್ಫೂರ್ತಿ, ವೆಂಕಟರಾಮು, ಸಿದ್ದರಾಜು, ಎಂ. ಸುರೇಶ್, ವಿ. ನಾರಾಯಣಸ್ವಾಮಿ, ಅರ್ಚಕ ರವಿಕುಮಾರ್ ಕಾರ್ಯನಿರ್ವಾಹಕ ಅಧಿಕಾರಿ ಮೋಹನ್‌ಕುಮಾರ್ ಪಾರುಪತ್ತೇದಾರ ರಾಜು, ಯರಿಯೂರು ನಾಗೇಂದ್ರ, ಕೃಷಿಕ ಸಮಾಜದ ಅಧ್ಯಕ್ಷ ಗೌಡಹಳ್ಳಿ ರವಿ, ಟಿಎಪಿಸಿಎಂಎಸ್ ನಿರ್ದೇಶಕ ಪುಟ್ಟರಾಜು, ವಿಜಯ್, ಸೇರಿದಂತೆ ಅನೇಕರು ಇದ್ದರು.

# ಸಂಜೆ ಟಿಪ್ಸ್

## ಮಕ್ಕಳಲ್ಲಿ ಓದುವ ಪ್ರವೃತ್ತಿಯನ್ನು ಬೆಳೆಸುವಲ್ಲಿ ಅಜ್ಜ-ಅಜ್ಜಿಯರ ಪಾತ್ರ ಹಿರಿದು



ಮಕ್ಕಳಲ್ಲಿ ಓದುವ ಪ್ರವೃತ್ತಿಯನ್ನು ಬೆಳೆಸುವಲ್ಲಿ ಅಜ್ಜ-ಅಜ್ಜಿಯರ ಪಾತ್ರ ಹಿರಿದಿದೆ. ಮಕ್ಕಳು ಟಿವಿ ಮತ್ತು ಮೊಬೈಲ್ ನಿಂದ ದೂರವಿರಿಸಲು ರಾಮಾಯಣ ಮಹಾಭಾರತದಂತಹ ಕಥೆಗಳನ್ನು ಹಿರಿಯರು ಮಕ್ಕಳೊಡನೆ ಹಂಚಿಕೊಳ್ಳಬೇಕು. ಮಕ್ಕಳಲ್ಲಿ ಓದುವ ಆಸಕ್ತಿಗೆ ನೀರೆರೆದು ಪೋಷಿಸಿದರೆ, ಮುಂದೆ ಮಕ್ಕಳು ಅವರು ಆಯ್ದು ಕೊಂಡ ಕ್ಷೇತ್ರದಲ್ಲಿ ಅದ್ವಿತೀಯ ಸಾಧನೆ ಮಾಡಬಹುದು ಎಂದು ಬ್ಯಾಂಕರ್ಸ್ ಕನ್ನಡಿಗರ ಬಳಗದ ಅಧ್ಯಕ್ಷ ಎಂ ವೆಂಕಟೇಶ ಶೇಷಾದ್ರಿ ತಿಳಿಸಿದರು. ಶ್ರೀಯುತರು ಬೆಂಗಳೂರಿನ ಬ್ಯಾಂಕರ್ಸ್ ಕನ್ನಡಿಗರ ಬಳಗವು ಡಿಗ್ನಿಟಿ ಫೌಂಡೇಶನ್ ಆಶ್ರಯದಲ್ಲಿ ಹಿರಿಯ ನಾಗರೀಕರಿಗೆ ನಡೆಸಿದ ಕರ್ನಾಟಕ ರಸಪ್ರಶ್ನೆ ಸ್ಪರ್ಧೆಯಲ್ಲಿ ವಿಜೇತರಾದ ಸ್ಪರ್ಧಿಗಳಿಗೆ ಬಹುಮಾನವನ್ನು ವಿತರಿಸಿ ಮಾತನಾಡುತ್ತಿದ್ದರು. ಬ್ಯಾಂಕರ್ಸ್ ಕನ್ನಡಿಗರ ಬಳಗವು 69 ನೇ ಕನ್ನಡ ರಾಜ್ಯೋತ್ಸವದ ಅಂಗವಾಗಿ ರಾಜ್ಯಾದ್ಯಂತ 69 ಕೇಂದ್ರಗಳಲ್ಲಿ ರಸಪ್ರಶ್ನೆ ಸ್ಪರ್ಧೆಯನ್ನು ಏರ್ಪಡಿಸಲು ತೀರ್ಮಾನಿಸಿದ್ದು, ಈಗಾಗಲೇ ಮುನಿರಾಬಾದ್, ಹಾರೋಹಳ್ಳಿ, ಕೊಳ್ಳೆಗಾಲ, ಭದ್ರಾವತಿ ಮತ್ತು ಬೆಂಗಳೂರಿನಲ್ಲಿ ಈ ಸ್ಪರ್ಧೆಗಳನ್ನು ಏರ್ಪಡಿಸಿದೆ ಎಂದರು. ಡಿಗ್ನಿಟಿ ಫೌಂಡೇಶನ್ ನ ಮುಖ್ಯಸ್ಥೆ ಶ್ರೀಮತಿ ಬೃಂದಾ ರಮೇಶ್ ರವರು ಮಾತನಾಡಿ ಡಿಗ್ನಿಟಿ ಫೌಂಡೇಶನ್ ನಡೆದು ಬಂದ ದಾರಿ ಮತ್ತು ಸಮಾಜ ಮುಖಿ ಸೇವೆಗಳ ಬಗ್ಗೆ ವಿವರಿಸಿದರು. ಈ ಸಂದರ್ಭದಲ್ಲಿ ಬಳಗದ ಕಾರ್ಯದರ್ಶಿ ಶ್ರೀ ಕೆ ಜಿ ಸಂಪತ್ ಕುಮಾರ್ ರವರಿಂದ ಟಿ ಪಿ ಕೈಲಾಸಂ ಬಗ್ಗೆ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು.ಬಹುಮಾನ ವಿಜೇತರಿಗೆ ಕನ್ನಡ ಪುಸ್ತಕಗಳನ್ನು ಬಹುಮಾನವಾಗಿ ನೀಡಲಾಯಿತು. ಈ ಸಂದರ್ಭದಲ್ಲಿ ಡಿಗ್ನಿಟಿ ಫೌಂಡೇಶನ್ ನ ಜಯನಗರ ವಿಭಾಗದ ಮುಖ್ಯಸ್ಥೆ ಶಾಂತಾ ಅನಿಲ್ ರವರು ಉಪಸ್ಥಿತರಿದ್ದರು.

## ಟೊಮ್ಯಾಟೋ ಬಾತ್

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಬೇಕಾಗುವ ಪದಾರ್ಥಗಳು: ★ ಅಕ್ಕಿ ಕಾಲು ಕೆಜಿ ★ ಟೊಮ್ಯಾಟೋ 5-6 ಈರುಳ್ಳಿ 1 ★ ಖಾರದಪುಡಿ 2 ಚಮಚ ★ ಅರಿಶಿಣ ಚಿಟಿಕೆಯಷ್ಟು ಉಪ್ಪು ರುಚಿಗೆ ★ ಕಾಳುಮೆಣಸು 4 ★ ಲವಂಗ 2 ★ ಕರಿಬೇವು ಸ್ವಲ್ಪ ★ ಕೊತ್ತಂಬರಿ ಸ್ವಲ್ಪ ★ ಎಣ್ಣೆ 15 ಟೇಬಲ್ ಸ್ಪೂನ್ ಎಣ್ಣೆ ★ ಜೀರಿಗೆ ಕಾಲು ಸ್ಪೂನ್ ★ ಸಾಸಿವೆ ಕಾಲು ಸ್ಪೂನ್

### ಮಾಡುವ ವಿಧಾನ

**ಮಾಡುವ ವಿಧಾನ: ಮೊದಲಿಗೆ ಅನ್ನವನ್ನು ಮಾಡಿಕೊಳ್ಳಿ / ಒಂದು ಪಾತ್ರೆಯನ್ನು ಗ್ಯಾಸ್ ಮೇಲೆ ಇಟ್ಟು ಸಣ್ಣ ಉರಿ ಇಡಿ. ಇದಕ್ಕೆ ಎಣ್ಣೆಯನ್ನು ಹಾಕಿ ಸ್ವಲ್ಪ ಬಿಸಿ ಮಾಡಲು ಬಿಡಿ. ಎಣ್ಣೆ ಬಿಸಿ ಆದ ನಂತರ ಸಾಸಿವೆ, ಜೀರಿಗೆ ಹಾಕಿ ಚಟಪಟ ಅನ್ನೋವರೆಗೆ ಬಿಡಿ. ನಂತರ ಇದಕ್ಕೆ ಇರುಳ್ಳಿ ಹಾಕಿ ಸ್ವಲ್ಪ ಕೆಂಪಾಗುವವರೆಗೆ ಹುರಿಯಿರಿ. ಒಂದು ಮಿಕ್ಸಿ ಜಾರ್ಗೆ ಟೊಮ್ಯಾಟೋ ಹಾಕಿ ನುಣ್ಣಗೆ ರುಬ್ಬಿಕೊಳ್ಳಿ. ಈ ಪೇಸ್ಟ್ ಅನ್ನು ಒಗ್ಗರಣೆಗೆ ಹಾಕಿ ಹಸಿ ವಾಸನೆ ಹೋಗಿ ಎಣ್ಣೆ ಮೇಲೆ ತೇಲುವವರೆಗೂ ಬಿಡಿ. ನಂತರ ಇದಕ್ಕೆ ಅರಿಶಿಣ, ಉಪ್ಪು, ಖಾರದಪುಡಿ ಹಾಕಿ ಚೆನ್ನಾಗಿ ಕದಡಿ ಕರಿಬೇವು, ಕೊತ್ತೊಂಬರಿ ಸೊಪ್ಪು, ಲವಂಗ, ಕಾಳುಮೆಣಸು ಹಾಕಿ ಚೆನ್ನಾಗಿ ಕಲಸಿ. (ಬೇಕಿದ್ದಲ್ಲಿ ಹಸಿ ಬಟಾಣಿ ಕೂಡ ಹಾಕಿಕೊಳ್ಳಬಹುದು) ಸ್ವಲ್ಪ ಹೊತ್ತು ಬಿಡಿ.. ಇದರಲ್ಲಿ ಸ್ವಲ್ಪ ಚಟ್ನಿಯನ್ನು ತೆಗೆದಿಟ್ಟುಕೊಳ್ಳಿ. ★ ಇಳಿದ ಚಟ್ನಿಯಲ್ಲಿ ರೈಸ್ ಹಾಕಿ ಚೆನ್ನಾಗಿ ಮಿಕ್ಸ್ ಮಾಡಿ, ಸಣ್ಣ ಉರಿಯಲ್ಲಿ ಬಿಟ್ಟುಬಿಡಿ.**

# ಸೂಪರ್ ಸ್ಟಾರ್ ಜೊತೆ ಸಾನಿಯಾ ಮಿರ್ಜಾ ಡೇಟಿಂಗ್



ಸ್ಟಾರ್ ಟೆನಿಸ್ ತಾರೆ ಸಾನಿಯಾ 14 ವರ್ಷಗಳ ಹಿಂದೆ ಪಾಕಿಸ್ತಾನದ ಮಾಜಿ ಕ್ರಿಕೆಟಿಗ ಶೋಯೆಬ್ ಮಲಿಕ್ ಅವರನ್ನು ವಿವಾಹವಾಗಿದ್ದರು. ಕ್ರೀಡಾ ಲೋಕದಲ್ಲಿ ವಿಶೇಷ ಆಕರ್ಷಣೆಯಾಗಿದ್ದ ಈ ಸೆಲೆಬ್ರಿಟಿ ಜೋಡಿಯ ದಾಂಪತ್ಯ ಬಾಂಧವ್ಯ ಹೆಚ್ಚು ಕಾಲ ಉಳಿಯಲಿಲ್ಲ. ಕೆಲವು ವರ್ಷಗಳ ಹಿಂದೆ ದಂಪತಿಗಳು ಬೇರ್ಪಟ್ಟರು. ಇದೀಗ ಹೊಸ ವಿಚಾರವೊಂದು ಮುನ್ನೆಲೆಗೆ ಬಂದಿದೆ..

ಕೆಲವು ವರ್ಷಗಳ ಹಿಂದೆ ಭಾರತದ ಟೆನಿಸ್ ತಾರೆ ಸಾನಿಯಾ ಮಿರ್ಜಾ ಟೆನಿಸ್ ಅಂಕಣದಲ್ಲಿ ಸತತ ಗೆಲುವಿನ ಮೂಲಕ ಸುದ್ದಿಯಲ್ಲಿರುತ್ತಿದ್ದರು. ಈಗ ಈ ಸುಂದರಿಯ ವೈಯಕ್ತಿಕ ಜೀವನ ಮತ್ತು ಸಂಬಂಧದ ಬಗ್ಗೆ ಊಹಾಪೋಹಗಳ ಬಗ್ಗೆ ಸಾಕಷ್ಟು ಚರ್ಚೆಗಳು ನಡೆಯುತ್ತಿವೆ.

ಸಾನಿಯಾ 14 ವರ್ಷಗಳ ಹಿಂದೆ ಪಾಕಿಸ್ತಾನದ ಮಾಜಿ ಕ್ರಿಕೆಟಿಗ ಶೋಯೆಬ್ ಮಲಿಕ್ ಅವರನ್ನು ವಿವಾಹವಾಗಿದ್ದರು. ಕ್ರೀಡಾ ಲೋಕದಲ್ಲಿ ವಿಶೇಷ ಆಕರ್ಷಣೆಯಾಗಿದ್ದ ಈ ಸೆಲೆಬ್ರಿಟಿ ಜೋಡಿಯ ದಾಂಪತ್ಯ ಬಾಂಧವ್ಯ ಹೆಚ್ಚು ಕಾಲ ಉಳಿಯಲಿಲ್ಲ. ಕೆಲವು ವರ್ಷಗಳ ಹಿಂದೆ ಡಿವೋರ್ಸ್ ಪಡೆದಿದ್ದರು.. ಶೋಯೆಬ್ ಮಲಿಕ್ ಬೇರೊಬ್ಬ ಮಹಿಳೆಯನ್ನು ಪ್ರೀತಿಸುತ್ತಿದ್ದಾರೆ ಎಂದು ಸಾನಿಯಾಗೆ ತಿಳಿದಿತ್ತು. ಆದ್ದರಿಂದ ವಿಚ್ಛೇದನಕ್ಕೆ ಒತ್ತಾಯಿಸಿದರು ಎಂದು ಕೆಲವು ವರದಿಗಳು ಹೇಳಿವೆ. ಈ ದಂಪತಿಗೆ ಒಬ್ಬ ಮಗ ಕೂಡ ಜನಿಸಿದ್ದಾನೆ. ಇವರಿಬ್ಬರ ವಿಚ್ಛೇದನದ ಸುದ್ದಿ ಅಭಿಮಾನಿಗಳಿಗೆ ದೊಡ್ಡ ಶಾಕ್ ನೀಡಿತ್ತು. ಈ ಸಂಕಷ್ಟದ ಸಮಯದಲ್ಲಿ ಸಾನಿಯಾಗೆ ಅನೇಕರು ಬೆಂಬಲ ನೀಡಿದರು. ಬ್ರೇಕಪ್ ನಂತರ ಶೋಯೆಬ್ ಮಲಿಕ್ ಮತ್ತೆ ಮದುವೆಯಾದರು. ಆದೇ ರೀತಿ ಸಾನಿಯಾ ಕ್ರಿಕೆಟ್ ಆಟಗಾರರೊಬ್ಬರ ಜೊತೆ ಡೇಟಿಂಗ್ ಮಾಡುತ್ತಿದ್ದಾರೆ ಎಂಬ ವದಂತಿ ಹಬ್ಬಿತ್ತು. ಇದರ ನಡುವೆ ಸದ್ಯದಲ್ಲೇ ತೆಲುಗು ನಾಯಕನನ್ನು ಮಿರ್ಜಾ ಮದುವೆಯಾಗಲಿದ್ದಾರೆ ಎಂಬ ಹೊಸ ಸುದ್ದಿಗಳು ಹರಿದಾಡುತ್ತಿವೆ. ಸಾನಿಯಾ ಜೊತೆಗಿನ ವಿಚ್ಛೇದನದ ನಂತರ ಶೋಯೆಬ್ ಮಲಿಕ್ ಪಾಕಿಸ್ತಾನದ ಜನಪ್ರಿಯ ನಟಿ ಸನಾ ಜಾವೇದ್ ಅವರನ್ನು ವಿವಾಹವಾದರು. ಮದುವೆಯ ಫೋಟೋಗಳನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ. ಅದಕ್ಕೂ ಮುನ್ನ ಇವರಿಬ್ಬರು ಕೆಲ ಕಾಲ ಡೇಟಿಂಗ್ ಮಾಡುತ್ತಿದ್ದಾರೆ ಎಂಬ ವರದಿಗಳು ಬಂದಿದ್ದವು. ವಿಚ್ಛೇದನ ಪಡೆದಾಗಿನಿಂದ ಸಾನಿಯಾ ಮಿರ್ಜಾ ಸಾಮಾಜಿಕ ಜಾಲತಾಣಗಳಲ್ಲಿ ಟ್ರೆಂಡಿಂಗ್ ಟಾಪಿಕ್ ಆಗಿದ್ದಾರೆ. ಇತ್ತೀಚೆಗೆ, ಪಾಕಿಸ್ತಾನಿ ನಟ ನಬೀಲ್ ಜಾಫರ್ ಅವರು ಕಾರ್ಯಕ್ರಮವೊಂದರಲ್ಲಿ ಸಾನಿಯಾ ಭವಿಷ್ಯದ ಬಗ್ಗೆ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡಿದ್ದಾರೆ. ವಿಚ್ಛೇದನ ಎಂದರೆ ಜೀವನ ನಿಂತುಹೋಗಿದೆ ಎಂದಲ್ಲ. ಇದೊಂದು ದುರದೃಷ್ಟಕರ ಘಟನೆಯಾದರೂ ಯಾರ ಬದುಕೂ ಕತ್ತಲಾಗಬಾರದು. ಸಾನಿಯಾಗೆ ಒಳ್ಳೆಯ ಸಂಗಾತಿ ಸಿಕ್ಕರೆ ಮತ್ತೆ ಮದುವೆಯಾಗುವುದು ಖಚಿತ. ಶೋಯೆಬ್ ಈಗಾಗಲೇ ಎರಡನೇ ಮದುವೆಯಾಗಿದ್ದಾರೆ ಎಂದು ಅವರು ಹೇಳಿದರು. ಅವರ ಹೇಳಿಕೆ ವೈರಲ್ ಆಗಿದೆ. ಇದರ ಬೆನ್ನಲ್ಲೇ, ಸಾನಿಯಾ ಮಿರ್ಜಾ ತೆಲುಗು ಸೂಪರ್ ಸ್ಟಾರ್ ಜೊತೆ ಡೇಟಿಂಗ್ ಮಾಡುತ್ತಿದ್ದಾರೆ ಎಂದು ನೆಟ್ಟಿಗರು ಗುಸುಗುಸು ಮಾಡುತ್ತಿದ್ದಾರೆ. ನಟನ ಹೆಸರನ್ನು ಬಹಿರಂಗಪಡಿಸದಿದ್ದರೂ, ಅನೇಕ ಅಭಿಮಾನಿಗಳು ಈ ಸಂಬಂಧವು ಮದುವೆವರೆಗೂ ಬರುತ್ತದೆ ಎಂದು ನಂಬುತ್ತಾರೆ. ಸಾಮಾಜಿಕ ಮಾಧ್ಯಮ ಬಳಕೆದಾರರ ನಾಯಕ ಯಾರು..? ಎಂದು ತಲೆಕೆಡಿಸಿಕೊಂಡಿದ್ದಾರೆ.. ಈ ವದಂತಿಗಳಿಗೆ ಸಾನಿಯಾ ಮಿರ್ಜಾ ಇನ್ನೂ ಪ್ರತಿಕ್ರಿಯಿಸಿಲ್ಲ. ಅವರು ತಮ್ಮ ಭವಿಷ್ಯದ ಯೋಜನೆಗಳ ಬಗ್ಗೆ ಮಾತನಾಡಲಿಲ್ಲ. ಈ ಹಿಂದೆ ಭಾರತೀಯ ಕ್ರಿಕೆಟಿಗ ಮೊಹಮ್ಮದ್ ಶಮಿ ಜೊತೆ ಸಾನಿಯಾ ಮದುವೆ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಸುದ್ದಿಯಾಗಿತ್ತು. ಆದರೆ ಇವೆಲ್ಲವೂ ವದಂತಿಗಳು ಎಂಬುದು ನಂತರ ಸ್ಪಷ್ಟವಾಯಿತು.

## ಸೊಂಟ ನೋವಿಗೆ ಕಾರಣಗಳು



### ಹೆಲ್ತ್ ಟಿಪ್ಸ್

ಬ್ಯಾಕ್ ಸ್ಟ್ರೈನ್: ಸಾಮಾನ್ಯವಾಗಿ ಜನರು ಬೈಕ್ ಅಥವಾ ಕಾರ್ ನಲ್ಲಿ ಪ್ರಯಾಣಿಸುವಾಗ ಅಥವಾ ಬಸ್ ನಲ್ಲಿ ಓಡಾಡುತ್ತಿರುವಾಗ ರಸ್ತೆ ಸರಿ ಇಲ್ಲದೆ ಹೆಚ್ಚಾಗಿ ವಾಹನ ಜೆರ್ಕ್ ಹೊಡೆಯುವುದು ಅಥವಾ ರಸ್ತೆ ಹಂಪ್ ನಿಂದ ಹೆಚ್ಚಾಗಿ ವಾಹನ ಸಡನ್ ಆಗಿ ಗುಂಡಿಗೆ ಇಳಿದು ಹತ್ತುವುದರಿಂದ ಬ್ಯಾಕ್ ಪೈನ್ ಆಗುವ ಸಾಧ್ಯತೆ ಹೆಚ್ಚಿರುತ್ತದೆ . ವಿಟಮಿನ್ ಡಿ ಅಥವಾ ಕ್ಯಾಲ್ಸಿಯಂ ಕೊರತೆ: ಹೌದು . ನಮ್ಮ ಆಹಾರ ಸೇವನೆ ಕೂಡ ನಮಗೆ ಬರುವ ಸೊಂಟ ನೋವಿಗೆ ಕಾರಣವಾಗಬಹುದು . ಇದು ದೇಹದಲ್ಲಿನ ವಿಟಮಿನ್ ಅಥವಾ ಕ್ಯಾಲ್ಸಿಯಂ ಕೊರತೆ ಇಂದ ಕೂಡ ಬರುತ್ತೆ .

ಹೆಚ್ಚು ಭಾರ ಹೊರವುದು: ಸಾಮಾನ್ಯವಾಗಿ ಸ್ತ್ರೀಯರು ಈ ಕಾರಣದಿಂದ ಸೊಂಟ ನೋವು ಹೊಂದುತ್ತಾರೆ . ಮನೆ ಕೆಲಸಗಳಲ್ಲಿ ತೊಡಗಿರುವಾಗ ಬಕೆಟ್ ಎತ್ತುವ ಸಂದರ್ಭ ಅಥವಾ ಮಗುವನ್ನು ಎತ್ತಿಕೊಳ್ಳುವ ಸಂಧರ್ಭ ಈ ರೀತಿಯ ಸನ್ನಿವಾಶಗಳಲ್ಲಿ ಸೊಂಟ ನೋವು ಬರುವ ಸಾಧ್ಯತೆ ಇರುತ್ತದೆ . ಒಂದೇ ಕಡೆ ಹೆಚ್ಚು ಹೊತ್ತು ಕೂರುವುದು: ಹೌದು ಇದು ಕೂಡ ಸೊಂಟ ನೋವಿಗೆ ಪ್ರಮುಖ ಕಾರಣ. ಸಾಮಾನ್ಯವಾಗಿ ಬೆಳಿಗ್ಗೆಯಿಂದ ಸಂಜೆಯವರೆಗೂ ಕಂಪ್ಯೂಟರ್ ಮುಂದೆ ಕೂತು ಯಾವುದೇ ರೀತಿಯ ಚಲನೆ ಇಲ್ಲದೆ ಇರುವುದರಿಂದ ಸೊಂಟ ನೋವು ಬರುತ್ತೆ .

ಬೊಜ್ಜು ಅಥವಾ ಹೆಚ್ಚಾಗಿ ದೇಹದ ತೂಕ ಹೊಂದಿರುವುದು . ನಿಮ್ಮ ದೇಹದ ತೂಕ ಹೆಚ್ಚಾಗಿದ್ದು ಅದರಲ್ಲಿ ಬೊಜ್ಜು ಹೆಚ್ಚಿದ್ದರೆ ಕೂಡ ಸೊಂಟ ನೋವು ಬರುವ ಸಾಧ್ಯತೆ ಇರುತ್ತೆ . ಕೂರುವ ಅಥವಾ ಮಲಗುವ ಭಂಗಿ ಸರಿಯಿಲ್ಲದಿರುವುದು ಸರಿಯಾದ ಕೂರುವ ಹಾಗು ಮಲಗುವ ಭಂಗಿ ಇಲ್ಲದಿದ್ದರೂ ಸಹ ಸೊಂಟ ನೋವು ಕಾಣಿಸಿಕೊಳ್ಳಬಹುದು . ಇದರಿಂದ ದೇಹದ ಸ್ಪೈನ್ ಗೆ ಎಫೆಕ್ಟ್ ಆಗಿ ನೋವು ಕಾಣಿಸುತ್ತೆ.

ಲಕ್ಷಣಗಳು: ಸೊಂಟ ಬಿಗಿಯಾಗುವುದು ಸೊಂಟ ನೋವಿನಿಂದ ನಮ್ಮ ದಿನದ ಕೆಲಸಗಳಿಗೆ ಬಹಳ ತೊಂದರೆ ಆಗಿಬಿಡುತ್ತೆ . ಸೊಂಟ ನೋವಿನಿಂದ ಕೆಲವರಿಗೆ ಸ್ಟಿಫ್ನೆಸ್ ಉಂಟಾಗಿ ಅವರು ಮುಂದೆ ಅಥವಾ ಹಿಂದೆ ಬಗ್ಗಲು ಆಗುವುದಿಲ್ಲ . ಕಷ್ಟ ಪಟ್ಟು ಬಗ್ಗಿದರು ಸಹ ನೋವು ಉಂಟಾಗುತ್ತೆ . ನಡೆಯುವಾಗ ನೋವು ಕಾಣಿಸುವುದು, ಸೊಂಟ ನೋವು ಇರುವವರು ನಡೆಯುವಾಗ ಸೊಂಟದಿಂದ ಹಿಡಿದು ಕಾಲಿನ ವರೆಗೂ ನೋವು ಹರಡಿ ನಡೆಯಲು ಬಹಳ ಕಷ್ಟವಾಗುತ್ತೆ . ಇದನ್ನು ರೇಡಿಯೇಟಿಂಗ್ ನೋವು ಎನ್ನುತ್ತಾರೆ . ಈ ರೀತಿಯ ಸಮಸ್ಯೆ ಉಳ್ಳವರು ಕೇವಲ ಸೊಂಟದಲ್ಲಿ ನೋವು ಇರದೇ ಇತರ ಭಾಗಗಳಿಗೂ ಹರಡಿ ಹೆಚ್ಚು ಕಿರಿಕಿರಿ ಮಾಡುತ್ತೆ .

## ಒಳ್ಳೆಯ ಉಗುರು ಉತ್ತಮ ಆರೋಗ್ಯದ ಸಂಕೇತ

### ರಕ್ಷಣೆ

**ಉಗುರುಗಳನ್ನು ಸ್ವಚ್ಛವಾಗಿ ಮತ್ತು ಒಣಗಿದಂತೆ ಇರಿಸಿ.● ಉಗುರು ಕಚ್ಚುವ ದುರಭ್ಯಾಸ ಬೇಡ ● ಉಗುರು ಬಿರುಕು ಬಿಡದಂತೆ ಮಾಯಿಶ್ಚರೈಸರ್ ಹಚ್ಚಿ. ಉಗುರುಗಳನ್ನು ನಾಜೂಕಾಗಿ ಕತ್ತರಿಸಿ ● ಕಾಲುಬೆರಳುಗಳ ಉಗುರುಗಳನ್ನು ಅದಷ್ಟು ಹಿಂದಕ್ಕೆ ಕತ್ತರಿಸುತ್ತಾ ಹೋಗಬೇಡಿ. ● ಸಮತೋಲನವಾದ ಪುಷ್ಟಿಕರ ಆಹಾರ ಸೇವನೆ ಮಾಡಿ. ● ನೀವು ವೈದ್ಯರ ಬಳಿ ಹೋದಾಗ, ನಿಮ್ಮ ಉಗುರನ್ನು ಒಮ್ಮೆ ಪರೀಕ್ಷಿಸುವಂತೆ ಹೇಳಿ. ಏಕೆಂದರೆ ಉಗುರು ನಿಮ್ಮ ದೇಹದ ಕಿಟಕಿಯಂತೆ ಕೆಲಸ ಮಾಡುತ್ತದೆ. ಹಳದಿ ಬಣ್ಣಯುಕ್ತ ಉಗುರು (ಸಕ್ಕರೆ ಕಾಯಿಲೆಯನ್ನು) ಅರ್ಧ ಬಿಳಿ, ಅರ್ಧ ಕೆಂಪು ಇರುವ ಉಗುರುಗಳು ಕಿಡ್ನಿ ಸಮಸ್ಯೆಯನ್ನು ತೋರಿಸುತ್ತವೆ.**

ಉತ್ತಮ ಆರೋಗ್ಯದ ಸಂಕೇತ ಉಗುರು. ಉಗುರುಗಳಲ್ಲಿ ಕಾಣುವ ಉಬ್ಬು ತಗ್ಗುಗಳು, ಅಲ್ಲಿ ಮೂಡುವ ಬಣ್ಣ ಗೆರೆಗಳೆಲ್ಲ ಶರೀರದ ಆರೋಗ್ಯಕರ ಲಕ್ಷಣಗಳು. ಉಗುರುಗಳ ವಿಶ್ಲೇಷಣೆ ಮಾಡಿ ಆರೋಗ್ಯದ ಮಟ್ಟವನ್ನು ಗುರುತಿಸಬಹುದು.

ನಿಮ್ಮ ದೇಹದ ಪ್ರತಿಯೊಂದು ಭಾಗವೂ ನೀವೆಷ್ಟು ಆರೋಗ್ಯವಂತರಾಗಿರುವಿರಿ ಎಂಬುದನ್ನು ತೋರಿಸುತ್ತದೆ. ನಿಮ್ಮ ಕೈಬೆರಳುಗಳ ತುದಿಯಲ್ಲಿರುವ ಉಗುರುಗಳನ್ನೊಮ್ಮೆ ನೋಡಿಕೊಳ್ಳಿ. ಅನೇಕರಿಗೆ ಅನೇಕ ರೀತಿಯ ಉಗುರುಗಳು ಇರುತ್ತವೆ. ಉಗುರಿನ ಬಣ್ಣ ಅಲ್ಲಲ್ಲಿ ಬಿಳಿ ಮಚ್ಚೆಗಳು. ಕೆಲವು ಕಡೆ ಗುಲಾಬಿ ಬಣ್ಣದೋಪಾದಿ. ಕೆಲವು ಕಡೆ ಉಗುರು ಹಳ್ಳ ಬಿದ್ದಿರುತ್ತದೆ. ಅಥವಾ ಊದಿಕೊಂಡಿರುತ್ತದೆ ಇತ್ಯಾದಿ.

'ನಮ್ಮ ಕಣ್ಣುಗಳು ಯಾವ ರೀತಿ ಈ ಪ್ರಪಂಚವನ್ನು ಕಾಣಲು ಕಿಟಕಿಗಳಾಗಿರುವವೋ, ಗುರುಗಳೂ ಅದೇ ರೀತಿ ವ್ಯಕ್ತಿಯೊಬ್ಬನ ಉಗುರಿನಲ್ಲಿ ನೀಲಿ ಬಣ್ಣ ಮಡುಗಟ್ಟಿದಂತೆ ಇದ್ದಾಗ ಆತನ ಶ್ವಾಸಕೋಶವನ್ನು ಪರೀಕ್ಷೆ ಮಾಡಲು ವೈದ್ಯರೊಬ್ಬರು ಸಲಹೆ ಮಾಡುತ್ತಾರೆ. ಪರೀಕ್ಷೆ ಮಾಡಿದಾಗ ಆ ರೋಗಿಯ ಶ್ವಾಸಕೋಶದಲ್ಲಿ ದ್ರವ ತುಂಬಿಕೊಂಡಿದ್ದುದು, ಆತನಿಗೆ ಸಾಕಷ್ಟು ಆಮ್ಲಜನಕ ದೊರೆಯುತ್ತಿರಲಿಲ್ಲವೆಂಬುದು ದೃಢಪಟ್ಟಿತು.

ಹೈಪಟೈಟಿಸ್, ಹೃದಯರೋಗಗಳನ್ನು ಸಹಾ ಉಗುರು ಪರೀಕ್ಷೆ ಮಾಡಿಯೇ ತಿಳಿಯಬಹುದು. ಉಗುರಿನ ವ್ಯತ್ಯಯಗಳು ಅನೇಕ ಶಿಲೀಂಧ್ರ ಸೋಕುಗಳಿಂದ ಅಥವಾ ಅನೀಮಿಯಾ (ರಕ್ತಹೀನತೆ) ಉಂಟಾಗಿರುವುದನ್ನು ಬಹಿರಂಗಪಡಿಸುತ್ತವೆ. ಬಳೀ ಬಣ್ಣವುಳ್ಳ, ಕಳಾಹೀನವಾದ ಉಗುರಿನ ಬುಡವನ್ನು ನೋಡಿದಾಗ ನೋಡಿದಾಗ ಆ ವ್ಯಕ್ತಿಯಲ್ಲಿ ಕೆಂಪು ರಕ್ತಕಣಗಳ ಕೊರತೆಯನ್ನು ಊಹಿಸಬಹುದು. ಇದೇ ರೀತಿ ಉಗುರು ತೆಳುವಾಗಿ, ವಕ್ರವಾಗಿ ಬದುಗಳಲ್ಲಿ ಉಬ್ಬಿದ್ದರೆ ಅಂಥವರಿಗೆ ಕಬ್ಬಿಣಾಂಶದ ಕೊರತೆ ಇರುವ ಸೂಚನೆ. ಹೃದಯ ರೋಗಗಳಿಂದಾಗಿ ಉಗುರಿನ ಬುಡ ಕೆಂಪಾಗಿರಬಹುದು. ಆಗಾಗ ಉಗುರು ಕಚ್ಚುತ್ತಿರುವವರಿಗೆ ಗೀಳುರೋಗ ಆಗಿರಬಹುದು. ಆರೋಗ್ಯವಂತರ ಉಗುರುಗಳು ನೋಡಲು ಸುಂದರವಾಗಿರುತ್ತವೆ. ಉಗುರಿಗೆ ಪೆಟ್ಟು ಬಿದ್ದಿದ್ದರೆ, ಅಲ್ಲಿ ರಕ್ತಸ್ರಾವ ಆಗುತ್ತಿದ್ದರೆ ಮತ್ತು ಸೋಂಕು ತಲುಲಿದ್ದರೆ, ವಿಶೇಷವಾಗಿ ಗಮನಿಸಿ ಚಿಕಿತ್ಸೆ ಪಡೆಯಬೇಕು. ಉಗುರಿನಲ್ಲಿ ಊತ, ನೋವು ಕಾಣಿಸಿಕೊಂಡರೆ ಚರ್ಮವೈದ್ಯರ ಸಹಾಯ ಪಡೆಯಬೇಕು. ಉಗುರಿನಲ್ಲಿ ರಂಧ್ರವಾಗಿದ್ದರೆ ಉಗುರಿನ ಕೆಳಗೆ ದಟ್ಟ ಕಂದು ಬಣ್ಣದ ಗೆರೆಗಳು ಅಥವಾ ಬಹಳ ಕಾಲ ಉಗುರಿನ ಬುಡದಲ್ಲಿ ಉಳಿಯುವ ವಾಟ್ಸ್(ನೆರುಲಿ) ಗಳಿದ್ದಾಗ ವಿಶೇಷ ತಜ್ಞರ ಸಲಹೆ ಅಗತ್ಯ.

### ಬ್ಯೂಟಿ ಟಿಪ್ಸ್



### ಭಾರತಕ್ಕಾಗಿ ಹೊಸ 650 ದಶಲಕ್ಷ ಡಾಲರ್ ನಿಧಿ ಸಂಗ್ರಹಿಸಿದ ಆ್ಯಕ್ಸೆಲ್

# ಹೊಸ ತಲೆಮಾರಿನ ನವೋದ್ಯಮಗಳಿಗೆ ಉತ್ತೇಜನ



ಭಾರತ ಹಾಗೂ ಆಗ್ನೇಯ ಏಷ್ಯಾ ದೇಶಗಳಲ್ಲಿನ ನವೋಧ್ಯಮಗಳ ದಿಟ್ಟ ಸ್ಥಾಪಕರಿಗೆ ಬೆಂಬಲ ನೀಡುವುದಕ್ಕೆ ಮೀಸಲಾಗಿರುವ 650 ದಶಲಕ್ಷ ಡಾಲರ್ ಮೊತ್ತದ ನಿಧಿ ಸಂಗ್ರಹಿಸಲಾಗಿದೆ ಎಂದು ನವೋದ್ಯಮಗಳಲ್ಲಿ ಬಂಡವಾಳ ಹೂಡಿಕೆ ಮಾಡುವ ಜಾಗತಿಕ ಪ್ರಮುಖ ಕಂಪನಿಯಾಗಿರುವ ಆ?ಯಕ್ಸೆಲ್ ಪ್ರಕಟಿಸಿದೆ.

ಆ್ಯಕ್ಸೆಲ್ನ ಇತ್ತೀಚಿನ ಈ ನಿಧಿಯು, ಭಾರತ ಮತ್ತು ಆಗ್ನೇಯ ಏಷ್ಯಾದಲ್ಲಿನ ಅದರ ಎಂಟನೆಯ ನಿಧಿಯಾಗಿದ್ದು, ಹೊಸಬಗೆಯ ನಿರ್ಮಾಣ ಹಾಗೂ ವ್ಯಾಪಕವಾಗಿ ಪರಿಣಾಮ ಬೀರುವ, ಆಳವಾದ ಚಿಂತನೆ, ಉತ್ಸಾಹ ಹಾಗೂ ಉದಾತ್ತ ಚಿಂತನೆಯ ಫಲವಾಗಿ ರೂಪುಗೊಂಡ ಆದರ್ಶಮಯ ಕಂಪನಿಗಳ ಆರಂಭಿಕ ಹಂತದ ಸಂಸ್ಥಾಪಕರ ಜೊತೆಗಿನ ಪಾಲುದಾರಿಕೆಗೆ ಸಂಬಂಧಿಸಿದ ಕಂಪನಿಯ ಬದ್ಧತೆಗೆ ನಿದರ್ಶನವಾಗಿದೆ. ನವೋದ್ಯಮಗಳ ಸಂಸ್ಥಾಪಕರು ತಮ್ಮ, ತಮ್ಮ ಕ್ಷೇತ್ರಗಳಲ್ಲಿ ಮುನ್ನಡೆಯಲು ಅಗತ್ಯವಾದ ಮಾರ್ಗದರ್ಶನ, ಸಂಪರ್ಕ ಜಾಲ ಮತ್ತು ಬೆಂಬಲ ಒದಗಿಸಲು ಅದರ 40 ವರ್ಷಗಳ ಅನುಭವ ಮತ್ತು ಜಾಗತಿಕ ವೇದಿಕೆಯನ್ನು ಆ್ಯಕ್ಸೆಲ್ ಬಳಸಿಕೊಳ್ಳಲಿದೆ. ಈ ನಿಧಿಯ ನೆರವಿನಿಂದ ಆ್ಯಕ್ಸೆಲ್, ಕೃತಕ ಬುದ್ಧಿಮತ್ತೆ (ಎಐ), ಗ್ರಾಹಕ ಬ್ರ್ಯಾಂಡ್ಗಳು, ಹಣಕಾಸು ತಂತ್ರಜ್ಞಾನ ಕಂಪನಿಗಳು ಮತ್ತು ತಯಾರಿಕೆ ವಲಯದಲ್ಲಿನ ನವೋದ್ಯಮಗಳ ಸಂಸ್ಥಾಪಕರ ಜೊತೆಗೆ ತನ್ನ ಪಾಲುದಾರಿಕೆ ಮುಂದುವರೆಸಲಿದೆ.

ಕಂಪನಿಯು ಈ ಪ್ರತಿಯೊಂದು ವಲಯಗಳಲ್ಲಿನ ಉಪ-ವಿಭಾಗಗಳನ್ನು ಕೆಳಕಂಡಂತೆ ಗುರುತಿಸಿದೆ.

ಕೃತಕ ಬುದ್ಧಿಮತ್ತೆ: ಉದ್ಯಮ ಕೃತಕ ಬುದ್ಧಿಮತ್ತೆ – ಕೃತಕ ಬುದ್ಧಿಮತ್ತೆ ವ್ಯವಸ್ಥೆ, ಲಾರ್ಜ್ ಲ್ಯಾಂಗ್ವೇಜ್ ಮಾಡೆಲ್ಸ್ (ಎಲ್ಎಲ್ಎಂ), ಸ್ಮಾಲ್ ಲ್ಯಾಂಗ್ವೇಜ್ ಮಾಡೆಲ್ಸ್ (ಎಸ್ಎಲ್ಎಂ) ಬಳಸಿಕೊಂಡು ಬಳಕೆ ಸಕ್ರಿಯಗೊಳಿಸುವ ವೇದಿಕೆಗಳು. ಸಾಫ್ಟ್ವೇರ್ನಂತೆ ಸೇವೆಗಳು- ಕೃತಕ ಬುದ್ಧಿಮತ್ತೆಯ ನವೋದ್ಯಮಗಳು ಭಾರತದ ಮಾಹಿತಿ ತಂತ್ರಜ್ಞಾನದ ಪ್ರಯೋಜನ ಪಡೆದುಕೊಂಡು ಉತ್ತಮ ಸ್ವಯಂಚಾಲಿತ ಕೊಡುಗೆಗಳನ್ನು ಒದಗಿಸುವ ಸಾಮರ್ಥ್ಯ ಒಳಗೊಂಡಿವೆ. ಅಗತ್ಯ ಈಡೇರಿಸುವ ಎಐ- ಭಾರತದಲ್ಲಿನ ದೊಡ್ಡ ಪ್ರಮಾಣದ ಕೃತಕ ಬುದ್ಧಿಮತ್ತೆ ಪ್ರತಿಭಾನ್ವಿತರ ಲಭ್ಯತೆ ಬಳಸಿಕೊಂಡು ನಿರ್ದಿಷ್ಟ ಕೈಗಾರಿಕೆಗಳ ಅಗತ್ಯಗಳನ್ನು ಈಡೇರಿಸುವ ಕೃತಕ ಬುದ್ಧಿಮತ್ತೆ. ಗ್ರಾಹಕ: ಭಾರತ್- ಭಾರತದ ಶ್ರೇಣಿ 2+ ಪ್ರದೇಶಗಳಲ್ಲಿನ ಮುಂಚೂಣಿ ಶೇ 30ರಷ್ಟು ಕುಟುಂಬಗಳಿಗೆ ಸೇವೆ ಒದಗಿಸುವ ನವೋದ್ಯಮಗಳು. ಭಾರತ ಮೂಲದ – ಉನ್ನತ ಸೇವಾ ಮಟ್ಟಗಳಿಗಾಗಿ ಭಾರತದ ಗ್ರಾಹಕರಿಂದ ಹೆಚ್ಚುತ್ತಿರುವ ಬೇಡಿಕೆಯನ್ನು ಪೂರೈಸುವ ನವೋದ್ಯಮಗಳು. ಮಹತ್ವಾಕಾಂಕ್ಷೆಯ ಬ್ರ್ಯಾಂಡ್ಗಳು- ಉಪಭೋಗಕ್ಕೆ ಮೊದಲ ಆದ್ಯತೆ ನೀಡುತ್ತಿರುವ ಭಾರತದ ಅತಿದೊಡ್ಡ ಯುವ ತಲೆಮಾರು ಅಗತ್ಯವಲ್ಲದ ಸರಕುಗಳಿಗೆ ಮಾಡುವ ವೆಚ್ಚವನ್ನೇ ಬಂಡವಾಳ ಮಾಡಿಕೊಳ್ಳುವ ನವೋದ್ಯಮಗಳು.

ಹಣಕಾಸು ತಂತ್ರಜ್ಞಾನ: ಸಂಪತ್ತು ನಿರ್ವಹಣೆ- ಡಿಜಿಟಲ್ ಚಾನೆಲ್ಗಳ ಮೂಲಕ ವೈಯಕ್ತಿಕಗೊಳಿಸಲಾದ ಸಂಪತ್ತು ಸಲಹಾ ಸೇವೆಗಳನ್ನು ಬಯಸುವ ಶ್ರೀಮಂತ ಗ್ರಾಹಕರಿಗೆ ನೆರವಾಗುವ ನವೋದ್ಯಮಗಳು. ಹಣಕಾಸು-ತಂತ್ರಜ್ಞಾನ ಮೂಲಸೌಲಭ್ಯ- ಗ್ರಾಹಕರು ಮತ್ತು ಉದ್ಯಮಗಳಿಗೆ ಅತ್ಯುತ್ತಮ ಗುಣಮಟ್ಟದ ಡಿಜಿಟಲ್ ಅನುಭವಗಳನ್ನು ಒದಗಿಸಲು ಬ್ಯಾಂಕ್ಗಳು ಮತ್ತು ಹಣಕಾಸು ತಂತ್ರಜ್ಞಾನ ಸಂಸ್ಥೆಗಳನ್ನು ಒಟ್ಟಿಗೆ ತರುವ ನವೋದ್ಯಮಗಳು. ಡಿಜಿಟಲ್ ವಿತರಣೆ – ಭಾರತದಲ್ಲಿನ ಸರ್ಕಾರಿ ಡಿಜಿಟಲ್ ಮೂಲಸೌಲಭ್ಯವನ್ನು ಸದುಪಯೋಗ ಮಾಡಿಕೊಳ್ಳುವ ಮೂಲಕ ಹಣಕಾಸು ಉತ್ಪನ್ನಗಳ ವಿತರಣೆಗೆ ವೇಗ ನೀಡುವುದು .

ತಯಾರಿಕೆ: ಭಾರತದಿಂದ ಜಾಗತಿಕ ಮಟ್ಟಕ್ಕೆ- ವೈವಿಧ್ಯಮಯ ಪೂರೈಕೆ ಸರಪಳಿಗಳಿಗೆ ಜಾಗತಿಕ ಬೇಡಿಕೆ ಪೂರೈಸುವ ನವೋದ್ಯಮಗಳು. ಭಾರತ ಮೂಲದ- ಉತ್ತಮ-ಗುಣಮಟ್ಟದ ತಯಾರಿಕೆ ಮತ್ತು ಬೌದ್ಧಿಕ ಆಸ್ತಿ ಚಾಲಿತ ಮೌಲ್ಯವರ್ಧಿತ ತಯಾರಿಕೆಯ ಮೇಲೆ ಗಮನ ಕೇಂದ್ರೀಕರಿಸಿದ ನವೋದ್ಯಮಗಳು. ಉದ್ಯಮ 5.0 – ಪ್ರತಿಯೊಂದು ಕಾರ್ಖಾನೆಯು ದಕ್ಷ ಕಾರ್ಯನಿರ್ವಹಣೆ, ಗರಿಷ್ಠ ಗುಣಮಟ್ಟದ ಉತ್ಪನ್ನ ಮತ್ತು ಸುಸ್ಥಿರತೆಗೆ ಕಾರಣವಾಗುವ ಹೊಸ ತಲೆಮಾರಿನ ಡಿಜಿಟಲ್ ತಂತ್ರಜ್ಞಾನ ಬಳಸಿಕೊಂಡು ಬದಲಾವಣೆ ಅಳವಡಿಸಿಕೊಳ್ಳುವುದು. ಭಾರತವು ಮುಂಬರುವ ವರ್ಷಗಳಲ್ಲಿ ಒಟ್ಟು ರಾಷ್ಟ್ರೀಯ ಉತ್ಪನ್ನಕ್ಕೆ (ಜಿಡಿಪಿ) ಬದಲಾಗಿ ಗ್ರಾಹಕರ ವರ್ತನೆಯಲ್ಲಿನ ಬದಲಾವಣೆ ಆಧರಿಸಿದ ದೀರ್ಘಾವಧಿಯ ಆರ್ಥಿಕ ಬೆಳವಣಿಗೆ ಸಾಧಿಸಲಿದೆ ಎಂದು ಬಹುತೇಕ ಆರ್ಥಿಕ ಮುನ್ನೋಟಗಳು ಅಂದಾಜಿಸಿವೆ. ಜಾಗತಿಕವಾಗಿ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಯಾಗಿರುವ ಭಾರತದ ಜಿಡಿಪಿ ತಲಾವಾರು 2024 ರಲ್ಲಿ 2,700 ಡಾಲರ್ಗಳಿಂದ 2029 ರ ವೇಳೆಗೆ 4,300 ಡಾಲರ್ಗಳಿಗೆ ಅಂದರೆ ಶೇ 60ರಷ್ಟು ಏರಿಕೆಯಾಗಲಿದೆ ಎಂದು ಅಂದಾಜಿಸಲಾಗಿದೆ. ಭಾರತದ ಗ್ರಾಹಕರ ಉಪಭೋಗದ ಪ್ರಮಾಣವು ದೃಢವಾಗಿ ಉಳಿಯುವ ನಿರೀಕ್ಷೆ ಇದೆ. ಸರ್ಕಾರಿ ಮತ್ತು ಡಿಜಿಟಲ್ ಮೂಲಸೌಲಭ್ಯದಲ್ಲಿನ ಹೂಡಿಕೆಗಳು ಸುಸ್ಥಿರ ದೀರ್ಘಕಾಲದ ಆರ್ಥಿಕ ಬೆಳವಣಿಗೆಗೆ ಒದಗಿಸಲಿವೆ.

ಕಳೆದ 10 ವರ್ಷಗಳಲ್ಲಿ ಭಾರತದ ಹಣಕಾಸು ಮಾರುಕಟ್ಟೆಗಳು 3 ಪಟ್ಟು ಬೆಳೆದಿದ್ದರೂ, ಹಣಕಾಸು ನೆರವು ಬೆಂಬಲಿತ ನವೋದ್ಯಮಗಳು ಮಾರುಕಟ್ಟೆ ಮೌಲ್ಯದ ಶೇ 5ಕ್ಕಿಂತ ಕಡಿಮೆ ಪ್ರಾತಿನಿಧ್ಯ ಹೊಂದಿವೆ. ಹಣಕಾಸು ಮಾರುಕಟ್ಟೆಗಳು ತಂತ್ರಜ್ಞಾನವು ಮುಂಚೂಣಿಯಲ್ಲಿ ಇರುವ ಉದ್ದಿಮೆಗಳಿಗೆ ಹೆಚ್ಚಿನ ಅವಕಾಶ ಒದಗಿಸುತ್ತಿವೆ. ಷೇರುಪೇಟೆಗಳಲ್ಲಿ ಇತ್ತೀಚೆಗೆ ವಹಿವಾಟು ಆರಂಭಿಸಿದ ಬ್ಲ್ಯಾಕ್ಬಕ್ ಮತ್ತು ಸ್ವಿಗಿ- ಯಶೋಗಾಥೆಯು ಇದಕ್ಕೆ ನಿದರ್ಶನವಾಗಿದೆ. ಎಕ್ಸೆಲ್ ಈ ಎರಡೂ ಕಂಪನಿಗಳಲ್ಲಿನ ಮೂಲ ಹೂಡಿಕೆ ಕಂಪನಿಯಾಗಿದೆ. ''ಭಾರತವು ಸದ್ಯಕ್ಕೆ ಭಾರಿ ಬದಲಾವಣೆಯ ಹಂತದಲ್ಲಿದೆ. ಮುಂದಿನ ದಶಕದಲ್ಲಿ, ನಮ್ಮ ಆರ್ಥಿಕ ಇತಿಹಾಸಕ್ಕಿಂತ ಹೆಚ್ಚಿನದನ್ನು ನಮ್ಮ ಒಟ್ಟು ಆಂತರಿಕ ಉತ್ಪನ್ನಕ್ಕೆ (ಜಿಡಿಪಿ) ಸೇರ್ಪಡೆ ಮಾಡಲು ನಾವು ಸಿದ್ಧರಾಗಿದ್ದೇವೆ. ಭಾರತದ ನವೋದ್ಯಮಗಳ ಸಂಸ್ಥಾಪಕರು ವ್ಯಾಪಕ ಪ್ರಮಾಣದಲ್ಲಿ ಪರಿಣಾಮ ಬೀರಲಿರುವ ಉದ್ದಿಮೆಗಳನ್ನು ಸ್ಥಾಪಿಸಲು ಮತ್ತು ವಿಸ್ತರಿಸುವುದಕ್ಕೆ ವಿಪುಲ ಅವಕಾಶಗಳು ಇವೆ? ಎಂದು ಆ?ಯಕ್ಸೆಲ್ನ ಪಾಲುದಾರ ಪ್ರಯಾಂಕ್ ಸ್ವರೂಪ್ ಅವರು ಹೇಳಿದ್ದಾರೆ. ''ಈ ಇತ್ತೀಚಿನ ನಿಧಿಯ ನೆರವಿನಿಂದ ನಾವು ಕೃತಕ ಬುದ್ಧಿಮತ್ತೆ, ಗ್ರಾಹಕ, ಹಣಕಾಸು-ತಂತ್ರಜ್ಞಾನ ಮತ್ತು ತಯಾರಿಕಾ ವಲಯಗಳ ಮೇಲೆ ಗಮನ ಕೇಂದ್ರೀಕರಿಸಿದ್ದೇವೆ. ಕೈಗಾರಿಕೆಗಳನ್ನು ಮರುರೂಪಿಸುವ ಮತ್ತು ವೇಗವಾಗಿ ಅಭಿವೃದ್ಧಿ ಹೊಂದುತ್ತಿರುವ, ಬದಲಾಗುತ್ತಿರುವ ಮಾರುಕಟ್ಟೆಯ ಅಗತ್ಯಗಳನ್ನು ಒದಗಿಸಲು ಗಮನ ನೀಡುತ್ತಿದ್ದೇವೆ. ಭಾರತದ ನಗರ ಮತ್ತು ಗ್ರಾಮೀಣ ಪ್ರದೇಶಗಳಾದ್ಯಂತ ಡಿಜಿಟಲ್ ಅಳವಡಿಕೆಯು ವೇಗ ಪಡೆಯುತ್ತಿದೆ. ನವೋದ್ಯಮಗಳ ಸ್ಥಾಪಕರು ವಾಸ್ತವ ಬದುಕಿನ ಸವಾಲುಗಳನ್ನು ಪರಿಹರಿಸಲು ಮತ್ತು ಜಗತ್ತಿಗೆ ಪ್ರಸ್ತುತವಾಗಿರುವ ಪರಿಹಾರಗಳನ್ನು ರೂಪಿಸಲು ಸಿದ್ಧರಾಗಿದ್ದಾರೆ. ಮುಂಬರುವ ದಿನಗಳಲ್ಲಿ ಗ್ರಾಹಕರ ಅಗತ್ಯಗಳನ್ನು ಆಳವಾಗಿ ತಿಳಿದುಕೊಂಡಿರುವುದರ ಜೊತೆಗೆ ನಾವೀನ್ಯತೆಯನ್ನು ಜೋಡಿಸುವ ಪರಿಣತಿ ಹೊಂದಿರುವ ಕಂಪನಿಗಳ ಹೊಸ ಅಲೆ ಬರಲಿದೆ ಎನ್ನುವುದು ನಮ್ಮ ದೃಢ ನಂಬಿಕೆಯಾಗಿದೆ? ಎಂದೂ ಅವರು ಹೇಳಿದ್ದಾರೆ.

## ರಾಶಿ ಭವಿಷ್ಯ



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಉದ್ಯೋಗದಲ್ಲಿ ಬಡ್ತಿ, ಆರೋಗ್ಯದಲ್ಲಿ ಚೇತರಿಕೆ, ಅನ್ಯರಿಗೆ ಉಪಕಾರ ಮಾಡುವಿರಿ, ಋಣ ವಿಮೋಚನೆ, ದ್ರವ್ಯ ಲಾಭ.

**ವೃಷಭ:** ಮಾತಾಪಿತರಲ್ಲಿ ಪ್ರೀತಿ, ಪತಿ ಪತ್ನಿಯರಲ್ಲಿ ಪ್ರೀತಿ, ಶೀತ ಸಂಬಂಧ ರೋಗಗಳು, ಶತ್ರು ನಾಶ.

**ಮಿಥುನ:** ಸ್ನೇಹಿತರಿಂದ ಸಹಾಯ, ಅನೇಕ ಜನರಿಗೆ ವಿವಾಹ ಯೋಗ, ಮನಸ್ಸಿನಲ್ಲಿ ಭಯ ಭೀತಿ.

**ಕಟಕ:** ದೃಷ್ಟಿ ದೋಷದಿಂದ ತೊಂದರೆ, ದೂರ ಪ್ರಯಾಣ, ಇಷ್ಟ ವಸ್ತುಗಳ ಖರೀದಿ, ಸಲ್ಲದ ಅಪವಾದ.

**ಸಿಂಹ:** ಅಧಿಕ ತಿರುಗಾಟ, ವಿನಾಕಾರಣ ಯೋಚನೆ ಮಾಡುವಿರಿ, ಸರ್ಕಾರಿ ಕೆಲಸಗಳಲ್ಲಿ ಜಯ, ಉದ್ಯಮಿಗಳಿಗೆ ಸುದಿನ.

**ಕನ್ಯಾ:** ವ್ಯಾಪಾರದಲ್ಲಿ ಲಾಭ, ಸಹೋದರರಿಂದ ಸಹಾಯ, ನೆಮ್ಮದಿ ಇಲ್ಲದ ಜೀವನ, ಮನಸ್ಸಿನಲ್ಲಿ ಗೊಂದಲ.

**ತುಲಾ:** ಯಾರನ್ನು ಹೆಚ್ಚಾಗಿ ನಂಬಬೇಡಿ, ಅನಿರೀಕ್ಷಿತ ದ್ರವ್ಯ ಲಾಭ, ಅಮೂಲ್ಯ ವಸ್ತುಗಳನ್ನು ಕಳೆದುಕೊಳ್ಳುವಿರಿ.

**ವೃಶ್ಚಿಕ:** ಅಪರಿಚಿತರಿಂದ ಕಲಹ, ಅನಾರೋಗ್ಯ, ಮಾತಿನಲ್ಲಿ ಹಿಡಿತವಿರಲಿ, ಮಹಿಳೆಯರಿಗೆ ವಿಶೇಷ ಲಾಭ.

**ಧನಸ್ಸು:** ಕುಟುಂಬದ ಹೊರೆ ಹೆಚ್ಚಾಗುವುದು, ಅನ್ಯರಲ್ಲಿ ವೈಮನಸ್ಯ, ಶತ್ರು ಭಾದೆ, ಎಷ್ಟೇ ಹಣ ಬಂದರೂ ಸಾಕಾಗುವುದಿಲ್ಲ.

**ಮಕರ:** ಸ್ವಯಂಕೃತ ಅಪರಾಧ, ವಿಪರೀತ ಹಣವ್ಯಯ, ಅನಾರೋಗ್ಯ, ಅತಿಯಾದ ನಿದ್ರೆ, ಅಪರಿಚಿತರಿಂದ ಕಲಹ ಎಚ್ಚರ.

**ಕುಂಭ:** ಪ್ರಿಯ ಜನರ ಭೇಟಿ, ಸ್ತ್ರೀ ಸೌಖ್ಯ, ಆಂತರಿಕ ಕಲಹ, ಮನೋವ್ಯಥೆ, ಆಪ್ತರೊಂದಿಗೆ ಸಂಕಷ್ಟಗಳನ್ನ ಹೇಳಿಕೊಳ್ಳುವಿರಿ.

**ಮೀನ:** ಸ್ವಂತ ಪರಿಶ್ರಮದಿಂದ ಅಭಿವೃದ್ಧಿ, ತೀರ್ಥ ಯಾತ್ರೆ, ದೂರಪ್ರಯಾಣ, ವಾಸಗೃಹದಲ್ಲಿ ತೊಂದರೆ, ಮನಸ್ತಾಪ.

## ನೃತ್ಯ ಸಂಯೋಜಕರ ದಿನ

ಅಂತಾರಾಷ್ಟ್ರೀಯ ನೃತ್ಯ ಸಂಯೋಜಕರ ದಿನವನ್ನು ಪ್ರತಿ ವರ್ಷ ಜನವರಿ 9 ರಂದು ಜಗತ್ತಿನಾದ್ಯಂತ ಆಚರಿಸಲಾಗುತ್ತದೆ. ನೃತ್ಯ ಸಂಯೋಜಕರು ನಾವು ನೋಡುವ ಎಲ್ಲಾ ಸುಂದರವಾದ ನೃತ್ಯ ನೃತ್ಯ ಸಂಯೋಜನೆಗಳು ಮತ್ತು ದಿನಚರಿಗಳ ಹಿಂದಿನ ಮಾಸ್ಟರ್ಮೈಂಡ್ಗಳು – ವಿಭಿನ್ನ ಚಲನೆಗಳನ್ನು ಒಟ್ಟಿಗೆ ವಿನ್ಯಾಸಗೊಳಿಸುವ, ಯೋಜಿಸುವ ಮತ್ತು ಜೋಡಿಸುವ ಹಿಂದಿನ ಸೃಜನಶೀಲ ಪ್ರತಿಭೆಗಳು. ಅನೇಕ ಪ್ರಮುಖ ನೃತ್ಯ ಸಂಯೋಜಕರು ಹೊರಹೊಮ್ಮಿದ್ದಾರೆ ಮತ್ತು ಕ್ರಾಂತಿಕಾರಿ ನೃತ್ಯ ಕಂಪನಿಗಳನ್ನು ಪ್ರಾರಂಭಿಸಿದ್ದಾರೆ, ಅದು ಇಂದಿಗೂ ಚಾಲನೆಯಲ್ಲಿದೆ. ನೃತ್ಯ ಸಂಯೋಜಕರು ತಮ್ಮ ನಂತರ ಅನೇಕರಿಗೆ ಬರಲು ದಾರಿ ಮಾಡಿಕೊಟ್ಟರು, ಅವರು ಕಲೆಗೆ ಜೀವ ತುಂಬುತ್ತಾರೆ ಮತ್ತು ಅಂತರರಾಷ್ಟ್ರೀಯ ನೃತ್ಯ ಸಂಯೋಜಕರ ದಿನವು ಅವರಿಗೆ ಆಚರಣೆ ಮತ್ತು ಮೆಚ್ಚುಗೆಯ ದಿನವಾಗಿದೆ.

ನೃತ್ಯದ ಉಗಮದ ನಿಖರವಾದ ಸಮಯವನ್ನು ಗುರುತಿಸಲು ಕಷ್ಟವಾಗಿದ್ದರೂ, ಪುರಾತತ್ತ್ವ ಶಾಸ್ತ್ರದ ಪುರಾವೆಗಳು ಇದು ಶತಮಾನಗಳಿಂದಲೂ ಇದೆ ಎಂದು ಸೂಚಿಸುತ್ತದೆ. ಯಾವುದೇ ಭಾಷೆಗಳು ಇರುವ ಮೊದಲು, ಮೌಖಿಕ ಮತ್ತು ಕಾರ್ಯಕ್ಷಮತೆಯ ಸಂವಹನ ಇತ್ತು ಎಂದು ನಮಗೆ ತಿಳಿದಿದೆ. ಪ್ರಾಚೀನ ಕಾಲದಿಂದಲೂ ನೃತ್ಯವು ಸಾಂಸ್ಕೃತಿಕ, ಧಾರ್ಮಿಕ ಮತ್ತು ಸಂವಹನ ಉದ್ದೇಶಗಳಿಗಾಗಿ ಬಳಸಲ್ಪಟ್ಟಿದೆ ಎಂದು ಪುರಾವೆಗಳು ತೋರಿಸುತ್ತವೆ. ಸಾಮಾಜಿಕ, ಸಂಭ್ರಮಾಚರಣೆ ಮತ್ತು ಧಾರ್ಮಿಕ ನೃತ್ಯಗಳು ಆರಂಭಿಕ ಮಾನವ ನಾಗರಿಕತೆಗಳ ಬೆಳವಣಿಗೆಯಲ್ಲಿ ಕೆಲವು ಪ್ರಮುಖ ಅಂಶಗಳಾಗಿವೆ.

ನೃತ್ಯವು ಐತಿಹಾಸಿಕ ಪುರಾವೆಗಳನ್ನು ಬಿಡಲು ಸಾಧ್ಯವಿಲ್ಲದ ಕಾರಣ, ದ್ವಿತೀಯ ಮೂಲಗಳು ಅದರ ಅಸ್ತಿತ್ವ ಮತ್ತು ಹರಡುವಿಕೆಯನ್ನು ನಮಗೆ ತಿಳಿಸುತ್ತವೆ. ನೃತ್ಯದ ಕೆಲವು ಪುರಾತನ ಪುರಾವೆಗಳು ಪ್ರಾಚೀನ ಭಾರತ ಮತ್ತು ಈಜಿಪ್ಟ್ನಲ್ಲಿನ ದೇವಾಲಯದ ಕೆತ್ತನೆಗಳಿಂದ ಬಂದಿದೆ. ಧಾರ್ಮಿಕ ನೃತ್ಯಗಳು ಪುರಾತನ ಗ್ರೀಸ್ನ ಒಂದು ಭಾಗವಾಗಿತ್ತು ಮತ್ತು ಒಲಂಪಿಕ್ ಕ್ರೀಡಾಕೂಟದ ಉದ್ಘಾಟನೆಗೂ ಮುಂಚೆಯೇ ಪ್ರದರ್ಶನಗೊಂಡಿತು (ಇಂದಿನ ಉದ್ಘಾಟನಾ ಸಮಾರಂಭದ ಪ್ರದರ್ಶನಗಳಂತೆ). ಮನೋರಂಜನೆಯ ಉದ್ದೇಶಕ್ಕಾಗಿ ನೃತ್ಯವನ್ನೂ ಮಾಡಲಾಯಿತು. ಗ್ರೀಕ್ ಆಚರಣೆಯ ಪುರಾವೆಗಳಿವೆ, ಅದು ವಾರಗಳವರೆಗೆ ಕುಡಿಯುವುದು ಮತ್ತು ನೃತ್ಯ ಮಾಡುವುದು.

ವಿವಿಧ ಉದ್ದೇಶಗಳಿಗಾಗಿ ನೃತ್ಯವು ಪ್ರಪಂಚದಾದ್ಯಂತ ತನ್ನ ದಾರಿಯನ್ನು ಮಾಡಿತು. ಕಾಲಾನಂತರದಲ್ಲಿ, ಹೊಸ ನೃತ್ಯ ಪ್ರಕಾರಗಳು ಮತ್ತು ಸಂಗೀತದ ಸ್ಫೋಟ ಸಂಭವಿಸಿತು ಮತ್ತು ಅದು ರಚನೆಯಾಯಿತು. ಜನರು ಹೆಚ್ಚು ಪರಿಶೋಧಿಸಿದಂತೆ, ವಿವಿಧ ನೃತ್ಯ ಪ್ರಕಾರಗಳ ನಿಯಮಗಳು ಮತ್ತು ಗುಣಲಕ್ಷಣಗಳು ಸ್ಪಷ್ಟವಾದವು. ನೃತ್ಯ, ಸಂಗೀತ ಮತ್ತು ಪ್ರದರ್ಶನದ ಪರಸ್ಪರ ಕ್ರಿಯೆಯು ಹೆಚ್ಚು ಹೆಣೆದುಕೊಂಡಿತು ಮತ್ತು ಕಲಾವಿದರು ತಮ್ಮ ನೃತ್ಯ ಸಂಯೋಜನೆಯನ್ನು ಪ್ರದರ್ಶಿಸಲು ಪ್ರಾರಂಭಿಸಿದರು. 1900 ರ ದಶಕದಲ್ಲಿ, 'ನೃತ್ಯಶಾಸ್ತ್ರ' ಮತ್ತು 'ನೃತ್ಯಗಾರ' ಪದಗಳು ಬಳಕೆಗೆ ಬಂದವು ಮತ್ತು ನೃತ್ಯ ಸಂಯೋಜನೆಯ ಪ್ರಪಂಚವು ಹೊಸ ರೂಪವನ್ನು ಪಡೆಯಿತು. ಈ ಕಲಾವಿದರನ್ನು ಸ್ಮರಿಸಲು ಪ್ರತಿ ವರ್ಷ ಜನವರಿ 9 ರಂದು ಅಂತರರಾಷ್ಟ್ರೀಯ ನೃತ್ಯ ದಿನವನ್ನು ಆಚರಿಸಲು ಪ್ರಾರಂಭಿಸಿತು.

## ವೈಕುಂಠ ದ್ವಾರ ದರ್ಶನ ಟೋಕನ್ ವಿತರಣೆ ವೇಳೆ ಕಾಲ್ತುಳಿತ

# ತಿರುಪತಿಯಲ್ಲಿ ಏಳು ಮಂದಿ ಸಾವು

**ತಿರುಪತಿ:** ಆಂಧ್ರ ಪ್ರದೇಶದ ಪ್ರಸಿದ್ಧ ಧಾರ್ಮಿಕ ಕ್ಷೇತ್ರ ತಿರುಪತಿಯಲ್ಲಿ ಸಂಭವಿಸಿದ ಕಾಲ್ತುಳಿತದಿಂದ ಏಳು ಮಂದಿ ಸಾವನಪ್ಪಿದ್ದಾರೆ. ಘಟನೆಯಲ್ಲಿ ಹಲವು ಮಂದಿ ಗಾಯಗೊಂಡಿದ್ದು, ಸಾವಿನ ಸಂಖ್ಯೆ ಏರಿಕೆಯಾಗುವ ಸಾಧ್ಯತೆ ಇದೆ.

ಭಕ್ತಾದಿಗಳು ತಿರುಪತಿಯ ವೈಕುಂಠ ದ್ವಾರ ದರ್ಶನದ ಟಿಕೆಟ್ ತೆಗೆದುಕೊಳ್ಳುವ ವೇಳೆ ಭಾರಿ ನೂಕುನುಗ್ಗಲು ಉಂಟಾಗಿ ಕಾಲ್ತುಳಿತ ಉಂಟಾಗಿದೆ. ಟಿಕೆಟ್ ಪಡೆದುಕೊಳ್ಳಲು ಏಕಕಾಲಕ್ಕೆ ಸಾವಿರಾರು ಮಂದಿ ನುಗ್ಗಿದ್ದರಿಂದ ಈ ದುರ್ಘಟನೆ ಸಂಭವಿಸಿದೆ. ಇದುವರೆಗೆ ಒಂದು ಮೃತದೇಹವನ್ನು ಗುರುತಿಸಲಾಗಿದೆ ಎಂದು ತಿರುಮಲ ತಿರುಪತಿ ದೇವಸ್ತಾನಮ್ಸ್ (ಟಿಟಿಡಿ) ಅಧ್ಯಕ್ಷ ಬಿಆರ್ ನಾಯ್ಡು ಹೇಳಿದ್ದಾರೆ. ಜನವರಿ 10 ರಂದು ವೈಕುಂಠ ಏಕಾದಶಿಯ ಹಿನ್ನಲೆಯಲ್ಲಿ ತಿರುಪತಿಯ ಕೌಂಟರ್‌ಗಳಲ್ಲಿ ನಾಳೆ ಬೆಳಗ್ಗೆಯಿಂದ ಟಿಕೆಟ್ ವಿತರಿಸಲು ನಿರ್ಧರಿಸಲಾಗಿತ್ತು ಎನ್ನಲಾಗಿದೆ.

ಒಬ್ಬ ಡಿಎಸ್ಪಿ ಗೇಟ್‌ಗಳನ್ನು ತೆರೆದರು ಮತ್ತು ತಕ್ಷಣವೇ ಎಲ್ಲರೂ ಮುಂದಕ್ಕೆ ತಳ್ಳಿದರು ಈ ಕಾಲ್ತುಳಿತಕ್ಕೆ ಕಾರಣವಾಯಿತು ಎಂದು ನಾಯ್ಡು ಮಾಧ್ಯಮಗಳನ್ನು ಉದ್ದೇಶಿಸಿ ಹೇಳಿದರು. ಏತನ್ಮಧ್ಯೆ, ಪೊಲೀಸರು ಒಂದಿಬ್ಬರು ಮಹಿಳಾ ಭಕ್ತರಿಗೆ ಸಿಪಿಆರ್ ನಡೆಸುತ್ತಿರುವ ಮತ್ತು ಗಾಯಗೊಂಡ ವ್ಯಕ್ತಿಗಳನ್ನು ಆಂಬ್ಯುಲೆನ್ಸ್‌ಗಳಲ್ಲಿ ಸ್ಥಳಾಂತರಿಸುವ ವೀಡಿಯೊಗಳು ವೈರಲ್ ಆಗಿವೆ. ಘಟನೆಯಲ್ಲಿ ಹಲವು ಮಂದಿ ಗಾಯಗೊಂಡಿದ್ದು ಎಲ್ಲರನ್ನೂ ಸ್ಥಳೀಯ ಆಸ್ಪತ್ರೆಗೆ ದಾಖಲು ಮಾಡಲಾಗಿದೆ ಎನ್ನಲಾಗಿದೆ. ಘಟನೆಯಲ್ಲಿ ಗಾಯಗೊಂಡವರಿಗೆ ನೀಡುತ್ತಿರುವ ಚಿಕಿತ್ಸೆ ಕುರಿತು ಮುಖ್ಯಮಂತ್ರಿ ಎನ್ ಚಂದ್ರಬಾಬು ನಾಯ್ಡು ಅವರು ಅಧಿಕಾರಿಗಳೊಂದಿಗೆ ದೂರವಾಣಿ ಮೂಲಕ ಮಾತನಾಡಿದ್ದಾರೆ. ಘಟನಾ ಸ್ಥಳಕ್ಕೆ ತೆರಳಿ ಗಾಯಾಳುಗಳಿಗೆ ಉತ್ತಮ ಚಿಕಿತ್ಸೆ ನೀಡಲು ಪರಿಹಾರ ಕ್ರಮಗಳನ್ನು ಕೈಗೊಳ್ಳುವಂತೆ ಉನ್ನತ ಅಧಿಕಾರಿಗಳಿಗೆ ಸಿಎಂ ಆದೇಶ ನೀಡಿದ್ದಾರೆ ಎಂದು ಮುಖ್ಯಮಂತ್ರಿ ಕಾರ್ಯಾಲಯ ತಿಳಿಸಿದೆ.





### ನೆರವು ನೀಡುವಂತೆ ರಾಹುಲ್ ಗಾಂಧಿ ಆಗ್ರಹ



ಈ ನಡುವೆ ತಿರುಪತಿ ದೇವಸ್ಥಾನದಲ್ಲಿ ಸಂಭವಿಸಿದ ಕಾಲ್ತುಳಿತ ತೀವ್ರ ದುಃಖ ತಂದಿದೆ ಎಂದು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿಷಾದ ವ್ಯಕ್ತಪಡಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ತಿರುಪತಿಯಲ್ಲಿ ಸಂಭವಿಸಿದ ದುರಂತ ತೀವ್ರ ದುಃಖವನ್ನುಂಟುಮಾಡಿದೆ. ದುಃಖತಪ್ತ ಕುಟುಂಬಗಳಿಗೆ ಸಂತಾಪಗಳು. ಗಾಯಗೊಂಡ ಎಲ್ಲರೂ ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಹಾರೈಸುತ್ತೇನೆ. ಈ ಕಷ್ಟದ ಸಮಯದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಸಾಧ್ಯವಿರುವ ಎಲ್ಲಾ ನೆರವು ನೀಡಿ' ಎಂದು ಹೇಳಿದ್ದಾರೆ. ಇನ್ನು ಗಾಯಾಳುಗಳು ಚಿಕಿತ್ಸೆ ಪಡೆಯುತ್ತಿರುವ ಆಸ್ಪತ್ರೆಗೆ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರು ಭೇಟಿ ನೀಡಲಿದ್ದು, ಗಾಯಾಳುಗಳ ಆರೋಗ್ಯ ವಿಚಾರಿಸಲಿದ್ದಾರೆ.

### ಬಳ್ಳಾರಿ ಮೂಲದ ಮಹಿಳೆ ಸಾವು

ಆಂಧ್ರ ಪ್ರದೇಶದ ತಿರುಪತಿ ತಿರುಮಲ ವೆಂಕಟೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಬುಧವಾರ ರಾತ್ರಿ ಸಂಭವಿಸಿದ ಕಾಲ್ತುಳಿತದಲ್ಲಿ ಮೃತಪಟ್ಟ 7 ಮಂದಿಯ ಪೈಕಿ ಓರ್ವರನ್ನು ಬಳ್ಳಾರಿ ಮೂಲದ ಮಹಿಳೆ ಎಂದು ಗುರ್ತಿಸಲಾಗಿದೆ. ಮೃತರನ್ನು ಬಳ್ಳಾರಿ ಮೂಲದ ನಿರ್ಮಲಾ (50) ಎಂದು ಗುರುತಿಸಲಾಗಿದೆ. ಉಳಿದ 6 ಮಂದಿ ಮೃತರನ್ನು ವೈಜಾಗ್‌ನ ರಜನಿ (47), ವೈಜಾಗ್‌ನ ಲಾವಣ್ಯ (40), ವೈಜಾಗ್‌ನ ಶಾಂತಿ (30), ಸೇಲಂನ ಮಲ್ಲಿಕಾ (49) ಹಾಗೂ ನರಸಿಪಟ್ಟಣದ ನಾಯ್ಡು ಬಾಬು (59) ಎಂದು ಗುರುತಿಸಲಾಗಿದೆ. ದುರ್ಘಟನೆಯಲ್ಲಿ 60ಕ್ಕೂ ಹೆಚ್ಚು ಮಂದಿ ಅಸ್ವಸ್ಥಗೊಂಡಿದ್ದು, ಗಾಯಾಳುಗಳಿಗೆ ಚಿಕಿತ್ಸೆ ಮುಂದುವರೆದಿದೆ, ಗುರುವಾರ (ಜ.8) ಬೆಳಗ್ಗೆ 5 ಗಂಟೆಯಿಂದ ಶ್ರೀನಿವಾಸಂ, ಸತ್ಯನಾರಾಯಣಪುರಂ ಮತ್ತು ಬೈರಾಗಿಪಟ್ಟೆಡ ಸೇರಿದಂತೆ 9 ಪ್ರದೇಶಗಳಲ್ಲಿ ಸ್ಥಾಪಿಸಲಾಗಿರುವ 94 ಕೌಂಟರ್‌ಗಳ ಮೂಲಕ ವೈಕುಂಠ ದ್ವಾರ ದರ್ಶನ ಟಿಕೆಟ್ ನೀಡಲು ಟಿಟಿಡಿ ಯೋಜಿಸಿತ್ತು. ಆದರೆ, ಟೋಕನ್‌ಗಳಿಗಾಗಿ ಬುಧವಾರ ಸಂಜೆಯೇ ದೊಡ್ಡ ಸಂಖ್ಯೆಯಲ್ಲಿ ಜನರು ಜಮಾಯಿಸಿದ್ದರು. ಈ ನಡುವೆ ಟಿಕೆಟ್ ಕೌಂಟರ್ ಸಿಬ್ಬಂದಿಯೊಬ್ಬರು ಅಸ್ವಸ್ಥಗೊಂಡ ಹಿನ್ನೆಲೆಯಲ್ಲಿ ಅವರನ್ನು ಹೊರಗೆ ಕರೆದೊಯ್ಯಲು ಗೇಟ್ ತೆರೆದಾಗ ಹೊರಗಿದ್ದವರೆಲ್ಲರೂ ಗುಂಪು ಗುಂಪಾಗಿ ಒಳಗೆ ನುಗ್ಗಲು ಯತ್ನಿಸಿದ್ದಾರೆ. ಈ ವೇಳೆ ಕಾಲ್ತುಳಿತ ಸಂಭವಿಸಿದೆ ಎಂದು ತಿಳಿದುಬಂದಿದೆ.

## ಕೆನಡಾದ ಮುಂದಿನ ಪ್ರಧಾನಿಯಾಗಿ ಭಾರತದ 'ಅನಿತಾ ಆನಂದ್' ಆಯ್ಕೆ ಸಾಧ್ಯತೆ

ಕೆನಡಾದ ಪ್ರಧಾನಿ ಜಸ್ಟಿನ್ ಟ್ರುಡೋ ಅವರ ರಾಜೀನಾಮೆ ಬಳಿಕ ಸಾರಿಗೆ ಸಚಿವೆ ಅನಿತಾ ಆನಂದ್ ಅವರ ಉತ್ತರಾಧಿಕಾರಿಯಾಗುವ ಸ್ಪರ್ಧೆಯಲ್ಲಿ ಪ್ರಮುಖ ಸ್ಪರ್ಧಿಯಾಗಿ ಹೊರಹೊಮ್ಮಿದ್ದಾರೆ. ನೋವಾ ಸ್ಕಾಟಿಯಾದ ಕೆಂಟ್ವಿಲ್ಲೆಯಲ್ಲಿ ಭಾರತೀಯ ಮೂಲದ ಪೋಷಕರಿಗೆ ಜನಿಸಿದ ಅನಿತಾ ಆನಂದ್ ಗ್ರಾಮೀಣ ಪರಿಸರದಲ್ಲಿ ಬೆಳೆದರು, ಅದು ಅವರ ಮೌಲ್ಯಗಳು ಮತ್ತು ಕೆಲಸದ ನೀತಿಯನ್ನ ರೂಪಿಸಿತು. ಅವರು 1985ರಲ್ಲಿ ಒಂಟಾರಿಯೊಗೆ ತೆರಳಿ ಅಸಾಧಾರಣ ಶೈಕ್ಷಣಿಕ ವೃತ್ತಿಜೀವನವನ್ನ ಮುಂದುವರಿಸಿದರು. ಆನಂದ್ ಕ್ವೀನ್ಸ್ ವಿಶ್ವವಿದ್ಯಾಲಯದಿಂದ ರಾಜಕೀಯ ಅಧ್ಯಯನದಲ್ಲಿ ಬಿಎ ಪದವಿ ಪಡೆದರು, ನಂತರ ಆಕ್ಸ್‌ಫರ್ಡ್ ವಿಶ್ವವಿದ್ಯಾಲಯದಿಂದ ನ್ಯಾಯಶಾಸ್ತ್ರದಲ್ಲಿ ಬಿಎ ಪಡೆದರು. ಅವರು ಡಾಲ್ಹೌಸಿ ವಿಶ್ವವಿದ್ಯಾಲಯದಿಂದ ಕಾನೂನು ಪದವಿ ಮತ್ತು ಟೊರೊಂಟೊ ವಿಶ್ವವಿದ್ಯಾಲಯದಿಂದ ಕಾನೂನು ಸ್ನಾತಕೋತ್ತರ ಪದವಿ ಪಡೆದರು. ಯೇಲ್ ಕಾನೂನು ಶಾಲೆ, ಕ್ವೀನ್ಸ್ ವಿಶ್ವವಿದ್ಯಾಲಯ ಮತ್ತು ವೆಸ್ಟರ್ನ್ ಯೂನಿವರ್ಸಿಟಿಯಂತಹ ಪ್ರತಿಷ್ಠಿತ ಸಂಸ್ಥೆಗಳಲ್ಲಿ ಆನಂದ್ ವಿವಿಧ ಬೋಧನಾ ಹುದ್ದೆಗಳನ್ನ ಅಲಂಕರಿಸಿದ್ದಾರೆ. ಟೊರೊಂಟೊ ವಿಶ್ವವಿದ್ಯಾಲಯದಲ್ಲಿ ಕಾನೂನು ಪ್ರಾಧ್ಯಾಪಕರಾಗಿ, ಅವರು ಹೂಡಿಕೆದಾರರ ರಕ್ಷಣೆ ಮತ್ತು ಕಾರ್ಪೊರೇಟ್ ಆಡಳಿತದಲ್ಲಿ ಜೆಆರ್ ಕಿಂಬರ್ ಚೇರ್'ನ್ನ ಸಹ ಹೊಂದಿದ್ದರು. ಅವರ ಶೈಕ್ಷಣಿಕ ಹಿನ್ನೆಲೆ, ನೀತಿ, ಸಾಂಸ್ಥಿಕ ಆಡಳಿತ ಮತ್ತು ಕಾನೂನಿನಲ್ಲಿನ ಅವರ ಸಂಶೋಧನೆಯೊಂದಿಗೆ, ಸಾರ್ವಜನಿಕ ವಲಯದಲ್ಲಿ ನಾಯಕತ್ವಕ್ಕೆ ಅವರ ವಿಧಾನವನ್ನ ರೂಪಿಸಲು ಸಹಾಯ ಮಾಡಿದೆ.



## ಒಂದು ದೇಶ ಒಂದು ಚುನಾವಣೆ : ಸಭೆ ನಡೆಸಿದ ಜೆಪಿಸಿ

**ಹೊಸದಿಲ್ಲಿ :** ಏಕಕಾಲಿಕ ಚುನಾವಣೆಗಳಿಗೆ ಅವಕಾಶ ಕಲ್ಪಿಸುವ ಎರಡು ಮಸೂದೆಗಳ ಪರಿಶೀಲನೆಗಾಗಿ ರಚಿಸಲಾಗಿರುವ ಜಂಟಿ ಸಂಸದೀಯ ಸಮಿತಿ(ಜೆಪಿಸಿ)ಯು ಬುಧವಾರ ತನ್ನ ಮೊದಲ ಸಭೆಯನ್ನು ನಡೆಸಿತು. ಕಾನೂನು ಮತ್ತು ನ್ಯಾಯ ಸಚಿವಾಲಯದ ಅಧಿಕಾರಿಗಳು ಉದ್ದೇಶಿತ ಕಾನೂನುಗಳಲ್ಲಿಯ ನಿಬಂಧನೆಗಳ ಕುರಿತು ಸಮಿತಿ ಸದಸ್ಯರಿಗೆ ಮಾಹಿತಿಗಳನ್ನು ಒದಗಿಸಿದರು. ಬಿಜೆಪಿ ಸಂಸದ ಹಾಗೂ ಮಾಜಿ ಸಹಾಯಕ ಕಾನೂನು ಸಚಿವ ಪಿ.ಪಿ.ಚೌಧರಿ ನೇತೃತ್ವದ 39 ಸದಸ್ಯರ ಸಮಿತಿಯು ಕಾಂಗ್ರೆಸ್ನ ಪ್ರಿಯಾಂಕಾ ಗಾಂಧಿ ವಾದ್ರಾ, ಜೆಡಿಯುದ ಸಂಜಯ್ ಝಾ, ಶಿವಸೇನೆಯ ಶ್ರೀಕಾಂತ ಶಿಂದೆ, ಆಪ್ನ ಸಂಜಯ್ ಸಿಂಗ್ ಮತ್ತು ಟಿಎಂಸಿಯ ಕಲ್ಯಾಣ ಬ್ಯಾನರ್ಜಿ ಸೇರಿದಂತೆ ಎಲ್ಲ ಪ್ರಮುಖ ರಾಜಕೀಯ ಪಕ್ಷಗಳ ಸಂಸದರನ್ನು ಒಳಗೊಂಡಿದೆ. ಇತ್ತೀಚಿನ ಚಳಿಗಾಲದ ಅಧಿವೇಶನದಲ್ಲಿ ಲೋಕಸಭೆಯಲ್ಲಿ ಸಂವಿಧಾನ(129ನೇ ತಿದ್ದುಪಡಿ) ಮತ್ತು ಕೇಂದ್ರಾಡಳಿತ ಪ್ರದೇಶಗಳ ಕಾನೂನುಗಳ (ತಿದ್ದುಪಡಿ) ಮಸೂದೆಗಳನ್ನು ಮಂಡಿಸಲಾಗಿದ್ದು,ಬಳಿಕ ಅವುಗಳನ್ನು ಜೆಪಿಸಿಯ ಪರಿಶೀಲನೆಗೆ ಒಪ್ಪಿಸಲಾಗಿತ್ತು. ಸಮಿತಿಯು ಲೋಕಸಭೆಯ 27 ಮತ್ತು ರಾಜ್ಯಸಭೆಯ 12 ಸದಸ್ಯರನ್ನು ಒಳಗೊಂಡಿದೆ.

## 'ಶೀಶ್ ಮಹಲ್' ವಿವಾದ: ದೆಹಲಿ ಸಿಎಂ ಬಂಗಲೆ ಪ್ರವೇಶಕ್ಕೆ ಆಪ್ ನ ಸೌರಭ್ ಭಾರದ್ವಾಜ್, ಸಂಜಯ್ ಸಿಂಗ್ ಗೆ ತಡೆ

**ನವದೆಹಲಿ:** ಬಿಜೆಪಿಯ ಶೀಶ್ ಮಹಲ್ ವಿವಾದಕ್ಕೆ ತಕ್ಕ ಪ್ರತಿಕ್ರಿಯೆ ನೀಡಲು ಮಾಧ್ಯಮ ಪ್ರತಿನಿಧಿಗಳನ್ನು ಭೇಟಿ ಮಾಡುವಂತೆ ಆಹ್ವಾನ ನೀಡಿದ್ದ ಆಪ್ ನಾಯಕರಾದ ಸಂಜಯ್ ಸಿಂಗ್ ಮತ್ತು ಸೌರಭ್ ಭಾರದ್ವಾಜ್ ಅವರನ್ನು ದೆಹಲಿ ಮುಖ್ಯಮಂತ್ರಿಯ ಅಧಿಕೃತ ನಿವಾಸಕ್ಕೆ ಪ್ರವೇಶಿಸದಂತೆ ತಡೆದ ಘಟನೆ ನಡೆದಿದೆ. ದೆಹಲಿಯ ಫ್ಲಾಗ್‌ಸ್ಟಾಫ್ ರಸ್ತೆ 6ರಲ್ಲಿರುವ ಬಂಗಲೆಯ ಮುಂಭಾಗದಲ್ಲಿ ಪೊಲೀಸರು ಬ್ಯಾರಿಕೇಡ್‌ಗಳನ್ನು ರಚಿಸಿ ಸಿಬ್ಬಂದಿಯನ್ನು ನಿಯೋಜಿಸಿ, ಆಪ್ ಮುಖಂಡರನ್ನು ಆವರಣಕ್ಕೆ ಪ್ರವೇಶಿಸದಂತೆ ತಡೆದಿದ್ದಾರೆ. ಆಪ್ ನಾಯಕರು ಮುಖ್ಯಮಂತ್ರಿಯವರ ನಿವಾಸಕ್ಕೆ ಮಾಧ್ಯಮ ಪ್ರತಿನಿಧಿಗಳನ್ನು ಆಹ್ವಾನಿಸಿದ್ದರು. ಅರವಿಂದ್ ಕೇಜ್ರಿವಾಲ್ ಅವರ ಅಧಿಕಾರಾವಧಿಯಲ್ಲಿ ಇದನ್ನು ಶೀಶ್ ಮಹಲ್ ಆಗಿ ಪರಿವರ್ತಿಸಲಾಯಿತು ಎಂದು ಬಿಜೆಪಿ ಆರೋಪಿಸುತ್ತಿದೆ. ನಿವಾಸಕ್ಕೆ ಭೇಟಿ ನೀಡಲು ಅನುಮತಿ ಕೋರಿದ್ದೀರಾ ಎಂಬ ಪ್ರಶ್ನೆಗೆ ಉತ್ತರಿಸಿದ ಸಂಜಯ್ ಸಿಂಗ್ ಮತ್ತು ಸೌರಭ್ ಭಾರದ್ವಾಜ್ ಅವರು, ಮುಖ್ಯಮಂತ್ರಿ ನಿವಾಸ ಪ್ರವೇಶಿಸಲು ಅನುಮತಿ ಏಕೆ ಬೇಕು, ಅವರು ಅಧಿಕಾರಿಗಳೊಂದಿಗೆ ಒಳಗೆ ಹೋಗಲು ಅವಕಾಶ ನೀಡುವಂತೆ ಕೇಳಿಕೊಳ್ಳುವುದು ಕಂಡುಬಂತು ಎಂದರು. ನಮ್ಮನ್ನು ತಡೆಯಲು ನಿಮಗೆ ಯಾರು ಸೂಚನೆ ನೀಡಿದ್ದಾರೆ, ನಾನು ಸಚಿವನಾಗಿದ್ದೇನೆ, ನಾನು ಪರಿಶೀಲನೆಗೆ ಬಂದಿದ್ದೇನೆ. ನೀವು ನನ್ನನ್ನು ಹೇಗೆ ಮತ್ತು ಯಾರ ಆದೇಶದ ಮೇರೆಗೆ ತಡೆಯುತ್ತೀರಿ, ನೀವು ಲೆಫ್ಟಿನೆಂಟ್ ಗವರ್ನರ್‌ನಿಂದ ನಿರ್ದೇಶನಗಳನ್ನು ಪಡೆದಿದ್ದೀರಾ? ಅವರೊಬ್ಬರೇ ನನ್ನ ಸ್ಥಾನಕ್ಕಿಂತ ಮೇಲೆ ಅಧಿಕಾರ ಹೊಂದಿರುವ ಏಕೈಕ ವ್ಯಕ್ತಿ ಎಂದು ಭಾರದ್ವಾಜ್ ಅಧಿಕಾರಿಯೊಬ್ಬರಿಗೆ ಹೇಳಿದ್ದು ಕೇಳಿಸಿತು. ಈ ಎರಡೂ ಆಸ್ತಿಗಳು ಸರ್ಕಾರಿ ನಿವಾಸಗಳಾಗಿವೆ. ಅವುಗಳನ್ನು ತೆರಿಗೆದಾರರ ಹಣದಿಂದ ನಿರ್ಮಿಸಲಾಗಿದೆ ಮತ್ತು ಕೋವಿಡ್ ಸಾಂಕ್ರಾಮಿಕ ಸಮಯದಲ್ಲಿ ನಿರ್ಮಿಸಲಾಗಿದೆ.

## 2024ರಲ್ಲಿ ಥೈಲ್ಯಾಂಡ್‌ಗೆ 35 ಮಿಲಿಯನ್ ಪ್ರವಾಸಿಗರ ಭೇಟಿ



**ಕೈವ್:** 2024 ರಲ್ಲಿ ಥೈಲ್ಯಾಂಡ್ಗೆ 35.54 ಮಿಲಿಯನ್ ವಿದೇಶಿ ಪ್ರವಾಸಿಗರು ಭೇಟಿ ನೀಡಿದ್ದಾರೆ. ಇದು ಹಿಂದಿನ ವರ್ಷಕ್ಕೆ ಹೋಲಿಸಿದರೆ ಶೇಕಡಾ 26.27 ರಷ್ಟು ಹೆಚ್ಚಳವಾಗಿದೆ ಎಂದು ಅಧಿಕೃತ ಅಂಕಿ ಅಂಶಗಳು ತಿಳಿಸಿವೆ. ಕಳೆದ ವರ್ಷ ಚೀನಾದಿಂದ ಅತ್ಯಧಿಕ 6.73 ಮಿಲಿಯನ್ ಪ್ರವಾಸಿಗರು ಥೈಲ್ಯಾಂಡ್ಗೆ ಭೇಟಿ ನೀಡಿದ್ದಾರೆ. 4.95 ಮಿಲಿಯನ್ ಮತ್ತು 2.12 ಮಿಲಿಯನ್ ಪ್ರವಾಸಿಗರೊಂದಿಗೆ ಕ್ರಮವಾಗಿ ಮಲೇಷ್ಯಾ ಮತ್ತು ಭಾರತ ನಂತರದ ಸ್ಥಾನಗಳಲ್ಲಿವೆ ಎಂದು ಥಾಯ್ ಪ್ರವಾಸೋದ್ಯಮ ಮತ್ತು ಕ್ರೀಡಾ ಸಚಿವಾಲಯ ಮಂಗಳವಾರ ತಿಳಿಸಿದೆ. ಥೈಲ್ಯಾಂಡ್ 2024 ರಲ್ಲಿ ಅಂತರರಾಷ್ಟ್ರೀಯ ಪ್ರವಾಸಿಗರಿಂದ ಸರಿಸುಮಾರು 1.67 ಟ್ರಿಲಿಯನ್ ಬಾಟ್ (ಸುಮಾರು 48.45 ಬಿಲಿಯನ್ ಡಾಲರ್) ಆದಾಯ ಗಳಿಸಿದೆ. ಇದು ಹಿಂದಿನ ವರ್ಷಕ್ಕೆ ಹೋಲಿಸಿದರೆ ಶೇಕಡಾ 34 ರಷ್ಟು ಹೆಚ್ಚಳವಾಗಿದೆ ಎಂದು ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಜನವರಿಯಿಂದ, ಥೈಲ್ಯಾಂಡ್ಗೆ ಭೇಟಿ ನೀಡುವ ಸಂದರ್ಶಕರು ವಿಶ್ವದಾದ್ಯಂತದ ಎಲ್ಲಾ ಥಾಯ್ ರಾಯಭಾರ ಕಚೇರಿಗಳು ಮತ್ತು ಕಾನ್ಸುಲೇಟ್ಗಳಲ್ಲಿ ಲಭ್ಯವಿರುವ ಆನ್ ಲೈನ್ ವ್ಯವಸ್ಥೆಯ ಮೂಲಕ ಎಲೆಕ್ಟ್ರಾನಿಕ್ ವೀಸಾಗೆ ಅರ್ಜಿ ಸಲ್ಲಿಸಬಹುದು. ಇದು ಸುವ್ಯವಸ್ಥಿತ ಅರ್ಜಿ ಪ್ರಕ್ರಿಯೆ ಮತ್ತು ಅನುಕೂಲಕರ ಆನ್ ಲೈನ್ ಪಾವತಿ ಆಯ್ಕೆಗಳನ್ನು ಖಚಿತಪಡಿಸುತ್ತದೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ. ಪ್ರಸ್ತುತ, ಚೀನಾ, ಭಾರತ, ದಕ್ಷಿಣ ಕೊರಿಯಾ ಮತ್ತು ರಷ್ಯಾದಂತಹ ಪ್ರಮುಖ ವಲಯಗಳು ಸೇರಿದಂತೆ 93 ದೇಶಗಳು ಮತ್ತು ಪ್ರದೇಶಗಳ ಪ್ರವಾಸಿಗರು ವೀಸಾ ಇಲ್ಲದೆ 60 ದಿನಗಳವರೆಗೆ ಥೈಲ್ಯಾಂಡ್ನಲ್ಲಿ ಉಳಿಯಲು ಅವಕಾಶವಿದೆ. ಥೈಲ್ಯಾಂಡ್ ಪ್ರವಾಸೋದ್ಯಮ ಪ್ರಾಧಿಕಾರದ ಪ್ರಕಾರ, ಈ ವರ್ಷ 39 ಮಿಲಿಯನ್ ಅಂತರರಾಷ್ಟ್ರೀಯ ಪ್ರವಾಸಿಗರನ್ನು ಆಕರ್ಷಿಸುವ ಗುರಿಯನ್ನು ಹೊಂದಿದೆ.

## ಜಪಾನ್‌ನಲ್ಲಿ ದಾಖಲೆ ಬೆಲೆಗೆ ಹರಾಜಾದ ಟ್ಯೂನಾ ಮೀನು

**ಟೋಕಿಯೊ:** ಸಾಮಾನ್ಯವಾಗಿ ನೀವು ಮಾರುಕಟ್ಟೆಯಲ್ಲಿ ಖರೀದಿಸುವ ಮೀನಿಗೆ 100–200 ರೂ., ಹೆಚ್ಚೆಂದರೆ 1,000 ರೂ. ಬೆಲೆ ಇರಬಹುದು. ಆದರೆ, ಜಪಾನ್ನಲ್ಲಿ ಮಾತ್ರ 276 ಕೆಜಿ ತೂಕದ ಬ್ಲೂಫಿನ್ ಟ್ಯೂನಾ ಮೀನು ಭಾರೀ ಬೆಲೆಗೆ ಮಾರಾಟವಾಗಿದೆ. ಟೋಕಿಯೊ ಮೀನು ಮಾರುಕಟ್ಟೆಯಲ್ಲಿ ಬೃಹತ್ ಗಾತ್ರದ ಮೀನನ್ನು ಹರಾಜು ಹಾಕುವ ಮೂಲಕ ದಾಖಲೆ ಸೃಷ್ಟಿಸಿದೆ. ಈ ಟ್ಯೂನ ಮೀನಿಗೆ ಒನೊಡೆರಾ ಗ್ರೂಪ್ 11ಕೋಟಿಗೂ ಹೆಚ್ಚು ಹಣವನ್ನು ನೀಡಿ ಖರೀದಿಸಿದ್ದಾರಂತೆ. ಈ ಸುದ್ದಿ ಎಲ್ಲೆಡೆ ವೈರಲ್ ಆಗಿದೆ.

ನಗರದ ಟೊಯೊಸು ಮಾರುಕಟ್ಟೆಯಲ್ಲಿ ಹರಾಜು ಪ್ರಕ್ರಿಯೆ ನಡೆಯಿತು. ಅಲ್ಲಿ ಜನಪ್ರಿಯ ರೆಸ್ಟೋರೆಂಟ್ ಒಂದರಲ್ಲಿ ಈ ಟ್ಯೂನಾ ಮೀನನ್ನು ಬಿಡ್ ಮಾಡಲಾಗಿತ್ತು. ಮಿಚೆಲಿನ್ ಅಭಿನಯದ ಸುಶಿ ರೆಸ್ಟೋರೆಂಟ್ ಒನೊಡೆರಾ ಗ್ರೂಪ್ ಈ ಟ್ಯೂನ ಮೀನಿಗೆ 207 ಮಿಲಿಯನ್ ಯೆನ್ (1.3 ಮಿಲಿಯನ್ ಡಾಲರ್ ಅಥವಾ 11 ಕೋಟಿ ರೂ.) ಪಾವತಿಸಿದೆ. ಈ ಗ್ರೂಪ್ ಕಳೆದ ವರ್ಷ ಟ್ಯೂನ ಮೀನಿಗಾಗಿ 114 ಮಿಲಿಯನ್ ಯೆನ್ ಅನ್ನು ಖರ್ಚು ಮಾಡಿತು ಎನ್ನಲಾಗಿದೆ.

1999 ರಲ್ಲಿ ಟೋಕಿಯೊದಲ್ಲಿ ಇದೇ ರೀತಿಯ ಬಿಡ್ ನಡೆದು ಆಗ ಅತಿ ಹೆಚ್ಚು ಬೆಲೆಗೆ ಮೀನೊಂದು ಮಾರಾಟವಾಗಿತ್ತು. ಅದರ ನಂತರ ಇದು ಎರಡನೇ ಅತಿ ಹೆಚ್ಚು ಬೆಲೆಯ ಮೀನು ಎಂದು ವರದಿಯಾಗಿದೆ.

ಒನೊಡೆರಾ ಅಧಿಕಾರಿ ಶಿಂಜಿ ನಾಗಾವೊ ಅವರು ದೊಡ್ಡ ಟ್ಯೂನ ಮೀನನ್ನು ಖರೀದಿಸಿದ ನಂತರ ಮಾಧ್ಯಮಗಳೊಂದಿಗೆ ಮಾತನಾಡಿ, ''ಇದನ್ನು ತಿಂದ ಜನರು ಇದನ್ನು ಈ ವರ್ಷದ ಅದ್ಭುತ ಎಂದುಕೊಳ್ಳಬೇಕು ಎಂಬುದು ನಮ್ಮ ಬಯಕೆ'' ಎಂದು ಹೇಳಿದ್ದಾರೆ.



## ಲಾಸ್ ಏಂಜಲೀಸ್‌ನಲ್ಲಿ ಕಾಡ್ಗಿಚ್ಚು



**ವಾಷಿಂಗ್ಟನ್:** ಅಮೆರಿಕದ ಕ್ಯಾಲಿಫೋರ್ನಿಯಾದ ಲಾಸ್ ಏಜಂಲೀಸ್ ನಲ್ಲಿ ಕಾಡ್ಗಿಚ್ಚು ಉಂಟಾಗಿದ್ದು ಸಮೀಪದ ಮನೆಗಳು, ವಾಹನಗಳು ಸುಟ್ಟು ಭಸ್ಮವಾಗಿದೆ. ಈಗಾಗಲೇ ಯಾವುದೇ ಪ್ರಾಣ ಹಾನಿಯಾಗದೇ ಸ್ಥಳದಿಂದ ಸುಮಾರು 30 ಸಾವಿರ ಜನರನ್ನು ಸುರಕ್ಷಿತ ಸ್ಥಳಕ್ಕೆ ಕರೆದೊಯ್ಯಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.ಸಾಂಟಾ ಮೋನಿಕಾ ಬಳಿಯ ಪೆಸಿಫಿಕ್ ಪಾಲಿಸೇಡ್ಸ್ ಪ್ರದೇಶದಲ್ಲಿ ಸಂಪೂರ್ಣ ಬೆಂಕಿ ಆವರಿಸಿಕೊಂಡಿದ್ದು, ಗಾಳಿ ತೀವ್ರವಾಗಿ ಬೀಸುತ್ತಿರುವ ಕಾರಣ ಎಲ್ಲೆಡೆ ವ್ಯಾಪಿಸಿದೆ. ಬೆಂಕಿ ನಂದಿಸಲು 250ಕ್ಕೂ ಹೆಚ್ಚು ಅಗ್ನಿಶಾಮಕ ಸಿಬ್ಬಂದಿ, ಹೆಲಿಕಾಪ್ಟರ್‌ಗಳು, ಅಗ್ನಿಶಾಮಕ ವಾಹನಗಳನ್ನು ನಿಯೋಜನೆ ಮಾಡಲಾಗಿದೆ. 20ಎಕರೆಯಲ್ಲಿ ಕಾಣಿಸಿಕೊಂಡ ಬೆಂಕಿ ಕೆಲವೇ ಗಂಟೆಗಳಲ್ಲಿ 1,200 ಎಕರೆ ಪ್ರದೇಶಕ್ಕೆ ವ್ಯಾಪಿಸಿ ಬಹಳಷ್ಟು ಹಾನಿಯಾಗಿದೆ. ಈ ಭೀಕರ ಗಾಳಿಯ ನಡುವೆ ಬೆಂಕಿಯನ್ನು ನಿಯಂತ್ರಿಸಲು ಅಗ್ನಿಶಾಮಕ ದಳದವರು ಹರಸಾಹಸ ಪಡುತ್ತಿದ್ದಾರೆ. ಈ ಬಗ್ಗೆ ಮಾತನಾಡಿದ ಲಾಸ್ ಏಂಜಲೀಸ್ ಅಗ್ನಿಶಾಮಕ ಮುಖ್ಯಸ್ಥ ಕ್ರಿಸ್ಟಿನ್ ಕ್ರೌಲಿ ಈಗಾಗಲೇ 30,000ಕ್ಕೂ ಹೆಚ್ಚು ಜನರನ್ನು ಸ್ಥಳಾಂತರಿಸಲಾಗಿದೆ. 13,000ಕ್ಕೂ ಹೆಚ್ಚು ಕಟ್ಟಡಗಳು ಮತ್ತು 10,000 ಮನೆಗಳು ಅಪಾಯದಲ್ಲಿದೆ. ಆದರೆ ಇಲ್ಲಿಯವರೆಗೆ ಯಾವುದೇ ಪ್ರಾಣ ಅಪಾಯ ಆಗಿಲ್ಲ ಎಂದಿದ್ದಾರೆ.

## ಇಂದು ತಿರುಪತಿಗೆ ಚಂದ್ರಬಾಬು ನಾಯ್ಡು ಭೇಟಿ, ಸಭೆ ಕರೆದ ಸಿಎಂ

**ವಿಜಯವಾಡ:** ಆಂಧ್ರ ಪ್ರದೇಶದ ಪ್ರಸಿದ್ಧ ತಿರುಪತಿ ತಿರುಮಲ ವೆಂಕಟೇಶ್ವರ ಸ್ವಾಮಿ ದೇವಸ್ಥಾನದಲ್ಲಿ ನಿನ್ನೆ ಬುಧವಾರ ರಾತ್ರಿ ಸಂಭವಿಸಿದ ಕಾಲ್ತುಳಿತದಲ್ಲಿ 6 ಮಂದಿ ಭಕ್ತರು ಮೃತಪಟ್ಟ ಘಟನೆಗೆ ಸಂಬಂಧಿಸಿದಂತೆ ಸಿಎಂ ಎನ್ ಚಂದ್ರಬಾಬು ನಾಯ್ಡು ಪ್ರತಿಕ್ರಿಯಿಸಿದ್ದಾರೆ. ತಿರುಮಲ ಶ್ರೀವಾರಿ ವೈಕುಂಠ ದ್ವಾರ ದರ್ಶನಕ್ಕೆ ಟೋಕನ್ ವಿಚಾರದಲ್ಲಿ ತಿರುಪತಿಯಲ್ಲಿರುವ ವಿಷ್ಣು ನಿವಾಸದ ಬಳಿ ಕಾಲ್ತುಳಿತ ಸಂಭವಿಸಿ ಹಲವಾರು ಭಕ್ತರು ಮೃತಪಟ್ಟಿರುವುದು ಆಘಾತಕ್ಕೀಡು ಮಾಡಿದೆ. ಭಕ್ತರು ಟೋಕನ್ ಸಂಗ್ರಹಿಸಲು ಹೆಚ್ಚಿನ ಸಂಖ್ಯೆಯಲ್ಲಿ ಸೇರುತ್ತಿದ್ದ ಸಮಯದಲ್ಲಿ ನಡೆದ ಈ ದುರಂತ ಘಟನೆ ನನ್ನನ್ನು ತುಂಬಾ ನೋಯಿಸಿತು. ಕೆಲವು ಜನರ ಸ್ಥಿತಿ ಗಂಭೀರವಾಗಿದೆ ಎಂಬ ಮಾಹಿತಿಯ ಹಿನ್ನೆಲೆಯಲ್ಲಿ, ಉನ್ನತ ಅಧಿಕಾರಿಗಳು ಸ್ಥಳಕ್ಕೆ ತೆರಳಿ ಪರಿಹಾರ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಲಾಗಿದೆ. ಗಾಯಾಳುಗಳಿಗೆ ಉತ್ತಮ ವೈದ್ಯಕೀಯ ಚಿಕಿತ್ಸೆ ನೀಡಲು ಆದೇಶಿಸಿದ್ದೇನೆ. ಪರಿಸ್ಥಿತಿ ಬಗ್ಗೆ ನಿರಂತರವಾಗಿ ಜಿಲ್ಲಾ ಮತ್ತು ಟಿಟಿಡಿ ಅಧಿಕಾರಿಗಳೊಂದಿಗೆ ಮಾತನಾಡುತ್ತಿದ್ದೇನೆ ಎಂದಿದ್ದಾರೆ. ಇಂದು ಸಿಎಂ ಚಂದ್ರಬಾಬು ನಾಯ್ಡು ತಿರುಪತಿಗೆ ಭೇಟಿ ನೀಡಲಿದ್ದಾರೆ.

## ಟಿಬೆಟ್‌ನಲ್ಲಿ ಪ್ರಬಲ ಭೂಕಂಪನ

**ಕಠ್ಮಂಡು/ನವದೆಹಲಿ:** ಟಿಬೆಟ್ನಲ್ಲಿ ಸಂಭವಿಸಿದ ಪ್ರಬಲ ಭೂಕಂಪನದಲ್ಲಿ ಮೃತಪಟ್ಟವರ ಸಂಖ್ಯೆ 95ಕ್ಕೆ ಏರಿದೆ. ಹಲವರು ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ.

ಮಧ್ಯಾಹ್ನದ ವೇಳೆಗೆ 95 ಜನ ಮೃತಪಟ್ಟಿರುವುದು ದೃಢಪಟ್ಟಿದೆ ಮತ್ತು 130 ಜನರು ಗಾಯಗೊಂಡಿದ್ದಾರೆ ಎಂದು ಸುದ್ದಿ ಸಂಸ್ಥೆ ವರದಿ ಮಾಡಿದೆ. ಇಂದು ಬೆಳಗ್ಗೆ ಭೂಮಿ ನಡುಗಿದ್ದು, ರಿಕ್ಟರ್ ಮಾಪಕದಲ್ಲಿ 7.1ರಷ್ಟು ತೀವ್ರತೆ ದಾಖಲಾಗಿದೆ. 62 ಜನ ವಾಸವಿರುವ ಟಿಬೆಟ್, ಮೌಂಟ್ ಎವರೆಸ್ಟ್ನ ಚೀನಾ ಬದಿಯಲ್ಲಿದೆ. ಈ ಪರ್ವತ ಶ್ರೇಣಿಯಲ್ಲಿ ಭೂಕಂಪನ ಸಂಭವಿಸುವುದು ಸಾಮಾನ್ಯ. ಆದರೆ ಇಲ್ಲಿನ 200 ಕಿಮೀ ವ್ಯಾಪ್ತಿಯಲ್ಲಿ ಕಳೆದ ಐದು ವರ್ಷಗಳಲ್ಲಿ ಇಂದು ಸಂಭವಿಸಿದ ಕಂಪನ ಅತಿ ಪ್ರಬಲವಾಗಿದೆ ಎಂದು ವರದಿಯಾಗಿದೆ. ಹಿಮಾಲಯ ಪ್ರದೇಶ ವ್ಯಾಪ್ತಿಯ ಮೌಂಟ್ ಎವರೆಸ್ಟ್ ಪರ್ವತಕ್ಕೆ ಸಮೀಪದಲ್ಲಿರುವ ಭೂಪ್ರದೇಶದಲ್ಲಿ ಕಂಪನದ ಅನುಭವವಾಗಿದೆ. ಪ್ರಬಲ ಭೂಕಂಪನ ನೇಪಾಳದಲ್ಲೂ ಭೀತಿ ಉಂಟು ಮಾಡಿದೆ. ನೇಪಾಳದ ರಾಜಧಾನಿ ಕಠ್ಮಂಡುನಲ್ಲಿ ಭೂಮಿ ಕಂಪಿಸುತ್ತಿದ್ದಂತೆ ಜನರು ಮನೆಯಿಂದ ಹೊರಗೆ ಓಡಿಬಂದಿದ್ದರು.



## ಕೇಂದ್ರ ಸಾರಿಗೆ ಸಚಿವ ಗಡ್ಕರಿ , ಎಚ್ ಡಿಕೆ ಭೇಟಿ

**ನವದೆಹಲಿ:** ರಾಜ್ಯದ ವಿವಿಧ ಹೆದ್ದಾರಿ ಯೋಜನೆಗಳ ಕುರಿತು ತ್ವರಿತ ಕ್ರಮವಹಿಸುವಂತೆ ಕೇಂದ್ರ ಹೆದ್ದಾರಿ ಮತ್ತು ಭೂಸಾರಿಗೆ ಖಾತೆ ಸಚಿವ ನಿತಿನ್ ಗಡ್ಕರಿ ಅವರನ್ನು ಭೇಟಿಯಾಗಿ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಹೆಚ್. ಡಿ. ಕುಮಾರಸ್ವಾಮಿ ಮನವಿ ಸಲ್ಲಿಸಿದರು.

ನವದೆಹಲಿಯಲ್ಲಿ ಇಂದು ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರನ್ನು ಭೇಟಿಯಾದ ಕುಮಾರಸ್ವಾಮಿ, ರಾಜ್ಯದಲ್ಲಿ ಹಲವಾರು ಹೆದ್ದಾರಿ ಯೋಜನೆಗಳ ಅಭಿವೃದ್ಧಿ ಆಗಬೇಕಿದ್ದು, ಆ ಬಗ್ಗೆ ಕ್ರಮ ವಹಿಸಬೇಕು ಎಂದು ಮನವಿ ಸಲ್ಲಿಸಿದರು. ಈ ವೇಳೆ ಮಂಡ್ಯ, ಕೋಲಾರ, ಚಿಕ್ಕಬಳ್ಳಾಪುರ, ಚಾಮರಾಜನಗರ, ಮೈಸೂರು ಮುಂತಾದ ಜಿಲ್ಲೆಗಳ ಹೆದ್ದಾರಿಗಳ ಅಭಿವೃದ್ಧಿ ಕುರಿತು ಚರ್ಚಿಸಿದರು.

ಈ ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಸಚಿವ ನಿತಿನ್ ಖಡ್ಕರಿ, ಯೋಜನೆಗಳ ಬಗ್ಗೆ ತಕ್ಷಣವೇ ಖುದ್ದಾಗಿ ಗಮನ ಹರಿಸುವುದಾಗಿ ಗಡ್ಕರಿ ಅವರು ಭರವಸೆ ನೀಡಿದರು.

ಮಂಡ್ಯ ಹೆದ್ದಾರಿಯ ಬೈಪಾಸ್ ರಸ್ತೆ ಅಗಲೀಕರಣ, ವೈಟ್ ಟ್ಯಾಪಿಂಗ್ ಹಾಗೂ ಎನ್‌ಎಚ್–275ರಲ್ಲಿರುವ ಮಂಡ್ಯ ನಗರದ ಎಲ್ಲಾ ಜಂಕ್ಷನ್ ಗಳು, ಪಾದಚಾರಿ ಮಾರ್ಗಗಳನ್ನೂ ಅಭಿವೃದ್ಧಿ ಮಾಡಬೇಕು.

ಜೇವರ್ಗಿ– ಚಾಮರಾಜನಗರ ರಾಷ್ಟ್ರೀಯ ಹೆದ್ದಾರಿ (ಎನ್‌ಎಚ್–1500)ಯಲ್ಲಿನ ಪಾಂಡವಪುರ ಪಟ್ಟಣ, ಕಿರಂಗೂರು ಬಳಿಯ ಹೆದ್ದಾರಿ ಅಭಿವೃದ್ಧಿ ಮಾಡುವ ಬಗ್ಗೆಯೂ ಚರ್ಚಿಸಿದರು. ಆಂಧ್ರ ಪ್ರದೇಶದ ಕುಪ್ಪಂ– ಬಂಗಾರಪೇಟೆ– ಕೋಲಾರ –ಚಿಂತಾಮಣಿ, ಚಿಂತಾಮಣಿಯ ಗಜಾನನ



ಸರ್ಕಲ್– ಚೇಳೂರು, ರಾಷ್ಟ್ರೀಯ ಹೆದ್ದಾರಿ ಎನ್‌ಎಚ್–75ರಿಂದ ಹೊಸಕೋಟೆ –ಹೆಚ್.ಕ್ರಾಸ್– ಚಿಂತಾಮಣಿ ನಡುವೆ ಸಂಪರ್ಕ ಕಲ್ಪಿಸುವ ಎನ್‌ಎಚ್–69, ಎನ್‌ಎಚ್–42ರಿಂದ ಹೊಸಕೋಟೆ –ಗೌನಿಪಲ್ಲಿ – ಶ್ರೀನಿವಾಸಪುರ ಮೂಲಕ ಎನ್‌ಎಚ್–75ಕ್ಕೆ ಸಂಪರ್ಕ ಕಲ್ಪಿಸುವ ಹೆದ್ದಾರಿ ಯೋಜನೆಗಳ ಕುರಿತು ಸಚಿವರ ಗಮನ ಸೆಳೆದರು.

## 'ಸ್ಪಾಡೆಕ್ಸ್‌ಮಿಷನ್ ಡಾಕಿಂಗ್' ಮುಂದೂಡಿಕೆ

**ನವದೆಹಲಿ :** ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ಇಸ್ರೋ) ತನ್ನ ಮಹತ್ವಾಕಾಂಕ್ಷೆಯ ಬಾಹ್ಯಾಕಾಶ ಡಾಕಿಂಗ್ ಪ್ರಯೋಗ (ಸ್ಪಾಡೆಕ್ಸ್) ಗಾಗಿ ಡಾಕಿಂಗ್ ಪ್ರಯತ್ನ ಮತ್ತೆ ಮುಂದೂಡಿದೆ.

ಉಪಗ್ರಹಗಳ ನಡುವಿನ ಅಂತರವನ್ನು 225 ಮೀಟರ್'ಗೆ ಇಳಿಸುವ ತಂತ್ರದ ಸಮಯದಲ್ಲಿ ಈ ಸಮಸ್ಯೆ ಉದ್ಭವಿಸಿದೆ ಎಂದು ಭಾರತೀಯ ಬಾಹ್ಯಾಕಾಶ ಸಂಸ್ಥೆ ಹೇಳಿದೆ.

ಇದು ಮಿಷನ್ನ ಎರಡನೇ ವಿಳಂಬವನ್ನು ಸೂಚಿಸುತ್ತದೆ, ಇದನ್ನು ಆರಂಭದಲ್ಲಿ ಜನವರಿ 7ರಂದು ನಿಗದಿಪಡಿಸಲಾಗಿತ್ತು ಮತ್ತು ಜನವರಿ 9ಕ್ಕೆ ಮರು ನಿಗದಿಪಡಿಸಲಾಯಿತು. ಪ್ರಯೋಗದಲ್ಲಿ ಭಾಗಿಯಾಗಿರುವ ಎಸ್ಡಿಎಕ್ಸ್ 01 (ಚೇಸರ್) ಮತ್ತು ಎಸ್ಡಿಎಕ್ಸ್ 02 (ಟಾರ್ಗೆಟ್) ಎರಡೂ ಉಪಗ್ರಹಗಳು ಸುರಕ್ಷಿತವಾಗಿವೆ ಮತ್ತು ಸಾಮಾನ್ಯವಾಗಿ ಕಾರ್ಯನಿರ್ವಹಿಸುತ್ತಿವೆ ಎಂದು ಇಸ್ರೋ ಭರವಸೆ ನೀಡಿದೆ. ಡಾಕಿಂಗ್ ಪ್ರಯತ್ನಕ್ಕಾಗಿ ಪರಿಷ್ಕೃತ ಸಮಯವನ್ನು ಶೀಘ್ರದಲ್ಲೇ ಘೋಷಿಸಲಾಗುವುದು. ಪಿಎಸ್‌ಎಲ್ವಿ ಸಿ 60 ರಾಕೆಟ್ನಲ್ಲಿ ಡಿಸೆಂಬರ್ 30, 2024ರಂದು ಉಡಾವಣೆಯಾದ ಸ್ಪಾಡೆಕ್ಸ್ ಮಿಷನ್, ಬಾಹ್ಯಾಕಾಶ ಡಾಕಿಂಗ್ ತಂತ್ರಜ್ಞಾನದಲ್ಲಿ ಭಾರತದ ಸಾಮರ್ಥ್ಯವನ್ನ ಪ್ರದರ್ಶಿಸುವ ಗುರಿಯನ್ನ ಹೊಂದಿದೆ. ಇದು ಯುಎಸ್, ರಷ್ಯಾ ಮತ್ತು ಚೀನಾ ಎಂಬ ಇತರ ಮೂರು ದೇಶಗಳು ಸಾಧಿಸಿದ ಮೈಲಿಗಲ್ಲು.




## ಆಸ್ಟ್ರೇಲಿಯಾದಲ್ಲಿ ಜಲವಿಮಾನ ಪತನ

**ಸಿಡ್ನಿ:** ಆಸ್ಟ್ರೇಲಿಯಾದ ಜನಪ್ರಿಯ ಪ್ರವಾಸೀ ದ್ವೀಪದಿಂದ ಟೇಕಾಫ್ ಆಗುತ್ತಿದ್ದಂತೆ ಜಲವಿಮಾನ ಪತನಗೊಂಡಿದ್ದು ಮೂವರು ಪ್ರವಾಸಿಗರು ಸಾವನ್ನಪ್ಪಿದ್ದಾರೆ. ಇತರ ಮೂವರು ಗಾಯಗೊಂಡಿರುವುದಾಗಿ ವರದಿಯಾಗಿದೆ. ರೊಟ್ನೆಸ್ಟ್ ದ್ವೀಪದಲ್ಲಿ ಮಂಗಳವಾರ ಸಂಜೆ ಅಪಘಾತ ಸಂಭವಿಸಿದ್ದು ಜಲವಿಮಾನದಲ್ಲಿದ್ದ(ನೀರಿನ ಮೇಲಿಂದ ಟೇಕಾಫ್ ಆಗುವ ಮತ್ತು ನೀರಿನ ಮೇಲೆಯೇ ಇಳಿಯುವ ಲಘುವಿಮಾನ) 7 ಮಂದಿಯಲ್ಲಿ ಒಬ್ಬ ಯಾವುದೇ ಗಾಯಗಳಿಲ್ಲದೆ ಪಾರಾಗಿದ್ದಾನೆ ಎಂದು ಪೊಲೀಸರು ಹೇಳಿದ್ದಾರೆ. ರೊಟ್ನೆಸ್ಟ್ ದ್ವೀಪದಿಂದ ಪರ್ತ್ಗೆ ಹೊರಟಿದ್ದ ಜಲವಿಮಾನದಲ್ಲಿದ್ದ ಸ್ವಿಟ್ಜರ್ಲ್ಯಾಂಡ್ ಮಹಿಳೆ, ಡೆನ್ಮಾರ್ಕ್ ಪ್ರಜೆ ಹಾಗೂ ಪರ್ತ್ ನಿವಾಸಿ ಪೈಲಟ್ ಸಾವನ್ನಪ್ಪಿದ್ದಾರೆ. ಗಾಯಗೊಂಡ ಮೂವರನ್ನು ಪರ್ತ್ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ರಚನಾ ಇಂದರ್ 'ತೀರ್ಥರೂಪ ತಂದೆಯವರಿಗೆ' ಚಿತ್ರಕ್ಕೆ ನಾಯಕಿ



'ತೀರ್ಥರೂಪ ತಂದೆಯವರಿಗೆ' ಶೀರ್ಷಿಕೆ ಮೂಲಕವೇ ನಿರ್ದೇಶಕ ರಾಮೇನಹಳ್ಳಿ ಜಗನ್ನಾಥ್ ಸುದ್ದಿಯಲ್ಲಿದ್ದಾರೆ. ಈಗಾಗಲೇ ಹಿರಿಯ ನಟ ಸಿತಾರಾ, ರಾಜೇಶ್ ನಟರಂಗ ಚಿತ್ರತಂಡ ಸೇರಿಕೊಂಡಿದ್ದಾರೆ. ಇದೀಗ ಈ ಸಿನಿಮಾದ ನಾಯಕಿಯನ್ನು ಚಿತ್ರತಂಡ ಪರಿಚಯಿಸಿದೆ. 'ಲವ್ ಮಾಕ್ಟೈಲ್' ಸಿನಿಮಾದ ಹೆಂಗೆ ನಾವು ಖ್ಯಾತಿಯ ರಚನಾ ಇಂದರ್ ಈ ಚಿತ್ರಕ್ಕೆ ನಾಯಕಿಯಾಗಿ ಎಂಟ್ರಿ ಕೊಡುತ್ತಿದ್ದಾರೆ.

ನಟಿ ರಚನಾ ಇಂದರ್ 'ತೀರ್ಥರೂಪ ತಂದೆಯವರಿಗೆ' ಸಿನಿಮಾ ತಂಡ ಸೇರ್ಪಡೆಯಾಗಿದ್ದಾರೆ. ನಾಯಕ ನಿಹಾರ್ ಮುಖೇಶ್ ಜೋಡಿಯಾಗಿ ಅಭಿನಯಿಸುತ್ತಿದ್ದಾರೆ. ಅಕ್ಷರ ಪಾತ್ರದಲ್ಲಿ ರಚನಾರನ್ನು ಚಿತ್ರತಂಡ ಪ್ರೇಕ್ಷಕರಿಗೆ ಪರಿಚಯಿಸಿದ್ದು, ಪೋಸ್ಟರ್ ಕೂಡ ಬಹಳ ಇಂಪ್ರೆಸಿವ್ ಆಗಿದೆ.

'ತೀರ್ಥರೂಪ ತಂದೆಯವರಿಗೆ' ಸಿನಿಮಾದ ಚಿತ್ರೀಕರಣ ಭರದಿಂದ ಸಾಗುತ್ತಿದೆ. ಮೈಸೂರು, ಕೊಚ್ಚಿ, ಮೂಡಿಗೆರೆ ಸುತ್ತಮುತ್ತ 50% ರಷ್ಟು ಶೂಟಿಂಗ್ ಕಂಪ್ಲೀಟ್ ಮಾಡಿರುವ ಚಿತ್ರತಂಡ ಸಂಕ್ರಾಂತಿ ಬಳಿಕ 4ನೇ ಹಂತದ ಚಿತ್ರೀಕರಣವನ್ನು ಮೂಡಿಗೆರೆಯಲ್ಲಿ ಮಾಡಲು ಪ್ಲ್ಯಾನ್ ಮಾಡಿಕೊಂಡಿದೆ. ಆ ನಂತರ ಉತ್ತರ ಭಾರತದ ಕಡೆ ಚಿತ್ರೀಕರಣ ನಡೆಸಲಿದೆ.

ಜೈ ಚಾಮುಂಡೇಶ್ವರಿ ಪ್ರೊಡಕ್ಷನ್ಸ್ ನಡಿ ತೀರ್ಥರೂಪ ತಂದೆಯವರಿಗೆ ಸಿನಿಮಾ ನಿರ್ಮಾಣವಾಗುತ್ತಿದ್ದು, ರಾಮೇನಹಳ್ಳಿ ಜಗನ್ನಾಥ ಕಥೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ. 'ಹೊಂದಿಸಿ ಬರೆಯಿರಿ' ಚಿತ್ರ ನಿರ್ಮಾಣ ಮಾಡಿದ್ದ ಸಂಡೇ ಸಿನಿಮಾಸ್ ಈ ಸಿನಿಮಾವನ್ನು ಪ್ರೆಸೆಂಟ್ ಮಾಡುತ್ತಿದೆ. ತೆಲುಗಿನಲ್ಲಿ 'ಗುಪ್ಪೆಡಂತ ಮನಸು' ಸೀರಿಯಲ್ ಖ್ಯಾತಿಯ ನಿಹಾರ್ ಮುಖೇಶ್ ನಾಯಕನಾಗಿ ನಟಿಸುತ್ತಿದ್ದಾರೆ.

'ತೀರ್ಥರೂಪ ತಂದೆಯವರಿಗೆ' ಚಿತ್ರ ಕನ್ನಡ ಹಾಗೂ ತೆಲುಗು ಎರಡು ಭಾಷೆಯಲ್ಲಿ ಚಿತ್ರ ಮೂಡಿ ಬರುತ್ತಿದೆ. ತೆಲುಗಿನಲ್ಲಿ ಪ್ರಿಯಮ್ಮೈನ ನಾನ್ನಕು ಎಂಬ ಶೀರ್ಷಿಕೆ ಇಡಲಾಗಿದೆ. ಕೌಟುಂಬಿಕ ಹಿನ್ನೆಲೆ ಕಥೆಯುಳ್ಳ ಸಿನಿಮಾಗೆ ದೀಪಕ್ ಯರಗೇರಾ ಛಾಯಾಗ್ರಹಣ, ಜೋ ಕೋಸ್ಟ್ ಸಂಗೀತ, ಪ್ರಶಾಂತ್ ರಾಜಪ್ಪ ಸಂಭಾಷಣೆ ಇರಲಿದೆ. ರವಿಚಂದ್ರ ಎ.ಜೆ ಅವರು 'ತೀರ್ಥರೂಪ ತಂದೆಯವರಿಗೆ' ಚಿತ್ರಕ್ಕೆ ಎಕ್ಸಿಕ್ಯುಟಿವ್ ಪ್ರೊಡ್ಯೂಸರ್ ಆಗಿ ಸಾಥ್ ಕೊಟ್ಟಿದ್ದಾರೆ.

# ಕನ್ನಡದ ನಟಿಗೆ ಬಿಗ್ ಚಾನ್ಸ್- ತೆಲುಗಿನತ್ತ ಶರಣ್ಯ ಶೆಟ್ಟಿ



'ಕೃಷ್ಣಂ ಪ್ರಣಯ ಸಖಿ' ಸಿನಿಮಾ ಖ್ಯಾತಿಯ ಶರಣ್ಯ ಶೆಟ್ಟಿಗೆ ಬೇಡಿಕೆ ಹೆಚ್ಚಾಗಿದೆ. ಸ್ಟಾರ್ ನಟನಿಗೆ ನಾಯಕಿಯಾಗುವ ಟಾಲಿವುಡ್‌ನತ್ತ ಶರಣ್ಯ ಮುಖ ಮಾಡಿದ್ದಾರೆ.

ರಶ್ಮಿಕಾ ಮಂದಣ್ಣ, ಶ್ರೀಲೀಲಾ, ಆಶಿಕಾ ರಂಗನಾಥ್, ರುಕ್ಮಿಣಿ ವಸಂತ್ ತೆಲುಗಿನಲ್ಲಿ ನೆಲೆ ಕಂಡುಕೊಂಡಿದ್ದಾರೆ. ಅದೇ ಹಾದಿಯಲ್ಲಿ ಶರಣ್ಯ ಶೆಟ್ಟಿ ಹೆಜ್ಜೆ ಇಡುತ್ತಿದ್ದಾರೆ. ತೆಲುಗಿನ ನಿರ್ಮಾಣ ಸಂಸ್ಥೆಯೊಂದು ನಟಿಯ ಜೊತೆ ಸಿನಿಮಾ ಮಾಡಲು ಮಾತುಕತೆ ನಡೆಸಿದೆ. ಅತೀ ಶೀಘ್ರದಲ್ಲಿ ಈ ಸಿನಿಮಾದ ಬಗ್ಗೆ ಘೋಷಣೆ ಆಗಲಿದೆ.

ಶರಣ್ಯ ಶೆಟ್ಟಿ ಚೊಚ್ಚಲ ತೆಲುಗು ಸಿನಿಮಾಗೆ ಅಲ್ಲಿನ ಸ್ಟಾರ್ ನಟರೊಬ್ಬರು ಹೀರೋ ಆಗಿ ಬಣ್ಣ ಹಚ್ಚಲಿದ್ದಾರೆ. ಅದು ಯಾರು ಎಂಬುದು ಇನ್ನೂ ರಿವೀಲ್ ಆಗಿಲ್ಲ. ಕನ್ನಡದ ನಟಿಗೆ ತೆಲುಗು ಚಿತ್ರರಂಗದಲ್ಲಿ ಬೇಡಿಕೆ ಇದೆ ಎಂಬುದು ಪದೇ ಪದೇ ಸಾಬೀತು ಆಗುತ್ತಿದೆ. ಸದ್ಯ ನಟಿಯ ಬಗೆಗಿನ ಸಿನಿಮಾ ಗುಡ್ ನ್ಯೂಸ್ ಕೇಳಿ ಫ್ಯಾನ್ಸ್ ಥ್ರಿಲ್ ಆಗಿದ್ದಾರೆ. ನಟಿಯ ಹೊಸ ಹೆಜ್ಜೆಗೆ ಅಭಿಮಾನಿಗಳು ಶುಭಕೋರುತ್ತಿದ್ದಾರೆ.

ಇನ್ನೂ ಕಿರುತೆರೆಯ ಜನಪ್ರಿಯ ಸೀರಿಯಲ್ ಗಟ್ಟಿಮೇಳ ಮೂಲಕ ವಿಲನ್ ಆಗಿ ಶರಣ್ಯ ಬಣ್ಣದ ಬದುಕಿಗೆ ಎಂಟ್ರಿ ಕೊಟ್ಟರು. ಕೆಲವು ಸಿನಿಮಾಗಳಲ್ಲಿ ನಟಿಸಿದ ಬಳಿಕ ಕಳೆದ ವರ್ಷ ರಿಲೀಸ್ ಆದ 'ಕೃಷ್ಣಂ ಪ್ರಣಯ ಸಖಿ' ಮೂಲಕ ಶರಣ್ಯ ಸಕ್ಸಸ್ ಸಿಕ್ಕಿತ್ತು. ಸಿನಿಮಾ ಸೂಪರ್ ಹಿಟ್ ಆಯಿತು.

# ದರ್ಶನ್ ಸರ್‌ಗೆ ರೆಗ್ಯೂಲರ್ ಬೇಲ್ ಆಗಿರೋದು ಖುಷಿ: ರಚಿತಾ ರಾಮ್



ಸ್ಯಾಂಡಲ್‌ವುಡ್ ನಟಿ ರಚಿತಾ ರಾಮ್ ಅವರು ದರ್ಶನ್ ಕುರಿತು ಮಾಧ್ಯಮದ ಜೊತೆ ಮಾತನಾಡಿದ್ದಾರೆ. ರೇಣುಕಾಸ್ವಾಮಿ ಪ್ರಕರಣದಲ್ಲಿ ದರ್ಶನ್ ಸರ್‌ಗೆ ಬೇಲ್ ಸಿಕ್ಕಿರೋದು ಖುಷಿಯಿದೆ ಎಂದು ನಟಿ ಮಾತನಾಡಿದ್ದಾರೆ.

ನಾನು ದರ್ಶನ್ ಸರ್ ಬಗ್ಗೆ ಹೇಳುತ್ತಲೇ ಇರುತ್ತೇನೆ. ಇಂಡಸ್ಟ್ರಿಯಲ್ಲಿ ಇರೋವರೆಗೂ ಇಂಡಸ್ಟ್ರಿ ಬಿಟ್ಟ ಮೇಲೆಯೂ ಅವರ ಬಗ್ಗೆ ಹೇಳಬೇಕಾಗುತ್ತದೆ. ಯಾಕೆಂದರೆ ನನ್ನನ್ನು ಚಿತ್ರರಂಗಕ್ಕೆ ಪರಿಚಯಿಸಿದ ವ್ಯಕ್ತಿ. ತೂಗುದೀಪ ಬ್ಯಾನರ್ ನನ್ನ ಪರಿಚಯಿಸಿರೋದು. ಬುಲ್ ಬುಲ್ ತಂಡ ನನ್ನ ಪರಿಚಯಿಸಿದ್ದು, ಹಾಗಾಗಿ ನಾನು ಮತ್ತು ನನ್ನ ಕುಟುಂಬ ಅವರಿಗೆ ಆಭಾರಿಯಾಗಿರುತ್ತೇವೆ ಎಂದು ರಚಿತಾ ರಾಮ್ ಮಾತನಾಡಿದ್ದಾರೆ.

ರೇಣುಕಾಸ್ವಾಮಿ ಪ್ರಕರಣದಲ್ಲಿ ದರ್ಶನ್ ಸರ್‌ಗೆ ರೆಗ್ಯೂಲರ್ ಬೇಲ್ ಆಗಿರೋದು ಖುಷಿಯಿದೆ. ಅವರಿಗೆ ಸ್ವಲ್ಪ ಸಮಯ ಕೊಡೋಣ. ಇದರ ಬಗ್ಗೆ ಅವರು ಮಾತನಾಡಿದರೆ ಸರಿಯಾಗಿರುತ್ತದೆ. ಅವರು ವಿಶ್ರಾಂತಿ ಪಡೆಯುತ್ತಿದ್ದಾರೆ. ಅವರು ಆದಷ್ಟು ಕಮ್ ಬ್ಯಾಕ್ ಮಾಡಲಿ, ಈ ಬಗ್ಗೆ ಅವರೇ ಮಾತನಾಡಿದರೆ ಚೆಂದ ಎಂದು ಹೇಳಿದ್ದಾರೆ.

ಅಂದಹಾಗೆ, 2013ರಲ್ಲಿ ದರ್ಶನ್ ನಟನೆಯ 'ಬುಲ್ ಬುಲ್' ಸಿನಿಮಾ ಮೂಲಕ ರಚಿತಾ ರಾಮ್ ನಾಯಕಿಯಾಗಿ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿದ್ದರು. ಬಣ್ಣದ ಬದುಕಿಗೆ ಬಂದು 11 ವರ್ಷ ಕಳೆದರೂ ನಟಿಯ ಮೇಲೆ ಫ್ಯಾನ್ಸ್ ಕ್ರೇಜ್ ಇನ್ನೂ ಕಮ್ಮಿಯಾಗಿಲ್ಲ.




# ಬುಮ್ರಾ ಜೊತೆಗಿನ ಜಗಳದ ಬಗ್ಗೆ ಮೌನ ಮುರಿದ ಕೊನ್‌ಸ್ಟಾಸ್




ಭಾರತ ಹಾಗೂ ಆಸ್ಟ್ರೇಲಿಯಾ ನಡುವಿನ ಐದು ಪಂದ್ಯಗಳ ಬಾರ್ಡರ್- ಗವಾಸ್ಕರ್ ಟ್ರೋಫಿ ಟೆಸ್ಟ್ ಸರಣಿ ಅಂತ್ಯಗೊಂಡಿದೆ. ಸರಣಿಯ ಫಲಿತಾಂಶ ಭಾರತದ ಪರವಾಗಿಲ್ಲದಿದ್ದರೂ, ಈ ಸರಣಿ ಸೋಲಿನಿಂದ ತಂಡದಲ್ಲಿ ಸಾಕಷ್ಟು ಬದಲಾವಣೆಗಳಾಗುವ ಸಾಧ್ಯತೆಗಳಿವೆ. ಭಾರತ ಸರಣಿ ಸೋತಿತ್ತಾದರೂ, ಪಂದ್ಯದ ವೇಳೆ ಬೇಕಂತಲೇ ಆಟಗಾರರನ್ನು ಕೆಣಕುತ್ತಿದ್ದ ಆಸೀಸ್ ಆಟಗಾರರಿಗೆ ಹಾಗೂ ಆಸೀಸ್ ಅಭಿಮಾನಿಗಳಿಗೆ ಸರಿಯಾಗಿ ತಿರುಗೇಟು ನೀಡಿತ್ತು. ಈ ಸರಣಿಯಲ್ಲಿ ಉಭಯ ತಂಡಗಳ ಆಟಗಾರರ ನಡುವೆ ಸಾಕಷ್ಟು ಬಾರಿ ಮಾತಿನ ಚಕಮಕಿಯೂ ನಡೆದಿತ್ತು. ಅದರಲ್ಲಿ ಪ್ರಮುಖವಾದದ್ದು, ಜಸ್ಪ್ರೀತ್ ಬುಮ್ರಾ ಜೊತೆಗೆ ಆಸೀಸ್ ಯುವ ಆಟಗಾರ ಸ್ಯಾಮ್ ಕೊನ್‌ಸ್ಟಾಸ್ ಕಾರಣವಿಲ್ಲದೆ ಕಾಲ್ಕೆರದು ಜಗಳ ಮಾಡಿದ್ದರು. ಇದೀಗ ಸರಣಿ ಮುಗಿದ ಬಳಿಕ ಕೊನ್‌ಸ್ಟಾಸ್ ತಾನು ಹಾಗೆ ಮಾಡಲು ಕಾರಣ ಏನು ಎಂಬುದನ್ನು ವಿವರಿಸಿದ್ದಾರೆ.

**ಘಟನೆಯ ವಿವರ ಹೀಗಿದೆ:** ವಾಸ್ತವವಾಗಿ ಸಿಡ್ನಿ ಟೆಸ್ಟ್‌ನ ಮೊದಲನೇ ದಿನದಾಟದ ಕೊನೆಯ ಸೆಷನ್‌ನಲ್ಲಿ ಆಸ್ಟ್ರೇಲಿಯಾ ತಂಡ ಟೀಂ ಇಂಡಿಯಾವನ್ನು ಆಲೌಟ್ ಮಾಡಿ ತನ್ನ ಮೊದಲ ಇನ್ನಿಂಗ್ಸ್ ಶುರು ಮಾಡಿತ್ತು. ದಿನದಾಟ ಮುಗಿಯಲು ಕೆಲವೇ ನಿಮಿಷಗಳು ಬಾಕಿ ಇರುವಾಗ ಆಸೀಸ್ ಪರ ಖವಾಜಾ ಹಾಗೂ ಕೊನ್‌ಸ್ಟಾಸ್ ಇನ್ನಿಂಗ್ಸ್ ಆರಂಭಿಸಿದ್ದರು. ಈ ವೇಳೆ ಸ್ಟ್ರೈಕ್‌ನಲ್ಲಿದ್ದ ಖವಾಜಾಗೆ ಬೌಲಿಂಗ್ ಮಾಡುವ ಜವಬ್ದಾರಿಯನ್ನು ಬುಮ್ರಾ ಹೊತ್ತಿದ್ದರು. ಆದರೆ ಸ್ಟ್ರೈಕ್ ತೆಗೆದುಕೊಳ್ಳಲು ಖವಾಜಾ ತಡ ಮಾಡಿದಕ್ಕೆ ಸಿಡಿಮಿಡಿಗೊಂಡ ಬುಮ್ರಾ, ಬೇಗ ಸ್ಟ್ರೈಕ್ ತೆಗೆದುಕೊಳ್ಳುವಂತೆ ಖವಾಜಾ ವಿರುದ್ಧ ಅಸಮಾಧಾನ ಹೊರಹಾಕಿದ್ದರು.

ಈ ವೇಳೆ ನಾನ್ ಸ್ಟ್ರೈಕ್‌ನಲ್ಲಿದ್ದ ಕೊನ್‌ಸ್ಟಾಸ್ ಸುಮ್ಮನಿರದೆ ಬುಮ್ರಾ ಜೊತೆ ಮಾತಿನ ಚಕಮಕಿಗೆ ಮುಂದಾದರು. ಇದನ್ನು ನೋಡಿದ ಬುಮ್ರಾ ಕೂಡ ಕೊನ್‌ಸ್ಟಾಸ್ ವಿರುದ್ಧ ಗರಂ ಆದರು. ಈ ವೇಳೆಗೆ ಮಧ್ಯ ಪ್ರವೇಶಿಸಿದ ಅಂಪೈರ್‌ಗಳು ವಾತಾವರಣವನ್ನು ತಿಳಿಗೊಳಿಸಿ ಮತ್ತೆ ಆಟವನ್ನು ಆರಂಭಿಸಿದರು. ಆದರೆ ಅದೇ ಓವರ್‌ನಲ್ಲಿ ಖವಾಜಾ ಅವರ ವಿಕೆಟ್ ಉರುಳಿಸುವ ಮೂಲಕ ಬುಮ್ರಾ, ಕೊನ್‌ಸ್ಟಾಸ್‌ಗೆ ತಿರುಗೇಟು ನೀಡಿದ್ದರು. ಈ ಘಟನೆಯ ಬಗ್ಗೆ ಸಾಕಷ್ಟು ಚರ್ಚೆಗಳು ನಡೆದಿದ್ದವು. ಎಲ್ಲರೂ ಕೊನ್‌ಸ್ಟಾಸ್ ನಡೆಯನ್ನು ವಿರೋಧಿಸಿದ್ದರು. ಯುವ ಕ್ರಿಕೆಟಿಗ ಈ ರೀತಿ ವರ್ತಿಸುವುದು ಸರಿ ಇಲ್ಲ ಎಂದಿದ್ದರು.

**ಕೊನ್‌ಸ್ಟಾಸ್ ನೀಡಿದ ಕಾರಣವಿದು:** ಇದೀಗ ತಾನು ಹಾಗೆ ಮಾಡಲು ಕಾರಣ ಏನು ಎಂಬುದನ್ನು ಕೊನ್‌ಸ್ಟಾಸ್ ವಿವರಿಸಿದ್ದಾರೆ. 'ದಿ ಡೈಲಿ ಟೆಲಿಗ್ರಾಫ್' ಜೊತೆ ಮಾತನಾಡಿದ ಸ್ಯಾಮ್ ಕೊನ್‌ಸ್ಟಾಸ್, 'ಖವಾಜಾ ಸ್ಟ್ರೈಕ್ ತೆಗೆದುಕೊಳ್ಳಲು ಸ್ವಲ್ಪ ಸಮಯ ತೆಗೆದುಕೊಳ್ಳುತ್ತಿದ್ದರು. ಈ ವೇಳೆ ಬುಮ್ರಾ ಅವರು ಸಿಡಿಮಿಡಿಗೊಂಡ ಕಾರಣ ನಾನು ಖವಾಜಾ ಪರ ನಿಂತು ಬುಮ್ರಾ ಬಳಿ ಮಾತಿನ ಚಕಮಕಿ ನಡೆಸಿದೆ. ಹೌದು ಆ ಇಡೀ ಘಟನೆಯಲ್ಲಿ ನನ್ನದೇ ತಪ್ಪು ಎಂದು ಕೊನ್‌ಸ್ಟಾಸ್ ಹೇಳಿದ್ದಾರೆ. ಇದರ ಜೊತೆಗೆ ಬುಮ್ರಾ ಪ್ರದರ್ಶನವನ್ನು ಹೊಗಳಿದ ಕೊನ್‌ಸ್ಟಾಸ್, ಇದೆಲ್ಲದರ ಹೊರತಾಗಿ ಓವರ್‌ನ ಕೊನೆಯಲ್ಲಿ ಖವಾಜಾ ಅವರ ವಿಕೆಟ್ ಉರುಳಿಸುವ ಮೂಲಕ ಬುಮ್ರಾ ಮೇಲುಗೈ ಸಾಧಿಸಿದರು. ನಿಸ್ಸಂಶಯವಾಗಿ ಬುಮ್ರಾ ವಿಶ್ವ ದರ್ಜೆಯ ಆಟಗಾರ. ಹೀಗಾಗಿ ಅವರು ಸರಣಿಯಲ್ಲಿ 32 ವಿಕೆಟ್‌ಗಳನ್ನು ಪಡೆದರು. ಅಂತಿಮವಾಗಿ ಕ್ರಿಕೆಟ್‌ನಲ್ಲಿ ಈ ರೀತಿಯ ಘಟನೆಗಳು ನಡೆಯುವುದು ಸಾಮಾನ್ಯ ಎಂದು ಹೇಳುವ ಮೂಲಕ ವಿವಾದಕ್ಕೆ ತೆರೆ ಎಳೆಯುವ ಕೆಲಸವನ್ನು ಕೊನ್‌ಸ್ಟಾಸ್ ಮಾಡಿದ್ದಾರೆ.

# ಟಿ20 ಜೊತೆಗೆ ಏಕದಿನ ಸರಣಿಯನ್ನೂ ಗೆದ್ದ ನ್ಯೂಜಿಲೆಂಡ್

ಟಿ20 ಹಾಗೂ ಏಕದಿನ ಸರಣಿಗಾಗಿ ನ್ಯೂಜಿಲೆಂಡ್ ಪ್ರವಾಸ ಮಾಡಿದ್ದ ಶ್ರೀಲಂಕಾ ತಂಡ ಖಾಲಿ ಕೈಯಲ್ಲಿ ತವರಿಗೆ ವಾಪಸ್ಸಾಗಬೇಕಾಗಿದೆ. ಈ ಮೊದಲು ಉಭಯ ತಂಡಗಳ ನಡುವೆ ನಡೆದಿದ್ದ ಟಿ20 ಸರಣಿಯನ್ನು 2-1 ಅಂತರದಿಂದ ವಶಪಡಿಸಿಕೊಂಡಿದ್ದ ನ್ಯೂಜಿಲೆಂಡ್ ತಂಡ, ಇದೀಗ ನಡೆಯುತ್ತಿರುವ ಏಕದಿನ ಸರಣಿಯನ್ನು ಸಹ ಇನ್ನೊಂದು ಪಂದ್ಯ ಬಾಕಿ ಇರುವಂತೆಯೇ ತನ್ನ ತೆಕ್ಕೆಗೆ ಹಾಕಿಕೊಂಡಿದೆ. ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ನ್ಯೂಜಿಲೆಂಡ್ 255 ರನ್ ಕಲೆಹಾಕಿದರೆ, ಈ ಗುರಿ ಬೆನ್ನಟ್ಟಿದ ಶ್ರೀಲಂಕಾ ತಂಡ 142 ರನ್‌ಗಳಿಗೆ ಆಲೌಟ್ ಆಗುವ ಮೂಲಕ 113 ರನ್‌ಗಳಿಂದ ಸೋಲೊಪ್ಪಿಕೊಂಡಿದಲ್ಲದೆ ಸರಣಿಯನ್ನು ಕಳೆದುಕೊಂಡಿತು.




ಉಭಯ ತಂಡಗಳ ನಡುವೆ ಇಂದು ನಡೆದ ಎರಡನೇ ಏಕದಿನ ಪಂದ್ಯಕ್ಕೆ ಮಳೆ ಅಡ್ಡಿಪಡಿಸಿತು. ಹೀಗಾಗಿ ಪಂದ್ಯವನ್ನು ತಲಾ 37 ಓವರ್‌ಗಳಿಗೆ ನಿಗದಿಪಡಿಸಲಾಯಿತು. ಅದರಂತೆ ಮೊದಲು ಬ್ಯಾಟ್ ಮಾಡಿದ ನ್ಯೂಜಿಲೆಂಡ್ ತಂಡ 31 ರನ್ ಗಳಿಸುವಷ್ಟರಲ್ಲಿ ಮೊದಲ ವಿಕೆಟ್ ಕಳೆದುಕೊಂಡರು. ಇದಾದ ನಂತರ ರಚಿನ್ ರವೀಂದ್ರ, ಹಾಗೂ ಮಾರ್ಕ್ ಚಾಪ್ಮನ್ ಜೊತೆ 112 ರನ್‌ಗಳ ಜೊತೆಯಾಟ ನೀಡಿದರು.

ಈ ವೇಳೆ ರಚಿನ್ 79 ರನ್ ಕಲೆಹಾಕಿ ವಿಕೆಟ್ ಒಪ್ಪಿಸಿದರೆ, ಚಾಪ್ಮನ್ 63 ರನ್‌ಗಳ ಕಾಣಿಕೆ ನೀಡಿದರು. ಆದರೆ, ಇದಾದ ಬಳಿಕ ಕಿವೀಸ್ ತಂಡ ಸತತ ಅಂತರದಲ್ಲಿ 3 ವಿಕೆಟ್ ಕಳೆದುಕೊಂಡಿತು.ನಂತರ ಡ್ಯಾರಿಲ್ ಮಿಚೆಲ್ 38 ರನ್, ಗ್ಲೆನ್ ಫಿಲಿಪ್ಸ್ 22 ರನ್ ಮತ್ತು ನಾಯಕ ಮಿಚೆಲ್ ಸ್ಯಾಂಟ್ನರ್ 20 ರನ್ ಗಳಿಸಿ ತಂಡವನ್ನು 255 ರನ್‌ಗಳ ಉತ್ತಮ ಮೊತ್ತಕ್ಕೆ ಕೊಂಡೊಯ್ದರು.

## ಎಂಎಸ್‌ಐಎಲ್ ಟೂರ್ ಪ್ಯಾಕೇಜ್‌ಗೆ ಎಂಬಿಪಿ ಚಾಲನೆ

# 20 ಸಾವಿರದಲ್ಲಿ 18 ದಿನಗಳ ಉತ್ತರ ಭಾರತ ಪ್ರವಾಸ




**ಬೆಂಗಳೂರು:** ಮಧ್ಯಮ ಮತ್ತು ಕೆಳಮಧ್ಯಮ ವರ್ಗದವರು, ವಿದ್ಯಾರ್ಥಿಗಳು, ಹಿರಿಯ ನಾಗರಿಕರು ಮತ್ತು ಸರಕಾರಿ ನೌಕರರನ್ನು ಗಮನದಲ್ಲಿಟ್ಟುಕೊಂಡು ಸರ್ಕಾರಿ ಎಂಎಸ್‌ಐಎಲ್ ಸಂಸ್ಥೆ ರೂಪಿಸಿರುವ ನಾನಾ ತರಹದ ಆಕರ್ಷಕ ಟೂರ್ ಪ್ಯಾಕೇಜುಗಳಿಗೆ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಬುಧವಾರ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ಅವರು ಸಂಸ್ಥೆಯ ಡೈರಿ, ಕ್ಯಾಲೆಂಡರ್ ಮತ್ತು ಬಾಂಡ್ ಜೆರಾಕ್ಸ್ ಪೇಪರ್ ಕೂಡ ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಎಂಎಸ್‌ಐಎಲ್ ಮೊದಲಿನಿಂದಲೂ ಗುಣಮಟ್ಟ ಮತ್ತು ವಿಶ್ವಾಸಾರ್ಹತೆಗೆ ಹೆಸರಾಗಿದೆ. ಈಗ ಟೂರ್ ಪ್ಯಾಕೇಜುಗಳ ಮೂಲಕ ಸಂಸ್ಥೆಯು ಜನರಿಗೆ ಮತ್ತಷ್ಟು ಹತ್ತಿರವಾಗುತ್ತಿದೆ. ಈ ಪ್ಯಾಕೇಜುಗಳ ಅಡಿಯಲ್ಲಿ ಈ ವರ್ಷದ ಸೆಪ್ಟೆಂಬರ್ ತಿಂಗಳಲ್ಲಿ ಆದಿಕೈಲಾಸ ಮತ್ತು ವಾರಣಾಸಿಗೆ ಪ್ರವಾಸ ಆಯೋಜಿಸಲಾಗುವುದು. ಮುಖ್ಯವಾಗಿ ನಾವು ಆಫ್-ಲೈನ್ ಪ್ರವಾಸಿಗರಿಗೆ ಆದ್ಯತೆ ಕೊಡುತ್ತಿದ್ದೇವೆ ಎಂದಿದ್ದಾರೆ.

ಈ ಪ್ಯಾಕೇಜುಗಳಲ್ಲಿ ಸುರಕ್ಷತೆ, ಶುಚಿರುಚಿಯಾದ ಆಹಾರ, ಮನೆ ಬಾಗಿಲಿನಿಂದಲೇ ಕರೆದುಕೊಂಡು ಹೋಗಿ ವಾಪಸ್ ಅಲ್ಲಿಗೇ ಬಿಡುವುದು, ಸಹಾಯಕರ ನೆರವು, ಮಾಸಿಕ ಕಂತುಗಳಲ್ಲಿ ಹಣ ಪಾವತಿ, ಲಕ್ಕಿ ಡ್ರಾ, ಕೈಗೆಟುಕುವ ವೆಚ್ಚದಲ್ಲಿ ಉತ್ತರ ಭಾರತ ಪ್ರವಾಸ ಮುಂತಾದ ಸೌಲಭ್ಯ ಮತ್ತು ಆಕರ್ಷಣೆಗಳಿವೆ. ಗುಂಪು ಪ್ರವಾಸ ಮಾಡಲು ಬಯಸುವವರಿಗೆ ಪ್ರತಿ ಬ್ಯಾಚಿನಲ್ಲಿ ಗರಿಷ್ಠ 100 ಮಂದಿಗೆ ಅವಕಾಶ ಇರಲಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

ಇದಲ್ಲದೆ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆಂದು ಸ್ಟಡಿ-ಕಂ-ಪ್ಲೆಷರ್ ಟೂರ್, ಇಕೋ ಟೂರಿಸಂ ಮತ್ತು ಕರಾವಳಿ ಪ್ರದೇಶಗಳ ವೀಕ್ಷಣೆ ಇರುವ ಕೋಸ್ಟಲ್ ಟೂರಿಸಂ ಮುಂತಾದ ಪ್ಯಾಕೇಜುಗಳನ್ನು ರೂಪಿಸಲು ಎಂಎಸ್‌ಐಎಲ್ ಚಿಂತಿಸುತ್ತಿದೆ. ಸಂಸ್ಥೆಯು ಸದ್ಯಕ್ಕೆ ರೂಪಿಸಿರುವ ಪ್ಯಾಕೇಜಿನಲ್ಲಿ ಕೇವಲ 20 ಸಾವಿರ ರೂ. ವೆಚ್ಚದಲ್ಲಿ 15ರಿಂದ 18 ದಿನಗಳ ಉತ್ತರ ಭಾರತ ಪ್ರವಾಸ ಮಾಡಿಕೊಂಡು ಬರಬಹುದು ಎಂದು ಅವರು ವಿವರಿಸಿದ್ದಾರೆ.

ಸರ್ಕಾರಿ ಉದ್ಯೋಗಿಗಳನ್ನು ಗಮನದಲ್ಲಿ ಇಟ್ಟುಕೊಂಡು ಮಾಡಿರುವ ಪ್ಯಾಕೇಜಿನಲ್ಲಿ ಮೊದಲು 50% ರಷ್ಟು ಹಣ ಪಾವತಿಸಿ, ಪ್ರವಾಸ ಕೈಗೊಳ್ಳಬಹುದು. ಪ್ರವಾಸ ಮುಗಿಸಿಕೊಂಡು ಬಂದ ಬಳಿಕ ಉಳಿದ 50%ರಷ್ಟು ಹಣವನ್ನು ಮಾಸಿಕ ಕಂತುಗಳಲ್ಲಿ ಕಟ್ಟಬಹುದು. ಹಾಗೆಯೇ ಲಕ್ಕಿ ಡ್ರಾದಲ್ಲಿ ವಿಜೇತರಾಗುವ ಅದೃಷ್ಟಶಾಲಿಗಳು ಡ್ರಾ ನಂತರದ ಹಣವನ್ನು ಪಾವತಿಸಬೇಕಾಗಿಲ್ಲ. ಈ ಎಲ್ಲ ಪ್ಯಾಕೇಜುಗಳಲ್ಲೂ ಎಂಎಸ್‌ಐಎಲ್ ವತಿಯಿಂದ ಟೂರ್ ಮ್ಯಾನೇಜರ್ ಅಥವಾ ಸಹಾಯಕರೊಬ್ಬರು ಜತೆಗಿರಲಿದ್ದು, ಪ್ರವಾಸಿಗರ ಬೇಕು-ಬೇಡಗಳನ್ನು ಆಲಿಸಿ, ನೆರವು ನೀಡಲಿದ್ದಾರೆ ಎಂದು ಅವರು ನುಡಿದಿದ್ದಾರೆ.

ಪ್ರವಾಸಿಗರಿಗೆ ಆದಷ್ಟು ಕಡಿಮೆ ವೆಚ್ಚದಲ್ಲಿ ಪ್ರೇಕ್ಷಣೀಯ ಸ್ಥಳಗಳ ವೀಕ್ಷಣೆ ಸಾಧ್ಯವಾಗಬೇಕು ಎನ್ನುವ ಆಶಯದೊಂದಿಗೆ ಎಂಎಸ್ ಐಎಲ್ ಮೂಲಕ ಈ ಹೆಜ್ಜೆ ಇಡಲಾಗುತ್ತಿದೆ. ಖಾಸಗಿ ಸಂಸ್ಥೆಗಳ ದರಕ್ಕೆ ಹೋಲಿಸಿದರೆ ನಾವು ನಿಗದಿ ಪಡಿಸಿರುವ ದರ ತುಂಬಾ ಕಡಿಮೆ ಇದೆ. ಹಾಗೆಯೇ ಪ್ರತಿಯೊಂದು ಸೇವೆಯನ್ನೂ ಗುಣಮಟ್ಟದೊಂದಿಗೆ ಒದಗಿಸಲಾಗುವುದು ಎಂದು ಪಾಟೀಲ ಹೇಳಿದ್ದಾರೆ.

ಕಾರ್ಯಕ್ರಮದಲ್ಲಿ ಎಂಎಸ್‌ಐಎಲ್ ಅಧ್ಯಕ್ಷ ಪುಟ್ಟರಂಗಶೆಟ್ಟಿ, ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಎಂಎಸ್ ಐಎಲ್ ವ್ಯವಸ್ಥಾಪಕ ನಿರ್ದೇಶಕ ಮನೋಜ್ ಕುಮಾರ್ ವಾಣಿಜ್ಯ ಇಲಾಖೆ ಆಯುಕ್ತೆ ಗುಂಜನ್ ಕೃಷ್ಣ, ಎಂಎಸ್‌ಐಎಲ್ ನಿರ್ದೇಶಕ ಚಂದ್ರಪ್ಪ, ಪ್ರವಾಸ ವಿಭಾಗದ ಮುಖ್ಯಸ್ಥ ರವಿಕುಮಾರ್ ಮುಂತಾದವರು ಭಾಗವಹಿಸಿದ್ದರು.

**24/7 ಸಹಾಯವಾಣಿ ಸೌಲಭ್ಯ:** ಪ್ರವಾಸಿಗರ ಅನುಕೂಲಕ್ಕೆ ಎಂಎಸ್ ಐಎಲ್ 24/7 ಸಹಾಯವಾಣಿ ಮತ್ತು ವಾಟ್ಸ್ಯಾಪ್ ಸೌಲಭ್ಯವನ್ನೂ (080-45888882, 9353645921) ಹೊಂದಿದೆ. ಇದರ ನಿರ್ವಹಣೆಗಾಗಿ ಪ್ರತ್ಯೇಕ ತಂಡವೇ ಇರಲಿದೆ. ಒಂದು ನಂಬರಿನಲ್ಲಿ ಯಾರಾದರೂ ಮಾತನಾಡುತ್ತಿದ್ದರೆ, ಅದು ತಾನಾಗಿಯೇ ಮತ್ತೊಂದು ಸಂಖ್ಯೆಗೆ ಸಂಪರ್ಕ ಕಲ್ಪಿಸುವ ಕ್ಲೌಡ್ ಬೇಸ್ಡ್ ಟೆಲಿಕಾಂ ಸಿಸ್ಟಮ್ ಅನ್ನು ಅಳವಡಿಸಿಕೊಳ್ಳಲಾಗಿದೆ.

### ಎಲ್ಲೆಲ್ಲಿಗೆ ಪ್ರವಾಸ ಪ್ಯಾಕೇಜು?

**ಎಂಎಸ್ ಐಎಲ್ ಸಂಸ್ಥೆಯ ಟೂರ್ಸ್ ಅಂಡ್ ಟ್ರಾವೆಲ್ಸ್ ವಿಭಾಗವು ಈ ಟೂರ್ ಪ್ಯಾಕೇಜುಗಳನ್ನು ನಿರ್ವಹಿಸಲಿದೆ. ಇದರಡಿಯಲ್ಲಿ ಕಾಶಿ, ಅಯೋಧ್ಯೆ, ಪುರಿ, ಆದಿ ಕೈಲಾಸ ಮುಂತಾದ ಧಾರ್ಮಿಕ ಮತ್ತು ಐತಿಹಾಸಿಕ ತಾಣಗಳಿಗೆ ಪ್ರವಾಸಿಗರನ್ನು ಅದು ಕರೆದೊಯ್ಯಲಿದೆ. ಜೊತೆಗೆ ದುಬೈ, ಸಿಂಗಪುರ್, ವಿಯಟ್ನಾಂ, ಶ್ರೀಲಂಕಾ, ನೇಪಾಳ, ಥಾಯ್ಲೆಂಡ್ ಮತ್ತು ಯೂರೋಪಿನ ಹಲವು ದೇಶಗಳಿಗೂ ಎಂಎಸ್ ಐಎಲ್ ಟೂರ್ ಪ್ಯಾಕೇಜುಗಳನ್ನು ರೂಪಿಸಿದೆ. ಈ ಪ್ರವಾಸಗಳಿಗೆ ಈಗಾಗಲೇ ದಿನಾಂಕ ನಿಗದಿಯಾಗಿದ್ದು, ಸಾರ್ವಜನಿಕರು ಮಾಹಿತಿ ಪಡೆದುಕೊಳ್ಳಬಹುದು.**

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com